ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಏಪ್ರಿಲ್ 17 ಬುಧವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

45

ಸಂಪುಟ: 45 | ಸಂಚಿಕೆ: 2 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಮೈಸೂರು ಮಿತ್ರ ಬುಧವಾರ 17 ಏಪ್ರಿಲ್ 2024

ಪುಸ್ತಕ ಸಂಸ್ಕೃತಿ ಉಳಿದರೆ ಬದುಕಿನ ಸಂಸ್ಕೃತಿ ಉಜ್ವಲ

- ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಮಾನಸ
- ಮಕ್ಕಳ ಪುಸ್ತಕಗಳ ಪ್ರದರ್ಶನಕ್ಕೆ ಚಾಲನೆ



ಮಕ್ಕಳ ಪುಸ್ತಕ ಪ್ರದರ್ಶನಕ್ಕೆ ಚಾಲನೆ ನೀಡಲಾಯಿತು.

ಮೈಸೂರು,ಏ.16(ಪಿಎಂ)– ಪುಸ್ತಕ ಸಂಸ್ಕೃತಿ ಉಳಿದರೆ ಮಾತ್ರ ನಮ್ಮ ಬದುಕಿನ ಸಂಸ್ಕೃತಿ ಉಜ್ವಲಗೊಳ್ಳಲಿದೆ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಮಾನಸ ಅಭಿಪ್ರಾಯಪಟ್ಟರು.

ಮೈಸೂರಿನ ಕೆಆರ್ ವೃತ್ತದ ಸಮೀಪ ದೇವರಾಜ ಅರಸು ರಸ್ತೆಯಲ್ಲಿರುವ ಕಾದಂಬರಿ ಏಜೆನ್ಸೀಸ್ ಮಳಿಗೆಯಲ್ಲಿ ವಿಕಲ ವಿಕಾಸ ಟ್ರಸ್ಟ್ ಮತ್ತು ಸದರಿ ಏಜೆನ್ಸೀಸ್ ಜಂಟಿ ಆಶ್ರಯದಲ್ಲಿ ಏ.25ರವರೆಗೆ ಹಮ್ಮಿಕೊಂಡಿರುವ ಮಕ್ಕಳ ಪುಸ್ತಕಗಳ ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಉದ್ಘಾಟಿಸಿ, ಮಾತನಾಡಿದರು.

ಪ್ರಸ್ತುತ ಮಕ್ಕಳು ಪುಸ್ತಕ ಓದುವ ಹವ್ಯಾಸದಿಂದ ಬಹುತೇಕ ದೂರವಾಗುತ್ತಿದ್ದಾರೆ. ಮಕ್ಕಳ ಕೈಯ್ಯಲ್ಲಿ ಮೊಬೈಲ್ ಮತ್ತು ಅವರ ಎದುರಲ್ಲಿ ಟಿವಿ ಇರುವ ಕಾರಣ ಓದುವ ಸಂಸ್ಕೃತಿ ರೂಢಿಸಿಕೊಳ್ಳುವುದು ಅವರಿಂದ ಸಾಧ್ಯವಾಗುತ್ತಿಲ್ಲ. ಮಕ್ಕಳ ಭವಿಷ್ಯ ಸಾಂಸ್ಕೃತಿಕವಾಗಿ ಬೆಳೆಯಲು ಅವರಲ್ಲಿ ಪುಸ್ತಕ ಓದುವ ಹವ್ಯಾಸ ಬೆಳೆಸುವುದು ಅಗತ್ಯ. ಮಕ್ಕಳಲ್ಲಿ ಪುಸ್ತಕ ಓದುವ ಹವ್ಯಾಸ ವಿದ್ದರೆ ಅವರಲ್ಲಿ ಬದುಕನ್ನು ಸಮರ್ಥವಾಗಿ ನಡೆಸುವ ಆತ್ಮಸ್ಥೈರ್ಯ ಬರಲಿದೆ ಎಂದರು.

ಪುಸ್ತಕಗಳನ್ನು ಕೊಂಡು ಓದುವ ಮೂಲಕ ಕನ್ನಡ ಪುಸ್ತಕ ಸಂಸ್ಕೃತಿಗೆ ಉತ್ತೇಜನ ನೀಡಬೇಕು. ಇದೇ ತಿಂಗಳು 23ರಂದು ವಿಶ್ವ ಪುಸ್ತಕ ದಿನಾಚರಣೆ ಇದ್ದು, ಅದಕ್ಕೆ ಪೂರಕ ಎಂಬಂತೆ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಆ ಮೂಲಕ ನೂರಾರು ರೂ. ಬೆಲೆಬಾಳುವ ಪುಸ್ತಕಗಳನ್ನು ಕೇವಲ 20 ರೂ.ಗೆ ಕೊಡಲಾಗುತ್ತಿದ್ದು, ಇದರ ಹಿಂದೆ ಸಾಮಾಜಿಕ ಕಳಕಳಿ ಇದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕೇವಲ 20 ರೂ.: ಕಾದಂಬರಿ ಏಜೆನ್ಸೀಸ್ ಮಾಲೀಕ ಎ.ಎನ್.ವಾಸುದೇವ್ ಮಾತನಾಡಿ, ನಮ್ಮಲ್ಲಿ 100ರಿಂದ 300 ರೂ.ವರೆಗೆ ಬೆಲೆಬಾಳುವ ಪುಸ್ತಕಗಳಿದ್ದು, ಅವುಗಳನ್ನು ಕೇವಲ 20 ರೂ.ಗೆ ಮಾರಾಟ ಮಾಡುತ್ತಿದ್ದೇವೆ. ಏ.25ರವರೆಗೆ ಬೆಳಗ್ಗೆ 10ರಿಂದ ರಾತ್ರಿ 8ರವರೆಗೆ ಈ ಪ್ರದರ್ಶನ ಇರಲಿದೆ. ಕನ್ನಡ ಕಲಿಕೆ ಸೇರಿದಂತೆ ಅಭ್ಯಾಸ ಪುಸ್ತಕಗಳು ಲಭ್ಯವಿದ್ದು, ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ವಿಕಲ ವಿಕಾಸ ಟ್ರಸ್ಟ್‌ನ ವ್ಯವಸ್ಥಾಪಕ ಟ್ರಸ್ಟಿ ಎಸ್.ಎಸ್.ವೈದ್ಯನಾಥ್ ಮತ್ತಿತರರಿದ್ದರು.

ಲಾಡ್ಜ್‌ನಲ್ಲಿ ಮಗನ ತೊರೆದು ಹೋಗಿದ್ದ ತಾಯಿ; ಕೆಲವೇ ಗಂಟೆಯಲ್ಲಿ ಪತ್ತೆ ಹಚ್ಚಿದ ಪೊಲೀಸರು

- ಪ್ರಿಯಕರ ಮನೆಗೆ ಹೋಗಿದ್ದ ಮಹಿಳೆ
- ಬಾಲಕನಿಗೆ ಆರೈಕೆ ಕೇಂದ್ರದಲ್ಲಿ ಆಶ್ರಯ

ಮೈಸೂರುಮ ಏ.16(ಎಸ್‌ಪಿಎನ್)– ಲಾಡ್ಜ್‌ವೊಂದರಲ್ಲಿ 10 ವರ್ಷದ ಮಗನನ್ನು ಒಂಟಿಯಾಗಿ ಬಿಟ್ಟು ಪರಾರಿಯಾಗಿದ್ದ ಮಹಿಳೆಯನ್ನು ಪತ್ತೆ ಮಾಡುವಲ್ಲಿ ಲಷ್ಕರ್ ಠಾಣೆ ಪೊಲೀಸರು ಯಶಸ್ವಿಯಾಗಿದ್ದಾರೆ.

ತುಮಕೂರು ಮೂಲದ ಭಾರ್ಗವಿ, ತನ್ನ ಹತ್ತು ವರ್ಷದ ಮಗನನ್ನು ಬಿಟ್ಟು ಹೋಗಿದ್ದ ಮಹಿಳೆ. ಎರಡು ದಿನಗಳ ಹಿಂದೆ ಭಾರ್ಗವಿ, ತನ್ನ ಪುತ್ರನೊಂದಿಗೆ ಮೈಸೂರಿಗೆ ಬಂದು ವೈಶಾಖ್ ಲಾಡ್ಜ್‌ನಲ್ಲಿ ರೂಂ ಪಡೆದು ತಂಗಿದ್ದರು.

ಮಂಗಳವಾರ ಬೆಳಗ್ಗೆ ರೂಂ ಖಾಲಿ ಮಾಡುವ ಬಗ್ಗೆ ಸೋಮವಾರ ರಾತ್ರಿಯೇ ಲಾಡ್ಜ್‌ನ ವ್ಯವಸ್ಥಾಪಕ ಅರುಣ್ ಕುಮಾರ್ ತಿಳಿಸಿದ್ದರು. ಮಂಗಳವಾರ ಮುಂಜಾನೆ 3 ಗಂಟೆಗೆ ಭಾರ್ಗವಿ, ಹೋಟೆಲ್ ಸಿಬ್ಬಂದಿಗೆ ತಿಳಿಸದೇ ಲಾಡ್ಜ್‌ನಿಂದ ತೆರಳಿದಿದ್ದರು. ಎಂದಿನಂತೆ ಅರುಣ್‌ಕುಮಾರ್, ಭಾರ್ಗವಿ ತಂಗಿದ್ದ ರೂಂ ಅನ್ನು ಮಂಗಳವಾರ ಬೆಳಗ್ಗೆ ಪರಿಶೀಲನೆ ಮಾಡಿದಾಗ ಬಾಲಕ ಮಾತ್ರ ರೂಮಿನಲ್ಲಿದ್ದ.

ಅರುಣ್ ಕುಮಾರ್, ಲಾಡ್ಜ್ ಸಿಸಿಟಿವಿ ಪರಿಶೀಲನೆ ನಡೆಸಿದಾಗ ಭಾರ್ಗವಿ, ಮುಂಜಾನೆ 3 ಗಂಟೆಗೆ ಲಾಡ್ಜ್‌ನಿಂದ ಹೊರಹೋಗುತ್ತಿರುವ ದೃಶ್ಯ ಸೆರೆಯಾಗಿದೆ. ಕೂಡಲೇ ಬಾಲಕನನ್ನು ಲಷ್ಕರ್ ಠಾಣೆಗೆ ಒಪ್ಪಿಸಿ, ತಾಯಿಯ ವಿರುದ್ಧ ದೂರು ನೀಡಿದ್ದರು. ಈ ದೂರಿನನ್ವಯ, ಪೊಲೀಸರು ಕಾರ್ಯ ಪ್ರವೃತರಾಗಿ, ಬಾಲಕನ ತಾಯಿ ಭಾರ್ಗವಿಯನ್ನು ಮಧ್ಯಾಹ್ನದ ವೇಳೆಗೆ ಪತ್ತೆ ಮಾಡಿದ್ದಾರೆ.

ಈ ವೇಳೆ ಭಾರ್ಗವಿಯನ್ನು ಪೊಲೀಸರು ವಿಚಾರಣೆ ನಡೆಸಿದಾಗ, ತನ್ನ ಗಂಡನಿಂದ ವಿಚ್ಛೇದನ ಪಡೆದು ಮೈಸೂರಿನ ಯುವಕನೋರ್ವನೊಂದಿಗೆ ಸಂಪರ್ಕ ಬೆಳೆಸಿದ್ದ ಮಾಹಿತಿ ನೀಡಿದ್ದಾರೆ. ಅಲ್ಲದೆ, ಮಂಗಳವಾರ ಬೆಳಗ್ಗೆ ಆ ಯುವಕನ ಮನೆಗೆ ತೆರಳಿ ಜಗಳವಾಡಿರುವ ಬಗ್ಗೆಯೂ ಮಾಹಿತಿ ನೀಡಿದ್ದಾರೆ. ವಿಚಾರಣೆ ನಂತರ ಪೊಲೀಸರು, ಭಾರ್ಗವಿ ಪೋಷಕರಿಗೆ ಈ ವಿಚಾರ ಮುಟ್ಟಿಸಿ, ಬಾಲಕನನ್ನು ಮೈಸೂರು ಆರೈಕೆ ಕೇಂದ್ರಕ್ಕೆ ಕಳುಹಿಸಿದ್ದು, ಭಾರ್ಗವಿಗೆ ವಿಚಾರಣೆಗೆ ಹಾಜರಾಗುವಂತೆ ನೋಟೀಸ್ ನೀಡಿ, ಮನೆಗೆ ಕಳುಹಿಸಿದ್ದಾರೆ.

ಮೊಬೈಲ್ ಬಳಕೆ ಕಡಿಮೆ ಮಾಡುವಂತೆ ತಾಯಿ ಹೇಳಿದ್ದಕ್ಕೆ ಬೇಸರಗೊಂಡು ಮಗಳು ಆತ್ಮಹತ್ಯೆ

ಮೈಸೂರು, ಏ.16(ಎಸ್‌ಪಿಎನ್)– ಮೊಬೈಲ್ ಹೆಚ್ಚು ಉಪಯೋಗಿಸಬೇಡ ಎಂದು ಬುದ್ದಿವಾದ ಹೇಳಿದ್ದಕ್ಕೆ ಮನೆಯಲ್ಲಿ ಯಾರು ಇಲ್ಲದ ವೇಳೆ ಮಹಿಳೆಯೊಬ್ಬರು ಫ್ಯಾನಿಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಮೈಸೂರಿನ ಶಕ್ತಿ ನಗರದಲ್ಲಿ ಮಂಗಳವಾರ ನಡೆದಿದೆ.


ಇಲ್ಲಿನ ನಿವಾಸಿ ಪ್ರಮೋದ್ ಅವರ ಪತ್ನಿ ಅಶ್ವಿನಿ ಆತ್ಮಹತ್ಯೆ ಮಾಡಿಕೊಂಡ ಗೃಹಿಣಿ. ಈಕೆ ಮೈಸೂರಿನ ಶಕ್ತಿ ನಗರದ ಬಾಡಿಗೆ ಮನೆಯಲ್ಲಿ ತನ್ನ ಮಗು ಮತ್ತು ತಾಯಿಯೊಂದಿಗೆ ವಾಸವಾಗಿದ್ದರು. ಗಂಡ ಪ್ರಮೋದ್ ಬೆಂಗಳೂರಿನಲ್ಲಿ ಸಿನಿಮಾ ಪ್ರಾಜೆಕ್ಟ್‌ಗಳಲ್ಲಿ ಲೈಟ್‌ಬಾಯ್ ಕೆಲಸ ಮಾಡಿಕೊಂಡು, ಮೈಸೂರಿಂದ ಬೆಂಗಳೂರಿಗೆ ಹೋಗಿ ಬರುತ್ತಿದ್ದರು.

ಘಟನೆ ವಿವರ: ಇತ್ತೀಚೆಗೆ ಅಶ್ವಿನಿ ಮೊಬೈಲ್ ಹಿಡಿದು ಹೆಚ್ಚು ಕಾಲ ಕಳೆಯುತ್ತಿದ್ದು, ಮಗುವಿನ ಬಗ್ಗೆ ನಿಗಾ ವಹಿಸುತ್ತಿರಲಿಲ್ಲ. ಇದರಿಂದ ಬೇಸತ್ತ ಅಶ್ವಿನಿ ಅವರ ತಾಯಿ ಲತಾ, ನೀನು ಹೀಗೆ ಮೊಬೈಲ್‌ನಲ್ಲಿ ಹೆಚ್ಚು ಕಾಲ ಕಳೆಯಬೇಡ. ಮಗುವಿನ ಲಾಲನೆ–ಪಾಲನೆ ಬಗ್ಗೆ ಗಮನಹರಿಸು, ಇಲ್ಲದಿದ್ದರೆ ಮಗುವಿಗೆ ಏನಾದರೂ ಅನಾಹುತ ಸಂಭವಿಸಿದರೆ ಮುಂದೆ ಎಲ್ಲರೂ ಪಶ್ಚಾತ್ತಾಪ ಪಡಬೇಕಾಗುತ್ತದೆ ಎಂದು ಬುದ್ದಿವಾದ ಹೇಳಿ, ತನ್ನ ತಾಯಿ ಮನೆಗೆ ಚಾಮರಾಜನಗರ ಜಿಲ್ಲೆ ಹನೂರಿನ ಪೊನ್ನಾಚಿಯಲ್ಲಿ ನಡೆಯುತ್ತಿದ್ದ ಮಾರಿಹಬ್ಬಕ್ಕೆ ತೆರಳಿದ್ದರು.

ತಾಯಿ ಮತ್ತು ಇತರರ ಬುದ್ದಿಮಾತುಗಳಿಂದ ಬೇಸರಗೊಂಡ ಅಶ್ವಿನಿ, ಮನೆಯ ರೂಂನಲ್ಲಿ ಮಗುವನ್ನು ಬಿಟ್ಟು, ಅಲ್ಲಿದ್ದ ಫ್ಯಾನಿಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಉದಯಗಿರಿ ಪೊಲೀಸರಿಗೆ ನೀಡಿರುವ ದೂರಿನಲ್ಲಿ ತಾಯಿ ಲತಾ ಉಲ್ಲೇಖಿಸಿದ್ದಾರೆ. ಈ ಸಂಬಂಧ ಉದಯಗಿರಿ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

ನಿಧನ

ದಾದಾ ಪೀರ್



ಮೈಸೂರು,ಏ.16–ತಿ.ನರಸೀಪುರ ತಾಲೂಕು ಆಲನಹಳ್ಳಿ ಗ್ರಾಮದ ನಿವಾಸಿ ದಾದಾ ಪೀರ್ (73) ಏ.7ರಂದು ನಿಧನರಾದರು. ಮೃತರು ಪತ್ನಿ, ಐವರು ಪುತ್ರಿಯರು, ಓರ್ವ ಪುತ್ರ, ಮೊಮ್ಮಕ್ಕಳು ಹಾಗೂ ಅಪಾರ ಬಂಧುಮಿತ್ರರನ್ನು ಅಗಲಿದ್ದಾರೆ. ಮೈಸೂರಿನ ಟಿಪ್ಪು ಸರ್ಕಲ್ ಬಳಿ ಇರುವ ಮುಸ್ಲಿಮರ ರುದ್ರಭೂಮಿಯಲ್ಲಿ ಮೃತರ ಅಂತ್ಯಸಂಸ್ಕಾರ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಆರ್.ರಂಗಸ್ವಾಮಿ



ಮೈಸೂರಿನ ಕೆ.ಜಿ. ಕೊಪ್ಪಲು ನಿವಾಸಿ ಆರ್.ರಂಗಸ್ವಾಮಿ (64) ನಗರದ ಖಾಸಗಿ ಆಸ್ಪತ್ರೆಯಲ್ಲಿ ಮಂಗಳವಾರ ನಿಧನರಾದರು.

ಮೃತರು ಪತ್ನಿ, ಇಬ್ಬರು ಪುತ್ರರು ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಕೆ.ಜಿ. ಕೊಪ್ಪಲು ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸೈಬರ್ ಅಪರಾಧಗಳ ಏರಿಕೆ; ವಂಚಕರು ನಿಮ್ಮ ಸಂಪರ್ಕಿಸಿದರೆ 1930ಕ್ಕೆ ಕರೆ ಮಾಡಿ



ಬಿ.ರಮೇಶ್



ಮೈಸೂರು,ಏ.16(ಆರ್‌ಕೆ)–ಇತ್ತೀಚಿನ ದಿನಗಳಲ್ಲಿ ಸೈಬರ್ ಅಪರಾಧಗಳು ಹೆಚ್ಚಾಗುತ್ತಿದ್ದು, ಆನ್‌ಲೈನ್‌ನಲ್ಲಿ ನಾನಾ ರೀತಿಯಲ್ಲಿ ಆಮಿಷವೊಡ್ಡಿ ಅಮಾಯಕರಿಗೆ ಹಲವು ರೀತಿಯಲ್ಲಿ ವಂಚನೆ ಮಾಡುತ್ತಿರುವ ಜಾಲಗಳು ಕಾರ್ಯಪ್ರವೃತ್ತವಾಗಿವೆ. ಇದರ ಬಗ್ಗೆ ಸಾರ್ವಜನಿಕರು ಸದಾ ಜಾಗೃತರಾಗಿರುವಂತೆ ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ಸಲಹೆ ನೀಡಿದ್ದು, ವಂಚನೆಗೀಡಾದವರು ಕೂಡಲೇ ಸಹಾಯವಾಣಿ 1930 ಸಂಪರ್ಕಿಸಿ ದೂರು ಸಲ್ಲಿಸುವಂತೆ ತಿಳಿಸಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಹೆಚ್ಚಾಗಿ ಪೊಲೀಸ್ ಇಲ್ಲವೇ ನಾನಾ ತನಿಖಾ ಸಂಸ್ಥೆಗಳ ಹೆಸರಲ್ಲಿ ಸೈಬರ್ ಅಪರಾಧಿಗಳು ಜನರಿಗೆ ಕರೆಮಾಡಿ, ತನಿಖೆಯ ಬೆದರಿಕೆ ಹಾಕಿ ಮಾಹಿತಿ ಪಡೆದು ವಂಚಿಸುತ್ತಿದ್ದಾರೆ. ನಿಮ್ಮ ಮನೆ ವಿಳಾಸಕ್ಕೆ ಕೊರಿಯರ್‌ನಲ್ಲಿ ಪಾರ್ಸೆಲ್ ಬಂದಿದೆ, ಅದರಲ್ಲಿ ಸಾಕಷ್ಟು ಪಾಸ್‌ಪೋರ್ಟ್, ಎಟಿಎಂ ಕಾರ್ಡ್‌ಗಳಿವೆ, ನೀವು ಡ್ರಗ್ಸ್ ಮಾಫಿಯಾದಲ್ಲಿ ತೊಡಗಿದ್ದೀರಿ, ನೀವು ಅಕ್ರಮವಾಗಿ ಹಣ ವರ್ಗಾವಣೆ ಮಾಡಿದ್ದೀರಿ... ಹೀಗೆ ನಾನಾ ವಿಷಯವಾಗಿ ಭಯ ಹುಟ್ಟಿಸುತ್ತಾರೆ.

ಸ್ಕೈಪ್ ಲಿಂಕ್ ನೀಡಿ ಲಾಗಿನ್ ಆಗುವಂತೆ ತಿಳಿಸುವ ವಂಚಕರು, ಪೊಲೀಸ್ ಸಮವಸ್ತ್ರ ಧರಿಸಿ, ಇಡಿ–ಸಿಬಿಐ ಅಧಿಕಾರಿಗಳ ಸೋಗಿನಲ್ಲೂ ಬಂದು, ಪ್ರಮುಖ ವ್ಯಕ್ತಿ ಇಲ್ಲವೇ ರಾಜಕಾರಣಿಗಳ ಹೆಸರೇಳಿ ಅವರ ಅಪರಾಧ ಪ್ರಕರಣಗಳಲ್ಲಿ ನೀವೂ ಭಾಗಿಯಾಗಿದ್ದೀರಿ ಎಂದು ಹೇಳಿ ಸರ್ಕಾರಿ ಇಲಾಖೆ ಚಿಹ್ನೆ, ಹಿರಿಯ ಐಪಿಎಸ್ ಅಧಿಕಾರಿಗಳ ಹೆಸರು, ಸಹಿ ಇರುವಂತಹ ನಕಲಿ ಪತ್ರಗಳನ್ನು ವಾಟ್ಸಾಪ್ ಮೂಲಕ ಕಳುಹಿಸುತ್ತಾರೆ. ನಂತರ ವಿಚಾರಣೆಗೆ ಹಾಜರಾಗಬೇಕೆಂದು ಬೆದರಿಕೆ ಹಾಕುತ್ತಾರೆ. ವಿಚಾರಣೆಯಿಂದ ತಪ್ಪಿಸಿಕೊಳ್ಳಬೇಕೆಂದರೆ ಬ್ಯಾಂಕ್ ಖಾತೆಗೆ ಹಣ ಹಾಕಿ, ಇಲ್ಲದಿದ್ದರೆ ಅರೆಸ್ಟ್ ಮಾಡುತ್ತೇವೆ, ನಿಮ್ಮ ಮನೆ ಮೇಲೆ ದಾಳಿ ಮಾಡುತ್ತೇವೆ ಎಂದು ಬೆದರಿಸುತ್ತಾರೆ. ನಿಮ್ಮನ್ನು ಡಿಜಿಟಲ್ ಅರೆಸ್ಟ್ ಮಾಡಲಾಗಿದೆ. ಕದಲಬೇಡಿ ಎಂದು ಬೆದರಿಕೆ ಹಾಕುತ್ತಾರೆ.

ಷೇರು ಮಾರುಕಟ್ಟೆ ವಂಚನೆ: ಷೇರು ಮಾರುಕಟ್ಟೆಯಲ್ಲಿ ಹೂಡಿಕೆ ಮಾಡಿದರೆ ಉತ್ತಮ ರಿಟರ್ನ್ಸ್ ಬರುವ ಹಾಗೆ ಮಾಡುತ್ತೇವೆಂದು ಭರವಸೆ ನೀಡಿ ವಾಟ್ಸಾಪ್, ಟೆಲಿಗ್ರಾಂಗಳ ಮೂಲಕ ವಂಚಿಸುತ್ತಾರೆ. ಆರಂಭದಲ್ಲಿ ನೈಜ ಆ್ಯಪ್ ಅಥವಾ ವೆಬ್‌ಸೈಟ್ ಮೂಲಕ ಹಣವನ್ನು ಹೂಡಿಕೆ ಮಾಡಿಸಿ ಲಾಭ ಬಂದಿರುವಂತೆ ಬಿಂಬಿಸಿ, ನಿಮ್ಮನ್ನು ನಂಬಿಸುತ್ತಾರೆ. ನಂತರ ತಮ್ಮದೇ ಕಂಪನಿ ಮೂಲಕ ಹಣ ಹೂಡಿಕೆ ಮಾಡಿದರೆ ಹೆಚ್ಚು ಲಾಭ ಗಳಿಸಬಹುದೆಂದು ಆಸೆ ತೋರಿಸಿ ನಕಲಿ ಆ್ಯಪ್ ಅಥವಾ ವೆಬ್‌ಸೈಟ್ ಮುಖಾಂತರ ಹಣ ಹೂಡಿಕೆ ಮಾಡಿಸಿಕೊಂಡು ಅದರಲ್ಲಿ ಹೆಚ್ಚಿನ ಮೊತ್ತದ ಲಾಭ ಬಂದಿರುವುದಾಗಿಯೂ ತೋರಿಸುತ್ತಾರೆ. ನಮ್ಮ ಬ್ಯಾಂಕ್ ಖಾತೆಗೆ ವರ್ಗಾಯಿಸಿ ಎಂದು ನೀವು ಹೇಳಿದರೆ, ಟ್ಯಾಕ್ಸ್, ಜಿಎಸ್‌ಟಿ, ಇತರ ಚಾರ್ಜ್‌ಗಳನ್ನು ಪಾವತಿಸಬೇಕೆಂದು ಹೇಳಿ ಹಣ ವರ್ಗಾಯಿಸಿದ ಮೇಲೆ ಲಾಭವನ್ನಾಗಲಿ ಅಥವಾ ಹೂಡಿಕೆ ಮಾಡಿದ ಹಣವನ್ನು ನೀಡದೆ ಮೋಸ ಮಾಡುತ್ತಾರೆ ಎಚ್ಚರದಿಂದಿರಿ ಎಂದು ಪೊಲೀಸ್ ಆಯುಕ್ತರು ಕಿವಿಮಾತು ಹೇಳಿದ್ದಾರೆ.

ಕ್ರಿಪ್ಟೋ ಕರೆನ್ಸಿ ವಂಚನೆ: ಕ್ರಿಪ್ಟೋ ಕರೆನ್ಸಿಯಲ್ಲಿ ಹೂಡಿಕೆ ಮಾಡಿದರೆ ಅಧಿಕ ಲಾಭ ಬರುತ್ತದೆ ಎಂದು ಹೇಳಿ ಹಲವು ಮಂದಿಗೆ ಕೋಟ್ಯಾಂತರ ರೂ. ಹಣ ವಂಚಿಸಿರುವ ವಂಚಕರು, ಸಾಮಾಜಿಕ ಜಾಲತಾಣಗಳಲ್ಲಿ ಜಾಹೀರಾತು ನೀಡಿ ನಂಬಿಸುತ್ತಾರೆ. ಆರಂಭದಲ್ಲಿ ನೈಜ ಕ್ರಿಪ್ಟೋ ಕರೆನ್ಸಿ ಅಪ್ಲಿಕೇಷನ್ ಮೂಲಕ ಹಣ ಹೂಡಿಕೆ ಮಾಡಿ ಲಾಭ ಗಳಿಸುವಂತೆ ಮಾಡುವ ವಂಚಕರು, ನಂತರ ತಮ್ಮದೇ ಕಂಪನಿಯಲ್ಲಿ ಹಣ ತೊಡಗಿಸಿದರೆ, ಹೆಚ್ಚಿನ ಲಾಭ ಬರುತ್ತವೆಂದು ನಂಬಿಸಿ ಮೋಸ ಮಾಡುತ್ತಾರೆ ಹುಷಾರಾಗಿರಿ ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

ಉದ್ಯೋಗ ವಂಚನೆ

"ಮನೆಯಲ್ಲೇ ಕುಳಿತು ಕೆಲಸ ಮಾಡಿ ಲಕ್ಷಾಂತರ ರೂ. ಸಂಪಾದಿಸಬಹುದು, ಭದ್ರತಾ ಠೇವಣಿ ಇರಿಸಬೇಕೆಂದು ಹೇಳಿ ಆನ್‌ಲೈನ್‌ನಲ್ಲಿ ಕೆಲವು ಲಿಂಕ್‌ಗಳನ್ನು ಕಳುಹಿಸಿ, ನಂತರ ನೀವು ಯಶಸ್ವಿಯಾಗಿ ಕೆಲಸ ಮಾಡಿದ್ದೀರಿ ಎಂದು ನಿಮ್ಮ ಬ್ಯಾಂಕ್ ಖಾತೆಗೆ 125 ರೂ. ಜಮೆ ಮಾಡಿ, ಹಣ ಬರುವುದಾಗಿ ನಂಬಿಸಿ, ತಾವು ಹೇಳಿದ ಖಾತೆಗಳಿಗೆ ಹಣ ವರ್ಗಾಯಿಸಿಕೊಂಡು ಮೋಸ ಮಾಡುತ್ತಾರೆ. ಆದ್ದರಿಂದ ಡಿಜಿಟಲ್ ಅರೆಸ್ಟ್, ಸೈಬರ್ ವಂಚಕರು ನೀಡುವ ಆಮಿಷಗಳಿಗೆ ಒಳಗಾಗದೇ ಆನ್‌ಲೈನ್ ಮತ್ತು ಇತರ ಲಿಂಕ್, ಆ್ಯಪ್‌ಗಳನ್ನು ಬಳಸಿ ಹಣ ಕಳೆದುಕೊಳ್ಳಬೇಡಿ. ಒಂದು ವೇಳೆ ಅಂತಹ ವಂಚನೆಗೊಳಗಾದಲ್ಲಿ ತಕ್ಷಣ ಸೈಬರ್ ಕ್ರೈಂ ಸಹಾಯವಾಣಿ ಸಂಖ್ಯೆ **1930**ಗೆ ದೂರು ನೀಡಿ ನಂತರ ಸೈಬರ್ ಪೊಲೀಸ್ ಠಾಣೆಗೆ ತೆರಳಿ ಲಿಖಿತ ದೂರು ಸಲ್ಲಿಸುವಂತೆಯೂ ನಗರ ಪೊಲೀಸ್ ಆಯುಕ್ತರು ತಿಳಿಸಿದ್ದಾರೆ.

ಇಂದು ಶ್ರೀರಾಮನವಮಿ ವಿಶೇಷ ಪೂಜೆ



ಮೈಸೂರು,ಏ.16(ಆರ್‌ಕೆ)– ಶ್ರೀರಾಮನವಮಿ ಪ್ರಯುಕ್ತ ಏ.17ರಂದು ಮೈಸೂರಿನ ಇರ್ವಿನ್ ರಸ್ತೆಯ ಶ್ರೀ ಪಂಚಮುಖಿ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಪೂಜಾ ವಿಧಿವಿಧಾನ ನಡೆಯಲಿದೆ. ಬೆಳಗ್ಗೆ 8.30ರಿಂದ 9.30ಗಂಟೆವರೆಗೆ ಮಹಾ ಸಂಕಲ್ಪ ಪುಣ್ಯಾಹ ವಿಶ್ವಕ್ಷೇಮಾರಾಧನೆ, ಗಣಪತಿ ಪೂಜೆ, ಶ್ರೀರಾಮತಾರಕ ಹೋಮ, ಶನಿಶಾಂತಿ ನವಗ್ರಹ ಹೋಮ, ಮಧ್ಯಾಹ್ನ 12 ಗಂಟೆಗೆ ಪೂರ್ಣಾಹುತಿ ನಡೆಯಲಿದೆ ಎಂದು ದೇವಸ್ಥಾನದ ಪ್ರಧಾನ ಅರ್ಚಕ ವಿದ್ವಾನ್ ಎಸ್.ಕೃಷ್ಣಮೂರ್ತಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಏ.20, ರಾಗಲಹರಿ ಸುಮಧುರ ಭಾವಗೀತೆಗಳು

ಮೈಸೂರು, ಏ.16–ಮೈಸೂರಿನ ಸುಗಮ ಸಂಗೀತ ಅಕಾಡೆಮಿ ಟ್ರಸ್ಟ್ ಆಶ್ರಯದಲ್ಲಿ ಏ.20ರಂದು ಸಂಜೆ 6 ಗಂಟೆಗೆ ಕಲಾನಿಧಿ ವಾಸುದೇವಾಚಾರ್ಯ ಭವನ, ನಾದಬ್ರಹ್ಮ ಸಂಗೀತ ಸಭಾದಲ್ಲಿ "ರಾಗಲಹರಿ ಸುಮಧುರ ಭಾವಗೀತೆಗಳು" ಸುಗಮ ಸಂಗೀತ ಕಾರ್ಯಕ್ರಮವನ್ನು ಎಚ್.ಆರ್. ಲೀಲಾ ವತಿಯವರ ಶಿಷ್ಯರು ನಡೆಸಿಕೊಡಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ

ಮೈಸೂರು, ಏ. 16–ಮೈಸೂರಿನ ಲಕ್ಷ್ಮಿಪುರಂನ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಏ.18ರಂದು ಬೆಳಗ್ಗೆ 10ರಿಂದ ರಾತ್ರಿ 8 ಗಂಟೆಯವರೆಗೆ ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ದೂ. 0821-4259259 ಸಂಪರ್ಕಿಸಬಹುದು.




ಮೈಸೂರಿನ ಖಾಸಗಿ ಹೋಟೆಲಿನಲ್ಲಿ ಭಾನುವಾರ ನಡೆದ ಒಕ್ಕಲಿಗ ಸಮಾಜದ ಮುಖಂಡರ ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಅಭಿನಂದಿಸಲಾಯಿತು. ಮೈಸೂರು ನಗರ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಚೇತನ್ ವಿಷಕಂಠೇಗೌಡ, ಶಾಸಕ ಕೆ.ಹರೀಶ್‌ಗೌಡ, ಮೈಸೂರು–ಕೊಡಗು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ಚಾಮರಾಜ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರವಿ, ಮುಖಂಡ ರವಿ ರಾಜಕೀಯ ಇನ್ನಿತರರಿದ್ದರು.

ಏ.21ರಿಂದ ಯುವ ನಾಯಕತ್ವ ತರಬೇತಿ ಶಿಬಿರ

ಮೈಸೂರು,ಏ.16–ಮೈಸೂರಿನ ಲಲಿತಾದ್ರಿಪುರ ರಸ್ತೆಯಲ್ಲಿರುವ ಆರ್ಟ್ ಆಫ್ ಲಿವಿಂಗ್ ಆಶ್ರಮದಲ್ಲಿ ಏ.21ರಿಂದ 29ರವರೆಗೆ ಯುವ ನಾಯಕತ್ವ ತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ. ಈ ಕಾರ್ಯಕ್ರಮದ ಮೂಲಕ ಯುವಜನತೆಯಲ್ಲಿ ಅಂತರ್ಗತವಾಗಿರುವ ನಾಯಕತ್ವ ಗುಣ–ವಿಶೇಷ ಪ್ರತಿಭೆ–ಕ್ರಿಯಾಶೀಲತೆ–ಉದ್ಯಮಶೀಲತೆ–ವೈಯಕ್ತಿಕ ಹಾಗೂ ಸಾಮಾಜಿಕ ಜವಾಬ್ದಾರಿ–ಸಮಾಜಸೇವೆ–ಸಾಹಸ ಮನೋಭಾವ ಇತ್ಯಾದಿ ಮೌಲ್ಯಗಳನ್ನು ಅರ್ಥ ಮಾಡಿಕೊಂಡು ಜೀವನದಲ್ಲಿ ಅಳವಡಿಸಿಕೊಳ್ಳುವ ರೀತಿಯಲ್ಲಿ ಪ್ರೇರಣೆ ನೀಡಿ ಯುವಜನತೆಗೆ ತರಬೇತಿ ನೀಡಲಾಗುವುದು. ಈ ಶಿಬಿರ ಏಳು ದಿನಗಳ ವಸತಿಸಹಿತ ತರಬೇತಿ ಕಾರ್ಯಕ್ರಮ ಆಗಿದ್ದು, ಯುವ ಜನತೆಯ ಅಭ್ಯುದಯಕ್ಕೆ ಪೂರಕವಾಗಿದೆ. ಶಿಬಿರದ ಪಠ್ಯ ಕ್ರಮದಲ್ಲಿ ಸಂವಹನ ಕಲೆ–ಯೋಗ ಧ್ಯಾನ–ಪ್ರಾಣಾಯಾಮ–ಸುದರ್ಶನ ಕ್ರಿಯೆ–ಸ್ವಚ್ಛತೆ–ಶಾರೀರಿಕ ಆರೋಗ್ಯ ಸಂಘಟನಾ ಶಕ್ತಿ ಗುಂಪು ಚರ್ಚೆ ಒತ್ತಡ ಮುಕ್ತ ಜೀವನ–ಭಾವನಾತ್ಮಕ ಸಮತೋಲನ ಪರಿಸರ ಕಾಳಜಿ ಸಾಮಾಜಿಕ ಕಾಳಜಿ–ಮಾನಸಿಕ ಸದೃಢತೆ ಇತ್ಯಾದಿ ಇನ್ನೂ ಆನೇಕ ವ್ಯಕ್ತಿತ್ವ ವಿಕಸನ ಪೂರಕ ವಿಷಯಗಳನ್ನು ಅಳವಡಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ 9110256623–9845173779 ಸಂಪರ್ಕಿಸಬಹುದು.

ಮೈಸೂರು ಹಾಗೂ ಸುತ್ತಮುತ್ತ ಇಂದು...




ಇಂದಿನ ಪಂಚಾಂಗ

17.04.2024 ಬುಧವಾರ, ಮಳೆ ನಕ್ಷತ್ರ: ಅಶ್ವಿನಿ 13.04.2024 ರಿಂದ 26.04.2024
ಕ್ರೋಧಿ ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ಚೈತ್ರ ಮಾಸ, ಶುಕ್ಲ ಪಕ್ಷ,
ತಿಥಿ: ನವಮಿ, ನಕ್ಷತ್ರ: ಪುಷ್ಯ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

- **ತ್ರಯೀನ್ಯಾಸ್ ಶ್ರೀ ವಿದ್ಯಾ ಫೌಂಡೇಷನ್:** 15ನೇ ವರ್ಷದ ವಸಂತ ನವರಾತ್ರಿ ಮಹೋತ್ಸವ, ಬೆ. 7ಕ್ಕೆ ಸಪ್ತಶತಿ ಪಾರಾಯಣ, ಲಲಿತೋಪಾಖ್ಯಾನ ಪಾರಾಯಣ, ಶ್ರೀಚಕ್ರಾರ್ಚನೆ, ಬೆಳಗ್ಗೆ 10ಕ್ಕೆ ಸಗ್ರಹಮುಖ ನವಚಂಡಿ ಯಾಗ, ಮಧ್ಯಾಹ್ನ 1ರಿಂದ ಪೂರ್ಣಾಹುತಿ, ಬಲಿಹರಣ, ಕುಮಾರಿ, ಸುವಾಸಿನಿ, ವಟುಕ ಪೂಜಾ, ಮಹಾ ಮಂಗಳಾರತಿ, ಅಷ್ಟಾವಧಾನ ಸೇವೆ, ಪ್ರಸಾದ ವಿನಿಯೋಗ, ಸ್ಥಳ: ತ್ರಯೀನ್ಯಾಸ್ ಆವರಣ, ಜಯಲಕ್ಷ್ಮೀಪುಂ.
- **ಶ್ರೀ ಪಂಚಮುಖಿ ಆಂಜನೇಯಸ್ವಾಮಿ ದೇವಸ್ಥಾನ :** ಶ್ರೀರಾಮನವಮಿ ಪ್ರಯುಕ್ತ ಬೆಳಗ್ಗೆ 8.30 ರಿಂದ ಮಹಾಸಂಕಲ್ಪ, ಪುಣ್ಯಾಹಃ ವಿಶ್ವಕ್ಷೇನಾರಾಧನೆ, ಗಣಪತಿ ಪೂಜೆ, ಶ್ರೀರಾಮತಾರಕ ಹೋಮ, ಶನಿಶಾಂತಿ ನವಗ್ರಹ ಹೋಮ, ಮಧ್ಯಾಹ್ನ 12ಕ್ಕೆ ಪೂರ್ಣಾಹುತಿ, ಮಹಾಮಂಗಳಾರತಿ, ಮಧ್ಯಾಹ್ನ 12.30ಕ್ಕೆ ತೀರ್ಥ ಪ್ರಸಾದ ವಿನಿಯೋಗ, ಸಂಜೆ 6.30 ರಿಂದ ಎ. ಕಾಂತರಾಜು ಮತ್ತು ತಂಡದವರಿಂದ ಸುಗಮ ಸಂಗೀತ ಹಾಗೂ ಭಕ್ತಿಗೀತೆಗಳು, ಸ್ಥಳ: ಶ್ರೀ ಪಂಚಮುಖಿ ಆಂಜನೇಯಸ್ವಾಮಿ ದೇವಸ್ಥಾನ, ಇರ್ವಿನ್ ರಸ್ತೆ.
- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಶೀತದ ತಲೆನೋವು, ತಲೆಭಾರ, ಮೂಗು ಕಟ್ಟುವುದು, ಇತರೆ ಸಮಸ್ಯೆಗಳಿಗೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ರಿಂದ.
- **ಜೆಎಸ್‌ಎಸ್ ವಾಕ್ ಮತ್ತು ಶ್ರವಣ ಸಂಸ್ಥೆ :** ವಿಶ್ವ ಧ್ವನಿ ದಿನ ಆಚರಣೆ, ಸ್ಥಳ: ಜೆಎಸ್‌ಎಸ್ ವಾಕ್ ಮತ್ತು ಶ್ರವಣ ಸಂಸ್ಥೆ, ಬೆಳಗ್ಗೆ 9 ರಿಂದ.
- **ರಾಮ್‌ಸನ್ಸ್ ಬೊಂಬೆ ಮನೆ:** ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10 ರಿಂದ ಸಂಜೆ 7ರವರೆಗೆ
- **ಕಾದಂಬರಿ ಏಜೆನ್ಸೀಸ್ ಮತ್ತು ವಿಕಲ ವಿಕಾಸ ಟ್ರಸ್ಟ್ :** ಮಕ್ಕಳ ಪುಸ್ತಕಗಳ ಪ್ರದರ್ಶನ ಮತ್ತು ಮಾರಾಟ, ಸ್ಥಳ: ನಂ.45, ಕೆ.ಆರ್. ಸರ್ಕಲ್, ದೇವರಾಜ ಅರಸು ರಸ್ತೆ, ಬೆಳಗ್ಗೆ 10 ರಿಂದ.
- **ಮೈಸೂರು ಆರ್ಟ್ ಗ್ಯಾಲರಿ:** ಶ್ರೀ ಅರಸಿಕುಮಾರ್ ಅವರ ವಿಶಿಷ್ಟ 3ಡಿ ಛಾಯಾಚಿತ್ರಗಳ ಪ್ರದರ್ಶನ ಮತ್ತು ಪ್ರಾತ್ಯಕ್ಷಿಕೆ, ಸ್ಥಳ: ಮೈಸೂರು ಆರ್ಟ್ ಗ್ಯಾಲರಿ, ಬೆಳಗ್ಗೆ 11 ಗಂಟೆಗೆ.
- **ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ, ಅಲ್ಪಸಂಖ್ಯಾತರ ಘಟಕ :** ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಅಲ್ಪಸಂಖ್ಯಾತ ಮುಖಂಡರ ಸಭೆ, ಪದಾಧಿಕಾರಿಗಳ ಅಧಿಕಾರ ಸ್ವೀಕಾರ ಸಮಾರಂಭ, ಉದ್ಘಾಟನೆ: ಶಾಸಕ ತನ್ವೀರ್ ಸೇಠ್, ಉಪಸ್ಥಿತರು: ಕೆಪಿಸಿಸಿ ಅಲ್ಪಸಂಖ್ಯಾತ ಘಟಕದ ರಾಜ್ಯಾಧ್ಯಕ್ಷ ಅಬ್ದುಲ್ ಜಬ್ಬಾರ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಸಚಿವ ಕೆ.ವೆಂಕಟೇಶ್, ಮಾಜಿ ಶಾಸಕ ಡಾ.ಯತೀಂದ್ರ, ಸ್ಥಳ: ಕಾಂಗ್ರೆಸ್ ಭವನ, ರೈಲ್ವೆ ನಿಲ್ದಾಣದ ಸಮೀಪ, ಬೆಳಗ್ಗೆ 11ಕ್ಕೆ.
- **ಮೈಸೂರು ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿ, ಕಾರ್ಮಿಕ ವಿಭಾಗ :** ಲೋಕಸಭಾ ಕ್ಷೇತ್ರದ ಚುನಾವಣಾ ಸಿದ್ಧತೆ ಸಭೆ, ಅಧ್ಯಕ್ಷತೆ : ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ. ಬಿ.ಜೆ. ವಿಜಯಕುಮಾರ್, ಉದ್ಘಾಟನೆ : ಶಾಸಕ ತನ್ವೀರ್ ಸೇಠ್, ಉಪಸ್ಥಿತರು : ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಸಚಿವ ಕೆ. ವೆಂಕಟೇಶ್, ಸ್ಥಳ: ಕಾಂಗ್ರೆಸ್ ಭವನ, ರೈಲ್ವೆ ನಿಲ್ದಾಣದ ಸಮೀಪ, ಮಧ್ಯಾಹ್ನ 2ಕ್ಕೆ.
- **ರಂಗಾಯಣ :** ರಂಗಾಯಣದ ಭಾರತೀಯ ರಂಗ ಶಿಕ್ಷಣ ಕೇಂದ್ರದ ವಿದ್ಯಾರ್ಥಿಗಳಿಂದ ವೃಕ್ಷರಾಜ ನಾಟಕ ಪ್ರದರ್ಶನ, ಸಾಹಿತ್ಯ ರಚನೆ : ಎಸ್. ರಾಮನಾಥ್, ನಿರ್ದೇಶನ : ಹೈಸ್ನಾಂ ತೋಂಬಾ, ಸ್ಥಳ: ಭೂಮಿಗೀತ ರಂಗಮಂದಿರ, ಮಧ್ಯಾಹ್ನ 3ಕ್ಕೆ
- **ಶ್ರೀ ಶಂಕರ ಜಯಂತಿ ಸಭಾ :** ಶ್ರೀರಾಮನವಮಿ ಕಾರ್ಯಕ್ರಮಗಳು, ಬೆಳಗ್ಗೆ 9.30 ರಿಂದ ಅಭಿಷೇಕ, ಅರ್ಚನೆ, ಪೂಜಾ ಕಾರ್ಯಕ್ರಮಗಳು, ಬೆಳಗ್ಗೆ 11.30ಕ್ಕೆ ಮಹಾಮಂಗಳಾರತಿ, ಸಂಜೆ 5 ರಿಂದ ವಿದ್ವಾನ್ ಹರೀಶ ಪಾಂಡವ್ ಮತ್ತು ಸಂಗಡಿಗರಿಂದ ಸ್ಯಾಕ್ಸೋಫೋನ್ ವಾದನ, ಸ್ಥಳ: ಸಮುದಾಯ ಭವನ, ತೆಂಗಿನ ತೋಪು, ಸರಸ್ವತಿಪುರಂ.
- **ಶ್ರೀ ಗಣಪತಿ ಸೇವಾ ಮಂಡಳಿ ಟ್ರಸ್ಟ್:** 5ನೇ ರಾಮೋತ್ಸವ ಕಾರ್ಯಕ್ರಮ, ಬೆಳಗ್ಗೆ 9ರಿಂದ ರಾಮತಾರಕ ಹೋಮ, ಶ್ರೀರಾಮ ಪಟ್ಟಾಭಿಷೇಕ ಪೂಜೆ, ವಿದ್ವಾನ್ ಸಂದೀಪ್ ನಾರಾಯಣ್ ಅವರಿಂದ ಕರ್ನಾಟಕ ಶಾಸ್ತ್ರೀಯ ಸಂಗೀತ, ವಿದ್ವಾನ್ ನಿಶಾಂತ್ ಚಂದರ್–ಪಿಟೀಲು, ವಿದ್ವಾನ್ ತುಮಕೂರು ರವಿಶಂಕರ್–ಮೃದಂಗ, ವಿದ್ವಾನ್ ಶರತ್ ಕೌಶಿಕ್–ಘಟಂ, ಸ್ಥಳ: ಗಣಪತಿ ದೇವಸ್ಥಾನ, ಐ–ಬ್ಲಾಕ್, ರಾಮಕೃಷ್ಣನಗರ, ಸಂಜೆ 6 ಗಂಟೆಗೆ
- **ಶ್ರೀ ರಾಮ ಸೇವಾ ಮಂಡಳಿ ಚಾರಿಟಬಲ್ ಟ್ರಸ್ಟ್, ಮೈಸೂರು ಉತ್ತರ :** 30ನೇ ಶ್ರೀರಾಮನವಮಿ ಸಂಗೀತೋತ್ಸವ–2024, ಸಂಜೆ 5.15 ರಿಂದ ನಿರಂಜಿನಿ ಭಾರ್ಗವ್–ಶ್ರೀವತ್ಸ–ಸುಮುಖ್ ಅವರಿಂದ ಗಾಯನ, ಸಂಜೆ 6.15 ರಿಂದ ವಿದುಷಿ ಎಂ.ಆರ್. ಸುಧಾ ಅವರಿಂದ ಗಾಯನ, ವಿದ್ವಾನ್ ಕೃತಿಕ್ ಕೌಶಿಕ್–ಪಿಟೀಲು, ವಿದ್ವಾನ್ ಎ. ರಾಧೇಶ್–ಮೃದಂಗ, ವಿದ್ವಾನ್ ವಿ.ಎಸ್. ರಮೇಶ್–ಘಟಂ, ಸ್ಥಳ: ಶ್ರೀ ಪ್ರಸನ್ನ ಪಾರ್ವತಿ ಕಲ್ಯಾಣ ಮಂಟಪ, ವಿವಿ ಮೊಹಲ್ಲಾ.
- **ಭಾರತೀ ಸ್ತ್ರೀ ಸಮಾಜ ಸಾಂಸ್ಕೃತಿಕ ಮತ್ತು ಶೈಕ್ಷಣಿಕ ಚಾರಿಟಬಲ್ ಟ್ರಸ್ಟ್:** ಶ್ರೀ ರಾಮೋತ್ಸವದ ಅಂಗವಾಗಿ ಸಂಗೀತ ಕಛೇರಿಗಳು ಮತ್ತು ಸಾಂಸ್ಕೃತಿಕ ಕಾರ್ಯಕ್ರಮ, ವಿದುಷಿ ಡಿಂಪಲ್ ಅವರ ಕೃಷ್ಣನಾಟ್ಯ ಶಾಲೆ ಶಿಷ್ಯ ವೃಂದದವರಿಂದ ನೃತ್ಯ ಪ್ರದರ್ಶನ, ಸ್ಥಳ: ಸಮಾಜದ ಆವರಣ, ಯಾದವಗಿರಿ, ಸಂಜೆ 6 ರಿಂದ.
- **ಶ್ರೀ ರಾಮಮಂದಿರ :** ಶ್ರೀ ರಾಮೋತ್ಸವ, ಸಂಜೆ 6.15ಕ್ಕೆ ಶ್ರೀ ರಾಮಮಂದಿರ ಭಜನಾ ಮಂಡಳಿಯ ಸದಸ್ಯರಿಂದ ಭಜನೆ, ಸಂಜೆ 7.30ಕ್ಕೆ ಎಸ್.ಎನ್. ಪ್ರಸಾದ್ ಮತ್ತು ವೃಂದದವರಿಂದ ದೇವರನಾಮಗಳು, ರಾತ್ರಿ 8.30ಕ್ಕೆ ಶ್ರೀ ವಿಷ್ಣುಸಹಸ್ರನಾಮ ಪ್ರತಿಷ್ಠಾನದ ವತಿಯಿಂದ ವಿಷ್ಣುಸಹಸ್ರನಾಮ ಪಾರಾಯಣ, ಸ್ಥಳ: ಶ್ರೀರಾಮಮಂದಿರ, ಜಯನಗರ.
- **ಶ್ರೀರಾಮ ದೇವಸ್ಥಾನ :** ಶ್ರೀರಾಮ ನವಮಿ ಮಹೋತ್ಸವ, ಬೆಳಗ್ಗೆ ಪಂಚಾಮೃತ ಅಭಿಷೇಕ, ಅಲಂಕಾರ, ಸ್ಥಳ: ಶ್ರೀರಾಮ ದೇವಸ್ಥಾನ, ಅರಮನೆ ಕೋಟೆ, ಉತ್ತರ ಬಾಗಿಲು.
- **ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಗೆಳತಿ ಮಹಿಳಾ ಮಂಡಳಿ :** ಮತ ಜಾಗೃತಿ ಅಭಿಯಾನ, ಜಾಥಾ, ಹಾಡುಗಳು, ಬೀದಿ ನಾಟಕ ಪ್ರದರ್ಶನ, ಉದ್ಘಾಟನೆ : ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಉಪಸ್ಥಿತರು : ಹಿರಿಯ ಸಮಾಜ ಸೇವಕ ಡಾ. ಕೆ. ರಘುರಾಂ ವಾಜಪೇಯಿ, ಗೆಳತಿ ಮಹಿಳಾ ಮಂಡಳಿ ಸಂಸ್ಥಾಪಕ ಅಧ್ಯಕ್ಷೆ ಶ್ರೀಮತಿ ವಿಜಯಾ ಸುದರ್ಶನ್, ಸ್ಥಳ: ರಾಜರಾಜೇಶ್ವರಿ ದೇವಸ್ಥಾನದ ಮುಂಭಾಗ, ನಾರಾಯಣ ಬೇಕರಿ ಸರ್ಕಲ್, ಸಂಜೆ 5.30ಕ್ಕೆ.
- **ಶ್ರೀ ರಾಮಾಭ್ಯುದಯ ಸಭಾ ಪಬ್ಲಿಕ್ ಚಾರಿಟಬಲ್ ಟ್ರಸ್ಟ್ :** ಸಂಜೆ 5.30ಕ್ಕೆ ಶ್ರೀ ರಾಮನವಮಿ ಪ್ರಯುಕ್ತ ಸಂಗೀತೋತ್ಸವ, ಉದ್ಘಾಟನೆ : 'ಸ್ಟಾರ್ ಆಫ್ ಮೈಸೂರ್', 'ಮೈಸೂರು ಮಿತ್ರ' ಸಂಸ್ಥಾಪಕ ಸಂಪಾದಕ ಡಾ. ಕೆ.ಬಿ. ಗಣಪತಿ, ಮುಖ್ಯ ಅತಿಥಿಗಳು : ವಸುಂಧರ ಪ್ರದರ್ಶಕ ಕಲೆಗಳ ಕೇಂದ್ರದ ಡಾ. ವಸುಂಧರಾ ದೊರೆಸ್ವಾಮಿ, ಅಧ್ಯಕ್ಷತೆ : ಶ್ರೀ ರಾಮಾಭ್ಯುದಯ ಸಭಾ ಪಬ್ಲಿಕ್ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಡಾ. ಎನ್. ಶ್ರೀರಾಮ್, ಸಂಜೆ 6.30 ರಿಂದ ವಿದ್ವಾನ್ ಕುನ್ನಕುಡಿ ಎಂ.ಬಾಲಮುರಳಿಕೃಷ್ಣ ಅವರಿಂದ ಶಾಸ್ತ್ರೀಯ ಸಂಗೀತ, ವಿದ್ವಾನ್ ಅಕ್ಕರೈ ಸುಭಲಕ್ಷ್ಮಿ–ಪಿಟೀಲು, ವಿದ್ವಾನ್ ಡೆಲ್ಲಿ ಸಾಯಿರಾಂ–ಮೃದಂಗ, ವಿದ್ವಾನ್ ಗುರುಪ್ರಸನ್ನ–ಕಂಜೀರಾ, ಸ್ಥಳ: ಶ್ರೀಮತಿ ಆಲಮ್ಮನವರ ಛತ್ರ, ಕುಂಚಿಟಿಗರ ಸಂಘ, ಶ್ರೀರಾಮಪೇಟೆ.
- **ಶ್ರೀ ರಾಮಸೇವಾ ಮಂಡಲಿ:** 71ನೇ ವರ್ಷದ ಶ್ರೀರಾಮೋತ್ಸವ, ಬೆಳಗ್ಗೆ 9ಕ್ಕೆ ಶ್ರೀ ರಾಮ ಕಳಶ ಸ್ಥಾಪನೆಯೊಂದಿಗೆ ವೈದಿಕ ಕಲಾಪಗಳ ಪ್ರಾರಂಭ, ಸಂಜೆ 5ಕ್ಕೆ ಸಾಂಸ್ಕೃತಿಕ ಕಾರ್ಯಕ್ರಮಗಳ ಉದ್ಘಾಟನೆ, ಸಂಜೆ 6.30ಕ್ಕೆ ಬಿಳಿಕೆರೆ ಬಿ.ಎಸ್. ಗಂಗಾಧರ ಆಚಾರ್ ಮತ್ತು ವೃಂದದವರಿಂದ ಹರಿಕಥೆ, ಕಥಾಪ್ರಸಂಗ : ಶ್ರೀ ರಾಮ ಪಾದುಕಾ ಪಟ್ಟಾಭಿಷೇಕ, ಸ್ಥಳ: ಶ್ರೀರಾಮ ಸೇವಾ ಮಂಡಲಿ, ವಿದ್ಯಾರಣ್ಯಪುರಂ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಬದುಕು ಬದಲಿಸಿದ ಶೋಧ–ಬಾನುಲಿ ಸರಣಿ, ಪ್ರಸ್ತುತಿ–ಎನ್.ಎನ್.ಸುರೇಂದ್ರನಾಥ್ ಸಾತ್ವಿಕ್, 6.40 ಪದಸಂಸ್ಕೃತಿ–ಡಾ.ಕಬ್ಬಿನಾಲೆ ವಸಂತ ಭಾರದ್ವಾಜ್, 6.50 ರೈತರಿಗೆ ಸಲಹೆ, 7.15 ಮತಹಾಕೋಣ ಬನ್ನಿ–ಮತದಾರ ಜಾಗೃತಿ ಕುರಿತು ಕಾರ್ಯಕ್ರಮ ಸರಣಿ, ಚಾಮರಾಜನಗರ ಜಿಲ್ಲೆ, ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು ಅವರೊಂದಿಗೆ ಸಂದರ್ಶನ, ಸಂದರ್ಶಕರು–ಡಾ.ಮೈಸೂರು ಉಮೇಶ್, 9.00 ವೃತ್ತಿಮಾರ್ಗದರ್ಶನ, 10.00 ಉಸ್ತಾದ್ ಬಡೇ ಗುಲಾಮ್ ಆಲಿಖಾನ್–ಹಾಡುಗಾರಿಕೆ, 11.00 ಮಿಶ್ರಮಾಧುರ್ಯ ಮಧ್ಯಾಹ್ನ: 12.30 ದೇವರನಾಮ, 12.45 ಜನಪದ ಸಂಗೀತ–ರಾಜಮ್ಮ ಮತ್ತು ಸಂಗಡಿಗರು, 1.00 ಮತ ಹಾಕೋಣ ಬನ್ನಿ: ಮತದಾನ ಜಾಗೃತಿ ಸರಣಿ, 1.20 ಭಾವಗೀತೆಗಳು, 3.00 ಕೆ.ವಿ.ನಾರಾಯಣ ಸ್ವಾಮಿ–ಹಾಡುಗಾರಿಕೆ, 4.00 ಮಹಿಳಾರಂಗ ಸುಮಾ ಪ್ರಶಾಂತ್ ಹಾಗೂ ತಂಡದವರಿಂದ ರಾಮನವಮಿ ವಿಶೇಷ ಕಾರ್ಯಕ್ರಮ, 4.45 ಹಿಂದಿ ಪಾಠ, ಪ್ರಸ್ತುತಿ– ಕಿಶೋರ್ ಎಂ.ಕಾಕಡೆ, 6.50 ಕೃಷಿರಂಗ–ಸಾವಯವ ಸಂಪದ–ಸಾವಯವ ಕೃಷಿಬದುಕಿನ ಸಮಗ್ರ ಚಿತ್ರಣ ಕುರಿತ ಬಾನುಲಿ ಸರಣಿ, ಮೇವು ಬೆಳೆ ಹಾಗೂ ಅಜೋಲ್ಲ ಉತ್ಪಾದನೆ ಈ ಕುರಿತು ಮೈಸೂರಿನ ಏ.ಓ.ಈ. ಸಂಸ್ಥೆಯ ಮೇವು ಅಭಿವೃದ್ಧಿ ವಿಭಾಗದ ಉಪ ವ್ಯವಸ್ಥಾಪಕರಾದ ಡಾ.ಎಲ್.ಆರ್. ಕರಿಬಸವ ರಾಜ್ ಅವರೊಂದಿಗೆ ಸಂದರ್ಶನ. ಸಂದರ್ಶಕರು–ಎನ್.ಕೇಶವಮೂರ್ತಿ, 8.00 ಕ್ಷಿತಿಜ –ಸಾಹಿತ್ಯ ಸಾಧಕರೊಂದಿಗೆ ಸಂವಾದ, 9.30 ಲೋಕ್ ಪ್ರಸಾರಕ್ ಕೇ ಸಾಥ್ ಲೋಕ್ ನಿರ್ಣಯ್–2024, 10.00 ಹಳ್ಳಿ–ಹಾಡು, ಮಂಡ್ಯ ಜಿಲ್ಲೆ, ಬಿ. ಗಾವಡಗೆರೆಯ ನವೀನ್ ಕುಮಾರ್, 10.30 ಸವಿನೆನಪು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

45

ಏಪ್ರಿಲ್ 17 ಬುಧವಾರ 2024

ಸಂಪುಟ: 45 | ಸಂಚಿಕೆ: 2 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಲೋಕಸಭೆ ಚುನಾವಣೆ ನಂತರ ನಾನು ಬದುಕುತ್ತೇನೆ; ಆದರೆ

ಕಾಂಗ್ರೆಸ್ ಸರ್ಕಾರ ಅಸ್ತಿತ್ವದಲ್ಲಿರುವುದಿಲ್ಲ

91ರ ಅರಳು ಮರಳು ಎಂಬ ಕಾಂಗ್ರೆಸ್ ನಾಯಕರ ಟೀಕೆಗೆ ಗೌಡರ ಪ್ರತ್ಯುತ್ತರ

ಹಾಸನ: ಲೋಕಸಭಾ ಚುನಾವಣಾ ಪ್ರಚಾರ ವೇಳೆ ವಿವಿಧ ಪಕ್ಷಗಳ ನಾಯಕರ ಆರೋಪ–ಪ್ರತ್ಯಾರೋಪ ಬೇಸಿಗೆ ಬಿರು ಬಿಸಿಲಿಗಿಂತ ಕಾವೇರಿದೆ. ಅದರಲ್ಲೂ ಬಿಜೆಪಿ–ಜೆಡಿಎಸ್ ಮೈತ್ರಿಕೂಟ ಹಾಗೂ ಕಾಂಗ್ರೆಸ್ ನಡುವಿನ ಸಂಘರ್ಷ ತಾರಕಕ್ಕೇರಿದೆ.

ಇದೇ ವೇಳೆ ತಮ್ಮ ಇಳಿ ವಯಸ್ಸಿನಲ್ಲೂ ತಾವು ನಂಬಿದ ತತ್ವ–ಆದರ್ಶಗಳಲ್ಲಿ ರಾಜಿಗೆ ಸಿದ್ಧರಿಲ್ಲದ ಮಾಜಿ ಪ್ರಧಾನಿ ದೇವೇಗೌಡರು, ತಮ್ಮ ಅಗಾಧ ರಾಜಕೀಯ ಅನುಭವದಿಂದ, ಮುಂದಿನ ರಾಜಕೀಯ ಲೆಕ್ಕಾಚಾರವನ್ನು ನಿಖರವಾಗಿ ಹೇಳಬಲ್ಲವರು ಎಂಬುದು ಇಡೀ ದೇಶಕ್ಕೆ ತಿಳಿದಿದೆ. ಅಂತಹದ್ದರಲ್ಲಿ ಅವರು ಈ ಹಿಂದೆಯೇ ಹಾಲಿ ರಾಜ್ಯದ ಕಾಂಗ್ರೆಸ್ ಸರ್ಕಾರ ಲೋಕ



ಸಭಾ ಚುನಾವಣೆ ನಂತರ ಪತನವಾಗಲಿದೆ ಎಂದು ಹೇಳಿದ್ದರು. ಗೌಡರು ಅದೇ ಮಾತನ್ನು ಈಗ ಪುನರುಚ್ಚರಿಸಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಜೆಡಿಎಸ್ ವರಿಷ್ಠ ಹಾಗೂ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಅವರು, ಲೋಕಸಭೆ ಚುನಾವಣೆ ಬಳಿಕ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ತಾನಾಗಿಯೇ ಪತನವಾಗಲಿದೆ ಎಂದು ಮಂಗಳವಾರ ಪುನರುಚ್ಚರಿಸಿದ್ದಾರೆ. ಇಂದು ಇಬ್ಬೀಡು ಗ್ರಾಮದಲ್ಲಿ ಚುನಾವಣಾ ಪ್ರಚಾರ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಮಾಜಿ ಪ್ರಧಾನಿ, ಚುನಾವಣೆಯ ನಂತರ ನಾನು ಬದುಕುತ್ತೇನೆ. ಆದರೆ ಕಾಂಗ್ರೆಸ್ ಸರ್ಕಾರ ಅಸ್ತಿತ್ವದಲ್ಲಿ ಇರುವುದಿಲ್ಲ ಎಂದರು.

91 ವರ್ಷ ತುಂಬಿದ ನಂತರ ಅರಳು ಮರಳು ಎಂದು ತಮ್ಮನ್ನು ಟೀಕಿಸಿದ್ದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ದೇವೇಗೌಡರು, ಮಹಿಳೆಯರ ವಿರುದ್ಧದ ಹೇಳಿಕೆಗಾಗಿ ತಮ್ಮ ಪುತ್ರ ಎಚ್‌ಡಿ ಕುಮಾರಸ್ವಾಮಿ(ಎಚ್‌ಡಿಕೆ) ವಿರುದ್ಧ ರಾಜ್ಯಾದ್ಯಂತ ನಡೆಯುತ್ತಿರುವ ● 9ನೇ ಪುಟಕ್ಕೆ

ಹಿರಿಯ ನಟ, ನಿರ್ಮಾಪಕ, ನಿರ್ದೇಶಕ ದ್ವಾರಕೀಶ್ ಇನ್ನಿಲ್ಲ

ಅಂತಿಮ ದರ್ಶನ ಪಡೆದ ಗಣ್ಯರು, ಕಲಾವಿದರ ಕಂಬನಿ

ಬೆಂಗಳೂರು, ಏ.16–ಕನ್ನಡ ಚಿತ್ರರಂಗದ ಹಿರಿಯ ನಟ, ನಿರ್ದೇಶಕ, ನಿರ್ಮಾಪಕ ದ್ವಾರಕೀಶ್ ಅವರು ಮಂಗಳವಾರ ಬೆಳಗ್ಗೆ ಹೃದಯಾಘಾತದಿಂದ ನಿಧನರಾದರು. ಇವರಿಗೆ 81 ವರ್ಷ ವಯಸ್ಸಾಗಿತ್ತು.

ಈ ಹಿಂದೆ ಹಲವು ಬಾರಿ ದ್ವಾರಕೀಶ್ ನಿಧನದ ವದಂತಿ ಹಬ್ಬಿದ್ದರಿಂದ ಇಂದೂ ಕೂಡ ಅದೇ ರೀತಿ ಆಗಿರಬಹುದು ಎನ್ನಲಾಗಿತ್ತು. ಆದರೆ ದ್ವಾರಕೀಶ್ ನಿಧನವಾಗಿದ್ದನ್ನು ಅವರ ಕುಟುಂಬದವರೇ ಖಚಿತಪಡಿಸಿದರು. ದ್ವಾರಕೀಶ್ ನಿಧನ ವಾರ್ತೆ ತಿಳಿಯುತ್ತಿದ್ದಂತೆ ಕನ್ನಡ ಚಿತ್ರರಂಗದ ಕಲಾವಿದರು ಹಾಗೂ ಅವರ ಅಭಿಮಾನಿಗಳು ಕಂಬನಿ ಮಿಡಿದರು. ಅವರ ನಿವಾಸಕ್ಕೆ ತೆರಳಿ ದ್ವಾರಕೀಶ್ ಪಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸಿದರು.

ಸೋಮವಾರ ರಾತ್ರಿ ಲೂಸ್ ಮೋಷನ್ ಆಗಿದ್ದರಿಂದ ರಾತ್ರಿಯಿಡೀ ನಿದ್ರೆ ಮಾಡಿರಲಿಲ್ಲ. ಮುಂಜಾನೆ ಕಾಫಿ ಕುಡಿದು ಒಂದೆರಡು ಗಂಟೆ ವಿಶ್ರಾಂತಿ ಪಡೆಯುತ್ತೇನೆಂದು ಮಲಗಿದರು. ಬೆಳಗ್ಗೆ ಸುಮಾರು 9.45ರ ವೇಳೆಗೆ ಅವರನ್ನು ● 6ನೇ ಪುಟಕ್ಕೆ



ಮೈಸೂರಿಂದ ಹೋಗಿ ಬೆಂಗಳೂರಲ್ಲಿ ಬೆಳೆದ 'ಕನ್ನಡದ ಪ್ರಚಂಡ ಕುಳ್ಳ'

ಮೈಸೂರು, ಏ.16(ಎಸ್‌ಬಿಡಿ)– ಕನ್ನಡ ಚಿತ್ರರಂಗದ ಆಸ್ತಿಯಾಗಿದ್ದ ದ್ವಾರಕೀಶ್, ಓದಿ ಬೆಳೆದಿದ್ದೆಲ್ಲಾ ಮೈಸೂರಿನಲ್ಲಿ. ಚಿತ್ರರಂಗದಲ್ಲಿ ಸಕ್ರಿಯವಾದ ನಂತರವೂ ಮೈಸೂರಿನೊಂದಿಗಿನ ಅವಿನಾಭಾವ ನಂಟು ಮುಂದುವರೆದಿತ್ತು.


ಮೈಸೂರು ಜಿಲ್ಲೆ ಹುಣಸೂರಿನ ಶಾಮರಾವ್ ಹಾಗೂ ಜಯಮ್ಮ ದಂಪತಿ ಪುತ್ರನಾಗಿ 1942ರ ಆಗಸ್ಟ್ 19ರಂದು ದ್ವಾರಕೀಶ್ ಜನಿಸಿದರು. ನಂತರ ಅವರ ಕುಟುಂಬ ಮೈಸೂರು ನಗರದ ಇಟ್ಟಿಗೆಗೂಡಿನಲ್ಲಿ ನೆಲೆಸಿತ್ತು. ಬನುಮಯ್ಯ ಶಾಲೆ ಹಾಗೂ ಶಾರದಾವಿಲಾಸ ಶಾಲೆಗಳಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಪಡೆದ ಅವರು, ಸಿಪಿಸಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಮೆಕ್ಯಾನಿಕಲ್ ಇಂಜಿನಿಯರಿಂಗ್ ಡಿಪ್ಲೊಮಾ ಪಡೆದರು. ಚಿತ್ರಸಾಹಿತಿ, ನಿರ್ದೇಶಕ, ನಿರ್ಮಾಪಕರಾಗಿದ್ದ ಹುಣಸೂರು ಕೃಷ್ಣಮೂರ್ತಿ ಅವರು ದ್ವಾರಕೀಶ್ ಅವರ ಸೋದರಮಾವ. ಹಾಗಾಗಿ ದ್ವಾರಕೀಶ್ ಅವರಿಗೂ ವಿದ್ಯಾರ್ಥಿ ದೆಸೆಯಿಂದಲೇ ಸಿನಿಮಾ ಬಗ್ಗೆ ಆಸಕ್ತಿ ಇತ್ತು. ಆದರೆ ಅವರ ಕುಟುಂಬದವರಿಗೆ ಸಿನಿಮಾ ರಂಗಕ್ಕೆ ● 6ನೇ ಪುಟಕ್ಕೆ

ಮಂಡ್ಯದ ಜನ ನನ್ನ ತುಂಬು ಹೃದಯದಿಂದ ಸ್ವಾಗತಿಸಿದ್ದಾರೆ...

● ಕಾಂಗ್ರೆಸ್ ಮಹಿಳಾ ಘಟಕದ ಗೋಬ್ಯಾಕ್ ಅಭಿಯಾನಕ್ಕೆ ಕುಮಾರಸ್ವಾಮಿ ತಿರುಗೇಟು ● ಮಳವಳ್ಳಿ ಮೂಲಕ ಪ್ರಚಾರ ಸಭೆಗೆ ಚಾಲನೆ; ಕಾಂಗ್ರೆಸ್‌ಗೆ ಹಣಬಲ; ಕುಮಾರಸ್ವಾಮಿಗೆ ಜನಬಲ: ವಿಜಯೇಂದ್ರ ● ಕುಮಾರಸ್ವಾಮಿ ಗೆಲುವು ತಡೆಯುವ ಶಕ್ತಿ ಸಿಎಂ, ಡಿಸಿಎಂಗೆ ಇಲ್ಲ: ಜಿಟಿಡಿ

ಮಳವಳ್ಳಿ, ಏ.16–ನನಗೆ ಮಂಡ್ಯ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಲು ಮನಸ್ಸೇ ಇರಲಿಲ್ಲ. ಆದರೆ ಇಲ್ಲಿನ ಮತದಾರರು ಹಾಗೂ ಕಾರ್ಯಕರ್ತರ ಒತ್ತಡಕ್ಕೆ ಮಣಿದು ಅಖಾಡಕ್ಕೆ ಇಳಿದ್ದೇನೆ. ಇಲ್ಲಿನ ಜನ ತುಂಬು ಹೃದಯದಿಂದ ನನ್ನನ್ನು ಕ್ಷೇತ್ರಕ್ಕೆ ಆಹ್ವಾನಿಸಿದ್ದಾರೆ. ಜನರ ಪ್ರೀತಿ ಇಷ್ಟಿರುವಾಗ ಕಾಂಗ್ರೆಸ್ಸಿಗರ ಗೋ ಬ್ಯಾಕ್ ಅಭಿಯಾನಕ್ಕೆ ನಾನು ತಲೆಕೆಡಿಸಿಕೊಳ್ಳುವುದಿಲ್ಲ ಎಂದು ಮಂಡ್ಯ ಲೋಕಸಭಾ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಹಾಗೂ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಹೇಳಿದರು.

ಪಟ್ಟಣದ ಕನಕದಾಸ ಕ್ರೀಡಾಂಗಣದಲ್ಲಿ ಮಂಗಳವಾರ ತಮ್ಮ ಪರವಾಗಿ ಆಯೋಜಿಸಿದ್ದ ಬಹಿರಂಗ ಪ್ರಚಾರ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ನಾನು, ಗ್ರಾಮೀಣ ಪ್ರದೇಶದಲ್ಲಿ ನನ್ನ ಕೆಲ ತಾಯಂದಿರು ಗ್ಯಾರಂಟಿಗಳಿಂದ ದಾರಿ ತಪ್ಪಿದ್ದಾರೆ ಎಂದಿದ್ದೇನೆ ವಿನಃ



ಮಹಿಳೆಯರು ದಾರಿ ತಪ್ಪಿದ್ದಾರೆ ಎಂದು ಎಲ್ಲಿಯೂ ಹೇಳಿಲ್ಲ. ಈ ರಾಜ್ಯದ ಮಹಿಳೆಯರಿಗೆ ನಾನು ಎರಡು ಬಾರಿ ಮುಖ್ಯಮಂತ್ರಿಯಾಗಿ ಕೊಟ್ಟ ಕೊಡುಗೆ ಏನೆಂಬುದು ಇಡೀ ರಾಜ್ಯಕ್ಕೆ ಗೊತ್ತಿದೆ ಎಂದರು.ಕಾಂಗ್ರೆಸ್ ಸರ್ಕಾರವು ಕಾವೇರಿಯಲ್ಲಿ 98 ಅಡಿ ನೀರು ಇರುವಾಗಲೇ ಮಂಡ್ಯ ಜಿಲ್ಲೆಯ ರೈತರಿಗೆ ಭತ್ತ ಕಬ್ಬು ಹಾಕಬೇಡಿ ಎನ್ನುವ ಮೂಲಕ ದ್ರೋಹ ಮಾಡಿದೆ. ಇನ್ನು ಈ ಸರ್ಕಾರದ ಮುಂಚೂಣಿಯಲ್ಲಿರುವ ಕನಕಪುರದ ಮಹಾನುಭಾವರು 'ನಮ್ಮ ನೀರು ನಮ್ಮ ಹಕ್ಕು' ಎಂದು ಪಾದಯಾತ್ರೆ ಮಾಡಿ ಈಗ 'ನಮ್ಮ ನೀರು ತಮಿಳುನಾಡಿನ ಹಕ್ಕು' ಎಂದು ಸುಮ್ಮನಿದ್ದಾರೆಂದು ಡಿ.ಕೆ.ಶಿವಕುಮಾರ್ ಅವರನ್ನು ಟೀಕಿಸಿದರು. ಮಂಡ್ಯ ಸಕ್ಕರೆ ಕಾರ್ಖಾನೆಯನ್ನು ಅಭಿವೃದ್ಧಿಪಡಿಸಲು ನನ್ನ ಅಧಿಕಾರಾವಧಿಯಲ್ಲಿ 100 ಕೋಟಿ ನೀಡಿದ್ದೆ. ಆದರೆ ಕಾಂಗ್ರೆಸ್ ಸರ್ಕಾರ ಮುಚ್ಚುವ ಯತ್ನ ಮಾಡಿದೆ. ಮಂಡ್ಯಕ್ಕೆ ನಿಮ್ಮ ಕೊಡುಗೆ ಏನು ಎಂದು ಪ್ರಶ್ನಿಸುವ ನೀವು ಜಿಲ್ಲೆ ರೈತರ ಒಟ್ಟು 750 ಕೋಟಿ ರೂಗಳನ್ನು ಸಾಲ ಮನ್ನಾ ಮಾಡಿದ್ದೇನೆ. ಇನ್ನು ಜಿಲ್ಲೆ ರೈತರ ಏಳಿಗೆಗಾಗಿ ಹತ್ತು ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದೇನೆ. ಸರ್ವತೋಮುಖ ಅಭಿವೃದ್ಧಿಗಾಗಿ ನನ್ನ ಅಲ್ಪಾವಧಿ ಅಧಿಕಾರದಲ್ಲೇ ಸಾಕಷ್ಟು ಕಾರ್ಯ ಮಾಡಿದ್ದೇನೆ. ಅನೇಕ ಯೋಜನೆಗಳಿಗೆ ಸಾವಿರಾರು ಕೋಟಿ ರೂಗಳನ್ನು ಬಿಡುಗಡೆಗೊಳಿಸಿದ್ದೇನೆ ಎಂದು ತಿಳಿಸಿದರು.

ಮಂಡ್ಯ ಜಿಲ್ಲೆಯಲ್ಲಿ ರೈತರು ಆತ್ಮಹತ್ಯೆ ಮಾಡಿಕೊಂಡಾಗ ಮೊದಲ ಬಾರಿಗೆ ಮಾಜಿ ಪ್ರಧಾನಿ ದೇವೇಗೌಡರು ಆತ್ಮಹತ್ಯೆ ● 9ನೇ ಪುಟಕ್ಕೆ

ಹವಾಮಾನ ಇಲಾಖೆ ಶುಭ ಸುದ್ದಿ

ಮೈಸೂರಿನಲ್ಲಿ ಈ ಬಾರಿ ಅಧಿಕ ಮಳೆ

● ಮೈಸೂರಿನಲ್ಲಿ 873 ಮಿಲಿ ಮೀಟರ್ ವಾಡಿಕೆ ಮಳೆ ● ಮುಂಗಾರಿನಲ್ಲಿ ವರ್ಷಧಾರೆಯ ಹರುಷ ● ಕರ್ನಾಟಕದಲ್ಲೂ ಉತ್ತಮ ಮಳೆ ನಿರೀಕ್ಷೆ ● 85.2 ಸೆಂಟಿ ಮೀಟರ್‌ಗಿಂತ ಅಧಿಕ ಮಳೆ ಸಾಧ್ಯತೆ

ಮೈಸೂರು, ಏ.16(ಬಿಎಲ್‌ಯು)– ಬರಗಾಲದಿಂದ ತತ್ತರಿಸಿದ್ದ ಕರ್ನಾಟಕದ ಜನತೆಗೆ ಹವಾಮಾನ ಇಲಾಖೆ ಶುಭ ಸುದ್ದಿ ನೀಡಿದೆ. ಮೈಸೂರು ಸೇರಿದಂತೆ ಕರ್ನಾಟಕದಲ್ಲಿ ವಾಡಿಕೆಗಿಂತ ಹೆಚ್ಚಾಗಿ ಮಳೆ ಬೀಳಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

ಮೈಸೂರಿನಲ್ಲಿ ವರ್ಷಕ್ಕೆ 873 ಮಿಲಿ ಮೀಟರ್ ಮಳೆಯಾಗುತ್ತದೆ. ಕಳೆದ 30 ವರ್ಷದ ಸರಾಸರಿ ಮಳೆಯ ಪ್ರಮಾಣ ದಾಖಲಿಸಿ ವರ್ಷಕ್ಕೆ ಮೈಸೂರಿನಲ್ಲಿ 873 ಮಿಲಿ ಮೀಟರ್ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಅಂದಾಜಿಸಿದೆ. ಕಳೆದ ವರ್ಷ ಮೈಸೂರಿನಲ್ಲಿ ವಾಡಿಕೆಗಿಂತ ಶೇಕಡ 20ರಷ್ಟು ಮಳೆ



ಕಡಿಮೆಯಾಗಿತ್ತು. ಜೂನ್ ತಿಂಗಳಲ್ಲಿ ವಾಡಿಕೆಯಷ್ಟು ಮಳೆ ಯಾಯಿತು. ಆದರೆ ತರುವಾಯ ಮಳೆಯ ಪ್ರಮಾಣ ಕ್ಷೀಣಿಸಿತು. ಆದರೆ ಈ ಬಾರಿ 873 ಮಿಲಿ ಮೀಟರ್ ಗಿಂತ ಹೆಚ್ಚು ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಹೇಳಿದೆ. ಕಳೆದ ವರ್ಷ ಬರಗಾಲ ಬಂದು ಜನ, ಜಾನುವಾರು ಸಂಕಷ್ಟ ಅನುಭವಿಸಿದ್ದರು. ರಾಜ್ಯ ರಾಜಧಾನಿ ಬೆಂಗಳೂರು ಸೇರಿದಂತೆ ಇತರೆಡೆ ಈ ತನಕ ಕುಡಿಯುವ ನೀರಿಗೆ ಹಾಹಾಕಾರವಿದೆ. ಈ ವರ್ಷವೂ ಮಳೆ ಆಗುವುದೋ ಇಲ್ಲವೋ ಎಂದು ಜನರು ಚಿಂತೆಗೀಡಾಗಿದ್ದರು.

ಆದರೆ ಈಗ ಮೈಸೂರು ಸೇರಿದಂತೆ ಕರ್ನಾಟಕದಲ್ಲಿ ಉತ್ತಮ ಮಳೆಯಾಗುತ್ತದೆ. ಅದರಲ್ಲೂ ವಾಡಿಕೆಗಿಂತ ಹೆಚ್ಚು ಮಳೆಯಾಗುತ್ತದೆ ● 9ನೇ ಪುಟಕ್ಕೆ



ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹುಣಸೂರಿನಲ್ಲಿ ಮಂಗಳವಾರ ಬೃಹತ್ ರೋಡ್ ಶೋ ಮೂಲಕ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಪರ ಮತಯಾಚಿಸಿದರು. ಶಾಸಕ ಜಿ.ಡಿ.ಹರೀಶ್‌ಗೌಡ, ಮಾಜಿ ಶಾಸಕರಾದ ಎಸ್.ಎ.ರಾಮದಾಸ್, ಕೆ.ಮಹದೇವು, ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಇತರರು ಸಾಥ್ ನೀಡಿದರು.

ಇಂದು ಮಂಡ್ಯದಲ್ಲಿ ಸ್ಟಾರ್‌ಚಂದ್ರು ಪರ ರಾಹುಲ್‌ಗಾಂಧಿ ಮತಬೇಟೆ

ಮಂಡ್ಯ,ಏ.16– ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷ ಬಿರುಸಿನ ಪ್ರಚಾರ ನಡೆಸುತ್ತಿದ್ದು, ಪಕ್ಷದ ರಾಷ್ಟ್ರೀಯ ನಾಯಕ ರಾಹುಲ್ ಗಾಂಧಿ ಮಂಡ್ಯದಲ್ಲಿ ನಾಳೆ (ಏ.17) ಬೃಹತ್ ಸಮಾವೇಶದಲ್ಲಿ ಪಕ್ಷದ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಪರ ಮತ ಯಾಚಿಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಮಂಡ್ಯ ವಿಶ್ವವಿದ್ಯಾನಿಲಯದ ಆವರಣದಲ್ಲಿ ಬೃಹತ್ ಸಮಾವೇಶ ನಡೆಯಲಿದ್ದು, ಭಾರತ್ ಜೋಡೋ ಯಾತ್ರೆ ನಂತರ ಮಂಡ್ಯ ಜಿಲ್ಲೆಗೆ ಕಾಂಗ್ರೆಸ್ ನಾಯಕ ರಾಹುಲ್‌ಗಾಂಧಿ ಮತ್ತೆ ಆಗಮಿಸುತ್ತಿದ್ದಾರೆ. ಇವರ ಆಗಮನ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರಲ್ಲಿ ಹೊಸ ಹುಮ್ಮಸ್ಸು ತರಲಿದೆ ಎಂದರು.


ಮಧ್ಯಾಹ್ನ 1.30ರಿಂದ 2ಗಂಟೆಯೊಳಗೆ ವೇದಿಕೆಗೆ ರಾಹುಲ್‌ಗಾಂಧಿ ಆಗಮಿಸಲಿದ್ದು, 75 ಸಾವಿರದಿಂದ 1 ಲಕ್ಷ ಜನ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ ಎಂದರು. ಕಾಂಗ್ರೆಸ್ ಪಕ್ಷದ ಕರ್ನಾಟಕ ಉಸ್ತುವಾರಿ ರಣ



ದೀಪ್‌ಸಿಂಗ್ ಸುರ್ಜೇವಾಲ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಂಡ್ಯ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ವೆಂಕಟರಮಣೇಗೌಡ ವೇದಿಕೆಯಲ್ಲಿ ಉಪಸ್ಥಿತರಿರುವರು. ಮೈಸೂರು– ಕೊಡಗು ಕ್ಷೇತ್ರದ ಅಭ್ಯರ್ಥಿ ಲಕ್ಷ್ಮಣ, ಹಾಸನ ಅಭ್ಯರ್ಥಿ ಶ್ರೇಯಸ್ ಪಟೇಲ್, ಚಾಮರಾಜನಗರ ಕ್ಷೇತ್ರದ ಅಭ್ಯರ್ಥಿ ಸುನಿಲ್ ಬೋಸ್ ಭಾಗವಹಿಸುವ ಸಾಧ್ಯತೆ ಇದೆ ಎಂದರು.

ನಾಲೆಗಳಿಗೆ ನೀರು ಹರಿಸಲ್ಲ: ಕೃಷ್ಣರಾಜಸಾಗರ ಜಲಾಶಯದಿಂದ ವಿಶ್ವೇಶ್ವರಯ್ಯ ನಾಲೆಗೆ ನೀರು ಹರಿಸಲು ಸದ್ಯದ ಪರಿಸ್ಥಿತಿಯಲ್ಲಿ ಸಾಧ್ಯ ಇಲ್ಲ. ನಾಲ್ಕೈದು ದಿನ ಇಲ್ಲವೇ ಒಂದು ವಾರ ನಾಲೆಗಳಿಗೆ ನೀರು ಹರಿಸಿದರೆ ಅದು ಕೊನೆ ಘಟದವರೆಗೆ ಹೋಗುವುದು ಸಾಧ್ಯವಿಲ್ಲ. ಬಿರು ಬೇಸಿಗೆಯಲ್ಲಿ ನೀರು ಬಿಟ್ಟರೆ ಆವಿಯಾಗಲಿದೆ. ಜೊತೆಗೆ ಭೂಮಿ ಕಾವೇರಿದ್ದು, ನೀರು ಹರಿದರೆ ಹೀರಿಕೊಳ್ಳುತ್ತದೆ. ತಿಂಗಳು ಗಟ್ಟಲೆ ನೀರು ಹರಿಸಿದರು ಕೊನೆಯ ಭಾಗಕ್ಕೆ ತಲುಪದಿರುವುದನ್ನು ಹಿಂದೆಲ್ಲಾ ನೋಡಿದ್ದೇವೆ ಎಂದು ಚಲುವರಾಯಸ್ವಾಮಿ ಹೇಳಿದರು. ನಾಲೆ ಆಧುನಿಕರಣ ಕಾಮಗಾರಿ ನಡೆಯುತ್ತಿದೆ, ಬೇಕಾದರೆ ಕಾಮಗಾರಿ ನಿಲ್ಲಿಸಿ ನೀರು ಹರಿಸಬಹುದು. ಆದರೆ ವಾಸ್ತವ ಪರಿಸ್ಥಿತಿ ಬೇರೆ ಇದೆ. ರೈತರು ಇದನ್ನು ಅರ್ಥಮಾಡಿಕೊಳ್ಳಬೇಕು. ಮಳೆಯನ್ನೇ ನಂಬಿದ್ದೇವೆ. 20ರ ನಂತರ ಮಳೆಯಾಗುವ ಮುನ್ಸೂಚನೆ ಇದ್ದು, ವರುಣನ ಕೃಪೆಯಿಂದ ಸಂಕಷ್ಟ ಪರಿಸ್ಥಿತಿ ದೂರ ಆಗಲಿ ಎಂದು ಆಶಿಸಿದರು.

ಮಹಿಳೆಯರ ಬಗ್ಗೆ ಮಾತನಾಡಿದ ಕುಮಾರಸ್ವಾಮಿ ತಪ್ಪಿಗೆ ಕ್ಷಮೆ ಇಲ್ಲ: ಚಲುವರಾಯಸ್ವಾಮಿ



ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಮಾತನಾಡಿದರು. ಈ ವೇಳೆ ಶಾಸಕ ರವಿಕುಮಾರ್ ಗಣಿಗ, ಪಕ್ಷದ ಜಿಲ್ಲಾಧ್ಯಕ್ಷ ಸಿ.ಡಿ.ಗಂಗಾಧರ್, ಕಾರ್ಯಾಧ್ಯಕ್ಷ ಎಂ.ಎಸ್.ಚಿದಂಬರ್ ಉಪಸ್ಥಿತರಿದ್ದರು.

ತಪ್ಪಿಗೆ ಕ್ಷಮೆ ಇಲ್ಲ: ಮಹಿಳೆಯರ ಬಗ್ಗೆ ಮಾಜಿ ಸಿಎಂ ಕುಮಾರಸ್ವಾಮಿ ಆಡಿರುವ ಮಾತು ಅಕ್ಷಮ್ಯ ಅಪರಾಧ, ಇದಕ್ಕೆ ಕ್ಷಮೆಯೇ ಇಲ್ಲ. ಸುಮಲತಾ ಅಂಬರೀಶ್ ಮೈತ್ರಿ ಅಭ್ಯರ್ಥಿ ಪರ ಪ್ರಚಾರಕ್ಕೆ ಬಾರದಿರುವುದು, ತಟಸ್ಥವಾಗಿ ಉಳಿದುಕೊಂಡಿರುವುದು, ಅವರ ಪಕ್ಷಕ್ಕೆ ಸೇರಿದ ವಿಚಾರ. ಅದರ ಬಗ್ಗೆ ನನಗೇನು ಮಾಹಿತಿ ಇಲ್ಲ. ಪ್ರತಿಪಕ್ಷದ ನಾಯಕ ಆರ್.ಅಶೋಕ್, ಕುಮಾರಸ್ವಾಮಿ ತಪ್ಪು ಮಾಡಿಲ್ಲ ಅನ್ನುತ್ತಾರೆ. ಮತ್ತೆ ಯಾಕೆ ಕುಮಾರಸ್ವಾಮಿ ವಿಷಾದ ವ್ಯಕ್ತಪಡಿಸಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಒಕ್ಕಲಿಗ ನಾಯಕರಲ್ಲವೇ, ಅವರೇನು ಬೇರೆ ಸಮುದಾಯದವರೇ ಎಂದು ಪ್ರಶ್ನಿಸಿದ ಅವರು ಆದಿಚುಂಚನಗಿರಿ ಮಠವನ್ನು ರಾಜಕೀಯ ಉದ್ದೇಶಕ್ಕೆ ಬಳಕೆ ಮಾಡಿಕೊಂಡಿರುವುದು ಸರಿಯಲ್ಲ. ಕಾಂಗ್ರೆಸ್ ಪಕ್ಷದವರು ಕೂಡ ಸ್ವಾಮಿಗಳ ಆಶೀರ್ವಾದ ಪಡೆದಿದ್ದಾರೆ. ಆದರೆ ಇವರ ವರ್ತನೆ ಆ ರೀತಿ ಇರಲಿಲ್ಲ. ಮೈತ್ರಿ ಪಕ್ಷದವರು ತಾವು ಮಾಡಿರುವ ತಪ್ಪಿಗಾಗಿ ಆದಿಚುಂಚನಗಿರಿ ಧರ್ಮಪೀಠದ ಕ್ಷಮೆ ಯಾಚಿಸಬೇಕು ಎಂದು ಒತ್ತಾಯಿಸಿದರು.

ದೇಶಕ್ಕೆ ಸ್ವಾತಂತ್ರ್ಯ ದೊರೆತ ನಂತರ ಯಾವುದೇ ರಾಜ್ಯಗಳು ಇಷ್ಟೊಂದು ಪ್ರಮಾಣದಲ್ಲಿ ಎಲ್ಲಾ ● 9ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಮಾಸ್ಟರ್ : "ಹೋಮ್ ವರ್ಕ್ ಮಾಡಿದ್ದೀಯಾ ಜಲಜಾ?"
ಜಲಜ : "ಹೌದೂ ಸಾರ್"
ಮಾಸ್ಟರ್ : "ಸರಿ ತಗೊಂಡು ಬಾ"
ಜಲಜ : "ಅದು ಹೇಗೆ ತರಲಿ ಸಾರ್.ಮನೆ ಕೆಲಸ ಪಾತ್ರೆ ತೊಳೆದು, ಬಟ್ಟೆ ಒಗೆದು, ಕಸಗುಡಿಸಿ, ಮನೆ ವರೆಸಿದ್ದೆಲ್ಲಾ ತರಕ್ಕಾಗಲ್ಲ ಸಾರ್!"

ಮೈಸೂರು ಮಿತ್ರ

ಬುಧವಾರ, 17 ಏಪ್ರಿಲ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ.........

ಪಚ್ಚ ಕರ್ಪೂರದ ಹುಡಿಯಿಂದ ಪಾತಿ ಮಾಡಿ ಕಸ್ತೂರಿಯ ಗೊಬ್ಬರ ಹಾಕಿ ಪನ್ನೀರೆರೆದು ಬೆಳೆಸಿದಾಗ್ಯೂ ಈರುಳ್ಳಿ ತನ್ನ ಮುನ್ನಿನ ಗುಣ ಬಿಟ್ಟೀತೇ? –ಸೋಮದೇವನೀತಿ ಸೂತ್ರ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಆಡುವುದು ಸುಲಭ, ಮಾಡುವುದು ಕಷ್ಟ

ನಿಮ್ಮ ಪತ್ರಗಳು

'ಕನ್ನಡದ ಕುಳ್ಳ'ನಿಗೆ ಅಂತಿಮ ನಮನಗಳು

ಮಾನ್ಯರೆ,



'ಕನ್ನಡದ ಕುಳ್ಳ' ಎಂದೇ ಖ್ಯಾತರಾಗಿದ್ದ ಹಿರಿಯ ಚಿತ್ರನಟ, ನಿರ್ಮಾಪಕ ಹಾಗೂ ನಿರ್ದೇಶಕ ಬಿ.ಎಸ್.ದ್ವಾರಕೀಶ್ ತಮ್ಮ 81ನೇ ವಯಸ್ಸಿನಲ್ಲಿ ನಿಧನ ಹೊಂದಿರುವುದು ಕನ್ನಡ ಚಿತ್ರರಂಗಕ್ಕೆ ಉಂಟಾದ ತೀವ್ರ ನಷ್ಟವಾಗಿದೆ. ತಮ್ಮ ಸೋದರ ಮಾವ ಚಿತ್ರಬ್ರಹ್ಮ ದಿವಂಗತ ಹುಣಸೂರು ಕೃಷ್ಣಮೂರ್ತಿಯವರ ನಿರ್ದೇಶನದಲ್ಲಿ ಮೂಡಿ ಬಂದ "ವೀರ ಸಂಕಲ್ಪ" ಚಿತ್ರದ ಮೂಲಕ ಬೆಳ್ಳಿ ತೆರೆ ಪ್ರವೇಶಿಸಿದ ದ್ವಾರಕೀಶ್, ಓರ್ವ ಹಾಸ್ಯನಟನಾಗಿ, ನರಸಿಂಹರಾಜು ಮತ್ತು ಬಾಲಕೃಷ್ಣರ ಜೊತೆ ಜೊತೆಯಾಗಿ ಹಲವಾರು ಚಿತ್ರಗಳಲ್ಲಿ ನಟಿಸಿದರು. ಅವರು ನಟಿಸಿರುವ ಚಿತ್ರಗಳ ಸಂಖ್ಯೆ 400ನ್ನೂ ದಾಟುತ್ತದೆ.

ತಮ್ಮ ದ್ವಾರಕೀಶ್ ಚಿತ್ರ ಲಾಂಛನದಲ್ಲಿ 50ಕ್ಕೂ ಹೆಚ್ಚು ಚಿತ್ರಗಳನ್ನು ನಿರ್ಮಿಸಿದ ದ್ವಾರಕೀಶ್, ಡಾ.ರಾಜಕುಮಾರ್ ನಾಯಕತ್ವದ ಹಲವಾರು ಯಶಸ್ವಿ ಚಿತ್ರಗಳನ್ನು ನಿರ್ಮಿಸಿ ಯಶಸ್ವಿಯಾಗಿದ್ದಾರೆ. ಅವುಗಳ ಪೈಕಿ ಮೇಯರ್ ಮುತ್ತಣ್ಣ, ಭಾಗ್ಯವಂತರು, ಮುಂತಾದವುಗಳನ್ನು ಹೆಸರಿಸಬಹುದು. ಡಾ.ರಾಜಕುಮಾರ್ ನಂತರ, ವಿಷ್ಣುವರ್ಧನ್ ನಾಯಕತ್ವದಲ್ಲಿ 'ಗುರುಶಿಷ್ಯರು', 'ಸಿಂಗಾಪುರದಲ್ಲಿ ರಾಜಾಕುಳ್ಳ' ಸೇರಿದಂತೆ ಹಲವಾರು ಯಶಸ್ವಿ ಚಿತ್ರಗಳನ್ನು ನಿರ್ಮಿಸಿದ ದ್ವಾರಕೀಶ್, ಓರ್ವ ಪ್ರಯೋಗಶೀಲ ನಿರ್ಮಾಪಕರಾಗಿ 6 ದಶಕಗಳ ಕಾಲ ಕನ್ನಡ ಚಿತ್ರರಂಗದಲ್ಲಿ ತಮ್ಮ ಛಾಪು ಮೂಡಿಸಿದ್ದಾರೆ. 1985 ರಲ್ಲಿ ವಿಷ್ಣುವರ್ಧನ್ ನಾಯಕತ್ವದ 'ನೀ ಬರೆದ ಕಾದಂಬರಿ' ಎಂಬ ಚಿತ್ರವನ್ನು ನಿರ್ದೇಶಿಸುವುದರ ಮೂಲಕ ನಿರ್ದೇಶಕರಾಗಿಯೂ ಬಡ್ತಿ ಹೊಂದಿದ ದ್ವಾರಕೀಶ್, ವೈವಿಧ್ಯಮಯ ಪಾತ್ರಗಳ ಮೂಲಕ ತಮ್ಮ ಕಲಾಕೌಶಲ್ಯತೆ ಹಾಗೂ ಸೃಜನಶೀಲತೆಯನ್ನು ಅನಾವರಣಗೊಳಿಸುತ್ತಿದ್ದರು.

'ಡ್ಯಾನ್ಸ್ ರಾಜ ಡ್ಯಾನ್ಸ್' ಚಿತ್ರದ ಮೂಲಕ ಹಿರಿಯ ನಟಿ, ದಿವಂಗತ ಲೀಲಾವತಿ ಯವರ ಮಗ ವಿನೋದ್ ರಾಜ್ ಅವರನ್ನು ಬೆಳ್ಳಿತೆರೆಗೆ ಪರಿಚಯಿಸಿದ ಹೆಗ್ಗಳಿಕೆಯೂ ಅವರಿಗೆ ಸಲ್ಲುತ್ತದೆ. 'ಸಿಂಗಾಪುರದಲ್ಲಿ ರಾಜಾಕುಳ್ಳ' (1978) ಎಂಬ ಅವರ ಚಿತ್ರವು ವಿದೇಶದಲ್ಲಿ ಚಿತ್ರಣಗೊಂಡ ಮೊದಲ ಕನ್ನಡ ಚಿತ್ರ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಅದೇ ರೀತಿ ಚರಣ್‌ರಾಜ್ ನಾಯಕತ್ವದಲ್ಲಿ 'ಆಫ್ರಿಕಾದಲ್ಲಿ ಶೀಲ' ಎಂಬ ಮತ್ತೊಂದು ಚಿತ್ರ ನಿರ್ಮಿಸಿದ ದ್ವಾರಕೀಶ್, ಚಿತ್ರರಂಗದಲ್ಲಿ ಹಲವಾರು ಏಳು ಬೀಳುಗಳನ್ನು ಕಂಡಿದ್ದಾರೆ. ತಮ್ಮ ಹಲವಾರು ಸ್ವಂತ ಮನೆಗಳನ್ನು ಮಾರಿ ಚಿತ್ರ ನಿರ್ಮಾಣಕ್ಕಾಗಿ ಸರ್ವಸ್ವವನ್ನು ಕಳೆದುಕೊಂಡ ದ್ವಾರಕೀಶ್ ಛಲವನ್ನು ಮಾತ್ರ ಕಳೆದುಕೊಳ್ಳಲಿಲ್ಲ. ಕುಳ್ಳ ಏಜೆಂಟ್ 000, ಕೌಬಾಯ್ ಕುಳ್ಳ, ಅದೃಷ್ಟವಂತ, ಪೆದ್ದ ಗೆದ್ದ ಸೇರಿದಂತೆ ಹಲವಾರು ಚಿತ್ರಗಳಲ್ಲಿ ತಾವೇ ನಾಯಕ ನಟರಾಗಿ ಅಭಿನಯಿಸಿದ ದ್ವಾರಕೀಶ್, ಕನ್ನಡ ಚಿತ್ರರಂಗದಲ್ಲಿ ವಿಶಿಷ್ಟವಾದ ಸ್ಥಾನವನ್ನು ಹೊಂದಿದ್ದರು. ರಾಘವೇಂದ್ರ ಸ್ವಾಮಿಗಳ ಅಪ್ಪಟ ಭಕ್ತರಾಗಿದ್ದ ದ್ವಾರಕೀಶ್, ಇಬ್ಬರು ಹೆಂಡಿರ ಮುದ್ದಿನ ಗಂಡನಾಗಿದ್ದರು. ಅವರ ಹಿರಿಯ ಹೆಂಡತಿ ಅಂಬುಜಾ ಕೆಲ ವರ್ಷಗಳ ಹಿಂದೆ ನಿಧನ ಹೊಂದಿದ್ದರು. ಕಳೆದ 4–5 ವರ್ಷಗಳಿಂದ ಚಿತ್ರರಂಗದಿಂದ ದೂರವಾಗಿದ್ದರೂ ಸಹ, ತಮ್ಮ ಚಲನಶಕ್ತಿಯನ್ನು ಕಳೆದುಕೊಳ್ಳದೇ, ಹಲವಾರು ಯೂ ಟ್ಯೂಬ್ ಛಾನಲ್‌ಗಳಲ್ಲಿ ತಮ್ಮ ಅನುಭವಗಳನ್ನು ಹಂಚಿಕೊಳ್ಳುತ್ತಿದ್ದರು. ಬದುಕಿನ ಮೈನಸ್ ಪಾಯಿಂಟ್ ಅನ್ನು ಪ್ಲಸ್ ಪಾಯಿಂಟ್ ಮಾಡಿಕೊಂಡ ನಟ ಕೂಡ ದ್ವಾರಕೀಶ್ ಆಗಿದ್ದಾರೆ. ಅವರ ನಿಧನದೊಂದಿಗೆ ಕನ್ನಡ ಚಿತ್ರರಂಗದ ಒಂದು ಶಕೆ ಮುಗಿದು ಹೋಗಿದೆ. ಬಾಲಕೃಷ್ಣ, ನರಸಿಂಹರಾಜು, ರತ್ನಾಕರ್, ಶಿವರಾಂ ಮುಂತಾದವರನ್ನು ಚಿತ್ರಪಟಗಳಲ್ಲಿ ನೋಡುವ ಹಾಗೆ ದ್ವಾರಕೀಶ್ ಅವರನ್ನು ಸಹ ಇನ್ನು ಮುಂದೆ ಚಿತ್ರಪಟದಲ್ಲಿ ನೋಡಬೇಕಿದೆ. ಅದಕ್ಕಾಗಿ ತುಂಬಾ ಬೇಸರವಾಗಿದೆ. ಕನ್ನಡದ ಕುಳ್ಳನಿಗೆ ಅಂತಿಮ ನಮನಗಳು.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು.

■ ಚುನಾವಣಾ ಪ್ರಚಾರಕ್ಕೆ ಮೊಬೈಲ್ ಕಾಲ್‌ಗಳು

ಮಾನ್ಯರೆ,

ಒಂದು ವಾರದಿಂದ ನಿತ್ಯವೂ ನನ್ನ ಮೊಬೈಲ್‌ಗೆ ಚುನಾವಣಾ ಪ್ರಚಾರದ ಕರೆಗಳು ಬರುತ್ತಿವೆ. ಈ ರೀತಿ ಪೂರ್ವ ಅನುಮತಿ ಇಲ್ಲದ ಕರೆಗಳು ಸರಿಯೇ? ದುಷ್ಕರ್ಮಿಗಳು ಈ ಚುನಾವಣಾ ನೆಪದಲ್ಲಿ ಸಾರ್ವಜನಿಕರಿಗೆ ವಂಚಿಸಿದರೆ? ಈ ರೀತಿಯ ಕರೆಗಳನ್ನು ಮಾಡದಂತೆ ಚುನಾವಣಾ ಆಯೋಗ ರಾಜಕೀಯ ಪಕ್ಷಗಳಿಗೆ ಎಚ್ಚರಿಕೆ ನೀಡಬೇಕೆಂದು ಬೇಡುತ್ತೇನೆ.

–ಲಕ್ಷ್ಮಣ್ ಗೋರ್ಲಕಟ್ಟೆ, ವಿಜಯನಗರ, ಮೈಸೂರು

■ ನರಕದ ದಾರಿ ತೆರೆದಿಟ್ಟ ಚೆಸ್ಕಾಂ

ಮಾನ್ಯರೇ,



'ರೈತರು ದೇಶದ ಬೆನ್ನೆಲುಬು' ಎಂದು ದೇಶ ದುದ್ದಕ್ಕೂ ಉದ್ದುದ್ದ ಭಾಷಣ ಮಾಡುವವರ ಸಂಖ್ಯೆ ಅಪಾರ. ಆದರೆ ಅದೇ ರೈತರ ಸಮಸ್ಯೆ ಗಳಿಗೆ ಸ್ಪಂದಿಸುವವರನ್ನು ಬೂದುಗನ್ನಡಿ ಹಾಕಿ ಹುಡುಕಿದರೂ ಸಿಗುತ್ತಿಲ್ಲ. ಮೈಸೂರು ಜಿಲ್ಲೆ ನಂಜನಗೂಡು ತಾಲೂಕಿನಲ್ಲಿ ಹದಿನಾರು ಗ್ರಾಮವಿದೆ. ಅದು ಈ ಮಾತುಗಳಿಗೆ ಸಾಕ್ಷಿ.

ಅಲ್ಲಿನ ಆಲಕೆರೆ ಬೀದಿಯ ಹುಳಿಮಾವು ಲಿಂಗಪ್ಪನವರ ಮನೆ ಮೂಲಕ ಹಾದು ಬೊಕ್ಕಹಳ್ಳಿ ಲಿಂಗಪ್ಪ(ಜಾಂಗಪ್ಪ)ನವರ ಮಕ್ಕಳು ಹಾಗೂ ಬೆಣ್ಣೆ ಸಿದ್ದಪ್ಪನವರ ಮಕ್ಕಳ ಜಮೀನುಗಳ ನಡುವೆ ಸರ್ವೆ ನಂಬರ್ ಸುಮಾರು 900ರಿಂದ 1000ದ ಬಳಿ ರಸ್ತೆಗೆ ಹೊಂದಿಕೊಂಡಂತಿರುವ ಪಂಪ್‌ಸೆಟ್‌ಗಳಿಗೆ ಸಂಪರ್ಕವಿರುವ ಟಿ.ಸಿ.ಯೊಂದನ್ನು ಅಳವಡಿಸಿರುವ ವಿದ್ಯುತ್ ಕಂಬಗಳು ದಕ್ಷಿಣಕ್ಕೆ ಬಾಗಿ ಮೂರು ವರ್ಷಗಳೇ ಕಳೆದಿವೆ. ಯಾವ ಸಂದರ್ಭದಲ್ಲಿ ಬೇಕಾದರೂ ನೆಲಕ್ಕೆ ಉರುಳಿ ಅನಾಹುತ ಉಂಟಾಗಬಹುದಾದ ಸಾಧ್ಯತೆ ಇದೆ.

ಕಂಬಗಳು ಬಾಗಿರುವ ಕಾರಣ ವಿದ್ಯುತ್ ತಂತಿಗಳು ಜೋತಾಡುತ್ತಿದ್ದು, ಆಗಾಗ ಗಾಳಿಗೆ ತಾಗಿ ಬೆಂಕಿಯನ್ನು ಸೃಜಿಸುತ್ತಿವೆ. ಮೊನ್ನೆಯಷ್ಟೆ ಇಂತಹ ಘಟನೆ ನಡೆದು ಸುತ್ತಮುತ್ತ ಬೆಂಕಿಯ ಅವಘಡ ಸಂಭವಿಸಿತ್ತು. ತಕ್ಷಣಕ್ಕೆ ರೈತರು ಧಾವಿಸಿ ಬೆಂಕಿಯನ್ನು ನಂದಿಸಿದರು. ಆದರೆ ಈ ಸಂಬಂಧ ಚೆಸ್ಕಾಂ ಅಧಿಕಾರಿಗಳು ಮಾತ್ರ ಬೇಜವಾಬ್ದಾರಿತನದಿಂದ ಕಣ್ಮುಚ್ಚಿ ಕುಳಿತಿರುವುದು ಅಕ್ಷರಶಃ ಸತ್ಯ. ಇದರಿಂದ ಯಾವ ಸಂದರ್ಭದಲ್ಲಿಯಾದರೂ ಪ್ರಾಣ ಬಲಿ ತೆಗೆದುಕೊಳ್ಳುವಂತೆ ನರಕದ ದಾರಿ ತೆರೆದಂತಿದೆ. ರಾಜ್ಯದ ಮುಖ್ಯಮಂತ್ರಿಗಳ ಕ್ಷೇತ್ರದಲ್ಲಿಯೇ ಇಂತಹ ಅವ್ಯವಸ್ಥೆ ಇದ್ದರೇ ಉಳಿದಂತೆ ರಾಜ್ಯದಲ್ಲಿನ ಗತಿ ಹೇಗೆ? ಎಂಬುದು ಚಿಂತೆಯಾಗಿದೆ. ಈಗಲಾದರೂ ಸಂಬಂಧಪಟ್ಟ ಅಧಿಕಾರಿಗಳು ಎಚ್ಚೆತ್ತು ಯಾವುದೇ ಜೀವ ಹಾನಿಯಾಗುವ ಮೊದಲು ಕಂಬಗಳನ್ನು ಸರಿಪಡಿಸಬೇಕೆಂದು ವಿನಂತಿ.

–ನಂದೀಶ ಬಿ. ಹದಿನಾರು



ಬನ್ನೂರು ಕೆ. ರಾಜು
ಸಾಹಿತಿ, ಪತ್ರಕರ್ತ
ಮೊ: 94815 33167

ಬಹುಮುಖಿ

ಜೈ ಶ್ರೀರಾಮ ಮರ್ಯಾದಾ ಪುರುಷೋತ್ತಮ

"ಕೌಸಲ್ಯಾ ಸುಪ್ರಜಾ ರಾಮಾಪೂರ್ವಾ ಸಂಧ್ಯಾ ಪ್ರವರ್ತತೇ ಉತ್ತಿಷ್ಠ ನರಶಾರ್ದೂಲ ಕರ್ತವ್ಯಂ ದೈವಮಾಹ್ನಿಕಂ...." ಎಂಬ ಎಂ.ಎಸ್. ಸುಬ್ಬುಲಕ್ಷ್ಮಿಯವರ ರಾಮನಾಮದ ಸುಪ್ರಭಾತಕ್ಕೆ ಮಾರುಹೋಗದ ಮನುಜರುಂಟೆ? ಅದರಲ್ಲೂ ವಿಶೇಷವಾಗಿ ರಾಮಭಕ್ತರು ಈ ಸುಶ್ರಾವ್ಯ ಸುಪ್ರಭಾತದ ರಾಮನಾಮ ಪಾಯಸದ ಕಡಲಲ್ಲಿ ಮುಳುಗಿ ಹೋಗುತ್ತಾರೆ.

"ಕೂಜಂತಂ ರಾಮರಾಮೇತಿ ಮಧುರಂ ಮಧುರಾಕ್ಷರಂ। ಆರೂಹ್ಯ ಕವಿತಾ ಶಾಖಾಂ ವಂದೇ ವಾಲ್ಮೀಕಿ ಕೋಕಿಲಂ" ಅಂದರೆ ಮರದ ಕೊಂಬೆಗಳ ಮೇಲೆ ಕುಳಿತು ಸವಿಯಾದ ಮಧುರ ವಾದ ಅಕ್ಷರಗಳಿಂದ ರಾಮ ರಾಮ ಎಂದು ಉಲಿಯುತ್ತಿರುವ ವಾಲ್ಮೀಕಿ ಕೋಕಿಲವನ್ನು ವಂದಿಸುತ್ತೇನೆನ್ನುವ ಈ ಕರ್ಣಾನಂದಕರ ಶ್ಲೋಕ ಎಷ್ಟೊಂದು ಸುಮಧುರ, ಎಂಥಾ ಭಾವಸಿಂಧೂರ! ಇದನ್ನು ನಮ್ಮ ನವ್ಯ ಕವಿ ಗೋಪಾಲಕೃಷ್ಣ ಅಡಿಗರು "ಹುತ್ತಗಟ್ಟದೆ ಚಿತ್ತ ಕೆತ್ತಿತೇನು ಅಂತಹ ಪುರುಷೋತ್ತಮನ ರೂಪರೇಖೆಗಳನು" ಎಂದು ವಾಲ್ಮೀಕಿಯ ಕಾವ್ಯಶಕ್ತಿಯನ್ನು ವರ್ಣಿಸುತ್ತಾರೆ. "ರಾಮ" ಎಂಬ ಎರಡಕ್ಷರಗಳ ಮೃದು ಮಧುರ ಪದ ಭಾರತೀಯರ ಎದೆಗಡಲಲ್ಲಿ ಸರಿಗಮ ಪದನಿಸವಾಗಿ ನಿತ್ಯ ನಿನದಿಸುವ ಮಧುರ ಸಂಗೀತವಾಗಿದೆ. ರಾಮನಾಮದ ದಿವ್ಯಶಕ್ತಿ ಅಂಥಾದ್ದು. ಅಲ್ಲಿ ಅಂತಹ ಅಮೃತ ತುಂಬಿದೆ.

ರಾಮನಾಮ ಕಿವಿಗೆ ಬಿದ್ದರೆ ಸಾಕು ರಾಮಭಕ್ತರು ರೋಮಾಂಚನ ಗೊಳ್ಳುತ್ತಾರೆ. ಸಾಕ್ಷಾತ್ ಶ್ರೀರಾಮನನ್ನೇ ತಮ್ಮ ಮನಸ್ಸಿನಲ್ಲಿ ಸಾಕ್ಷಾತ್ಕರಿಸಿ ಕೊಂಡು ಪರಮಾನಂದಿತರಾಗುತ್ತಾರೆ. ತಮ್ಮ ಜೀವ–ಜೀವನವೆಲ್ಲಾ ರಾಮನಾಮಾಮೃತದಿಂದ ಪಾವನವಾಯಿತೆಂದು ಸಂತುಷ್ಟಗೊಳ್ಳು ತ್ತಾರೆ. ಪವಿತ್ರ ತೀರ್ಥಕ್ಷೇತ್ರವಾದ ಕಾಶಿಯಲ್ಲಿ ದೇಹತ್ಯಾಗ ಮಾಡುವವರಿಗೆ ಕಾಶಿ ವಿಶ್ವನಾಥನೇ ಅವರ ಕಿವಿಯಲ್ಲಿ ರಾಮನಾಮ ಉಪದೇಶ ಮಾಡುತ್ತಾನೆಂಬ ನಂಬಿಕೆ ಭಾರತೀಯರಲ್ಲಿದೆ.

"ಶ್ರೀರಾಮ ರಾಮೇತಿರಮೇರಾಮೇ ಮನೋರಮೇ।
ಸಹಸ್ರನಾಮ ತತ್ತುಲ್ಯಂ ರಾಮನಾಮ ವರಾನನೇ॥

ರಾಮ ಎಂಬ ಒಂದೇ ನಾಮ ವಿಷ್ಣುವಿನ ಸಹಸ್ರನಾಮಗಳಿಗೆ ಸಮವೆಂದು ಪುರಾಣಗಳೇ ಸಾರಿ ಹೇಳುತ್ತವೆ.

ಸರ್ವೋತ್ತಮನೆಂದರೆ, ಪರಿಪೂರ್ಣ ಶ್ರೇಷ್ಠ ಮನುಷ್ಯನೆಂದರೆ, ಮನುಷ್ಯನಿಂದಲೇ ದೇವನಾದವನೆಂದರೆ ಅವನೇ ರಾಮ. ಅದೇ ರಾಮಶಕ್ತಿ. ರಾಮನಾಮದ ಧೀಶಕ್ತಿ. "ರಾಮಂ ಮಾನುಷಂ ಮನ್ಯೆ" ಎನ್ನುವುದರ ಮೂಲಕ ವಾಲ್ಮೀಕಿ ಮಹರ್ಷಿಗಳು ರಾಮಾಯಣದಲ್ಲಿ ಶ್ರೀರಾಮನನ್ನು ಓರ್ವ ಸಾಮಾನ್ಯ ಮನುಷ್ಯನಾಗಿಯೇ ಚಿತ್ರಿಸಿ, ಸಾರ್ಥಕ ಬದುಕಿನ ಅವನ ನಡವಳಿಕೆಯಿಂದಲೇ ದೇವನನ್ನಾಗಿಸುತ್ತಾರೆ. ಇಡೀ ಸಂಪೂರ್ಣ ರಾಮಾಯಣವನ್ನೇ ನಾವು ಅವಲೋಕಿಸಿದರೆ ರಾಮನ ಚಿತ್ರಣದಲ್ಲೇ ಕುಟುಂಬ ವಾತ್ಸಲ್ಯದ ಚಿತ್ರಣವಿರುವುದನ್ನು ಕಾಣಬಹುದು. ದೇವನಾಗಿಯೂ ರಾಮ ತಾನೊಬ್ಬನೇ ಎಲ್ಲಿಯೂ ಪೂಜಿಸಿಕೊಳ್ಳುವುದಿಲ್ಲ. ಸೀತೆ ಮಾತ್ರವಲ್ಲದೆ ಆಂಜನೇಯ, ಲಕ್ಷ್ಮಣ, ಭರತ, ಶತೃಘ್ನರೊಡಗೂಡಿದ ದೇವತಾ ಸ್ವರೂಪವೇ ಇವತ್ತಿಗೂ ನಮ್ಮ ಕಣ್ಮುಂದಿನ ಚಿತ್ರವಾಗಿದೆ. ಗುಹನಲ್ಲಿ ಸೋದರ ವಾತ್ಸಲ್ಯ ತೋರಿದ, ಶಿಲೆಯಾದ ಅಹಲ್ಯೆಯನ್ನು ಉದ್ಧರಿಸಿದ, ಶಬರಿಯ ಎಂಜಲನ್ನು ತಿಂದ, ಆಯಸ್ಸು ಮುಗಿಯುವ ಮುನ್ನವೇ ಮಂತ್ರಿ ಸುಮಂತ್ರನನ್ನು ಮರಣಿಸುವಂತೆ ಮಾಡಿದ ಯಮನ ವಿರುದ್ಧವೇ ಸಮರ ಸಾರಿ ಸುಮಂತ್ರನನ್ನು ಬದುಕಿಸಿದ ಅಳಿಲಿನ ಸೇವೆಯನ್ನೂ ಸಹ ಮುಖ್ಯವಾಗಿ ಕಂಡ ರಾಮನ ಮಹಾ ವ್ಯಕ್ತಿತ್ವಕ್ಕೆ ಸಾಟಿಯುಂಟೆ?

ರಾಮನ ಆದರ್ಶ ಬದುಕು ಅಂಥಾದ್ದು. ಹಾಗಾಗಿ ರಾಮನಾಮ ಸೀಮೋಲಂಘನ, ಸಾಗರೋಲ್ಲಂಘನವಾಗಿ ದೇಶದಲ್ಲಷ್ಟೇ ಅಲ್ಲದೆ ವಿದೇಶಗಳಲ್ಲೂ ರಾಮ ಆರಾಧ್ಯ ದೈವವಾಗಿದ್ದಾನೆ. ರಾಮನನ್ನು ದಕ್ಷಿಣ ಏಷ್ಯಾದ ಸಾರ್ವಕಾಲಿಕ ಆದರ್ಶವೆಂದು ಖ್ಯಾತ ಸಂಶೋಧಕ, ವಿದ್ವಾಂಸ ಪ್ರೊ. ಡಬ್ಲ್ಯೂ.ಹೆಚ್. ಸ್ಟುಟರ್ ಹೀಮ್ ಹೇಳಿದ್ದು, ಬಾಲಿ ದ್ವೀಪದ ರಾಮನ ಪೂಜೆಯ ಬಗ್ಗೆ ವಿವರಿಸುತ್ತಾ "ಇಲ್ಲಿ ರಾಮ ಕಥೆಯ ಸಾರಾಂಶ ಗೊತ್ತಿಲ್ಲದ ಒಬ್ಬ ಹುಡುಗನನ್ನೂ ಕಾಣಲಾರಿರಿ. ಬೆಳೆದಂತೆಲ್ಲ ಅದನ್ನು ಸಂಪೂರ್ಣ ವಾಗಿ ತಿಳಿದುಕೊಂಡು ಜೀವನದಲ್ಲಿ ಅಳವಡಿಸಿಕೊಳ್ಳುವ ಪಾಠವನ್ನು ಇಲ್ಲಿ ಹೇಳಿಕೊಡಲಾಗುತ್ತದೆ" ಎಂದು ಅವರು ಉಲ್ಲೇಖಿಸಿದ್ದಾರೆ.



"ರಾಮಾಯ ರಾಮ ಭದ್ರಾಯಾ
ರಾಮಚಂದ್ರಾಯ ವೇಧಸೇ
ರಘುನಾಥಾಯಾ ನಾಥಾಯಾ
ಸೀತಾಯಾ ಪತಯೇ ನಮಃ"

ಇದು ರಾಮಾಯಣದಲ್ಲಿ ಬರುವ ದೃಷ್ಟಾಂತ, ಇಕ್ಷ್ವಾಕು ವಂಶದ ಅರ್ಥಾತ್ ಸೂರ್ಯವಂಶ ಸಾರ್ವಭೌಮ ದಶರಥ ಮಹಾರಾಜನಿಗೆ ಕೌಸಲ್ಯೆ, ಸುಮಿತ್ರೆ ಮತ್ತು ಕೈಕೇಯಿ ಎಂಬ ಮೂವರು ಪತ್ನಿಯರು. ಆದರೆ ಯಾರಿಗೂ ಮಕ್ಕಳಿರಲಿಲ್ಲ. ಹಾಗಾಗಿ ಕುಲಗುರು ವಶಿಷ್ಠ ಮಹರ್ಷಿ ಮತ್ತು ಪ್ರಧಾನ ಮಂತ್ರಿ ಸುಮಂತ್ರರ ಸಲಹೆಯ ಮೇರೆಗೆ ಪುತ್ರಕಾಮೇಷ್ಠಿಯಾಗವನ್ನು ಮಾಡಿದಾಗ ಮಹಾವಿಷ್ಣುವಿನ ಅನುಗ್ರಹದ ಯಾಗದ ಪ್ರಸಾದವನ್ನು ದಶರಥ ಮಹಾರಾಜ ಸೇವಿಸಿ ಉಳಿದಿದ್ದನ್ನು ತನ್ನ ಮೂವರೂ ಪತ್ನಿಯರಿಗೂ ಹಂಚಿದ. ಪರಿಣಾಮ ಕಾಲಕ್ರಮೇಣ ಮೂವರೂ ಗರ್ಭವತಿಯರಾಗಿ ಎಲ್ಲರೂ ಗಂಡು ಮಕ್ಕಳಿಗೆ ಜನ್ಮ ನೀಡುತ್ತಾರೆ. ಕೌಸಲ್ಯೆಯ ಹೊಟ್ಟೆಯಲ್ಲಿ ರಾಮ ಜನಿಸಿದರೆ, ಸುಮಿತ್ರೆಯಲ್ಲಿ ಲಕ್ಷ್ಮಣ ಮತ್ತು ಕೈಕೇಯಿಯಲ್ಲಿ ಭರತ–ಶತ್ರುಘ್ನ ಅವಳಿ ಮಕ್ಕಳು ಜನಿಸುತ್ತಾರೆ. ಶ್ರೀರಾಮ ಚೈತ್ರಮಾಸದ ಶುಕ್ಲಪಕ್ಷ ನವಮಿಯಂದು ಮಧ್ಯಾಹ್ನ ಪುನರ್ವಸು ನಕ್ಷತ್ರದಲ್ಲಿ ಮಹಾತೇಜಸ್ವಿಯಾಗಿ, ಜಗದ ಬೆಳಕಾಗಿ ಅವತರಿಸಿದ್ದು ಅದು ಶ್ರೀರಾಮ ನವಮಿಯಾಗಿ ಜಗತ್ತಿನಲ್ಲಿ ಪೂಜನೀಯ ಸ್ಥಾನ ಪಡೆದಿದೆ. ರಾಮಾವತಾರವು ವಿಷ್ಣುವಿನ ದಶಾವತಾರಗಳಲ್ಲಿ ಒಂದಾಗಿದ್ದು ಅನುಕ್ರಮಣಿಕೆಯಲ್ಲಿ ಏಳನೆಯದಾಗಿದೆ.

ಭಾರತೀಯ ಸಂಸ್ಕೃತಿ, ಸಂಪ್ರದಾಯ, ಪರಂಪರೆಗಳಲ್ಲಿ ಸಂಖ್ಯಾ ಶಾಸ್ತ್ರಕ್ಕೂ ತನ್ನದೇ ಆದ ಮಹತ್ವವಿದೆ. ಆ ಪ್ರಕಾರ ಸಂಖ್ಯೆ 'ಏಳು' ವಿಶೇಷ ಮಹತ್ವ ಪಡೆದುಕೊಂಡಿದೆ. ರಾಮನ ವಿಷಯದಲ್ಲೂ ಏಳು ಬಹಳ ಮಹತ್ವವೆನಿಸಿದೆ. ವಾಲ್ಮೀಕಿ ಮಹರ್ಷಿಗಳಿಂದ ರಚಿತವಾದ ರಾಮಾಯಣ ಕೂಡ ಬಾಲಕಾಂಡ, ಅಯೋಧ್ಯಾಕಾಂಡ, ಅರಣ್ಯಕಾಂಡ, ಕಿಷ್ಕಿಂದಾಕಾಂಡ, ಸುಂದರಕಾಂಡ, ಯುದ್ಧಕಾಂಡ ಹಾಗೂ ಉತ್ತರ ಕಾಂಡಗಳೆಂಬ ಏಳು ಕಾಂಡಗಳಲ್ಲಿದೆ. ಶ್ರೀರಾಮನ ಜನ್ಮ ನಕ್ಷತ್ರ ಪುನರ್ವಸು. ಇದು ಸಪ್ತರ್ಷಿ ಮಂಡಲದಲ್ಲಿ ಏಳನೆಯದು. ವಾಲ್ಮೀಕಿ ರಾಮಾಯಣದ ಮೂಲವನ್ನಿಟ್ಟುಕೊಂಡು ದೇಶದಲ್ಲಿ ಸಾವಿರಾರು ರಾಮಕಥೆಗಳು, ಕಾವ್ಯಗಳು ರಚನೆಗೊಂಡಿವೆ. ಅವುಗಳಲ್ಲಿ 'ಸಪ್ತರ್ಷಿ ರಾಮಾಯಣ'ವೂ ಒಂದು. ನಮ್ಮಲ್ಲಿ ಕುವೆಂಪು ಅವರ 'ಶ್ರೀ ರಾಮಾಯಣ ದರ್ಶನಂ' ವೀರಪ್ಪ ಮೊಯಿಲಿ ಅವರ 'ಶ್ರೀ ರಾಮಾಯಣ ಮಹಾನ್ವೇಷಣಂ' ಮಹಾಕಾವ್ಯಗಳು ಮತ್ತು ಡಿ.ವಿ.ಜಿ. ಅವರ 'ಶ್ರೀ ರಾಮ ಪರಿವೀಕ್ಷಣಂ' ಮುಂತಾದ ಮಹತ್ಕೃತಿಗಳು ಮುಖ್ಯವೆನಿಸಿವೆ.

ಒಟ್ಟಿನಲ್ಲಿ ಭಾರತೀಯ ಸಂಸ್ಕೃತಿಯಲ್ಲಿ ರಾಮ ಹಾಸು ಹೊಕ್ಕಾಗಿದ್ದು ಈ ದೇಶದ ಜನರ ಬಹುದೊಡ್ಡ ಆದರ್ಶವಾಗಿದ್ದು ಮರ್ಯಾದಾ ಪುರುಷೋತ್ತಮನೆಂದೇ ಪೂಜಿಸಲ್ಪಡುತ್ತಿದ್ದಾನೆ. ಇಂಥ ರಾಮ ಜನಿಸಿದ ಮಹಾ ಸುದಿನವಾದ 'ಶ್ರೀರಾಮ ನವಮಿಗೆ' ಈ ದೇಶದಲ್ಲಿ ವಿಶೇಷ ಮಹತ್ವ ಉಂಟು. ಹಾಗಾಗಿ ರಾಮ ಹುಟ್ಟಿದ ಈ ಪೂಜ್ಯ ದಿನವನ್ನು ಪೂಜನೀಯವಾಗಿ ದೇಶದೆಲ್ಲೆಡೆ ಶ್ರದ್ಧಾ ಭಕ್ತಿಯಿಂದ ಆಚರಿಸಲಾಗುತ್ತದೆ. ರಾಮನಾಮಾಮೃತದ ಜೊತೆ ಜೊತೆಗೆ ವಿವಿಧ ಫಲಾಮೃತವನ್ನು ನಾಲಿಗೆಯಲ್ಲಿ ಹರಿದಾಡಿಸಿ ಬಾಯ್ಚಪ್ಪರಿಸುವ ಭಕ್ತಿ ಸುಧೆಯ ಸಿಹಿ ಜೇನಿನ ಹಬ್ಬವಿದು.

ಸುಡು ಬಿಸಿಲಿನ ಬೇಸಿಗೆಯಲ್ಲೂ ಸುಮಧುರ ತಂಪು ಚೆಲ್ಲುವ ಸುವಾಸಿತ ತಾಜಾ ಹಣ್ಣುಗಳ ಪಾನಕ ಶ್ರೀರಾಮನವಮಿಯ ಆಕರ್ಷಣೆ. ಬೇಲದ ಹಣ್ಣು, ಕರಬೂಜ, ಕಲ್ಲಂಗಡಿ ಹಣ್ಣುಗಳ ಪಾನಕ ಮತ್ತು ನೀರು ಮಜ್ಜಿಗೆ ಕುಡಿದು ವಿವಿಧ ಬಗೆಯ ಕೋಸಂಬರಿಯನ್ನು ಸೇವಿಸುವುದೇ ಒಂದು ಆನಂದ. ಬೀದಿ ಬೀದಿಗಳಲ್ಲಿ, ಗಲ್ಲಿ–ಗಲ್ಲಿಗಳಲ್ಲಿ, ಕೇರಿ ಕೇರಿಗಳಲ್ಲಿ ಪಾನಕ ಮತ್ತು ನೀರು ಮಜ್ಜಿಗೆ ಹಾಗೂ ಕೋಸಂಬರಿಯದೇ ಸಮಾರಾಧನೆ. ರಾಮ ಭಕ್ತರಿಂದ ಎಲ್ಲೆಡೆಯೂ ಇದು ಉಚಿತ ವಿತರಣೆ. ಅದರಲ್ಲೂ ಗ್ರಾಮೀಣ ಪ್ರದೇಶದ ಹಳ್ಳಿಗಳಲ್ಲಿನ ಅರಳಿಕಟ್ಟೆಗಳಲ್ಲಿ ದೊಡ್ಡ ದೊಡ್ಡ ಹಂಡೆಗಳಲ್ಲಿ ಫಲಾಮೃತಗಳನ್ನು ವಿತರಿಸುವುದನ್ನು ಸವಿಯುವುದಿರಲಿ ಅದನ್ನು ನೋಡುವುದೇ ಒಂದು ಮಹದಾನಂದ. ಶ್ರೀರಾಮ ಮಂದಿರಗಳಲ್ಲಿ ಮತ್ತು ಶ್ರೀರಾಮ ದೇವಸ್ಥಾನಗಳಲ್ಲಿ ಸೀತಾ, ಲಕ್ಷ್ಮಣ, ಆಂಜನೇಯ ಸಮೇತನಾಗಿ ಸರ್ವಾಲಂಕಾರ ಭೂಷಿತನಾಗಿ ಶ್ರೀರಾಮ ದೇವರು ಕಾಣಿಸಿಕೊಳ್ಳುವ ಚೆಲುವನ್ನು ಕಣ್ತುಂಬಿಕೊಳ್ಳುವುದೇ ಒಂದು ಮಹಾಹಬ್ಬ.

ಇದಿಷ್ಟೇ ಶ್ರೀರಾಮನವಮಿ ಹಬ್ಬವಲ್ಲ. ಇದಕ್ಕೆಲ್ಲಕ್ಕೂ ಪ್ರಭಾವಳಿಯಾಗಿ 'ಎಲ್ಲೆಲ್ಲು ಸಂಗೀತವೇ, ಎಲ್ಲೆಲ್ಲೂ ಸೌಂದರ್ಯವೇ, ಕೇಳುವ ಕಿವಿಯಿರಲು ನೋಡುವ ಕಣ್ಣಿರಲು ಎಲ್ಲೆಲ್ಲೂ ಸಂಗೀತವೇ......' ಎಂಬಂತೆ ದೊಡ್ಡ ದೊಡ್ಡ ಐಟಿ, ಬಿಟಿ ನಗರಗಳಿಂದ ಹಿಡಿದು ಸಣ್ಣಪುಟ್ಟ ಗ್ರಾಮಗಳಲ್ಲೂ ರಾಮನವಮಿ ಸಂದರ್ಭದಲ್ಲಿ ಸಂಗೀತೋತ್ಸವಗಳು ಜರುಗುತ್ತವೆ. ರಾಜ್ಯೋತ್ಸವ ಮತ್ತು ಗಣೇತೋತ್ಸವಗಳನ್ನು ಹೊರತುಪಡಿಸಿದರೆ ಅತೀ ಹೆಚ್ಚು ಸಂಗೀತೋತ್ಸವಗಳು ನಡೆಯುವುದು ಶ್ರೀರಾಮನವಮಿ ಸಂದರ್ಭದಲ್ಲೇ. ಅದೂ ಎಲ್ಲವೂ ಶ್ರೀರಾಮ ಭಕ್ತಿಯ ಪರಾಕಾಷ್ಠೆಯ ಸಂಗೀತ ವೈಭವವೇ ಆಗಿರುತ್ತದೆ. ಇವತ್ತು ದೇಶಾದ್ಯಂತ ನಡೆಯುತ್ತಿರುವ ಶ್ರೀರಾಮ ನವಮಿ ಸಂಗೀತೋತ್ಸವದ ಪರಂಪರೆ ರಾಜ್ಯದಲ್ಲಿ ಮೊದಲು ಶುರುವಾದದ್ದು ಸಾಂಸ್ಕೃತಿಕ ನಗರ ಮೈಸೂರಿನಲ್ಲೆಂಬ ಸತ್ಯ ಎಷ್ಟೊ ಮಂದಿಗೆ ತಿಳಿದಿರಲಾರದು. ಇಂದಿಗೂ ಮೈಸೂರು ನಗರ ಸೇರಿದಂತೆ ಇಲ್ಲಿನ ಬಹಳಷ್ಟು ಬಡಾವಣೆಗಳಲ್ಲಿ ಒಳ್ಳೊಳ್ಳೆ ಸಂಗೀತೋತ್ಸವಗಳು ದೇಶ ವಿದೇಶಗಳ ಮಹಾನ್ ಸಂಗೀತಗಾರರಿಂದ ಜರುಗುತ್ತವೆ. ಇವುಗಳಲ್ಲಿ ಮಹಾನ್ ಸಂಗೀತ ದಿಗ್ಗಜ ಮೈಸೂರು ಬಿ. ವಾಸುದೇವಾಚಾರ್ಯರ ಮಾರ್ಗದರ್ಶನದಲ್ಲಿ 1918ರಲ್ಲಿ ಮತ್ತೋರ್ವ ಸಂಗೀತ ದಿಗ್ಗಜ ಬಿಡಾರಂ ಕೃಷ್ಣಪ್ಪನವರು ಆರಂಭಿಸಿದ ಬಿಡಾರಂ ಕೃಷ್ಣಪ್ಪ ರಾಮಮಂದಿರದ ಸಂಗೀತೋತ್ಸವ ಹೆಚ್ಚು ಹೆಸರುವಾಸಿ. ಇವತ್ತಿಗೂ ಅಂಥ ಕೀರ್ತಿಯನ್ನು ಅದು ಉಳಿಸಿಕೊಂಡೇ ಇದೆ. ಇಂಥ ರಾಮನವಮಿ ಸಂದರ್ಭದ ಸಂಗೀತೋತ್ಸವಗಳಲ್ಲಿ ಹಿಂದೂ, ಮುಸ್ಲಿಂ ಮತ್ತು ಕ್ರೈಸ್ತ ಕಲಾವಿದರುಗಳೆಲ್ಲರೂ ಹಾಡುತ್ತಾರೆ ಹಾಗಾಗಿ ಇದೊಂದು ರೀತಿ ಭಾವೈಕ್ಯತೆಯ ಸಂಗೀತೋತ್ಸವವೆಂದೇ ಹೇಳಬಹುದು.

ನ್ಯಾಯ, ನೀತಿ, ಧರ್ಮ, ಸತ್ಯ, ಪ್ರಾಮಾಣಿಕತೆ, ಮಾನವೀಯತೆ ಇವುಗಳೆಲ್ಲದರ ಪುಣ್ಯ ಸಂಗಮವೇ ಶ್ರೀರಾಮ. ಇವ ಜಗದಾದರ್ಶದ ಪುಣ್ಯಾರಾಮ. ಇಂಥ ಮಹಾಮಹಿಮ ಜನಿಸಿದ 'ಶ್ರೀರಾಮನವಮಿ' ಪುಣ್ಯದಿನ. ಇದು ಸರ್ವರಿಗೂ ಸುಖ ಶಾಂತಿ ಸಮೃದ್ಧಿ ತರಲಿ. ಭಾರತದಲ್ಲಿ ಶ್ರೀರಾಮ ಮತ್ತೆ ಹುಟ್ಟಿಬರಲಿ. ಇದು ಎಲ್ಲರ ಹಾರೈಕೆ–ಆಶಯ.

ರಾಜ್ಯದ ಲೋಕಸಭಾ ಚುನಾವಣಾ ಕಣ ಪ್ರವೇಶಿಸಿದ ಬಿ.ಎಲ್. ಸಂತೋಷ್

ಬೆಂಗಳೂರು, ಏ. 16(ಕೆಎಂಶಿ)– ಕರ್ನಾಟಕ ವಿಧಾನ ಸಭಾ ಚುನಾವಣಾ ಸೋಲಿನ ನಂತರ ದೂರ ಉಳಿದಿದ್ದ ಬಿಜೆಪಿ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಮತ್ತೆ ರಾಜ್ಯ ರಾಜಕಾರಣಕ್ಕೆ ಪ್ರವೇಶಿಸಿದ್ದಾರೆ.

ಇತ್ತ ಮಂಡ್ಯ, ಬೆಂಗಳೂರು ಗ್ರಾಮಾಂತರ ಹಾಗೂ ಕೋಲಾರ ಕ್ಷೇತ್ರದಲ್ಲಿ ಎನ್‌ಡಿಎ ಅಭ್ಯರ್ಥಿಗಳನ್ನು ಗೆಲ್ಲಿಸಿಕೊಳ್ಳಲು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಈ ಕ್ಷೇತ್ರಗಳಿಗೆ ಸೀಮಿತವಾಗಿ ಪ್ರಚಾರ ಆರಂಭಿಸಿದ್ದಾರೆ.

ಇದುವರೆಗೂ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿಗಳ ಪರ ಪ್ರಚಾರ ನಡೆಸುತ್ತಿದ್ದ ದೇವೇಗೌಡ ಹಾಗೂ ಕುಮಾರಸ್ವಾಮಿ ಇಂದಿನಿಂದ ಈ ಮೂರು ಕ್ಷೇತ್ರಗಳಿಗೆ ಹೆಚ್ಚಿನ ಒತ್ತು ನೀಡಲು ಮುಂದಾಗಿದ್ದಾರೆ.



ಹಠಾತ್ ಬೆಳವಣಿಗೆಯಲ್ಲಿ ಸಂತೋಷ್ ರಾಜ್ಯ ಲೋಕಸಭಾ ಚುನಾವಣಾ ಪ್ರಚಾರಕ್ಕೆ ಇಳಿದಿದ್ದಾರೆ. ಇಂದು ತುಮಕೂರು ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬಿಜೆಪಿ ಅಭ್ಯರ್ಥಿ ವಿ.ಸೋಮಣ್ಣ ಪರ ಕಾರ್ಯಕರ್ತರನ್ನು ಸಂಘಟಿಸುವ ಜೊತೆಗೆ ಪ್ರಚಾರ ಕೈಗೊಂಡರು.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಪಕ್ಷವನ್ನು ಅಧಿಕಾರಕ್ಕೆ ತರಲು ಸಂಘಟನೆ ಮತ್ತು ಅಭ್ಯರ್ಥಿಗಳ ಆಯ್ಕೆಯಲ್ಲಿ ಮಹತ್ತರ ಬದಲಾವಣೆ ಮಾಡುವಲ್ಲಿ ಸಂತೋಷ್ ಪಾತ್ರವಿತ್ತು. ಯಡಿಯೂರಪ್ಪ ಮತ್ತು ಅವರ ಕುಟುಂಬವನ್ನು ದೂರವಿರಿಸಿ ಪಕ್ಷವನ್ನು ಅಧಿಕಾರಕ್ಕೆ ತರಲು ಸಂತೋಷ್ ನಡೆಸಿದ ತಂತ್ರಗಾರಿಕೆ ಫಲ ನೀಡಿರಲಿಲ್ಲ.

ಹೀನಾಯ ಫಲಿತಾಂಶದ ನಂತರ ರಾಜ್ಯ ಸಂಘಟನೆಯಿಂದ ಸಂತೋಷ್ ದೂರ ಉಳಿದಿದ್ದರು. ಸೋಮಣ್ಣ ಅವರ ಕೋರಿಕೆ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರ ಸಲಹೆ ಮೇರೆಗೆ ಮತ್ತೆ ರಾಜ್ಯ ಚುನಾವಣಾ ಅಖಾಡಕ್ಕೆ ಇಳಿದಿದ್ದಾರೆ. ಕರ್ನಾಟಕದಲ್ಲಿ ಕನಿಷ್ಠ 20 ಸ್ಥಾನಗಳನ್ನು ಗೆಲ್ಲಲೇಬೇಕೆಂದು ಗುರಿ ಇಟ್ಟುಕೊಂಡಿರುವ ರಾಷ್ಟ್ರೀಯ ಬಿಜೆಪಿಗೆ, ಇಲ್ಲಿನ ಕಾಂಗ್ರೆಸ್ ನಾಯಕರ ಸಂಘಟಿತ ಹೋರಾಟ ನೋಡಿದರೆ ನಮ್ಮ ಗುರಿ ಮುಟ್ಟಲು ಸಾಧ್ಯವೇ ಎಂಬ ಅನುಮಾನ ಕಾಡಿದೆ.

ಈ ಹಿನ್ನೆಲೆಯಲ್ಲೇ ಸಂಘಟನೆಯಲ್ಲಿ ಹಿಡಿತ ಸಾಧಿಸಿರುವ ಮತ್ತು ಸಮಯಕ್ಕೆ ತಕ್ಕಂತೆ ರಾಜಕೀಯ ಪ್ರಜ್ಞೆ ಬಳಸುವ ಸಂತೋಷ್ ಅವರನ್ನು ಕರ್ನಾಟಕಕ್ಕೆ ಕಳುಹಿಸಿಕೊಡಲಾಗಿದೆ.

ಮೈಸೂರು ಮಹಾರಾಜರದು ಯುಗ ಮರೆಯದ ಗ್ಯಾರಂಟಿ, ಮೋದಿಯದು ಯುಗ ಮೆಚ್ಚುವ ಗ್ಯಾರಂಟಿ

ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾ ರಾಜ್ಯಾಧ್ಯಕ್ಷ ರಘು ಕೌಟಿಲ್ಯ ಅಭಿಮತ

ಮೈಸೂರು, ಏ.16(ಬಿಎಲ್‌ಯು)– ನೂರಾರು ವರ್ಷಗಳ ದೂರದೃಷ್ಟಿತ್ವ ಇಟ್ಟುಕೊಂಡು ಯುಗ ಮರೆಯದ ಗ್ಯಾರಂಟಿ ನೀಡಿದ್ದು ಮೈಸೂರು ರಾಜವಂಶಸ್ಥರಾದರೆ, ಬದುಕು ಕಟ್ಟಿಕೊಡುವ ಯೋಜನೆ ರೂಪಿಸಿ ಹಲವು ಕೊಡುಗೆ ನೀಡುತ್ತಿರುವ ಪ್ರಧಾನಿ ನರೇಂದ್ರ ಮೋದಿಯವರದು ಯುಗ ಮೆಚ್ಚುವ ಗ್ಯಾರಂಟಿ ಎಂದು ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾದ ರಾಜ್ಯಾಧ್ಯಕ್ಷ ಆರ್.ರಘು ಕೌಟಿಲ್ಯ ತಿಳಿಸಿದರು.

ಮೈಸೂರು ಬ್ಯೂಟಿಷಿಯನ್ ವೆಲ್‌ಫೇರ್ ಅಸೋಸಿಯೇಷನ್, ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಬೆಂಬಲಿಸಿ ಆಯೋಜಿಸಿದ್ದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸ್ವಾತಂತ್ರ್ಯ ಪೂರ್ವದಲ್ಲೇ ಸ್ವದೇಶಿ ಉತ್ಪನ್ನಗಳಿಗೆ ಆದ್ಯತೆ ನೀಡುವ ನಿಟ್ಟಿನಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ನೀಡಿರುವ ಕೊಡುಗೆ ಅವಿಸ್ಮರಣೀಯವಾಗಿದೆ ಎಂದರು.

ಮೈಸೂರು ಸಂಸ್ಥಾನದ ಆಡಳಿತದಲ್ಲಿ ಮಹಿಳೆಯರಿಗೆ ಕಡ್ಡಾಯ ಶಿಕ್ಷಣ, ಮತದಾನದ ಹಕ್ಕು ಹಾಗೂ ಔದ್ಯೋಗಿಕ ಅವಕಾಶ ಕಲ್ಪಿಸಿಕೊಟ್ಟ ಕೀರ್ತಿ ಮೈಸೂರು ಯದುವಂಶಸ್ಥರಿಗೆ ಸಲ್ಲುತ್ತದೆ ಎಂದರು. ಮಹಾರಾಣಿ ಲಕ್ಷ್ಮಿ ಅಮ್ಮಣ್ಣಿ ಹಾಗೂ ವಾಣಿ ವಿಲಾಸ ಅವರು ನೀಡಿದ ಕೊಡುಗೆ ಯಾರೂ ಮರೆಯುವಂತಿಲ್ಲ. ಶಾಶ್ವತವಾಗಿ ನೀಡಿರುವ ಇವರ ಕೊಡುಗೆ ಇತಿಹಾಸದಲ್ಲಿ ಹಚ್ಚ ಹಸಿರಾಗಿದೆ ಎಂದು ರಘು ಕೌಟಿಲ್ಯ ತಿಳಿಸಿದರು.



ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಬೆಂಬಲಿಸಿ ಮೈಸೂರು ಬ್ಯೂಟಿಷಿಯನ್ ವೆಲ್‌ಫೇರ್ ಅಸೋಸಿಯೇಷನ್ ಆಯೋಜಿಸಿದ್ದ ಕಾರ್ಯಕ್ರಮ ಉದ್ಘಾಟಿಸಿದ ನಂತರ ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾದ ರಾಜ್ಯಾಧ್ಯಕ್ಷ ಆರ್.ರಘು ಕೌಟಿಲ್ಯ ಮಾತನಾಡಿದರು.

ಮೈಸೂರು ಪರಂಪರೆ ಹಾಗೂ ಇತಿಹಾಸ ತಿಳಿದ ನರೇಂದ್ರ ಮೋದಿ ಅವರು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರವನ್ನು ಯದುವೀರ್ ಪ್ರತಿನಿಧಿಸಬೇಕೆಂದು ಬಿಜೆಪಿ ಅಭ್ಯರ್ಥಿಯಾಗಿ ಆಯ್ಕೆ ಮಾಡಿದ್ದಾರೆ ಎಂದು ಹೇಳಿದರು.

ಭಾರತವನ್ನು ವಿಶ್ವ ಮಟ್ಟದಲ್ಲಿ ಎತ್ತರಕ್ಕೆ ಕೊಂಡೊಯ್ಯುವ ನಿಟ್ಟಿನಲ್ಲಿ ಮಹಿಳಾ ಸಬಲೀಕರಣ ಉತ್ತೇಜಿಸುವ ಉದ್ದೇಶದಿಂದ ನರೇಂದ್ರ ಮೋದಿ ಬಹಳಷ್ಟು ಮಹಿಳಾ ಪರ ಕಾರ್ಯಕ್ರಮ ಅನುಷ್ಠಾನ ಮಾಡಿದ್ದಾರೆ. ಇದಲ್ಲದೆ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರಕ್ಕೆ ಬಹಳಷ್ಟು ಯೋಜನೆಗಳನ್ನು ಜಾರಿಗೊಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಬಿಜೆಪಿ ಬೆಂಬಲಿಸುವಂತೆ ರಘು ಕೌಟಿಲ್ಯ ಮನವಿ ಮಾಡಿದರು.

ಈ ವೇಳೆ ಮಾತನಾಡಿದ ಮಾಜಿ ಶಾಸಕ ಎಸ್.ಎ.ರಾಮದಾಸ್, ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿ ಪ್ರಕಟಿಸಿರುವ ಪ್ರಣಾಳಿಕೆಯ ಅಂಶಗಳನ್ನು ವಿವರಿಸಿದರು. ಕಾರ್ಯಕ್ರಮಕ್ಕೆ ಗೈರು ಹಾಜರಾಗಿದ್ದ ಯದುವೀರ್ ಪತ್ನಿ ತ್ರಿಷಿಕಾ ಕುಮಾರಿ ವಿಡಿಯೋ ಸಂದೇಶ ಕಳುಹಿಸಿ ಮತ್ತೊಂದು ಸಂದರ್ಭದಲ್ಲಿ ಬ್ಯುಟಿಷಿಯನ್ ವೆಲ್‌ಫೇರ್ ಅಸೋಸಿಯೇಷನ್ ಕಾರ್ಯಕ್ರಮದಲ್ಲಿ ಭಾಗಿಯಾಗುವುದಾಗಿ ಭರವಸೆ ನೀಡಿದರು.

ಮೈಸೂರು ಬ್ಯೂಟಿಷಿಯನ್ ವೆಲ್‌ಫೇರ್ ಅಸೋಸಿಯೇಷನ್ ಪದಾಧಿಕಾರಿಗಳಾದ ವೇದಾ ರೈ, ಉಮಾ ಜಾದವ್, ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ರೇಣುಕಾ ರಾಜ್, ಪದಾಧಿಕಾರಿಗಳಾದ ಮಮತಾ ಶೆಟ್ಟಿ, ಪ್ರಮೀಳಾ ಭರತ್, ಚಂದ್ರಕಲಾ ವೇದಿಕೆಯಲ್ಲಿ ಉಪಸ್ಥಿತರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy News papers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಮೈಸೂರು ಮಿತ್ರ

ಯದುವೀರ್ ಪರ ಶಾಸಕ ಶ್ರೀವತ್ಸ ಪ್ರಚಾರ



ಮೈಸೂರು, ಏ.16(ಎಂಕೆ)– ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಪರವಾಗಿ ಕೆ.ಆರ್ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಕೃಷ್ಣಮೂರ್ತಿಪುರಂನಲ್ಲಿ ಮನೆ ಮನೆಗೆ ತೆರಳಿ ಮತಯಾಚಿಸಿದರು. ಈ ವೇಳೆ ಕಳೆದ ಹತ್ತು ವರ್ಷಗಳ ಕೇಂದ್ರ ಸರ್ಕಾರದ ಸಾಧನೆ ಹಾಗೂ ಬಿಜೆಪಿ ಅಭ್ಯರ್ಥಿ ಕ್ರಮ ಸಂಖ್ಯೆ ಮಾಹಿತಿಯುಳ್ಳ ಕರಪತ್ರಗಳನ್ನು ವಿತರಿಸಿ ಬಿಜೆಪಿ ಬೆಂಬಲಿಸುವಂತೆ ಮನವಿ ಮಾಡಿದರು. ಮೈಸೂರು ನಗರ ಜೆಡಿಎಸ್ ಕಾರ್ಯಾಧ್ಯಕ್ಷ ಎಸ್.ಪ್ರಕಾಶ್ ಪ್ರಿಯದರ್ಶನ್, ನಗರ ಯುವ ಮೋರ್ಚಾ ಅಧ್ಯಕ್ಷ ರಾಕೇಶ್ ಗೌಡ, ಬಿಜೆಪಿ ಮುಖಂಡರು ರಾಜೇಶ್ ಜಾದವ್, ಹೇಮಂತ್, ವಿಶ್ವ, ಕೃಷ್ಣ ಸೋಮಶೇಖರ್, ಅರುಣ್, ಕೃಷ್ಣ, ದೀಪು ಬದರಿ, ಋತ್ವಿಕ್ ಮತ್ತಿತರರಿದ್ದರು.

ಚಿತ್ರರಂಗಕ್ಕೆ ದ್ವಾರಕೀಶ್ ಕೊಡುಗೆ ಅಪಾರ: ಪ್ರಧಾನಿ ನರೇಂದ್ರ ಮೋದಿ ಸಂತಾಪ



ನವದೆಹಲಿ: ಸ್ಯಾಂಡಲ್‌ವುಡ್ ನಟ ದ್ವಾರಕೀಶ್ ಅವರ ನಿಧನಕ್ಕೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ. ಚಿತ್ರರಂಗಕ್ಕೆ ದ್ವಾರಕೀಶ್ ಕೊಡಗೆ ಅಪಾರವಾಗಿದ್ದು, ಅವರ ನಿಧನದಿಂದ ಬೇಸರವಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಸಾಮಾಜಿಕ ಜಾಲತಾಣದಲ್ಲಿ ಸಂತಾಪ ಸೂಚಿಸಿದ್ದಾರೆ. ಚಿತ್ರೋದ್ಯಮಕ್ಕೆ ಅವರ ಕೊಡುಗೆ ಅಪಾರವಾಗಿದೆ. ದಶಕಗಳ ಕಾಲ ಮರೆಯಲಾಗದ ಸಿನಿಮಾಗಳು ಮತ್ತು ನಟನೆಯ ಮೂಲಕ ಜನರ ತಲುಪಿದ್ದಾರೆ. ಪ್ರೇಕ್ಷಕರನ್ನು ರಂಜಿಸಿ, ಹೊಸಬರನ್ನು ಬೆಂಬಲಿಸುವುದರ ಜೊತೆಗೆ ಚಿತ್ರರಂಗವನ್ನು ರೂಪಿಸುವಲ್ಲಿ ಅವರ ಪಾತ್ರ ಕೂಡ ದೊಡ್ಡದು ಎಂದಿದ್ದಾರೆ. ಅವರ ನಿಧನದಿಂದ ದುಃಖವಾಗಿದೆ. ಅವರನ್ನು ಸದಾ ಸ್ಮರಿಸುತ್ತೇವೆ. ಅವರ ಕುಟುಂಬಕ್ಕೆ ಮತ್ತು ಅಭಿಮಾನಿಗಳಿಗೆ ಈ ದುಃಖವನ್ನು ಭರಿಸುವ ಶಕ್ತಿ ನೀಡಲಿ ಎಂದು ನರೇಂದ್ರ ಮೋದಿ ಅವರು ಬರೆದುಕೊಂಡಿದ್ದಾರೆ.

ದ್ವಾರಕೀಶ್ ನಿಧನಕ್ಕೆ ಎಸ್‌ಡಿಪಿಐ ಸಂತಾಪ

ಮೈಸೂರು, ಏ.16– ದ್ವಾರಕೀಶ್ ಅವರ ನಿಧನಕ್ಕೆ ಎಸ್‌ಡಿಪಿಐ ಸಂತಾಪ ಸೂಚಿಸಿದೆ. ಕನ್ನಡ ಚಿತ್ರರಂಗದಲ್ಲಿ ಹಲವು ಮೊದಲುಗಳನ್ನು ಸಾಧಿಸಿದ್ದ ಹಿರಿಯ ನಟ, ನಿರ್ಮಾಪಕ, ನಿರ್ದೇಶಕ ದ್ವಾರಕೀಶ್ ಅವರು ಇಂದು ವಿಧಿವಶರಾಗಿದ್ದಾರೆ. ಕನ್ನಡ ಚಿತ್ರರಂಗಕ್ಕೆ ಅವರು ಸಲ್ಲಿಸಿದ ಅಪಾರ ಸೇವೆಯನ್ನು ನಾವು ಗೌರವಿಸುತ್ತಿದ್ದೇವೆ. ಅವರ ಅಗಲಿಕೆಗೆ ಎಸ್‌ಡಿಪಿಐ ಸಂತಾಪ ಸೂಚಿಸುತ್ತದೆ. ಅವರ ಕುಟುಂಬ ಮತ್ತು ಬಳಗಕ್ಕೆ ದುಃಖ ಸಹಿಸುವ ಶಕ್ತಿ ಬರಲಿ ಎಂದು ಪಾರ್ಟಿಯ ರಾಜ್ಯಾಧ್ಯಕ್ಷ ಅಬ್ದುಲ್ ಮಜೀದ್ ತಿಳಿಸಿದ್ದಾರೆ.

ಆನೆ ದಾಳಿ: ವ್ಯಕ್ತಿ ಸಾವು



ಮಲ್ಲೇಶ್

ಹೆಚ್.ಡಿ.ಕೋಟೆ, ಏ.16–ಆನೆ ದಾಳಿ ನಡೆಸಿ, ವ್ಯಕ್ತಿಯೋರ್ವ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ತಾಲೂಕಿನ ಹಂಪಾ ಪುರ ಬಳಿ ನಡೆದಿದೆ.

ತಾಲೂಕಿನ ವಡ್ಡರ ಪಾಳ್ಯ ಗ್ರಾಮದ ನಿವಾಸಿ ಮಲ್ಲೇಶ್ (56) ಆನೆ ತುಳಿತದಿಂದ ಸಾವನ್ನಪ್ಪಿದವರು. ಈತ ಎಂದಿನಂತೆ ಮಂಗಳವಾರ ಬೆಳಗ್ಗೆ ವಡ್ಡರಪಾಳ್ಯದಿಂದ ಮೈಸೂರಿಗೆ ಗಾರೆ ಕೆಲಸಕ್ಕೆ ಹೋಗಲು ಹೊಮ್ಮರಗಳ್ಳಿ ಗ್ರಾಮಕ್ಕೆ ಹೋಗುತ್ತಿದ್ದ ವೇಳೆ ಆನೆ ದಿಢೀರ್ ಪ್ರತ್ಯಕ್ಷವಾಗಿ ದಾಳಿ ನಡೆಸಿದೆ. ಮಲ್ಲೇಶ್ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಇದನ್ನು ಗಮನಿಸಿದ ಸ್ಥಳಿಯರು ತಕ್ಷಣ ಅರಣ್ಯಾಧಿಕಾರಿಗಳಿಗೆ ಕರೆ ಮಾಡಿ ವಿಷಯ ಮುಟ್ಟಿಸಿದ್ದಾರೆ.

ಶಾಸಕರ ಭೇಟಿ, ಸಾಂತ್ವನ: ವಿಷಯ ತಿಳಿದು ಪಟ್ಟಣದ ಸಾರ್ವಜನಿಕರ ಆಸ್ಪತ್ರೆಗೆ ಭೇಟಿ ನೀಡಿದ ಶಾಸಕ ಅನಿಲ್ ಕುಮಾರ್ ಹಾಗೂ ಚಾಮರಾಜನಗರ ಲೋಕಸಭಾ ಮೀಸಲು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಮೃತನ ಕುಟುಂಬಕ್ಕೆ ಸಾಂತ್ವನ ಹೇಳಿದರು. ಈ ವೇಳೆ ಶಾಸಕ ಅನಿಲ್ ಮೃತರ ಪತ್ನಿ ಇಂದ್ರಮ್ಮ ಅವರಿಗೆ ಅರಣ್ಯ ಇಲಾಖೆಯಿಂದ ಪರಿಹಾರವಾಗಿ 5 ಲಕ್ಷ ರೂ.ಗಳ ಚೆಕ್ ನೀಡಿದರು. ಅಲ್ಲದೇ ಉಳಿದ 10 ಲಕ್ಷ ರೂ. ಗಳನ್ನು ಆದಷ್ಟು ಬೇಗ ಕುಟುಂಬದವರಿಗೆ ತಲುಪಿಸುವಂತೆ ಅರಣ್ಯ ಇಲಾಖೆ ಅಧಿಕಾರಿ ಗಳಿಗೆ ತಿಳಿಸಿದ ಅವರು ಮೃತರ ಪತ್ನಿ ಇಂದ್ರಮ್ಮ ಅವರಿಗೆ ಪ್ರತಿ ತಿಂಗಳು 4 ಸಾವಿರದಂತೆ 5 ವರ್ಷ ಮಾಸಾಶನ ನೀಡಬೇಕು. ಜೊತೆಗೆ ಮೃತರ ಪುತ್ರನಿಗೆ ಇಲಾಖೆಯಲ್ಲಿ ಉದ್ಯೋಗ ನೀಡಬೇಕು ಎಂದು ಸೂಚಿಸಿದರು.

ಈ ವೇಳೆ ಹೆಚ್.ಡಿ.ಕೋಟೆ ತಾಲೂಕು ಬೋವಿ ಸಮಾಜದ ಅಧ್ಯಕ್ಷ ಐಡಿಯಾ ವೆಂಕಟೇಶ್, ರಾಜ್ಯ ಭೋವಿ ನಿಗಮದ ಮಾಜಿ ಅಧ್ಯಕ್ಷ ಜಿ.ವಿ.ಸೀತಾರಾಮ್, ರೈತ ಸಂಘದ ರಾಜ್ಯ ಉಪಾಧ್ಯಕ್ಷ ನಾಗರಾಜ್, ಪುರಸಭಾ ಸದಸ್ಯ ಸೋಮಶೇಖರ್, ಮುಖಂಡರಾದ ರವಿ, ನಾಗರಾಜು, ರಾಮಕೃಷ್ಣ, ಮಲ್ಲಭುವಿ, ನಿಂಗಣ್ಣ ಶ್ರೀನಿವಾಸ್ ಹನುಮ ಬೋವಿ, ತಹಸೀಲ್ದಾರ್ ಶ್ರೀನಿವಾಸ್, ಡಿವೈಎಸ್ಪಿ ಗೋಪಾಲಕೃಷ್ಣ, ಹುಣಸೂರು ಡಿಸಿಎಫ್ ಬಸವರಾಜ್, ಆರ್‌ಎಫ್‌ಓಗಳಾದ ಪೂಜಾ, ಹನುಮಂತರಾಜ್, ಸರ್ಕಲ್ ಇನ್ಸ್‌ಪೆಕ್ಟರ್‌ಗಳಾದ ಶಬೀರ್ ಹುಸೇನ್, ಲಕ್ಷ್ಮಿಕಾಂತ್, ಅರಣ್ಯ ಇಲಾಖೆ ಸಿಬ್ಬಂದಿ ಹಾಜರಿದ್ದರು. ಈ ಸಂಬಂಧ ಹೆಚ್.ಡಿ.ಕೋಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮಣ ಮತಯಾಚನೆ





ಮೈಸೂರು–ಕೊಡಗು ಲೋಕಸಭಾ ಕ್ಷೇತ್ರ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಚಾಮುಂಡೇಶ್ವರಿ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಪ್ರಚಾರ ನಡೆಸಿದರು. ಪ್ರಚಾರ ಸಭೆಯಲ್ಲಿ ಪಾಲ್ಗೊಂಡಿರುವ ಮಹಿಳಾ ಮತದಾರರನ್ನು ಬಲಚಿತ್ರದಲ್ಲಿ ಕಾಣಬಹುದು.

ಮೈಸೂರು, ಏ.16(ಎಂಟಿವೈ)– ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಮಂಗಳವಾರ ಚಾಮುಂಡೇಶ್ವರಿ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಪಕ್ಷದ ಮುಖಂಡರೊಂದಿಗೆ ಮತಯಾಚನೆ ಮಾಡಿದರು.

ಪ್ರಚಾರಕ್ಕೂ ಮುನ್ನ ಬೆಳಗ್ಗೆ ಚಾಮುಂಡಿ ಬೆಟ್ಟಕ್ಕೆ ಮಾಜಿ ಶಾಸಕ ಡಾ.ಯತೀಂದ್ರ, ಮುಡಾ ಅಧ್ಯಕ್ಷ ಕೆ.ಮರೀಗೌಡ, ಜಿ.ಪಂ ಮಾಜಿ ಸದಸ್ಯ ರಾಕೇಶ್ ಪಾಪಣ್ಣ ಹಾಗೂ ಬೆಂಬಲಿಗರೊಂದಿಗೆ ತೆರಳಿ ನಾಡದೇವಿ ಚಾಮುಂಡೇಶ್ವರಿ ದೇವಿಗೆ ವಿಶೇಷ ಪೂಜೆ ಸಲ್ಲಿಸಿ, ಗೆಲುವಿಗಾಗಿ ಪ್ರಾರ್ಥಿಸಿದರು.

ಬಳಿಕ ಚಾಮುಂಡಿ ಬೆಟ್ಟದಲ್ಲಿ ಸಭೆ ನಡೆಸಿ ಮತಯಾಚಿಸಿದರು. ನಂತರ ಮಂಡಕಳ್ಳಿ ಗ್ರಾಮಕ್ಕೆ ಆಗಮಿಸಿದ ಡಾ.ಯತೀಂದ್ರ, ಅಭ್ಯರ್ಥಿ ಎಂ.ಲಕ್ಷ್ಮಣ ಸೇರಿದಂತೆ ಕಾಂಗ್ರೆಸ್ ಮುಖಂಡರಿಗೆ ಗ್ರಾಮದಲ್ಲಿ ಅದ್ದೂರಿ ಸ್ವಾಗತ ಕೋರಲಾಯಿತು. ಇದೇ ವೇಳೆ ಬೃಹತ್ ಗಾತ್ರದ ಮೂಸಂಬಿ ಹಾರ ಹಾಕಿ ಅಭಿನಂದಿಸಿದರು.

ನಂತರ ಕಡಕೊಳ ಶ್ರೀ ಕಾಳಿಬೀರಮ್ಮನ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು. ಗ್ಯಾರಂಟಿ ಯೋಜನೆಗಳ ಫಲಾನುಭವಿಗಳೊಂದಿಗೆ ಸಭೆ ನಡೆಸಿ, ಈ ಲೋಕಸಭಾ ಚುನಾವಣೆಯಲ್ಲಿ ಮಹಿಳೆಯರು ಕಾಂಗ್ರೆಸ್‌ಗೆ ಬೆಂಬಲ ನೀಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕೈ ಬಲಪಡಿಸಬೇಕು. ಕಾಂಗ್ರೆಸ್ ಕೇಂದ್ರದಲ್ಲೂ ಅಧಿಕಾರಕ್ಕೆ ಬಂದರೆ, ಒಂದು ಲಕ್ಷ ರೂ. ಆರ್ಥಿಕ ನೆರವು ನೀಡುವ ಮಹಾಲಕ್ಷ್ಮಿ ಯೋಜನೆ ಜಾರಿಗೊಳಿಸಲಾಗುತ್ತದೆ ಎಂದು ತಿಳಿಸಿದರು.

ಸಿಂಧುವಳ್ಳಿ ಗ್ರಾಮಕ್ಕೆ ಆಗಮಿಸಿದ ಕಾಂಗ್ರೆಸ್ ಮುಖಂಡರು, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಮತಯಾಚಿಸಿದರು. ಬಳಿಕ ದೂರ ಗ್ರಾಮದ ಮುಖ್ಯ ರಸ್ತೆಗಳಲ್ಲಿ ಪಾದಯಾತ್ರೆ ನಡೆಸಿ, ಮತಯಾಚಿಸಿದರು. ಬಳಿಕ ಮಾರ್ಬಳ್ಳಿಯಲ್ಲಿ ಗ್ರಾಮಸ್ಥರ ಸಭೆ ನಡೆಸಿದರು.

ಈ ವೇಳೆ ಅಭ್ಯರ್ಥಿ ಎಂ.ಲಕ್ಷ್ಮಣ ಮಾತನಾಡಿ, ಚಾಮುಂಡೇಶ್ವರಿ ಕ್ಷೇತ್ರವನ್ನು ಮಾಜಿ ಶಾಸಕ ಡಾ.ಯತೀಂದ್ರ ಗಂಭೀರವಾಗಿ ಪರಿಗಣಿಸಿದ್ದಾರೆ. ಕೇಂದ್ರದಲ್ಲಿ ನೂರಕ್ಕೆ ನೂರರಷ್ಟು ಕಾಂಗ್ರೆಸ್ ಅಧಿಕಾರಕ್ಕೆ ಬಂದೇ ಬರುತ್ತೆ ಎಂಬ ನಂಬಿಕೆ ನನಗಿದೆ. ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಕಳೆದ ಮೂರು ಬಾರಿ ಒಬ್ಬರನ್ನೇ ಗೆಲ್ಲಿಸಿದ್ದರೂ ಅಭಿವೃದ್ಧಿ ಕುಂಠಿತವಾಗಿದೆ. ಕುಡಿಯುವ ನೀರಿಗೆ ಹಾಹಾಕಾರವಿದೆ. ಆದರೆ ಈ ಚುನಾವಣೆಯಲ್ಲಿ ಕಾಂಗ್ರೆಸ್ 300 ಸ್ಥಾನ ಗೆಲ್ಲುತ್ತದೆ. ದೇಶದ ಜನ ಬಿಜೆಪಿಯವರ ಸುಳ್ಳು ಕೇಳಿ ಸಾಕಾಗಿದ್ದಾರೆ. ಜನ ಈ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸುತ್ತಾರೆ ಎಂದು ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಈ ಹಿಂದೆ ಮೈಸೂರು ಅಭಿವೃದ್ಧಿಗೆ 3,800 ಕೋಟಿ ರೂ. ಅನುದಾನ ನೀಡಿದ್ದಾರೆ. ಅದರಲ್ಲಿ ಅನುಷ್ಠಾನಗೊಳಿಸಿದ ಯೋಜನೆಗಳನ್ನು ನಾವು ಮಾಡಿದ್ದು ಎಂದು ವಿರೋಧ ಪಕ್ಷಗಳ ನಾಯಕರು ಹೇಳಿಕೊಂಡು ಓಡಾಡುತ್ತಿದ್ದಾರೆ. ಮತದಾರರು ಎಚ್ಚರದಿಂದ ಇರಬೇಕು. ಬಿಜೆಪಿ ಅಭ್ಯರ್ಥಿ ಪಕ್ಷದ ಕಾರ್ಯಕರ್ತರ ಕೈಗೆ ಸಿಗುತ್ತಿಲ್ಲ. ಇನ್ನೂ ಜನರ ಕೈ ಸಿಗುತ್ತರಾ? ಲಕ್ಷ್ಮಣನಂತಹ ವ್ಯಕ್ತಿಗೆ ವೋಟ್ ಹಾಕಿ ತಪ್ಪು ಮಾಡಿಬಿಟ್ಟೆವು ಅನ್ನೋ ತರ ನಡೆದುಕೊಳ್ಳುವುದಿಲ್ಲ. ನಿಮ್ಮ ಪರ ಸಂಸತ್ತಿನಲ್ಲಿ ಧ್ವನಿ ಎತ್ತುವ ಕೆಲಸ ಮಾಡುತ್ತೇನೆ. ಕೇಂದ್ರದ ವರಿಷ್ಠರು ಬಿಡುಗಡೆ ಮಾಡಿರುವ ಗ್ಯಾರಂಟಿ ನ್ಯಾಯಗಳ ಬಗ್ಗೆ ಕಾರ್ಯಕರ್ತರು ಮನೆಗೆ ಹೋಗಿ ಹೇಳಬೇಕು.

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ವಿದ್ಯಾರ್ಥಿನಿಯರು ಸರ್ಕಾರಿ ಬಸ್‌ನಲ್ಲಿ ಉಚಿತವಾಗಿ ಪ್ರಯಾಣ ಮಾಡುತ್ತಿದ್ದಾರೆ. ನಿರುದ್ಯೋಗಿ ಪದವೀಧರರಿಗೆ ಯುವ ನಿಧಿಯಿಂದ ಬರುವ ಹಣ, ತಾಯಿಯರಿಗೆ ಗೃಹಲಕ್ಷ್ಮಿ ಹಣದಿಂದ ಅನುಕೂಲವಾಗಿದೆ. ಕೇಂದ್ರದಿಂದ ಮತ್ತಷ್ಟು ಯೋಜನೆ ಜಾರಿಯಾದರೆ ಎಲ್ಲಾ ಕುಟುಂಬಗಳಿಗೂ ಉಪಯೋಗವಾಗುತ್ತದೆ. ದೇಶದಲ್ಲಿ ಜನರ ಅಭಿವೃದ್ಧಿಯನ್ನು ಬಯಸುವ ಪಕ್ಷ ಎಂದರೆ, ಅದು ಕಾಂಗ್ರೆಸ್ ಮಾತ್ರ. ಸಾಧ್ಯ. ನಾನು ಗೆದ್ದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಗೆದ್ದಂತೆ ಎಂದು ಮನವಿ ಮಾಡಿದರು.



ಮೈಸೂರು ಜಿಲ್ಲಾ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಡಾ.ಬಿ.ಆರ್.ಅಂಬೇಡ್ಕರ್ ಅವರ 133ನೇ ಜಯಂತಿ ಅಂಗವಾಗಿ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ 'ಮೈಸೂರು ಮಿತ್ರ' ಪ್ರಸರಣಾಧಿಕಾರಿ ಗೋಪಿನಾಥ್, ಕನ್ನಡಪ್ರಭ ಪತ್ರಿಕೆಯ ವ್ಯವಸ್ಥಾಪಕ ಗಣೇಶ, ಪ್ರತಿನಿಧಿ ಪತ್ರಿಕೆಯ ಪ್ರತಿನಿಧಿ ಮಂಜುನಾಥ, ಸಂಘದ ಅಧ್ಯಕ್ಷ ಹೋಮದೇವ ಜೆ.ಎಸ್, ಮೈಸೂರು ಜಿಲ್ಲಾ ಅಧಿಕೃತ ಪತ್ರಿಕಾ ಪ್ರತಿನಿಧಿಗಳ ಸಂಘದ ಉಪಾಧ್ಯಕ್ಷ ವೆಂಕಟೇಶ್ ಬಾಬು, ಸಂತೋಷ್, ಪತ್ರಿಕಾ ವಿತರಕರ ಸಂಘದ ಪದಾಧಿಕಾರಿಗಳಾದ ಎಂ.ಎನ್.ನಾಗರಾಜು, ಸಿ.ಶಿವಣ್ಣ, ಶ್ರೀಕಾಂತ, ನಂಜುಂಡಯ್ಯ, ಸಿ.ಆರ್.ದತ್ತಾತ್ರೇಯ, ರಘು, ಮಹಾದೇವಸ್ವಾಮಿ, ಹೆಚ್.ಮಂಜುನಾಥ್, ಇನ್ನಿತರ ಪತ್ರಿಕಾ ವಿತರಕರು ಉಪಸ್ಥಿತರಿದ್ದರು.



ಮೈಸೂರಿನ ವಿದ್ಯಾರಣ್ಯಪುರಂನ ಚಾಮುಂಡಿವನಂ ಟೆಂಪಲ್ ಕಾಂಪ್ಲೆಕ್ಸ್‌ನಲ್ಲಿರುವ ಬೃಹತ್ ಮರದ ಕೊಂಬೆ ಮಂಗಳವಾರ ಬೆಳಗ್ಗೆ ಗಣಪತಿ ದೇವಸ್ಥಾನದ ಮೇಲೆ ಮುರಿದು ಬಿದ್ದಿದ್ದು, ದೇವಸ್ಥಾನದ ಗೋಡೆಗಳು ಕುಸಿದಿವೆ. ವಿಷಯ ತಿಳಿದು ಸ್ಥಳಕ್ಕೆ ಭೇಟಿ ನೀಡಿದ ನಗರಪಾಲಿಕೆ ಅಭಯ ತಂಡ ದೇವಸ್ಥಾನದ ಮೇಲೆ ಮುರಿದು ಬಿದ್ದಿದ್ದ ಮರದ ಕೊಂಬೆಯನ್ನು ತೆರವುಗೊಳಿಸಿದ್ದಾರೆ.

ಬೀದಿ ಬದಿ ವ್ಯಾಪಾರಿಗಳಿಗೆ ಛತ್ರಿಗಳ ವಿತರಣೆ

ಮೈಸೂರು, ಏ.16(ಜಿಎ)– ಮೈಸೂರು ಅಸೋಸಿಯೇಷನ್ ಆಫ್ ಅಲೆಯನ್ಸ್ ಕ್ಲಬ್ ಇಂಟರ್ನ್ಯಾಷನಲ್ ವತಿಯಿಂದ ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಬಿಸಿಲ ಬೇಗೆಯಿಂದ ಪರದಾಡುತ್ತಿರುವ ಬೀದಿ ಬದಿ ವ್ಯಾಪಾರಿಗಳಿಗೆ ಬಿಸಿಲು ರಕ್ಷಣೆಗಾಗಿ ಛತ್ರಿಗಳನ್ನು ಮಂಗಳವಾರ ವಿತರಿಸಲಾಯಿತು. ನಂತರ ಸಂಸ್ಥೆ ಜಿಲ್ಲಾ ಗವರ್ನರ್ ಎಂ.ಎನ್. ಬಾಲಕೃಷ್ಣ ಮಾತನಾಡಿ, ನಮ್ಮ ಸಂಸ್ಥೆಯಡಿ 40 ಕ್ಲಬ್‌ಗಳು ಸದಸ್ಯರಾಗಿದ್ದು, ಮೇ 12ರಂದು ನಗರದ ಕಲ್ಯಾಣಿ ಹೋಟೆಲ್‌ನಲ್ಲಿ ಜಿಲ್ಲಾ ಕ್ಯಾಬಿನೆಟ್ ಪರಿಚಯ ಕಾರ್ಯಕ್ರಮ ನಡೆಯಲಿದೆ. ಜಿಲ್ಲೆಯ ಜನರ ಅಗತ್ಯಗಳಿಗೆ ಕೆಲಸ ಮಾಡಲು ವಿವಿಧ ಯೋಜನೆಗಳನ್ನೂ ಹಮ್ಮಿಕೊಳ್ಳಲಾಗುತ್ತದೆ ಎಂದರು. ಈ ವೇಳೆ ಅಲಯನ್ಸ್ ಜಿಲ್ಲೆ 255ರ ಲೋಗೊ ಬಿಡುಗಡೆ ಮಾಡಲಾಯಿತು.

ಸುದ್ದಿಗೋಷ್ಠಿಯಲ್ಲಿ ಜಿಲ್ಲೆ 255ರ ಉಪ ಗೌವರ್ನರ್‌ಗಳಾದ ವಿ.ಮಹಾಬಲ ಭೈರಿ, ಎಂ.ಎಸ್.ಸಂತೋಷ್‌ಕುಮಾರ್, ಎಸ್.ವೆಂಕಟೇಶ್, ಕಾರ್ಯದರ್ಶಿ ಎನ್.ಗಂಗಾಧರಪ್ಪ, ಖಜಾಂಜಿ ಕೃಷ್ಣೋಜಿರಾವ್, ಎನ್.ಬೆಟ್ಟೇಗೌಡ ಉಪಸ್ಥಿತರಿದ್ದರು.

ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮಣ ಪರ ಮಾಜಿ ಮೇಯರ್‌ಗಳ ಮತಯಾಚನೆ



ಮೈಸೂರು, ಏ.16(ಎಂಕೆ)– ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಪರ ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ ನೇತೃತ್ವದ ಮಾಜಿ ಮೇಯರ್‌ಗಳ ತಂಡದ ವತಿಯಿಂದ ಚಾಮರಾಜ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಂಗಳವಾರ ಮತಯಾಚನೆ ಮಾಡಲಾಯಿತು.

ಚಾಮರಾಜ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗಂಗೋತ್ರಿ ಬಡಾವಣೆಯಲ್ಲಿ ಮನೆ ಮನೆಗೆ ಭೇಟಿ ನೀಡಿ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಅವರಿಗೆ ತಮ್ಮ ಅಮೂಲ್ಯವಾದ ಮತ ನೀಡಿ, ಅವರನ್ನು ಗೆಲ್ಲಿಸುವಂತೆ ಕೋರಲಾಯಿತು. ಅಲ್ಲದೆ ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳು ನಿಮ್ಮ ಮನೆಗೆ ತಲುಪುತ್ತಿವೆಯೇ ಎಂಬ ಮಾಹಿತಿಯನ್ನು ಕಲೆಹಾಕಲಾಯಿತು. ಮಾಜಿ ಮೇಯರ್‌ಗಳಾದ ಬಿ.ಕೆ.ಪ್ರಕಾಶ್, ಮೋದಮಣಿ, ಟಿ.ಬಿ.ಚಿಕ್ಕಣ್ಣ, ಮುಡಾ ಮಾಜಿ ಸದಸ್ಯ ಭಾಸ್ಕರ್ ಮತ್ತಿತರರಿದ್ದರು.



ಮೈಸೂರು ವಕೀಲರ ಸಂಘದ ನೂತನ ಅಧ್ಯಕ್ಷರಾದ ಎಸ್. ಲೋಕೇಶ್ ಮಂಗಳವಾರ ಮೈಸೂರಿನಲ್ಲಿ ಹೈಕೋರ್ಟ್ ನ್ಯಾಯಾಧೀಶರಾದ ನ್ಯಾಯಮೂರ್ತಿ ಕೃಷ್ಣ ದೀಕ್ಷಿತ್ ಅವರನ್ನು ಭೇಟಿಯಾಗಿ ಅಭಿನಂದಿಸಿ, ಅವರ ಸಹಕಾರ ಹಾಗೂ ಮಾರ್ಗದರ್ಶನ ಕೋರಿದರು. ಲೋಕೇಶ್ ಅವರಿಗೆ ಉಪಾಧ್ಯಕ್ಷ ಎಂ.ವಿ. ಚಂದ್ರಶೇಖರ್, ಕಾರ್ಯದರ್ಶಿ ಎ.ಜಿ. ಸುಧೀರ್ ಇತರ ವಕೀಲರು ಸಾಥ್ ನೀಡಿದರು.

ಈ ಬಾರಿಯ ಲೋಕಸಭಾ ಚುನಾವಣೆ ಸತ್ಯ–ಸುಳ್ಳಿನ ಜಿದ್ದಾಜಿದ್ದಿ: ಡಾ.ಯತೀಂದ್ರ



ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಪರ ಮಾಜಿ ಶಾಸಕ ಡಾ.ಯತೀಂದ್ರ ಚಾಮುಂಡೇಶ್ವರಿ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಮತಯಾಚಿಸಿದರು.

ಮೈಸೂರು,ಏ.16(ಎಂಟಿವೈ)– ಪ್ರಸಕ್ತ ಲೋಕಸಭಾ ಚುನಾವಣೆ ಸತ್ಯ ಮತ್ತು ಸುಳ್ಳಿನ ಜಿದ್ದಾಜಿದ್ದಿ ಚುನಾವಣೆಯಾಗಿದ್ದು, ಗ್ಯಾರಂಟಿ ಯೋಜನೆಗಳ ಮೂಲಕ ಶೋಷಿತ ಸಮುದಾಯ, ಬಡ ಕುಟುಂಬ ಸೇರಿದಂತೆ ಎಲ್ಲಾ ವರ್ಗದ ಹಿತಕಾಯಲು ಬದ್ಧವಾಗಿರುವ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಬೆಂಬಲ ನೀಡುವಂತೆ ಮಾಜಿ ಶಾಸಕ ಡಾ.ಯತೀಂದ್ರ ಮನವಿ ಮಾಡಿದ್ದಾರೆ.

ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಪರ ಚಾಮುಂಡೇಶ್ವರಿ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಬಿರುಸಿನ ಪ್ರಚಾರ ನಡೆಸಿ ಮಾತನಾಡಿದ ಅವರು, ಕಾಂಗ್ರೆಸ್ ನುಡಿದಂತೆ ನಡೆಯುವ ಪಕ್ಷವಾಗಿದೆ. ಹಿಂದಿನಿಂದಲೂ ದೇಶದುದ್ದಗಲಕ್ಕೂ ಕಾಂಗ್ರೆಸ್ ಜನರ ಹಿತಕಾಯುವ ಬದ್ಧತೆಯನ್ನು ಪ್ರದರ್ಶಿಸಿದೆ. ಕಳೆದ 10 ವರ್ಷದಿಂದ ದೇಶದಲ್ಲಿ ಆಡಳಿತ ನಡೆಸುತ್ತಿರುವ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಜನಪರ ಯೋಜನೆಗಳನ್ನು ಅನುಷ್ಠಾನ ಗೊಳಿಸದೇ, ಕೇವಲ ಹಿಂದುತ್ವ ಪ್ರತಿಪಾದಿಸಲು ಆದ್ಯತೆ ನೀಡಿದೆ. ಇದರಿಂದ ದೇಶದಲ್ಲಿ ಕೋಮು ದ್ವೇಷ ಸೃಷ್ಟಿಸಿ, ಅಶಾಂತಿ ಉಂಟು ಮಾಡಿ ರಾಜಕೀಯ ಲಾಭ ಮಾಡಿ ಕೊಳ್ಳುತ್ತಿದ್ದಾರೆ. ಇದರಿಂದ ಬಡ ಜನರಿಗೆ ಯಾವುದೇ ಪ್ರಯೋಜನವಾಗುತ್ತಿಲ್ಲ. ನೆಮ್ಮದಿ ಹಾಳಾಗುತ್ತಿದೆ. ಈ ಹಿನ್ನೆಲೆಯಲ್ಲಿ ಈ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಅವರನ್ನು ಗೆಲ್ಲಿಸುವಂತೆ ಮನವಿ ಮಾಡಿದರು.

ಈ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಸಾಮಾನ್ಯ ಕಾರ್ಯಕರ್ತನಾಗಿ, ಜನಪರ ಹೋರಾಟದಲ್ಲಿ ಭಾಗಿಯಾಗಿ ಹಲವಾರು ವರ್ಷದಿಂದ ಪಕ್ಷಕ್ಕೆ ದುಡಿದಿರುವ ಲಕ್ಷ್ಮಣ ಅವರನ್ನು ಕಣಕಿಳಿಸಲಾಗಿದೆ. ಬಿಜೆಪಿ ಅಭ್ಯರ್ಥಿ ರಾಜಮನೆತನದವರಾಗಿದ್ದು, ಜನ ಸಾಮಾನ್ಯರ ಕಷ್ಟ ಸುಲಭವಾಗಿ ಸಿಗುವುದಿಲ್ಲ. ಜನರ ಮಧ್ಯೆ ಬಂದು ಕೆಲಸ ಮಾಡಲು ಸಾಧ್ಯವಾಗುವುದಿಲ್ಲ. ನಮ್ಮ ಅಭ್ಯರ್ಥಿ ಲಕ್ಷ್ಮಣ ಜನ ಸಾಮಾನ್ಯರೊಂದಿಗೆ ಸದಾ ಇರುತ್ತಾರೆ. ಎರಡೂ ಜಿಲ್ಲೆಗಳ ಜನರ ಬೆಂಬಲ ನಮ್ಮ ಅಭ್ಯರ್ಥಿಗೆ ನೀಡಿದರೆ ಕಾಂಗ್ರೆಸ್ ಪಕ್ಷ ಬಲಗೊಂಡು ಕೇಂದ್ರದಲ್ಲಿ ಅಧಿಕಾರಕ್ಕೆ ಬರುತ್ತದೆ. ನಮ್ಮ ಸರ್ಕಾರ ಬಂದರೆ ಕೇಂದ್ರದಿಂದ 5 ನ್ಯಾಯ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸುತ್ತದೆ.

ಈ ಹಿಂದೆ ರಾಜ್ಯ ಮತ್ತು ದೇಶದಲ್ಲಿ ಬಿಜೆಪಿ ಮತ್ತು ಕಾಂಗ್ರೆಸ್ ಎರಡು ಪಕ್ಷಗಳು ಆಡಳಿತ ಮಾಡಿರುವುದನ್ನು ನೋಡಿದ್ದೀರಾ. ಮೋದಿ ಸರ್ಕಾರಕ್ಕೆ ಏಕೆ ಮತ ಹಾಕಬೇಕು. ಮೋದಿ ಸರ್ಕಾರ ಕೊಟ್ಟಂತಹ ಯಾವುದಾದರೂ ಒಂದು ಮಾತನ್ನು ಉಳಿಸಿಕೊಂಡಿದೆಯೇ? ವಿದೇಶದಿಂದ ಕಪ್ಪು ಹಣ ತಂದು ಎಲ್ಲರ ಖಾತೆಗಳಿಗೆ 15 ಲಕ್ಷ ರೂ. ಹಾಕುತ್ತೇವೆ ಎಂದಿದ್ದರು. ರೈತರ ಆದಾಯ ದುಪ್ಪಟ್ಟು ಮಾಡುತ್ತೇವೆ. ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿಸಿ ನಿರುದ್ಯೋಗ ಸಮಸ್ಯೆ ಹೋಗಲಾಡಿಸುತ್ತೇವೆ ಎಂದು ಭರವಸೆ ನೀಡಿದ್ದರು. ನೀಡಿದ 600ಕ್ಕೂ ಹೆಚ್ಚು ಭರವಸೆಗಳಲ್ಲಿ ಒಂದನ್ನೂ ಈಡೇರಿಸಿಲ್ಲ ಎಂದು ದೂರಿದರು

ಸಾಲಬಾಧೆ ತಾಳಲಾರದೆ ವಿಷ ಸೇವಿಸಿ ರೈತ ಆತ್ಮಹತ್ಯೆ

ಭಾರತೀನಗರ, ಏ.16– ಸಾಲಬಾಧೆ ತಾಳಲಾರದೆ ರೈತ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ



ಸಮೀಪದ ಸಬ್ಬನಹಳ್ಳಿಯಲ್ಲಿ ನಡೆದಿದೆ. ಗ್ರಾಮದ ಮಂಚೇಗೌಡರ ಪುತ್ರ ಎಸ್.ಎಂ. ಮಹೇಶ (48) ಮೃತ ರೈತ. ಗ್ರಾಮದಲ್ಲಿ ಎರಡು ಎಕರೆ ಜಮೀನು ಹೊಂದಿದ್ದ ಮಹೇಶ್ ಸಾಲ ಮಾಡಿ ವ್ಯವಸಾಯ ಮಾಡುತ್ತಿದ್ದರು. ಬರಗಾಲದ ಕಾರಣ ಹಾಕಿದ ಬೆಳೆ ಕೈಗೆ ಸಿಗದೆ ನಷ್ಟ ಉಂಟಾಗಿತ್ತು. ಸಾಲಗಾರರ ಕಿರುಕುಳ, ಬೆಳೆ ಇಲ್ಲದೆ ಕಂಗಾಲಾದ ಮಹೇಶ ಶನಿವಾರ ತಮ್ಮ ಜಮೀನಿನ ಬಳಿ ವಿಷ ಸೇವಿಸಿ ಅಸ್ವಸ್ಥರಾಗಿದ್ದರು. ತಕ್ಷಣ ಅವರನ್ನು ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೆ ನಿನ್ನೆ ಸಂಜೆ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾರೆ. ಈ ಸಂಬಂಧ ಕೆ.ಎಂ. ದೊಡ್ಡಿ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ಮುಂದಿನ ಕ್ರಮ ಕೈಗೊಂಡಿದ್ದಾರೆ.


ಜಿಲ್ಲೆಯ ಮಗ ಬೇಕಾ, ಹೊರಗಿನವರು ಬೇಕಾ

ಮದ್ದೂರು ಸುತ್ತಮುತ್ತ ಶಾಸಕ ಉದಯ್, ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಪರ ಮತಯಾಚನೆ

ಮದ್ದೂರು, ಏ.16– ನಿಮಗೆ ಜಿಲ್ಲೆಯ ಮಗ ಬೇಕಾ ಅಥವಾ ಹೊರಗಿನಿಂದ ಬಂದವರು ಬೇಕಾ? ಸಿಎಂ ಆಗಿ ಅಧಿಕಾರದಲ್ಲಿದ್ದಾಗಲೇ ಜಿಲ್ಲೆಗೆ ಏನು ಕೊಡುಗೆ ನೀಡಿಲ್ಲ. ಅನುಕಂಪ ಗಿಟ್ಟಿಸಿಕೊಳ್ಳಲು ಬರುವವರ ಭಾವನಾತ್ಮಕ ಮಾತಿಗೆ ಮರುಳಾಗಬೇಡಿ ಎಂದು ಮದ್ದೂರು ಶಾಸಕ ಉದಯ್ ಕರೆ ನೀಡಿದ್ದಾರೆ.

ತಾಲೂಕಿನ ಹಲವಾರು ಗ್ರಾಮ ಪಂಚಾಯತಿಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಅವರ ಪರ ಚುನಾವಣಾ ಪ್ರಚಾರದ ವೇಳೆ ಮಾತನಾಡಿದರು.

ಸಾತನೂರು, ರಾಮನಗರ, ಮಧುಗಿರಿ, ಚಿಕ್ಕಬಳ್ಳಾಪುರ, ಚನ್ನಪಟ್ಟಣ ಮುಗಿಸಿ ಈಗ ಮಂಡ್ಯಕ್ಕೆ ಬಂದಿದ್ದಾರೆ. ಹೋದ ಕಡೆಯಲ್ಲೆಲ್ಲ ಇದು ನನ್ನ ಕರ್ಮಭೂಮಿ ಎನ್ನುತ್ತಾರೆ. ಚುನಾವಣೆ ನಂತರ ಮತ್ತೆಲ್ಲಿಗೆ ಹೋಗುತ್ತಾರೋ ಗೊತ್ತಿಲ್ಲ. ಏಳು ಕ್ಷೇತ್ರ ಗೆದ್ದು ಮುಖ್ಯಮಂತ್ರಿ ಆಗಿದ್ದರು ಜಿಲ್ಲೆಗೆ ಯಾವುದೇ ಶಾಶ್ವತ ಯೋಜನೆ ಕೊಟ್ಟಿಲ್ಲ ಎಂದು ಅವರು ವಾಗ್ದಾಳಿ ನಡೆಸಿದರು.



ಮಂಡ್ಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಅವರು ಮದ್ದೂರು ತಾಲೂಕಿನ ಸಾದೊಳಲು ಗ್ರಾಮದಲ್ಲಿ ಚುನಾವಣಾ ಪ್ರಚಾರ ನಡೆಸಿದರು.

ನಾವು ರೈತರ ಮಕ್ಕಳು ಅಂತಾರೆ, ಒಂದು ನಾಲೆಯನ್ನೂ ಅಭಿವೃದ್ಧಿ ಮಾಡಿಲ್ಲ, ಕಾವೇರಿಗೆ ನ್ಯಾಯ ಕೊಡಿಸಲಿಲ್ಲ. ಅವರು ಒಕ್ಕಲಿಗ ನಾಯಕರನ್ನು ಬೆಳೆಯಲು ಬಿಡುವುದಿಲ್ಲ. ಸ್ಟಾರ್ ಚಂದ್ರು ಅವರು ರಾಜಕೀಯ ಮಾಡಲು ಬಂದಿಲ್ಲ, ಜನಸೇವೆ ಮಾಡಲು ಬಂದಿದ್ದಾರೆ. ವಿಧಾನಸಭಾ ಚುನಾವಣೆಯಲ್ಲಿ ಘೋಷಿಸಿದಂತೆ ಗ್ಯಾರಂಟಿ ಜಾರಿ ಮಾಡಲಾಗಿದ್ದು, ಎಲ್ಲರಿಗೂ ತಲುಪುತ್ತಿದೆ. ಸ್ಟಾರ್ ಚಂದ್ರು ಬೆಂಬಲಿಸಿ ಕಾಂಗ್ರೆಸ್ ಶಕ್ತಿ ಹೆಚ್ಚಿಸಿ ಎಂದು ಕರೆಕೊಟ್ಟರು.

ಈ ಸಂದರ್ಭ ಅಭ್ಯರ್ಥಿ ವೆಂಕಟರಮಣೇಗೌಡ, ಮಾಜಿ ಸಚಿವ ಬಿ.ಸೋಮಶೇಖರ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸಿ.ಡಿ.ಗಂಗಾಧರ್, ಜಿಲ್ಲಾ ಕಾರ್ಯದರ್ಶಿ ಚಿದಂಬರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮುಟ್ಟನಹಳ್ಳಿ ಶಿವಲಿಂಗೇಗೌಡ, ಹಿರಿಯ ಕಾಂಗ್ರೆಸ್ ಮುಖಂಡರಾದ ರಾಮಕೃಷ್ಣ ಸೇರಿದಂತೆ ಗ್ರಾಪಂ ಅಧ್ಯಕ್ಷರು, ಸದಸ್ಯರು, ಮುಖಂಡರು ಸೇರಿದಂತೆ ಹಲವರಿದ್ದರು.

ಅನಾರೋಗ್ಯದಿಂದ ವಿದ್ಯಾರ್ಥಿನಿ ಸಾವು

ಮಂಡ್ಯ, ಏ.16– ಅನಾರೋಗ್ಯದಿಂದ ವಿದ್ಯಾರ್ಥಿನಿಯೊಬ್ಬರು ಚಿಕಿತ್ಸೆ ಫಲಿಸದೆ ಮೃತಪಟ್ಟಿರುವ ಘಟನೆ ನಡೆದಿದೆ.



ನಗರದ ಮಾಂಡವ್ಯ ಎಕ್ಸಲೆನ್ಸ್ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ವರ್ಷಾ(18) ಮೃತ ವಿದ್ಯಾರ್ಥಿನಿ. ನಗರದ ಕಲ್ಲಹಳ್ಳಿ ವಿ.ವಿ.ನಗರದ ನಿವಾಸಿಗಳಾದ ಅನಿತಾ ಹಾಗೂ ಹೇಮಚಂದ್ರು(ಮಂಜು) ಅವರ ಪುತ್ರಿ ವರ್ಷಾ ಪ್ರಸಕ್ತ 2023– 24ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.80ರಷ್ಟು ಅಂಕ ಪಡೆದು ಉತ್ತೀರ್ಣರಾಗಿದ್ದರು. ಇದೇ ತಿಂಗಳ 18ರಂದು ನಡೆಯಲಿರುವ ಸಿಇಟಿ ಪರೀಕ್ಷೆಗೆ ಸಿದ್ಧತೆ ನಡೆಸಿದ್ದರು.

ಕಳೆದ ಮೂರ್‍ನಾಲ್ಕು ದಿನಗಳಿಂದ ಹೊಟ್ಟೆನೋವಿನಿಂದ ಬಳಲುತ್ತಿದ್ದ ವರ್ಷಾ ಅವರನ್ನು ಶನಿವಾರ ನಗರದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಭಾನುವಾರ ಅಪೆಂಡಿಸ್ ಶಸ್ತ್ರ ಚಿಕಿತ್ಸೆ ನಡೆಯಬೇಕಿದ್ದು, ಆ ವೇಳೆ ಹೃದಯಾ ಘಾತ ಸಂಭವಿಸಿ, ತೀವ್ರ ಅಸ್ವಸ್ಥಗೊಂಡಿದ್ದರು.

ತಕ್ಷಣ ಅವರನ್ನು ಮೈಸೂರಿನ ಮಣಿಪಾಲ್ ಆಸ್ಪತ್ರೆಗೆ ದಾಖಲಿಸಿದ್ದು, ಅಲ್ಲಿಯೂ ಹೃದಯ ಸ್ಥಂಭನ ಉಂಟಾಗಿ, ಚಿಕಿತ್ಸೆ ಫಲಿಸದೆ ಸೋಮವಾರ ಮುಂಜಾನೆ ಮೃತಪಟ್ಟರು.

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ರೆಡ್‌ಕ್ರಾಸ್ ಸಂಸ್ಥೆ ನಿರ್ದೇಶಕ ರಂಗಸ್ವಾಮಿ, ಮಾಂಡವ್ಯ ಕಾಲೇಜಿನ ನೂರಾರು ವಿದ್ಯಾರ್ಥಿಗಳು ಸೇರಿದಂತೆ ಹಲವು ಗಣ್ಯರು ಮೃತರ ಅಂತಿಮ ದರ್ಶನ ಪಡೆದರು. ಮೃತರ ಅಂತ್ಯಕ್ರಿಯೆ ಕಲ್ಲಹಳ್ಳಿಯ ಸ್ಮಶಾನದಲ್ಲಿ ಸೋಮವಾರ ಸಂಜೆ ಜರುಗಿತು.

ಮಾಜಿ ಸಚಿವ ಡಿ.ಸಿ.ತಮ್ಮಣ್ಣ ಆರೋಗ್ಯದಲ್ಲಿ ಚೇತರಿಕೆ

ಭಾರತೀನಗರ.ಏ.16– ಲೋಕಸಭಾ ಚುನಾವಣೆ ಪ್ರಚಾರದ ವೇಳೆ ಅನಾರೋಗ್ಯಕ್ಕೆ ಒಳಗಾಗಿ ಆಸ್ಪತ್ರೆ ದಾಖಲಾಗಿದ್ದ



ಮಾಜಿ ಸಚಿವ ಡಿ.ಸಿ. ತಮ್ಮಣ್ಣ ಅವರ ಆರೋಗ್ಯದಲ್ಲಿ ಚೇತರಿಕೆ ಕಂಡುಬಂದಿದೆ.

ಬೆಂಗಳೂರಿನ ಜಯನಗರದ ಅಪೋಲೋ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಡಿ.ಸಿ. ತಮ್ಮಣ್ಣ ತೀವ್ರ ಸುಸ್ತಿನಿಂದ ಬಳಲುತ್ತಿರುವ ಹಿನ್ನೆಲೆಯಲ್ಲಿ ವೈದ್ಯರು ಅವರ ಆರೋಗ್ಯ ತಪಾಸಣೆ ನಡೆಸಿ ಚಿಕಿತ್ಸೆ ನೀಡುತ್ತಿದ್ದಾರೆ. ಸಂಜೆ ವೇಳೆಗೆ ವೈದ್ಯಕೀಯ ವರದಿ ಬರಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

ಅವರ ಆರೋಗ್ಯದಲ್ಲಿ ಚೇತರಿಕೆ ಕಂಡು ಬಂದರೆ ಮುಂದಿನ ಎರಡು ದಿನಗಳಲ್ಲಿ ಅವರನ್ನು ಆಸ್ಪತ್ರೆಯಿಂದ ಡಿಸ್ಚಾರ್ಜ್ ಮಾಡುವ ಸಾಧ್ಯತೆ ಇದೆ. ಲೋಕಸಭಾ ಚುನಾವಣೆ ಮಂಡ್ಯ ಕ್ಷೇತ್ರದ ಜೆಡಿಎಸ್ ಮತ್ತು ಬಿಜೆಪಿ ಮೈತ್ರಿ ಅಭ್ಯರ್ಥಿ ಹೆಚ್.ಡಿ. ಕುಮಾರಸ್ವಾಮಿ ಪರ ಮದ್ದೂರು ಕ್ಷೇತ್ರದಲ್ಲಿ ನಿರಂತರವಾಗಿ ಪ್ರಚಾರ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದ ತಮ್ಮಣ್ಣ ಆರೋಗ್ಯದಲ್ಲಿ ಏರುಪೇರು ಕಂಡು ಬಂದ ಕಾರಣ ವೈದ್ಯರ ಸಲಹೆ ಮೇರೆಗೆ ಅವರನ್ನು ಕಳೆದ ಎರಡು ದಿನಗಳ ಹಿಂದೆ ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು.

ಮದ್ದೂರು ಪುರಸಭೆ ಮಾಜಿ ಸ್ಥಾಯಿ ಸಮಿತಿ ಅಧ್ಯಕ್ಷ ಮಹೇಶ್ ಸೇರಿದಂತೆ ಜೆಡಿಎಸ್ ಪಕ್ಷದ ಅನೇಕ ಮುಖಂಡರು ಆಸ್ಪತ್ರೆಗೆ ಭೇಟಿ ನೀಡಿ ಯೋಗಕ್ಷೇಮ ವಿಚಾರಿಸಿದರು. ಅಲ್ಲದೆ ಸೋಮವಾರ ಅವರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಮುಖಂಡರು ಶುಭಾಶಯ ಕೋರಿದರು. ಶೀಘ್ರವಾಗಿ ಚೇತರಿಸಿಕೊಂಡು ಚುನಾವಣಾ ಪ್ರಚಾರದಲ್ಲಿ ಪಾಲ್ಗೊಳ್ಳುವಂತೆ ಮುಖಂಡರು ಮನವಿ ಮಾಡಿದರು.

ಸ್ಟ್ರಾಂಗ್ ರೂಂಗೆ ಜಿಲ್ಲಾಧಿಕಾರಿ ಭೇಟಿ

ಮಂಡ್ಯ, ಏ.16– ಜಿಲ್ಲಾಧಿಕಾರಿ ಡಾ. ಕುಮಾರ ಇಂದು ಮಂಡ್ಯ ವಿಶ್ವವಿದ್ಯಾಲಯದಲ್ಲಿ ಸ್ಥಾಪಿಸಿರುವ ಸ್ಟ್ರಾಂಗ್ ರೂಂಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್ ಯತೀಶ್, ಉಪವಿಭಾಗಾಧಿಕಾರಿ ಮಹೇಶ್ ಹಾಗೂ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಮನೆಯಿಂದ ಮತದಾನ ಪರಿಶೀಲನೆ



ಮಂಡ್ಯ, ಏ.16– ಮಂಡ್ಯ ಲೋಕಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಇಂದಿನಿಂದ (ಏಪ್ರಿಲ್ 16) ರಿಂದ ಏಪ್ರಿಲ್ 18 ವರೆಗೆ 85 ವರ್ಷ ಹಾಗೂ ಮೇಲ್ಪಟ್ಟವರಿಗೆ ಹಾಗೂ ವಿಕಲಚೇತನರಿಗೆ ಮನೆಯಿಂದ ಮತದಾನ ಪ್ರಕ್ರಿಯೆ ನಡೆಸಲಾಗುತ್ತಿದೆ. ಇಂದು ಜಿಲ್ಲಾಧಿಕಾರಿ ಡಾ. ಕುಮಾರ ಅವರು ಮಂಡ್ಯ ತಾಲೂಕಿನ ಚಿಂದಗಿರಿ ಕೊಪ್ಪಲಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಇದೇ ಸಂದರ್ಭದಲ್ಲಿ ಮಂಡ್ಯ ಉಪವಿಭಾಗಾಧಿಕಾರಿ ಮಹೇಶ್ ಉಪಸ್ಥಿತರಿದ್ದರು.

ಜುಲೈ 13 ರಂದು ರಾಷ್ಟ್ರೀಯ ಲೋಕ್ ಅದಾಲತ್

ಮಂಡ್ಯ, ಏ.16– ಮಂಡ್ಯ ಜಿಲ್ಲೆಯಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ಅನ್ನು ಜುಲೈ 13 ರಂದು ಹಮ್ಮಿಕೊಳ್ಳಲಾಗಿದೆ. ಲೋಕ್ ಅದಾಲತ್ ಮುಖಾಂತರ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ನಿಟ್ಟಿನಲ್ಲಿ ಪೂರ್ವಭಾವಿ ಬೈಠಕ್‌ಗಳನ್ನು ನಡೆಸಿದ್ದು, ಆಸ್ತಿ ವಿವಾದಗಳನ್ನು ಒಳಗೊಂಡಂತೆ ಸಿವಿಲ್ ವ್ಯಾಜ್ಯಗಳು, ಮೋಟಾರು ವಾಹನಗಳ ಪ್ರಕರಣಗಳು, MMRO ಪ್ರಕರಣಗಳು, ರಾಜಿ ಆಗಬಹುದಾದಂತಹ ಕ್ರಿಮಿನಲ್ ಪ್ರಕರಣಗಳನ್ನು ಮತ್ತು ಚೆಕ್ ಬೌನ್ಸ್ ಪ್ರಕರಣಗಳನ್ನು ರಾಜಿಗೆ ತೆಗೆದುಕೊಂಡು ಆಯಾ ನ್ಯಾಯಾಲಯಗಳಲ್ಲಿ ಜನತಾ ನ್ಯಾಯಾಲಯಗಳನ್ನು ಮಾಡಿ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ಪ್ರಯತ್ನ ಮಾಡಲಾಗಿದೆ ಎಂದು ಮಂಡ್ಯ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳಾದ ವಾಣಿ ಎ ಶೆಟ್ಟಿ ತಿಳಿಸಿದ್ದಾರೆ.

ಲೋಕ ಅದಾಲತ್‌ನಲ್ಲಿ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳ ಜೊತೆಗೆ ನ್ಯಾಯಾಲಯಕ್ಕೆ ದಾಖಲಾಗುವ ಮುನ್ನ ಅಂದರೆ ವ್ಯಾಜ್ಯಪೂರ್ವ ಪ್ರಕರಣಗಳು (ಬ್ಯಾಂಕ್ ವಸೂಲಾತಿ ಪ್ರಕರಣಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ಕಾರ್ಮಿಕ ವಿವಾದ ಪ್ರಕರಣಗಳು) ಇಂತಹ ಪ್ರಕರಣಗಳಿಗೆ ಉಭಯ ಪಕ್ಷಗಾರರಿಗೆ ನೋಟಿಸ್ ನೀಡಿ ಕರೆಸಿ ಪ್ರಾಧಿಕಾರದ ವತಿಯಿಂದ ಪೂರ್ವಭಾವಿ ಬೈಠಕ್ ನಡೆಸಿ ಅದಾಲತ್‌ನಲ್ಲಿ ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ. ಇಂತಹ ಪ್ರಕರಣಗಳಿಗೆ ನ್ಯಾಯಾಲಯಕ್ಕೆ ಶುಲ್ಕ ಪಾವತಿಸುವ ಅವಶ್ಯಕತೆ ಇರುವುದಿಲ್ಲ ವಕೀಲರ ಮುಖಾಂತರ ಅಥವಾ ಖುದ್ದಾಗಿ ಪ್ರಾಧಿಕಾರಕ್ಕೆ ಭೇಟಿ ನೀಡಿ ಪ್ರಕರಣವನ್ನು ರಾಜಿಮಾಡಿಕೊಳ್ಳಬಹುದಾಗಿರುತ್ತದೆ.

ಕಳೆದ ಲೋಕ್ ಅದಾಲತ್‌ನಲ್ಲಿ 51468 ಪ್ರಕರಣ ಇತ್ಯರ್ಥ: ಕಳೆದ ಬಾರಿ ಮಾರ್ಚ್ 16 ರಂದು ನಡೆದ ಲೋಕ್ ಅದಾಲತ್ ನಲ್ಲಿ 51,468 ಪ್ರಕರಣಗಳು ಇತ್ಯರ್ಥವಾಗಿದ್ದು, ಅದರಲ್ಲಿ ನ್ಯಾಯಾಲಯದಲ್ಲಿ ಬಾಕಿ ಇದ್ದ ಪ್ರಕರಣಗಳಲ್ಲಿ 4261 ಪ್ರಕರಣಗಳು ಹಾಗೂ 47207 ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಎಲ್ಲಾ ನ್ಯಾಯಾಲಯದ ಗೌರವಾನ್ವಿತ ನ್ಯಾಯಾಧೀಶರುಗಳು, ವಕೀಲರು, ಪಕ್ಷಗಾರರು, ಅಭಿಯೋಜಕರು, ಪೋಲಿಸ್ ಇಲಾಖೆಯವರುಗಳ ಸಹಯೋಗದೊಂದಿಗೆ ಇತ್ಯರ್ಥಪಡಿಸುವಲ್ಲಿ ಯಶಸ್ವಿಯಾಗಿದ್ದೇವೆ.

ಈ ಬಾರಿಯ ಲೋಕ್ ಅದಾಲತ್ ನಲ್ಲಿಯೂ ಸಹ ಇನ್ನು ಹೆಚ್ಚಿನ ಪ್ರಕರಣಗಳನ್ನು ಇತ್ಯರ್ಥಪಡಿಸಿ ಜನ ಸಾಮಾನ್ಯರಿಗೆ ಅನುಕೂಲವಾಗುವ ರೀತಿಯಲ್ಲಿ ನ್ಯಾಯದಾನ ಮಾಡಬೇಕೆಂಬ ಇಚ್ಛೆಯಿಂದ ಪ್ರಕರಣಗಳನ್ನು ತೆಗೆದುಕೊಂಡಿದ್ದು, ಜನ ಸಾಮಾನ್ಯರು ಇದರ ಸದುಪಯೋಗವನ್ನು ಪಡೆದುಕೊಂಡು ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಪ್ರಕರಣ ನಡೆಯುತ್ತಿರುವ ನ್ಯಾಯಾಲಯಕ್ಕೆ ಪ್ರಕರಣ ರಾಜಿ ಮಾಡಿಕೊಳ್ಳುವ ಕುರಿತು ತಿಳಿಸುವ ಮೂಲಕ ಅಥವಾ ಅರ್ಜಿಸಲ್ಲಿಸುವ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬೇಕೆಂದು ಮಂಡ್ಯ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳಾದ ವಾಣಿ ಎ ಶೆಟ್ಟಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಪರಿಚಿತ ಶವ ಪತ್ತೆ



ಪಾಂಡವಪುರ, ಏ.16– ತಾಲೂಕಿನ ದೊಡ್ಡ ಬ್ಯಾಡರಹಳ್ಳಿ ರೈಲು ನಿಲ್ದಾಣದ ಬಳಿ ಅಪರಿಚಿತ ವ್ಯಕ್ತಿಯೊಬ್ಬ ಮೃತಪಟ್ಟಿದ್ದು, ಮೃತ ವ್ಯಕ್ತಿ ತಿಳಿ ಹಸಿರು ಬಣ್ಣದ ಚೆಡ್ಡಿ, ಕೆಂಪು ನೀಲಿ ಬಿಳಿ ಗೆರೆ ಇರುವ ತುಂಬುತೋಳಿನ ಶರ್ಟ್ ಧರಿಸಿದ್ದಾನೆ. ವಾರಸುದಾರರು ಪಾಂಡವಪುರ ಪೊಲೀಸ್ ಠಾಣೆ(ದೂ: 08236/255132) ಇಲ್ಲಿಗೆ ಮೃತನ ವಾರಸುದಾರರಿದ್ದಲ್ಲಿ ಕೂಡಲೇ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

ಮೂರನೇ ಪುಟದಿಂದ

ಹಿರಿಯ ನಟ, ನಿರ್ಮಾಪಕ, ನಿರ್ದೇಶಕ ದ್ವಾರಕೀಶ್ ಇನ್ನಿಲ್ಲ

ಎಚ್ಚರಿಸಲು ಹೋದೆ. ಅಲುಗಾಡಲೇ ಇಲ್ಲ. ಆತಂಕದಲ್ಲಿ ಅವರ ಪಲ್ಸ್(ನಾಡಿ ಮಿಡಿತ) ನೋಡಿದೆ. ಆದರೆ ಪಲ್ಸ್ ಸಿಗಲಿಲ್ಲ. ಮೈ ತಣ್ಣಗಾದಂತೆ ಭಾವಿಸಿತು. ಕೂಡಲೇ ವೈದ್ಯರಿಗೆ ತಿಳಿಸಿದೆವು. ವೈದ್ಯರು ಆಗಮಿಸಿ ಸಾಕಷ್ಟು ಪರೀಕ್ಷೆ, ಪ್ರಯತ್ನ ನಡೆಸಿ ಬೆಳಗ್ಗೆ 11 ಗಂಟೆ ಸುಮಾರಿಗೆ ಹೃದಯಾಘಾತದಿಂದ ನಿಧನರಾಗಿದ್ದಾಗಿ ಖಚಿತಪಡಿಸಿದರು ಎಂದು ದ್ವಾರಕೀಶ್ ಪುತ್ರ ಯೋಗೀಶ್ ತಿಳಿಸಿದ್ದಾರೆ.

ಅಂತಿಮ ದರ್ಶನ: ಚಿತ್ರರಂಗದ ಹಲವು ಗಣ್ಯರು, ಕಲಾವಿದರು ದ್ವಾರಕೀಶ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದು, ಅವರೊಂದಿಗಿನ ಒಡನಾಟ ನೆನೆದು ಕಂಬನಿ ಮಿಡಿದರು. ಬುಧವಾರ ಬೆಳಗ್ಗೆ 7.30ರಿಂದ ರವೀಂದ್ರ ಕಲಾಕ್ಷೇತ್ರದ ಆವರಣದಲ್ಲಿ ದ್ವಾರಕೀಶ್ ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ಅನುವು ಮಾಡಿಕೊಟ್ಟು ನಂತರ ಚಾಮರಾಜಪೇಟೆ ಟಿಆರ್ ಮಿಲ್‌ನ ಚಿತಾಗಾರದಲ್ಲಿ ಬೆಳಗ್ಗೆ 11.30ಕ್ಕೆ ಅಂತಿಮ ಸಂಸ್ಕಾರ ನೆರವೇರಿಸಲಾಗುವುದು ಎಂದು ಕುಟುಂಬದವರು ಮಾಹಿತಿ ನೀಡಿದ್ದಾರೆ.

ಬಹುಮುಖ ಪ್ರತಿಭೆ: ಮೈಸೂರು ಜಿಲ್ಲೆ ಹುಣಸೂರಿನ ಶಾಮರಾವ್ ಹಾಗೂ ಜಯಮ್ಮ ದಂಪತಿ ಪುತ್ರರಾಗಿ ಜನಿಸಿದ ದ್ವಾರಕೀಶ್, ಮೈಸೂರಿನಲ್ಲಿ ಶಿಕ್ಷಣ ಮುಗಿಸಿದ ನಂತರ ಸೋದರ ಮಾವ ಹುಣಸೂರು ಕೃಷ್ಣಮೂರ್ತಿ ಸಹಕಾರದೊಂದಿಗೆ ಸಿನಿಮಾ ಕ್ಷೇತ್ರ ಪ್ರವೇಶಿಸಿದರು. 'ವೀರ ಸಂಕಲ್ಪ' ಚಿತ್ರದ ಮೂಲಕ ಬಣ್ಣ ಹಚ್ಚಿ ನಟನೆಗಿಳಿದ ದ್ವಾರಕೀಶ್, ಹಾಸ್ಯ ಹಾಗೂ ಗಂಭೀರ ಪಾತ್ರಗಳನ್ನು ಮಾಡಿದ್ದಾರೆ. ಮುಖ್ಯಪಾತ್ರ ಹಾಗೂ ಪೋಷಕ ಪಾತ್ರಗಳಲ್ಲೂ ಮಿಂಚಿದ್ದಾರೆ. 'ಪರೋಪಕಾರಿ', 'ಸತ್ಯ ಹರಿಶ್ಚಂದ್ರ', 'ಕ್ರಾಂತಿ ವೀರ', 'ಮೇಯರ್ ಮುತ್ತಣ್ಣ', 'ದೂರದ ಬೆಟ್ಟ', 'ಗಾಂಧೀನಗರ', 'ಬಾಳು ಬೆಳಗಿತು', 'ಬಂಗಾರದ ಮನುಷ್ಯ', 'ಬಹದ್ದೂರ್ ಗಂಡು' ಹೀಗೆ ಹಲವು ಸಿನಿಮಾಗಳಲ್ಲಿ ಡಾ. ರಾಜ್‌ಕುಮಾರ್ ಜೊತೆ ದ್ವಾರಕೀಶ್ ನಟಿಸಿದ್ದರು. ದೈಹಿಕ ಕುಬ್ಜತೆಯನ್ನೇ ಸಾಧನೆ ಮೆಟ್ಟಿಲಾಗಿಸಿಕೊಂಡರು. ತಾವೇ 'ಕರ್ನಾಟಕದ ಕುಳ್ಳ' ಎಂದು ಹೇಳಿಕೊಂಡು ಹಲವು ಸಿನಿಮಾ ಶೀರ್ಷಿಕೆಗಳಲ್ಲಿ ಕುಳ್ಳ ಎಂಬುದನ್ನು ಸೇರಿಸಿದ್ದಾರೆ.

ಕೇವಲ ನಟ, ಹಾಸ್ಯ ಕಲಾವಿದನಾಗಿ ಮಾತ್ರ ಉಳಿಯದೆ 'ಮೇಯರ್ ಮುತ್ತಣ್ಣ' ಚಿತ್ರದ ಮೂಲಕ ನಿರ್ಮಾಣದಲ್ಲೂ ಗೆಲುವಿನ ನಗೆ ಬೀರಿದರು. ತಾವೇ ನಿರ್ಮಿಸಿದ 'ಕುಳ್ಳ ಏಜೆಂಟ್ 000' ಸಿನಿಮಾದಲ್ಲಿ ನಾಯಕ ನಟರಾಗಿ ಮಿಂಚಿದರು. ಬಳಿಕ ವಿಷ್ಣುವರ್ಧನ್ ಜೊತೆಗೆ ಹಲವು ಸಿನಿಮಾ ಮಾಡಿದರು. ಇಬ್ಬರ ನಡುವೆ ಸಾಕಷ್ಟು ಬಾರಿ ಮುನಿಸು ಬಂದರೂ 18 ವರ್ಷಗಳ ಬಳಿಕ ಮತ್ತೆ 'ಆಪ್ತಮಿತ್ರ' ಚಿತ್ರದ ಮೂಲಕ ಒಂದಾದರು. ಆ ಚಿತ್ರದ ಗೆಲುವು ದ್ವಾರಕೀಶ್ ಅವರಿಗೆ ಪುನರ್ಜನ್ಮ ನೀಡಿದ್ದನ್ನು ಅವರೇ ಹೇಳಿಕೊಂಡಿದ್ದರು. ಸೂಪರ್ ಸ್ಟಾರ್ ರಜನಿಕಾಂತ್ ಅವರೂ ಕೂಡ ದ್ವಾರಕೀಶ್ ಅವರ ಆತ್ಮೀಯ ಗೆಳೆಯರು.

ದ್ವಾರಕೀಶ್ ಕನ್ನಡ ಸಿನಿಮಾಗಳನ್ನು ವಿದೇಶಗಳಲ್ಲಿ ನಿರ್ಮಿಸುವ ಕನಸು ಕಂಡಿದ್ದು, 'ಸಿಂಗಾಪುರದಲ್ಲಿ ರಾಜಾಕುಳ್ಳ' ಮತ್ತು 'ಆಫ್ರಿಕಾದಲ್ಲಿ ಶೀಲ' ಅದ್ಭುತ ಸಿನಿಮಾಗಳ ಪ್ರಯತ್ನ ಮಾಡಿದ್ದರು. ಕಿಶೋರ್ ಕುಮಾರ್ ಅಂತಹ ಗಾಯಕನನ್ನು ಕನ್ನಡ ಸಿನಿರಂಗಕ್ಕೆ ಪರಿಚಯಿಸಿದರು. 'ಡ್ಯಾನ್ಸ್ ರಾಜಾ ಡ್ಯಾನ್ಸ್' ಮೂಲಕ ವಿನೋದ್ ರಾಜ್ ಪ್ರತಿಭೆಯನ್ನು ಪರಿಚಯಿಸಿದರು. ಸುನಿಲ್, ಶ್ರುತಿ ಅವರಂತಹ ಹಲವು ಪ್ರತಿಭೆಗಳನ್ನು ಚಿತ್ರರಂಗಕ್ಕೆ ಪರಿಚಯಿಸಿದ ಕೀರ್ತಿ ದ್ವಾರಕೀಶ್ ಅವರಿಗಿದೆ. ದ್ವಾರಕೀಶ್ ಇತ್ತೀಚಿನ 'ಆಟಗಾರ', 'ಚೌಕ', 'ಅಮ್ಮ ಐ ಲವ್ ಯು' ಸೇರಿದಂತೆ 50ಕ್ಕೂ ಅಧಿಕ ಚಿತ್ರಗಳನ್ನು ನಿರ್ಮಾಣ ಮಾಡಿದ್ದರು. ಇಲ್ಲಿಯವರೆಗೂ 100ಕ್ಕೂ ಅಧಿಕ ಸಿನಿಮಾಗಳಲ್ಲಿ ನಟಿಸಿದ್ದು, 17ಕ್ಕೂ ಹೆಚ್ಚು ಚಿತ್ರಗಳನ್ನು ನಿರ್ದೇಶಿಸಿದ್ದಾರೆ. ಇವರ ನಿಧನಕ್ಕೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್ ಸೇರಿದಂತೆ ರಾಜಕೀಯ ಹಾಗೂ ಚಿತ್ರರಂಗದ ಗಣ್ಯರು ಸಂತಾಪ ಸೂಚಿಸಿದ್ದಾರೆ.

ದ್ವಾರಕೀಶ್ ಆದ ಬಂಗಲೆ ಶಾಮ ರಾವ್ ದ್ವಾರಕನಾಥ್

ಕನ್ನಡ ಚಿತ್ರರಂಗದ ಪ್ರಚಂಡ ಕುಳ್ಳ ಎಂದೇ ಖ್ಯಾತಿ ಗಳಿಸಿದ ದ್ವಾರಕೀಶ್ ಅವರ ಪೂರ್ಣ ಹೆಸರು ಬಂಗ್ಲೆ ಶಾಮ ರಾವ್ ದ್ವಾರಕನಾಥ್. ಹಾಸ್ಯ ನಟರಾಗಿ, ನಿರ್ಮಾಪಕರಾಗಿ, ಹಲವಾರು ಭಾಷೆಯಲ್ಲಿ ನಟಿಸಿರುವ ಇವರಿಗೆ ದ್ವಾರಕೀಶ್ ಎಂದು ಹೆಸರು ಇಟ್ಟಿದ್ದು ಬೇರೆ ಯಾರೂ ಅಲ್ಲ ಕನ್ನಡ ಚಿತ್ರ ನಿರ್ಮಾಪಕ, ನಿರ್ದೇಶಕ ಸಿ.ವಿ.ಶಿವಶಂಕರ್. ಹಲವಾರು ವರ್ಷಗಳಿಂದ ಕನ್ನಡ ಚಿತ್ರರಂಗದಲ್ಲಿ ಗಣನೀಯ ಸೇವೆ ಸಲ್ಲಿಸಿದ ದ್ವಾರಕೀಶ್ ಅವರ ಸಾಧನೆಯನ್ನು ಪರಿಗಣಿಸಿ ಬೆಂಗಳೂರು ವಿಶ್ವವಿದ್ಯಾನಿಲಯವು ಗೌರವ ಡಾಕ್ಟರೇಟ್ ನೀಡಿ, ಗೌರವಿಸಿದೆ.

ಮೈಸೂರಿಂದ ಹೋಗಿ ಬೆಂಗಳೂರಲ್ಲಿ ಬೆಳೆದ 'ಕನ್ನಡದ ಪ್ರಚಂಡ ಕುಳ್ಳ'

ಹೋಗುವುದು ಅಷ್ಟು ಇಷ್ಟವಿರಲಿಲ್ಲ. ಹಾಗಾಗಿ ಅವರ ಅಣ್ಣ ಮೈಸೂರಿನ ಗಾಂಧಿ ವೃತ್ತದಲ್ಲಿ ಪ್ರಾರಂಭಿಸಿದ್ದ 'ಭಾರತ್ ಆಟೋ ಸ್ಪೇರ್ ಸ್ಟೋರ್'ನಲ್ಲಿ ದ್ವಾರಕೀಶ್ ಕೂಡ ಕೆಲಸ ಮಾಡಿಕೊಂಡಿದ್ದರು.

ಆದರೆ ದ್ವಾರಕೀಶ್ ಅವರಲ್ಲಿ ಸಿನಿಮಾ ಪ್ರೀತಿ ದಿನೇ ದಿನೆ ಹೆಚ್ಚಾಯಿತು. ಹೇಗಾದರೂ ಮಾಡಿ ನಾನು ಚಿತ್ರರಂಗಕ್ಕೆ ಹೋಗಬೇಕೆಂಬ ಪ್ರಯತ್ನ ಮುಂದುವರೆಸಿದ್ದರು. ಸೋದರಮಾವ ಹುಣಸೂರು ಕೃಷ್ಣಮೂರ್ತಿ ಅವರ ಬೆನ್ನುಬಿದ್ದು ಸಿನಿಮಾದಲ್ಲಿ ಪಾತ್ರ ನೀಡುವಂತೆ ಒತ್ತಡ ಹೇರಲಾರಂಭಿಸಿದರು. ಈ ಮೊದಲು ಓದು ಮುಗಿಸಿಕೊಂಡು ಬಾ ಎಂದು ಹೇಳಿದ್ದ ಸೋದರಮಾವ, 1964ರಲ್ಲಿ ತೆರೆಕಂಡ 'ವೀರ ಸಂಕಲ್ಪ' ಸಿನಿಮಾದಲ್ಲಿ ಅವಕಾಶ ಕೊಡಿಸಿದರು. ನಟನೆಯಲ್ಲಿ ಆಸಕ್ತಿ, ಶಿಸ್ತು, ಬದ್ಧತೆ ಇದ್ದ ದ್ವಾರಕೀಶ್ ಸಾಲು ಸಾಲು ಚಿತ್ರಗಳಲ್ಲಿ ಅಭಿನಯಿಸಿದರು. ಹಾಸ್ಯ ಪಾತ್ರವಷ್ಟೇ ಅಲ್ಲದೆ ಗಂಭೀರ ಪಾತ್ರಗಳನ್ನೂ ಅಚ್ಚುಕಟ್ಟಾಗಿ ನಿಭಾಯಿಸಿದರು. ನಟನೆ ಜೊತೆಗೆ ನಿರ್ದೇಶನ, ನಿರ್ಮಾಣದಲ್ಲೂ ಸೈ ಎನಿಸಿಕೊಂಡರು. ಡಾ.ರಾಜ್‌ಕುಮಾರ್, ವಿಷ್ಣುವರ್ಧನ್ ಇನ್ನಿತರ ದಿಗ್ಗಜರೊಂದಿಗೆ ತೆರೆ ಹಂಚಿಕೊಂಡರು. ಸ್ಟಾರ್ ನಟರ ಸಿನಿಮಾಗಳನ್ನು ನಿರ್ಮಿಸುವುದರ ಜೊತೆಗೆ ಹೊಸ ನಾಯಕ–ನಾಯಕಿಯರನ್ನು ಚಿತ್ರರಂಗಕ್ಕೆ ಪರಿಚಯಿಸಿದರು.

ಮೈಸೂರಿನಲ್ಲಿ ಓಡಾಡಿಕೊಂಡಿದ್ದ ದ್ವಾರಕೀಶ್ ಅವರ ಬದುಕು ಚಿತ್ರರಂಗ ಪ್ರವೇಶದೊಂದಿಗೆ ಹೊಸ ದಿಕ್ಕು ಪಡೆಯಿತು. ಮೈಸೂರಿನಲ್ಲಿ ಅವರು ಆಸ್ತಿ–ಪಾಸ್ತಿ ಮಾಡದಿದ್ದರೂ ಇಲ್ಲಿನ ನಂಟನ್ನು ಕಡಿದುಕೊಂಡಿರಲಿಲ್ಲ. ಪ್ರಿಮಿಯರ್ ಸ್ಟುಡಿಯೋದಲ್ಲಿ ಸಿನಿಮಾ ಚಿತ್ರೀಕರಣ ಮಾಡಲೆಂದು ಆಗಾಗ್ಗೆ ಮೈಸೂರಿಗೆ ಬಂದು ಹೋಗುತ್ತಿದ್ದರು. ಅಲ್ಲದೆ ಹಲವು ಸಿನಿಮಾಗಳ ಹೊರಾಂಗಣ ಚಿತ್ರೀಕರಣವನ್ನೂ ಮೈಸೂರಿನಲ್ಲಿ ನಡೆಸಿದ್ದಾರೆ. ಮೈಸೂರಿನ ಶೈಲಜಾ ಅವರೊಂದಿಗೆ ದ್ವಾರಕೀಶ್ ಎರಡನೇ ವಿವಾಹವಾಗಿದ್ದು, ಈ ಬಗ್ಗೆ ಸಂದರ್ಶನಗಳಲ್ಲಿ ಅವರೇ ತಿಳಿಸಿದ್ದಾರೆ. ಒಟ್ಟಾರೆ ಸಿನಿಮಾ ರಂಗದಲ್ಲಿ ಸೋಲು–ಗೆಲುವು, ಲಾಭ–ನಷ್ಟ ಎಲ್ಲವನ್ನೂ ಎದುರಿಸಿದ ದ್ವಾರಕೀಶ್, ಕಡೇವರೆಗೂ ಸಿನಿಮಾ ಒಡನಾಟ ಹೊಂದಿದ್ದರು.

ಹಾದಿ ಮರೆತಿರಲಿಲ್ಲ: ಮೈಸೂರಿನ ರಂಗಕರ್ಮಿ ರಾಜಶೇಖರ ಕದಂಬ ಅವರು ದ್ವಾರಕೀಶ್ ಅವರ ಸ್ನೇಹಿತ. ಸಿಪಿಸಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಡಿಪ್ಲೋಮಾ ಓದುವಾಗ ದ್ವಾರಕೀಶ್ ನನಗಿಂತ ಒಂದು ವರ್ಷ ಸೀನಿಯರ್ ಆಗಿದ್ದರು. ಎಲ್ಲರೊಂದಿಗೆ ಆತ್ಮೀಯವಾಗಿದ್ದರು. ಸಿನಿಮಾ ರಂಗದಲ್ಲಿ ಜನಪ್ರಿಯರಾದ ನಂತರವೂ ನಮ್ಮ ಕದಂಬ ರಂಗ ವೇದಿಕೆ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಪ್ರೋತ್ಸಾಹಿಸಿದ್ದರು. ನಡೆದು ಬಂದ ಹಾದಿಯನ್ನು ನೆನಪಿಸಿಕೊಳ್ಳುತ್ತಿದ್ದರು. ಅವರು ಮಂತ್ರಾಲಯದ ರಾಘವೇಂದ್ರ ಸ್ವಾಮಿಗಳ ಪರಮ ಭಕ್ತರಾಗಿದ್ದರು ಎಂದು ರಾಜಶೇಖರ ಕದಂಬ ಹೇಳಿದ್ದಾರೆ.

ರಾಜಕಾರಣದಲ್ಲೂ ಅದೃಷ್ಟ ಪರೀಕ್ಷೆ

ಸಿನಿಮಾ ರಂಗದಲ್ಲಿ ಜನಪ್ರಿಯರಾಗಿದ್ದ ದ್ವಾರಕೀಶ್, ರಾಜಕಾರಣದಲ್ಲೂ ಅದೃಷ್ಟ ಪರೀಕ್ಷೆ ನಡೆಸಿದ್ದರು. ವಿಜಯ ಸಂಕೇಶ್ವರ ಅವರು ಕಟ್ಟಿದ್ದ 'ಕನ್ನಡ ನಾಡು ಪಾರ್ಟಿ' ಸಂಘಟನೆಯಲ್ಲಿ ತೊಡಗಿದ್ದ ದ್ವಾರಕೀಶ್, 2004ರ ವಿಧಾನಸಭಾ ಚುನಾವಣೆಯಲ್ಲಿ ಹುಣಸೂರು ಕ್ಷೇತ್ರದಿಂದ 'ಕನ್ನಡ ನಾಡು ಪಾರ್ಟಿ' ಅಭ್ಯರ್ಥಿಯಾಗಿ ಸ್ಪರ್ಧಿಸಿ, ಪರಾಜಿತರಾದರು. ಜೆಡಿಎಸ್‌ನಿಂದ ಸ್ಪರ್ಧಿಸಿದ್ದ ಜಿ.ಟಿ.ದೇವೇಗೌಡರು 60,258 ಮತಗಳಿಂದ ಗೆಲುವು ಸಾಧಿಸಿದರು.

ಲೋಕಸಭಾ ಚುನಾವಣೆಯಲ್ಲಿ ಸಿಎಂ ಸಿದ್ದರಾಮಯ್ಯರ ಬೆನ್ನಿಗೆ ನಿಲ್ಲಲು ಕುರುಬರ ಸಂಘ ನಿರ್ಧಾರ

ಮೈಸೂರು, ಏ.16(ಎಂಟಿವೈ)– ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಬೆಂಬಲಿಸುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಕೈ ಬಲಪಡಿಸಲು ಕುರುಬರ ಸಂಘ ನಿರ್ಧರಿಸಿದೆ.

ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ಕನಕ ಭವನದಲ್ಲಿ ಮೈಸೂರು–ಕೊಡಗು, ಮಂಡ್ಯ ಹಾಗೂ ಚಾಮರಾಜನಗರ ಲೋಕಸಭಾ ಕ್ಷೇತ್ರಗಳ ಕುರುಬ ಸಮುದಾಯದ ಮುಖಂಡರ ಜಾಗೃತಿ ಸಭೆಯಲ್ಲಿ ಈ ನಿರ್ಣಯವನ್ನು ಒಕ್ಕೊರಲಿನಿಂದ ಅಂಗೀಕರಿಸಲಾಯಿತು.

ಸಿದ್ದರಾಮಯ್ಯರ ಶಕ್ತಿ ಹೆಚ್ಚಿಸೋಣ: ಕರ್ನಾಟಕ ಪ್ರದೇಶ ಕುರುಬರ ಸಂಘದ ಮಾಜಿ ಅಧ್ಯಕ್ಷರಾದ ಬಿ.ಸುಬ್ರಹ್ಮಣ್ಯ ಮಾತನಾಡಿ, ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಹಳೇ ಮೈಸೂರು ಭಾಗದ ನಾಲ್ಕು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಗೆಲ್ಲಿಸುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಶಕ್ತಿ ಹೆಚ್ಚಿಸಬೇಕು. ಸಿದ್ದರಾಮಯ್ಯನವರು ಸಿಎಂ ಆದ ನಂತರದಲ್ಲಾದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಜನರಿಗೆ ತಿಳಿಸಬೇಕು. ಸಾವಿರಾರು ಕೋಟಿ ರೂ.ಗಳಲ್ಲಿ ಸಮುದಾಯ ಭವನ, ವಿದ್ಯಾರ್ಥಿ ನಿಲಯ ಹಾಗೂ ಸಮುದಾಯದ ಮಠದ ಅಭಿವೃದ್ಧಿಗೆ ಸಾಕಷ್ಟು ಅನುದಾನ ನೀಡಿರುವುದನ್ನು ಸ್ಮರಿಸಿಕೊಂಡು ಕೆಲಸ ಮಾಡಬೇಕು ಎಂದು ಕರೆ ನೀಡಿದರು.


ಕೇವಲ ಕುರುಬ ಸಮುದಾಯ ಮಾತ್ರವಲ್ಲದೆ ಎಲ್ಲಾ ಶೋಷಿತ ಸಮುದಾಯದವರನ್ನೂ ಭೇಟಿ ಮಾಡಿ, ಕಾಂಗ್ರೆಸ್‌ಗೆ ಮತ ನೀಡುವಂತೆ ಮನವಿ ಮಾಡಿ. ಸಿಎಂ ಸಿದ್ದರಾಮಯ್ಯನವರು ಜಾತ್ಯಾತೀತವಾಗಿ ಐದು ಗ್ಯಾರಂಟಿಗಳನ್ನು ನೀಡಿರುವುದರಿಂದ ಬರ ಪರಿಸ್ಥಿತಿಯಲ್ಲೂ ಜನರು ನೆಮ್ಮದಿಯಿಂದ ಇರುವಂತಾಗಿದೆ. ನಮ್ಮ ಸಮಾಜದ ಏಳಿಗೆಗೆ ರಾಜಕೀಯ ಬಲ ಅಗತ್ಯವಾಗಿದೆ.ಈ ನಿಟ್ಟಿನಲ್ಲಿ ಸಿದ್ದರಾಮಯ್ಯನವರ ಕೈ ಬಲಪಡಿಸಲು ಈ ಜಾಗೃತಿ ಸಮಾವೇಶವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

ನಿಸ್ವಾರ್ಥ ರಾಜಕಾರಣಿ: ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮಾತನಾಡಿ, ಈ ಬಾರಿಯ ಲೋಕಸಭಾ ಚುನಾವಣೆ ಧರ್ಮ ಮತ್ತು ಅಧರ್ಮದ ನಡುವಿನ ಹೋರಾಟವಾಗಿದೆ. ಸುಳ್ಳು, ಅಧರ್ಮ ಹೆಚ್ಚು ಕಾಲ ಉಳಿಯುವುದಿಲ್ಲ. ಧರ್ಮಕ್ಕೆ ಅಂತಿಮವಾಗಿ ಜಯ ದೊರಕುತ್ತದೆ ಎಂಬ ವಿಶ್ವಾಸ ನಮಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ರಾಜಕೀಯ ಜೀವನದುದ್ದಕ್ಕೂ ನಿಸ್ವಾರ್ಥ ರಾಜಕಾರಣದ ಮೂಲಕ ಸಮಾಜಮುಖಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಅವರು ಸ್ವಜಾತಿ ಪ್ರೇಮ ಮೆರೆಯದೆ ಹಿಂದುಳಿದ ವರ್ಗ, ಅತೀ ಹಿಂದುಳಿದ ಸಮುದಾಯಗಳ ಸರ್ವತೋಮುಖ ಅಭಿವೃದ್ಧಿಗಾಗಿ ಯೋಜನೆಗಳನ್ನು ರೂಪಿಸಿದ್ದಾರೆ. ತಮ್ಮ ಸಚಿವ ಸಂಪುಟದಲ್ಲಿಯೂ ಬಸವಣ್ಣನವರ ಅನುಭವ ಮಂಟಪದ ರೀತಿ ಎಲ್ಲಾ ಜಾತಿ, ಧರ್ಮಗಳನ್ನು ಒಟ್ಟಿಗೆ ತೆಗೆದುಕೊಂಡು ತಮ್ಮ ಆಡಳಿತವನ್ನು ನಡೆಸುತ್ತಿದ್ದಾರೆ ಎಂದರು.

ಮೊದಲ ಬಾರಿ ಸಿಎಂ ಆದಾಗ ಮಹತ್ವದ ಅನ್ನಭಾಗ್ಯ ಯೋಜನೆ ಜಾರಿಗೊಳಿಸಿದ ಸಿದ್ದರಾಮಯ್ಯನವರು ಈ ಬಾರಿ ಗೃಹಲಕ್ಷ್ಮೀ ಯೋಜನೆ ಮೂಲಕ ಕುಟುಂಬದ ಓರ್ವ ಮಹಿಳೆಗೆ ಮಾಸಿಕ 2 ಸಾವಿರ ನೆರವು, ಗೃಹಜ್ಯೋತಿ ಮೂಲಕ ಎಲ್ಲರಿಗೂ ಉಚಿತ ವಿದ್ಯುತ್, ಶಕ್ತಿ ಯೋಜನೆ ಮೂಲಕ ಎಲ್ಲಾ ಮಹಿಳೆಯರಿಗೆ ಸಾರಿಗೆ ಬಸ್‌ನಲ್ಲಿ ಉಚಿತ ಪ್ರಯಾಣ, ಪದವೀಧರರು ಹಾಗೂ ಐಟಿಐ–ಡಿಪ್ಲೊಮಾದಾರರಿಗೆ ನಿರುದ್ಯೋಗ ಭತ್ಯೆ ಕಲ್ಪಿಸಿದ್ದಾರೆ. ಈ ಬಾರಿ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಬೆಂಬಲ ನೀಡುವ ಮೂಲಕ ಸಿದ್ದರಾಮಯ್ಯನವರ ಕೈ ಬಲಪಡಿಸೋಣ ಎಂದು ಹೇಳಿದರು.

ದೇಶದಲ್ಲೇ ಮಹಾನ್ ಕೊಡುಗೆ: ಶಾಸಕ ಡಿ.ರವಿಶಂಕರ್ ಮಾತನಾಡಿ, ದೇಶದಲ್ಲೇ ಅತ್ಯುತ್ತಮ ಯೋಜನೆ ಹಾಗೂ ಕಾರ್ಯಕ್ರಮ ಜಾರಿಗೊಳಿಸಿದ ಸರ್ಕಾರ ಎಂಬ ಹೆಗ್ಗಳಿಕೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಪಾತ್ರವಾಗಿದೆ ಎಂದು ಬಣ್ಣಿಸಿ, ಕಾಂಗ್ರೆಸ್ ಅಭ್ಯರ್ಥಿಗಳನ್ನು ಬೆಂಬಲಿಸಲು ಮನವಿ ಮಾಡಿದರು.

ಸಭೆಯಲ್ಲಿ ಸಂಘದ ಮಂಡ್ಯ ಜಿಲ್ಲಾಧ್ಯಕ್ಷ ಸುರೇಶ್, ಚಾಮರಾಜನಗರ ಜಿಲ್ಲಾಧ್ಯಕ್ಷ ನಂಜೇಗೌಡ, ಚಾ.ನಗರ ತಾಲೂಕು ಉಮೇಶ್, ಪಾಲಿಕೆ ಮಾಜಿ ಸದಸ್ಯ ಜೆ.ಗೋಪಿ, ಮುಖಂಡರಾದ ದೊಳ್ಳೇಗೌಡ, ಕೆ.ಎಸ್.ಶಿವರಾಮ್, ಕುನ್ನೇಗೌಡ, ರವಿತೇಜ, ಶಿವಣ್ಣ, ಗಣೇಶ್, ಆನಂದ್, ಕೆಂಪಣ್ಣ, ಮಹೇಶ್, ಬಸವರಾಜು, ಕಾಡನಹಳ್ಳಿ ಸ್ವಾಮೀಗೌಡ, ಕುರುಬಾರಹಳ್ಳಿ ಪ್ರಕಾಶ್, ಪವನ್ ಸಿದ್ದರಾಮ, ಕಮಲಾ ಅನಂತರಾಮು, ಛಾಯಾ ಇನ್ನಿತರರು ಉಪಸ್ಥಿತರಿದ್ದರು.



ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ಕನಕ ಭವನದಲ್ಲಿ ಮೈಸೂರು, ಮಂಡ್ಯ, ಕೊಡಗು ಹಾಗೂ ಚಾಮರಾಜನಗರ ಜಿಲ್ಲೆಗಳ ಕುರುಬ ಸಮುದಾಯ ಮುಖಂಡರ ಜಾಗೃತಿ ಸಭೆಯನ್ನು ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಉದ್ಘಾಟಿಸಿದರು.

ಕೆಕೆಆರ್ ವಿರುದ್ಧ ಆರ್‌ಆರ್‌ಗೆ ಭರ್ಜರಿ ಜಯ




ಕೋಲ್ಕತ್ತಾ, ಏ.16– ಜೋಸ್ ಬಟ್ಲರ್ ಅವರ ಅಮೋಘ ಶತಕದ ನೆರವಿನಿಂದ ರಾಜಸ್ಥಾನ ರಾಯಲ್ಸ್ ಕೋಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ 2 ವಿಕೆಟ್‌ಗಳ ಜಯ ಸಾಧಿಸಿದೆ. ಆ ಮೂಲಕ ಅಂಕಪಟ್ಟಿಯಲ್ಲಿ ಆಡಿರುವ 7 ಪಂದ್ಯಗಳಲ್ಲಿ 6 ರಲ್ಲಿ ಗೆಲುವು ಸಾಧಿಸಿ, 1 ರಲ್ಲಿ ಸೋತು 12 ಅಂಕಗಳೊಂದಿಗೆ ಅಗ್ರಸ್ಥಾನದಲ್ಲಿ ಮುಂದುವರೆದಿದೆ.

ಇಲ್ಲಿನ ಈಡನ್ ಗಾರ್ಡನ್ಸ್ ಮೈದಾನದಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ್ ರಾಯಲ್ಸ್ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 223 ರನ್ ಗಳಿಸಿತು. ತಂಡದ ಪರ ಸುನೀಲ್ ನರೇನ್ 56 ಎಸೆತಗಳಲ್ಲಿ 13 ಬೌಂಡರಿ, 6 ಸಿಕ್ಸರ್ ಒಳಗೊಂಡ 109 ರನ್ ಗಳಿಸಿದರು. ಉಳಿದಂತೆ ಅಂಗ್ಕ್ರಿಶ್ ರಘುವಂಶಿ 30, ರಿಂಕು ಸಿಂಗ್ 20, ರಸೆಲ್ 13, ಶ್ರೇಯಸ್ ಅಯ್ಯರ್ 11 ರನ್ ಗಳಿಸಿದರು. ರಾಜಸ್ಥಾನ್ ಪರ ಆವೇಶ್ ಖಾನ್, ಕುಲದೀಪ್ ಸೇನ್ ತಲಾ 2, ಟ್ರೆಂಟ್ ಬೋಲ್ಟ್ ಹಾಗೂ ಯಜುವೇಂದ್ರ ಚಹಲ್ ತಲಾ ಒಂದೊಂದು ವಿಕೆಟ್ ಪಡೆದರು.

ಕೋಲ್ಕತ್ತಾ ನೀಡಿದ 224 ರನ್ ಗೆಲುವಿನ ಗುರಿ ಬೆನ್ನತ್ತಿದ ರಾಜಸ್ಥಾನ ರಾಯಲ್ಸ್ 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ ಗೆಲುವಿನ ನಗೆ ಬೀರಿತು. ತಂಡದ ಪರ ಏಕಾಂಗಿ ಹೋರಾಟ ನಡೆಸಿದ ಜೋಸ್ ಬಟ್ಲರ್ 60 ಎಸೆತಗಳಲ್ಲಿ 6 ಸಿಕ್ಸರ್, 9 ಬೌಂಡರಿ ಒಳಗೊಂಡ 107 ರನ್ ಗಳಿಸಿ ತಂಡಕ್ಕೆ ಜಯ ತಂದು ಕೊಟ್ಟರು. ಉಳಿದಂತೆ ರಿಯಾನ್ ಪರಾಗ್ 34, ರೋವ್ಮನ್ ಪೊವೆಲ್ 26, ಯಶಸ್ವಿ ಜೈಸ್ವಾಲ್ 19, ಸಂಜು ಸ್ಯಾಮ್ಸನ್ 12 ರನ್ ಗಳಿಸಿದರು. ಕೋಲ್ಕತ್ತಾ ಪರ ಹರ್ಷಿತ್ ರಾಣಾ, ಸುನೀಲ್ ನರೇನ್ ಹಾಗೂ ವರುಣ್ ಚಕ್ರವರ್ತಿ ತಲಾ 2, ವೈಭವ್ ಆರೋರ 1 ವಿಕೆಟ್ ಪಡೆದರು. ಜೋಸ್ ಬಟ್ಲರ್ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ಇಂದಿನ ಪಂದ್ಯ (ಏ.17)

ಗುಜರಾತ್ ಟೈಟಾನ್ಸ್ / ಡೆಲ್ಲಿ ಕ್ಯಾಪಿಟಲ್ಸ್
ಸ್ಥಳ: ಅಹಮದಾಬಾದ್, ನರೇಂದ್ರ ಮೋದಿ ಕ್ರೀಡಾಂಗಣ.
ಸಮಯ: ಸಂಜೆ 7.30ಕ್ಕೆ



ಕುಮಾರಸ್ವಾಮಿ ಮಹಿಳೆಯರ ಕ್ಷಮೆಯಾಚಿಸಲಿ

ಕಾಂಗ್ರೆಸ್ ರಾಜ್ಯ ಮಹಿಳಾ ಪ್ರಧಾನ ಕಾರ್ಯದರ್ಶಿ ರೇಖಾ ಶ್ರೀನಿವಾಸ್ ಆಗ್ರಹ



ಮೈಸೂರು, ಏ.16– ಗ್ಯಾರಂಟಿ ಯೋಜನೆಯಿಂದ ಮಹಿಳೆಯರು ದಾರಿ ತಪ್ಪಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅವರು ಹೇಳಿಕೆ ನೀಡಿರುವುದು ಖಂಡನೀಯ ಎಂದು ಕಾಂಗ್ರೆಸ್ ರಾಜ್ಯ ಮಹಿಳಾ ಪ್ರಧಾನ ಕಾರ್ಯದರ್ಶಿ ರೇಖಾ ಶ್ರೀನಿವಾಸ್ ತಿಳಿಸಿದ್ದಾರೆ.

ನಗರದ ಅಗ್ರಹಾರ ಸುತ್ತಮುತ್ತ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ ಲಕ್ಷ್ಮಣ್ ಪರವಾಗಿ ಮಹಿಳಾ ಕಾಂಗ್ರೆಸ್ ವತಿಯಿಂದ ಸರ್ಕಾರದ 5 ಗ್ಯಾರಂಟಿಗಳ ಮಾಹಿತಿವುಳ್ಳ ಕರಪತ್ರವನ್ನು ನೀಡಿ ಎಂ. ಲಕ್ಷ್ಮಣ ಪರವಾಗಿ ಮತಯಾಚಿಸಿದರು.

ಚುನಾವಣೆಯಲ್ಲಿ ವಿರೋಧ ಪಕ್ಷಗಳ ವಿರುದ್ಧ ಮಾತನಾಡುವ ಭರಾಟೆಯಲ್ಲಿ ಕುಮಾರಸ್ವಾಮಿ ಅವರು ಗ್ಯಾರಂಟಿ ಯೋಜನೆಯಿಂದ ತಾಯಂದಿರು ದಾರಿ ತಪ್ಪಿದ್ದಾರೆ ಎಂದು ನಾಲಿಗೆಯನ್ನು ಹರಿಬಿಟ್ಟು ತಮ್ಮ ವ್ಯಕ್ತಿತ್ವವನ್ನು ತೋರಿಸಿಕೊಂಡಿದ್ದಾರೆ. ಒಬ್ಬ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿಯವರಿಗೆ ಮಹಿಳೆಯರ ಕುರಿತು ಕನಿಷ್ಠ ಗೌರವ ಇಲ್ಲ ಎಂಬುದನ್ನು ಸಾಬೀತುಪಡಿಸಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಬಿಜೆಪಿ ಜೊತೆ ಸಖ್ಯ ಬೆಳೆಸಿದ್ದಷ್ಟೇ ಅಲ್ಲ. ಅವರ ಮನಸ್ಥಿತಿ ಯಾವ ರೀತಿ ಇದೆ ಎನ್ನುವುದನ್ನು ರಾಜ್ಯದ ಜನರಿಗೆ ತೋರಿಸಿದ್ದಾರೆ. ತಕ್ಷಣವೇ ಕುಮಾರಸ್ವಾಮಿ ಅವರು ರಾಜ್ಯದ ಮಹಿಳೆಯರಲ್ಲಿ ಬೇಷರತ್ ಕ್ಷಮೆ ಕೇಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಮಹಿಳಾ ಕಾಂಗ್ರೆಸ್ ಕಾರ್ಯದರ್ಶಿ ಕೃಷ್ಣ ಕುಮಾರಿ, ಮೃಗಾಲಯ ಪ್ರಾಧಿಕಾರದ ಮಾಜಿ ಅಧ್ಯಕ್ಷೆ ಸುಶೀಲ ಕೇಶವಮೂರ್ತಿ, ಮಹಿಳಾ ಕಾಂಗ್ರೆಸ್ ರಾಜ್ಯ ಉಪಾಧ್ಯಕ್ಷ ಲತಾ ಮೋಹನ್ ಸೇರಿದಂತೆ ಇನ್ನಿತರ ಕಾಂಗ್ರೆಸ್ ಮಹಿಳಾ ಮುಖಂಡರು ಹಾಜರಿದ್ದರು.

ಎಲೆಕ್ಟೋರಲ್ ಬಾಂಡ್ ಮೂಲಕ ಬಿಜೆಪಿ ಹಫ್ತಾ ವಸೂಲಿ

ರಾಜ್ಯಸಭಾ ಮಾಜಿ ಸದಸ್ಯ ಹನುಮಂತಯ್ಯ ಆರೋಪ

ಮೈಸೂರು, ಏ.16(ಬಿಎಲ್‌ಯು)– ಎಲೆಕ್ಟೋರಲ್ (ಚುನಾವಣಾ) ಬಾಂಡ್ ಮೂಲಕ ಬಿಜೆಪಿಯವರು ಹಫ್ತಾ ವಸೂಲಿ ಮಾಡುತ್ತಿದ್ದಾರೆ ಎಂದು ಮಾಜಿ ರಾಜ್ಯಸಭಾ ಸದಸ್ಯ ಎಲ್.ಹನುಮಂತಯ್ಯ ಆರೋಪಿಸಿದ್ದಾರೆ.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಮಂಗಳವಾರ ಪತ್ರಕರ್ತರ ಜೊತೆ ಮಾತನಾಡಿದ ಅವರು, ಎಲೆಕ್ಟೋರಲ್ ಬಾಂಡ್ ದೇಶದಲ್ಲಿ ನಡೆಯುತ್ತಿರುವ ದೊಡ್ಡ ಭ್ರಷ್ಟಾಚಾರ. ಇದರಿಂದ ಬಿಜೆಪಿಯವರು ಸಾವಿರಾರು ಕೋಟಿ ಸಂಗ್ರಹಿಸಿದ್ದಾರೆ ಎಂದು ಆಪಾದಿಸಿದರು.

ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ನಾಯಕರು ಭ್ರಷ್ಟಾಚಾರದ ಆರೋಪ ಮಾಡಿದ್ದಾರೆ. ಆದರೆ ಬಿಜೆಪಿಯವರು ಯಾವ ಯಾವ ಯೋಜನೆಗೆ ಎಷ್ಟು ಖರ್ಚು ಮಾಡಿದ್ದಾರೆ ಎಂಬುದನ್ನು ಪಾರದರ್ಶಕವಾಗಿ ಲೆಕ್ಕ ಕೊಡಲಿ ಎಂದು ಸವಾಲು ಹಾಕಿದರು.

ವಿಧಾನಸಭಾ ಚುನಾವಣೆ ಮಾದರಿಯಲ್ಲೇ ಲೋಕಸಭಾ ಚುನಾವಣೆಯಲ್ಲಿ ಗ್ಯಾರಂಟಿ ಯೋಜನೆಗಳು ಕಾಂಗ್ರೆಸ್‌ಗೆ ವರದಾನವಾಗಲಿದೆ. ಈ ಮೂಲಕ ಕಾಂಗ್ರೆಸ್ ಜಯಭೇರಿ ಬಾರಿಸುತ್ತದೆ ಎಂದು ಹನುಮಂತಯ್ಯ ವಿಶ್ವಾಸ ವ್ಯಕ್ತಪಡಿಸಿದರು.



ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಮಂಗಳವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ರಾಜ್ಯಸಭಾ ಮಾಜಿ ಸದಸ್ಯ ಎಲ್.ಹನುಮಂತಯ್ಯ ಮಾತನಾಡಿದರು.

ಕಾಂಗ್ರೆಸ್ ಮತ್ತು ಬಿಜೆಪಿ ಪ್ರಣಾಳಿಕೆ ಬಿಡುಗಡೆ ಮಾಡಿದೆ. ಜನರು ಎರಡು ಪ್ರಣಾಳಿಕೆಯ ಅಂಶಗಳನ್ನು ಅವಲೋಕನ ಮಾಡಬೇಕು. ಕಾಂಗ್ರೆಸ್ ಪ್ರಣಾಳಿಕೆ ಜನಪರವಾಗಿದ್ದು, ದೇಶದ ಅಭಿವೃದ್ಧಿಗೆ ಪೂರಕವಾಗಿದೆ ಎಂದು ಹೇಳಿದರು.

ಉಚಿತ ಪಡಿತರ ವಿತರಣೆ, ಮಹಿಳೆಯರಿಗೆ ಒಂದು ಲಕ್ಷ ರೂಪಾಯಿ ಹಣ ನೀಡುವುದು ಸೇರಿದಂತೆ ಬಹಳಷ್ಟು ಅಂಶಗಳು ಕಾಂಗ್ರೆಸ್ ಪ್ರಣಾಳಿಕೆಯಲ್ಲಿದೆ. ಇವು ಜನರ ಆರ್ಥಿಕ ಸ್ಥಿತಿಯನ್ನು ಮತ್ತಷ್ಟು ಹೆಚ್ಚು ಮಾಡುತ್ತದೆ. ಅದರಲ್ಲೂ ಬಡ ಹಾಗೂ ಮಧ್ಯಮ ವರ್ಗದವರಿಗೆ ಬಹುಪಯೋಗಿಯಾಗಲಿದೆ ಎಂದು ಹನುಮಂತಯ್ಯ ಅಭಿಪ್ರಾಯಪಟ್ಟರು.

ಕಾಂಗ್ರೆಸ್ ಪ್ರಣಾಳಿಕೆಯಲ್ಲಿರುವ ಗ್ಯಾರಂಟಿ ಯೋಜನೆಗಳನ್ನು ನೋಡಿ ಬಿಜೆಪಿಗೆ ಶಾಕ್ ಆಗಿದೆ. ಇದರಿಂದ ಹತಾಶರಾಗಿ ಕಾಂಗ್ರೆಸ್ ಸರ್ಕಾರವನ್ನು ಟೀಕಿಸುತ್ತಿದ್ದಾರೆ. ಆದರೆ ಇವರು ಏನೇ ಆರೋಪ ಮಾಡಿದರೂ ಜನರು ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆಗಳನ್ನು ನಂಬಿದ್ದಾರೆ. ನುಡಿದಂತೆ ನಡೆದಿರುವ ಕಾಂಗ್ರೆಸ್ ಪ್ರಣಾಳಿಕೆಯಲ್ಲಿರುವ ಭರವಸೆ ಈಡೇರಿಸುತ್ತದೆ ಎಂಬ ವಿಶ್ವಾಸ ಹೊಂದಿದ್ದಾರೆ. ಕಾಂಗ್ರೆಸ್ ಪರವಾದ ಜನರ ಬೆಂಬಲ ನೋಡಿದ ಬಿಜೆಪಿ ಗ್ಯಾರಂಟಿ ಕಾರ್ಡ್ ವಿತರಣೆಗೆ ಅಡ್ಡಿಪಡಿಸುತ್ತಿದೆ ಎಂದು ಆರೋಪಿಸಿದರು.

ಪತ್ರಿಕಾಗೋಷ್ಠಿಯಲ್ಲಿ ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಪ್ರಧಾನ ಕಾರ್ಯದರ್ಶಿ ಶಿವಣ್ಣ, ವಿಧಾನಪರಿಷತ್ ಮಾಜಿ ಸದಸ್ಯೆ ಮಲ್ಲಾಜಮ್ಮ, ಮುಖಂಡ ಎನ್.ಆರ್.ನಾಗೇಶ್ ಉಪಸ್ಥಿತರಿದ್ದರು.

ಕುಟುಂಬದ ಉಳಿವಿಗೆ ಹೆಚ್.ಡಿ.ದೇವೇಗೌಡರು ರಾಜಿ

“ಜೆಡಿಎಸ್ ಪಕ್ಷ ಹಾಗೂ ತಮ್ಮ ಕುಟುಂಬದ ಉಳಿವಿಗೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಎಲ್ಲಾ ರೀತಿಯ ರಾಜಿಗೂ ಸಿದ್ಧರಾಗಿದ್ದಾರೆ ಎಂದು ಹನುಮಂತಯ್ಯ ಟೀಕಿಸಿದರು. ಬಿಜೆಪಿ ಕೋಮುವಾದ ಪಕ್ಷವೆಂದು ಇದೇ ದೇವೇಗೌಡರು ಕಟುವಾಗಿ ಟೀಕಿಸಿದ್ದರು. ಜೊತೆಗೆ ಆರ್‌ಎಸ್‌ಎಸ್ ಬಗ್ಗೆ ಆರೋಪಗಳ ಸುರಿಮಳೆಗೈಯ್ದಿದ್ದರು. ಆದರೆ ಈಗ ದೇವೇಗೌಡರು ಹಾಗೂ ಕುಮಾರಸ್ವಾಮಿ ತಾವು ಟೀಕೆ ಮಾಡಿದ್ದ ಬಿಜೆಪಿ ಹಾಗೂ ಆರ್‌ಎಸ್‌ಎಸ್ ಅನ್ನು ಹಾಡಿ ಹೊಗಳುತ್ತಿದ್ದಾರೆ ಎಂದು ಲೇವಡಿ ಮಾಡಿದರು. ಈ ತನಕ ಟೀಕೆ ಮಾಡಿ ಈಗ ಅದೇ ಪಕ್ಷವನ್ನು ರಾಜಕೀಯ ಲಾಭಕ್ಕಾಗಿ ಹೊಗಳುತ್ತಿರುವುದು ವಿಪರ್ಯಾಸವಾಗಿದೆ. ಆದರೆ ಜನರು ಇದನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದು, ಲೋಕಸಭಾ ಚುನಾವಣೆಯಲ್ಲಿ ಮೈತ್ರಿ ಪಕ್ಷಗಳಿಗೆ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಹನುಮಂತಯ್ಯ ಎಚ್ಚರಿಸಿದರು. ಮಹಿಳೆಯರ ಬಗ್ಗೆ ತಾವು ನೀಡಿದ್ದ ಹೇಳಿಕೆ ಬಗ್ಗೆ ಕುಮಾರಸ್ವಾಮಿ ಈಗಾಗಲೇ ಕ್ಷಮೆ ಕೇಳಿರುವ ಕಾರಣ ಈ ಬಗ್ಗೆ ಹೆಚ್ಚಿನ ಪ್ರತಿಕ್ರಿಯೆ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಕಾಂಗ್ರೆಸ್ ಬೆಂಬಲಿಸಲು ದಸಂಸ ಬಿ.ಕೃಷ್ಣಪ್ಪ ಬಣ ನಿರ್ಧಾರ

ಮೈಸೂರು, ಏ.16(ಜಿಎ)–ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಲು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಬಿ.ಕೃಷ್ಣಪ್ಪ ಸ್ಥಾಪಿತ) ನಿರ್ಧರಿಸಿದೆ ಎಂದು ಜಿಲ್ಲಾ ಸಂಚಾಲಕ ಎಸ್.ಜೆ.ದೊಡ್ಡ ಉಗ್ರಯ್ಯ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂವಿಧಾನಬಾಹಿರ ಮತ್ತು ಶ್ರೀಮಂತ ಪರವಾದ ಬಿಜೆಪಿ ಸರ್ಕಾರವು ದೇಶದ ಬಡ ಜನರ ಹಣ, ಬದುಕನ್ನು ಕಸಿದುಕೊಳ್ಳುತ್ತಿದೆ. ಇವರನ್ನು ಅಧಿಕಾರದಿಂದ ದೂರವಿರಿಸುವುದು ನಮ್ಮ ಗುರಿಯಾಗಿದ್ದು, ಕಾಂಗ್ರೆಸ್ ಪಕ್ಷ ಪ್ರಜಾಪ್ರಭುತ್ವ ವ್ಯವಸ್ಥೆ ಮತ್ತು ಸಂವಿಧಾನದ ಬಗ್ಗೆ ಅಪಾರ ಗೌರವ ಹೊಂದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಗ್ಯಾರಂಟಿ ಯೋಜನೆಗಳ ಮೂಲಕ ಜನತೆಗೆ ಶಕ್ತಿ ನೀಡುತ್ತಿದ್ದಾರೆ. ಈ ಭಾಗದ ಅಭ್ಯರ್ಥಿಗಳಾದ ಎಂ.ಲಕ್ಷ್ಮಣ ಮತ್ತು ಸುನೀಲ್ ಬೋಸ್ ಅವರಿಗೆ ಸಹಕಾರ ನೀಡುವಂತೆ ಸದಸ್ಯರಿಗೆ ಮನವಿ ಮಾಡುತ್ತೇವೆ ಎಂದರು. ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಸಂಘಟನಾ ಸಂಚಾಲಕರಾದ ಎಚ್.ಎಸ್.ಗೋಪಾಲಕೃಷ್ಣಸ್ವಾಮಿ, ಆರ್.ಮಹೇಶ್, ಪಿರಿಯಾಪಟ್ಟಣ ತಾಲೂಕು ಸಂಚಾಲಕ ಆರ್.ವೆಂಕಟೇಶ್ ಉತ್ತೇನಹಳ್ಳಿ ಉಪಸ್ಥಿತರಿದ್ದರು.

ಸೋಲಿನ ಭೀತಿಯಿಂದ ಕುಮಾರಸ್ವಾಮಿ ಹೇಳಿಕೆ ತಪ್ಪಾಗಿ ವ್ಯಾಖ್ಯಾನ

ಕಾಂಗ್ರೆಸ್ ವಿರುದ್ಧ ಜೆಡಿಎಸ್ ಮೈಸೂರು ನಗರ ಮಹಿಳಾ ಘಟಕದ ಅಧ್ಯಕ್ಷೆ ವಾಗ್ದಾಳಿ

ಮೈಸೂರು, ಏ.16(ಜಿಎ)–ಜೆಡಿಎಸ್ ರಾಜ್ಯಾಧ್ಯಕ್ಷರೂ ಆದ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರು ಮಹಿಳೆಯರನ್ನು ಉದ್ದೇಶಿಸಿ ಕಾಂಗ್ರೆಸ್ ಪಕ್ಷದ ಭರವಸೆಗಳಿಗೆ ಮರುಳಾಗಬೇಡಿ ಎಂದು ಹೇಳಿದ್ದನ್ನೇ ತಪ್ಪಾಗಿ ವ್ಯಾಖ್ಯಾನಿಸಲಾಗುತ್ತಿದೆ. ಸೋಲಿನ ಭೀತಿಯಿಂದ ಕಾಂಗ್ರೆಸ್ ಅಪಪ್ರಚಾರ ಮಾಡುತ್ತಿದೆ ಎಂದು ಜೆಡಿಎಸ್ ಮೈಸೂರು ನಗರ ಮಹಿಳಾ ಘಟಕದ ಅಧ್ಯಕ್ಷೆ ಎಸ್.ಪ್ರೇಮಾ ಶಂಕರೇಗೌಡ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕುಮಾರಸ್ವಾಮಿ ಅವರು ಮುಖ್ಯಮಂತ್ರಿ ಆಗಿದ್ದಾಗ ಸಾಲ ಮನ್ನಾ, ಲಾಟರಿ ನಿಷೇಧ, ಸಾರಾಯಿ ನಿಷೇಧ ಸೇರಿದಂತೆ ಮಹಿಳೆಯರ ಜೀವನ ಸುಧಾರಣೆಗೆ ಸಾಕಷ್ಟು ಕೆಲಸ ಮಾಡಿದ್ದಾರೆ. ಉತ್ತಮ ಭವಿಷ್ಯದಿಂದ ತಾಯಂದಿರನ್ನು ದಾರಿ ತಪ್ಪಿಸಲಾಗುತ್ತಿದೆ ಎಂದು ಬೇಸರದಿಂದ ಹೇಳಿದ್ದಾರೆ. ಇದರಲ್ಲಿ ಅನ್ಯ ವ್ಯಾಖ್ಯಾನಕ್ಕೆ ಅವಕಾಶವಿಲ್ಲ. ತಪ್ಪಿಲ್ಲದಿದ್ದರೂ ಅವರು ವಿಷಾದಿಸಿದ್ದಾರೆ. ಆದರೂ, ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷೆ ಪುಷ್ಪಾ ಅಮರನಾಥ್ ಅವರು ತಮ್ಮ ಇರುವಿಕೆಯನ್ನು ಸಾಬೀತುಪಡಿಸಲು ಮಾಜಿ ಪ್ರಧಾನಿ ದೇವೇಗೌಡರ ಕಾರ್ಯಕ್ರಮದಲ್ಲಿ ಗಲಾಟೆ ಮಾಡಿದ್ದಾರೆ. ಇದು ಸರಿಯಲ್ಲ ಎಂದರು.



ಎಸ್.ಪ್ರೇಮಾ ಶಂಕರೇಗೌಡ

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಮದ್ದೂರಿನ ಶಾಸಕ ಉದಯ್ ಅವರು ನೇರವಾಗಿಯೇ ಮಹಿಳೆಯರ ವಿರುದ್ಧ ಈ ಹಿಂದೆ ಕೆಲ ಹೇಳಿಕೆಗಳನ್ನು ನೀಡಿದ್ದಾರೆ. ಅದರ ಬಗ್ಗೆ ಕ್ರಮ ಕೈಗೊಳ್ಳುವಂತೆ ಮಹಿಳಾ ಆಯೋಗಕ್ಕೆ ಶೀಘ್ರದಲ್ಲಿ ದೂರು ಸಲ್ಲಿಸಲಾಗುವುದು ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಮೈಸೂರು ಪಾಲಿಕೆ ಮಾಜಿ ಸದಸ್ಯರಾದ ಲಕ್ಷ್ಮಿ ಶಿವಣ್ಣ ಭಾಗ್ಯ ಮಾದೇಶ್, ಭಾಗ್ಯವತಿ, ಲಕ್ಷ್ಮಿ ಶಿವರಾಜ, ವೇದಾವತಿ, ಪ್ರಮೀಳಾ ಭರತ್ ಉಪಸ್ಥಿತರಿದ್ದರು.

ಕಾಂಗ್ರೆಸ್ ಬೆಂಬಲಿಸುವಂತೆ ಪೌರಕಾರ್ಮಿಕರಿಗೆ ಮಾಜಿ ಮೇಯರ್ ನಾರಾಯಣ್ ಮನವಿ



ನಾರಾಯಣ

ಮೈಸೂರು,ಏ.16(ಜಿಎ)–ಮೈಸೂರಿನ ಪೌರಕಾರ್ಮಿಕರು ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಬೆಂಬಲ ನೀಡಬೇಕು ಎಂದು ಪೌರ ಕಾರ್ಮಿಕರ ಸಂಘದ ರಾಜ್ಯಾಧ್ಯಕ್ಷರೂ ಆದ ಮಾಜಿ ಮೇಯರ್ ನಾರಾಯಣ ಮನವಿ ಮಾಡಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗುಜರಾತ್‌ನಲ್ಲಿ ಪೌರಕಾರ್ಮಿಕರಿಗೆ 9 ಸಾವಿರ ವೇತನ ನೀಡಲಾಗುತ್ತದೆ. ಆದರೆ, ಕರ್ನಾಟಕದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು 17 ಸಾವಿರಕ್ಕೆ ಹೆಚ್ಚಳ ಮಾಡಿದ್ದಾರೆ. ಅಲ್ಲದೆ, ಬಜೆಟ್‌ನಲ್ಲಿ 24,005 ಗುತ್ತಿಗೆ ಕಾರ್ಮಿಕರನ್ನು ಖಾಯಂ ಮಾಡುವುದಾಗಿ ಘೋಷಣೆ ಮಾಡಿದ್ದಾರೆ. ಎಸ್.ಸಿ.ಪಿ, ಟಿ.ಎಸ್.ಪಿ ಹಣದಲ್ಲೂ ಪೌರ ಕಾರ್ಮಿಕರ ಅಭಿವೃದ್ಧಿಗೆ ಶೇ.20.1ರಷ್ಟು ಮೀಸಲಿರಿಸಿದ್ದಾರೆ. ಕಾಂಗ್ರೆಸ್ ಗೆಲುವಿನಿಂದ ಮಾತ್ರ ನಮ್ಮ ಪ್ರಗತಿ ಸಾಧ್ಯ ಎಂದರು.

ದೇಶದಲ್ಲಿ 12 ಲಕ್ಷ ಪೌರಕಾರ್ಮಿಕರು ಆಧುನಿಕ ಜೀತ ಪದ್ಧತಿಯಲ್ಲಿ ಜೀವನ ನಡೆಸುತ್ತಿದ್ದಾರೆ. ಐದು ಜನರನ್ನು ಕರೆದು ಪ್ರಚಾರಕ್ಕಾಗಿ ಪಾದಪೂಜೆ ಮಾಡಿದ ಪ್ರಧಾನಿ ಮೋದಿ ಅವರು, ಅವರ ವೇತನ, ಜೀವನ ಸ್ಥಿತಿ ಕೇಳಲಿಲ್ಲ. ಪಾದಪೂಜೆ ಯಾರಿಗೆ ಬೇಕು. ಕಷ್ಟ ಸುಖಗಳಿಗೆ ಸ್ಪಂದಿಸುವವರು ಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದರು.

ಯೋಚಿಸಿ ವೋಟ್ ಮಾಡದಿದ್ದರೆ ತಪ್ ನಮ್ಮದೇ...

● ಮೋಹನ್ ಕಾಯಕ

ವಿಶ್ವದ ಅತೀದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವೆಂದೇ ಖ್ಯಾತಿ ಪಡೆದಿರುವ ಭಾರತದ ಲೋಕಸಭಾ ಚುನಾವಣೆಗೆ ಕ್ಷಣಗಣನೆ ಆರಂಭವಾಗಿದ್ದು, ಆಧುನಿಕ ಸ್ಪರ್ಧಾತ್ಮಕ ಜಗತ್ತಿನಲ್ಲಿ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರದತ್ತ ಕೊಂಡೊಯ್ಯುವ ಮಹತ್ವದ ಕಾರ್ಯಕ್ಕೆ ವಿವೇಚನೆಯುಕ್ತ ಮತದಾನವೂ ಒಂದು ಪ್ರಧಾನ ಅಸ್ತ್ರವಾಗಿದೆ. ಸಂವಿಧಾನದ ಆಶಯದಡಿ ಪಾರದರ್ಶಕ, ನಂಬಿಕಸ್ಥ, ವಿಶ್ವಾಸಭರಿತ ಆಡಳಿತ ನೀಡುವ ಸರ್ಕಾರ ರಚನೆ ಜವಾಬ್ದಾರಿಯನ್ನು ಪಡೆದಿರುವ ಮತದಾರ ನಿರ್ಣಯವೇ ಅಂತಿಮ. ಪ್ರಜಾಪ್ರಭುತ್ವದ ಹಬ್ಬ ದೇಶದೆಲ್ಲೆಡೆ ಏಳು ಹಂತಗಳಲ್ಲಿ ನಡೆಯಲಿದ್ದು, ಈ ಹಬ್ಬದ ಸಂಭ್ರಮಾಚರಣೆ ಎಲ್ಲೆಡೆ ಜೋರಾಗಿಯೇ ನಡೆಯುತ್ತಿದೆ. ಈ ಸಂದರ್ಭದಲ್ಲಿ ಮೊದಲ ಬಾರಿಗೆ ತಮ್ಮ ಸಾಂವಿಧಾನಿಕ ಹಕ್ಕನ್ನು ಚಲಾಯಿಸಲು ಮತಗಟ್ಟೆಗೆ ಬರುತ್ತಿರುವ ಸಾಂಸ್ಕೃತಿಕ ನಗರಿ ಮೈಸೂರಿನ ಯುವ ಮತದಾರರು ಹೊಸ ನಿರೀಕ್ಷೆಯನ್ನೇ ಇಟ್ಟುಕೊಂಡಿದ್ದಾರೆ. ಅದರಲ್ಲೂ ಅರಮನೆ ಹಾಗೂ ಮಂಜಿನ ನಗರಿಯನ್ನೊಳಗೊಂಡ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಯುವ ಮತದಾರರು ಮೊದಲ ಬಾರಿ ಮತದಾನ ಮಾಡಲು ಉತ್ಸುಕರಾಗಿದ್ದಾರೆ. ದೇಶದ ಅಭಿವೃದ್ಧಿಗೆ, ಸಮ ಸಮಾಜದ ನಿರ್ಮಾಣಕ್ಕಾಗಿ ಸೂಕ್ತ ಜನಪ್ರತಿನಿಧಿ ಆಯ್ಕೆ ಎಷ್ಟು ಮಹತ್ವವೆಂಬ ವಿಚಾರಗಳನ್ನು 'ಮೈಸೂರು ಮಿತ್ರ'ನೊಂದಿಗೆ ಹಂಚಿಕೊಂಡಿರುವ ಮೈಸೂರಿನ ಯುವ ಮತದಾರರು, ತಮ್ಮ ನೆಚ್ಚಿನ ಅಭ್ಯರ್ಥಿ ಕಾರ್ಯವೈಖರಿ ಹೇಗಿರಬೇಕು. ಯಾವ ಯಾವ ಕ್ಷೇತ್ರಗಳತ್ತ ಗಮನ ಹರಿಸಬೇಕು. ವಿದ್ಯಾವಂತರಾಗಿರಬೇಕಾ..., ಸಮಾಜಮುಖಿ ಚಿಂತನೆಯುಳ್ಳವರಾಗಿರಬೇಕಾ... ಎಂಬುದರ ಜೊತೆಗೆ ಯೋಚಿಸಿ... ಕಡ್ಡಾಯವಾಗಿ ಮತದಾನ ಮಾಡಿ... ಮತ ಚಲಾಯಿಸಿದ ಬಳಿಕ 'ತಪ್ ನಮ್ಮದೇ' ಎಂದು ಕೊರಗಬೇಡಿ ಎಂಬ ಸಂದೇಶ ನೀಡಿದ್ದಾರೆ....!



ಚೊಚ್ಚಲ ಯುವ ಮತದಾರರ ಸಂದೇಶ



● ಮೊದಲ ಬಾರಿಗೆ ಮತದಾನ ಮಾಡುತ್ತಿರುವುದು ತುಂಬಾ ಖುಷಿ ತಂದಿದ್ದು, ಸಮಾಜ ಮುಖಿಯಾಗಿ ಒಳ್ಳೆಯ ಕೆಲಸ ಮಾಡೋ ಜನಪ್ರತಿನಿಧಿಗೆ ನನ್ನ ಮತ. ಯಾವುದೇ ಪಕ್ಷ, ಜಾತಿ ಸಿದ್ಧಾಂತ ಗಮನಿಸದೆ ಒಳ್ಳೆಯ ಕೆಲಸ ಯಾರು ಮಾಡುತ್ತಾರೆ ಎಂಬುದನ್ನು ಗಮನಿಸಿ, ಮತ ನೀಡುತ್ತೇನೆ. ಮತಗಟ್ಟೆ ಒಳಗೆ ಇದೇ ಮೊದಲು ಪ್ರವೇಶ ಮಾಡುತ್ತಿದ್ದು, ಮತಗಟ್ಟೆ ಒಳಗೆ ಹೇಗಿರಲಿದೆ ಎಂಬ ಕುತೂಹಲವೂ ಇದೆ. ಮುಖ್ಯವಾಗಿ ನನ್ನ ಮತ ವಿದ್ಯಾವಂತರಿಗೆ. ಪ್ರಜಾಪ್ರಭುತ್ವ ಎಂದರೆ ಪ್ರಜೆಗಳಿಗೆ ಒಳ್ಳೆಯ ಕೆಲಸಗಳಾಗಬೇಕು. ಇಂಜಿನಿಯರಿಂಗ್ ಓದಿ ಕೆಲಸ ಮಾಡುತ್ತಿದ್ದೇನೆ.

–ಎಂ.ಪ್ರಮೋದ್, ಹೆಬ್ಬಾಳ, ಇಂಜಿನಿಯರಿಂಗ್ ಪದವೀಧರ



● ಪ್ರತಿಯೊಬ್ಬ ವ್ಯಕ್ತಿಯ ಮತವು ಪವಿತ್ರವಾದುದು. ಮತ ಚಲಾಯಿಸುವುದು ನಮ್ಮ ಪವಿತ್ರ, ಜವಾಬ್ದಾರಿಯುತ ಹಕ್ಕು. ಶಾಲಾ–ಕಾಲೇಜುಗಳಲ್ಲಿ ನಡೆದ ಚುನಾವಣೆಯ ಅನುಭವ ಇದೆ. ಈ ಬಾರಿ ಮೊದಲ ಬಾರಿಗೆ ಲೋಕಸಭಾ ಚುನಾವಣೆಯಲ್ಲಿ ಮತ ಚಲಾಯಿಸುತ್ತಿರುವುದು ಖುಷಿ ತಂದಿದ್ದು, ಯೋಗ್ಯ ಜನಪ್ರತಿನಿಧಿ ಆಯ್ಕೆಯನ್ನು ಬೆಂಬಲಿಸುತ್ತೇನೆ.

–ಎಂ.ಗೌತಮಿ, ಬಿಎಸ್‌ಸಿ ವಿದ್ಯಾರ್ಥಿನಿ, ಯುವರಾಜ ಕಾಲೇಜು



● ಲೋಕಸಭಾ ಚುನಾವಣೆ ಪ್ರಜಾಪ್ರಭುತ್ವದ ಹಬ್ಬ. ಮತದಾನ ಮಾಡುವ ಮುನ್ನ ಯಾರಿಗೆ ಮತದಾನ ಮಾಡಬೇಕು ಎಂಬುದನ್ನು ಯೋಚನೆ ಮಾಡಬೇಕು. ಸ್ವಾರ್ಥ ಸಾಧನೆ ಬದಲು ಜನರಿಗಾಗಿ ಕೆಲಸ ಮಾಡುವ ಅಭ್ಯರ್ಥಿಗಳನ್ನು ಗುರ್ತಿಸಿ, ಮತ ನೀಡಬೇಕು. ಪ್ರಜೆಗಳಿಂದ ಪಡೆಯುವ ಅಧಿಕಾರ ಅವರಿಗಾಗಿಯೇ ಮೀಸಲಿಡಬೇಕು. ಮುಖ್ಯವಾಗಿ ದಿನಬಳಕೆ ವಸ್ತುಗಳ ಬೆಲೆ ಕಡಿಮೆಯಾಗಬೇಕು. ಜಾತಿ–ಧರ್ಮ ಎನ್ನದೆ ಎಲ್ಲರನ್ನೂ ಸಮಾನ ಭಾವದಿಂದ ನೋಡುವ ಹಾಗೂ ಅಭಿವೃದ್ಧಿ ಪರವಾಗಿರುವ ಅಭ್ಯರ್ಥಿಗೆ ನನ್ನ ಮತ.

– ಜಿ.ಸ್ಫೂರ್ತಿ, ಬಿಕಾಂ, ಟೆರಿಷಿಯನ್ ಕಾಲೇಜು



● ನಮ್ಮ ಮನೆಯಲ್ಲಿ ಎಲ್ಲರೊಂದಿಗೆ ಚರ್ಚಿಸಿ, ಸಮಾಜದ ಅಭಿವೃದ್ಧಿಗೆ ಯಾರು ಸೂಕ್ತ ಎಂಬುದನ್ನರಿತು ಮತ ಹಾಕುತ್ತೇನೆ. ಮತಗಟ್ಟೆಯೊಳಗೆ ವಾತಾವರಣ ಹೇಗಿರಲಿದೆ ಎಂಬ ಕುತೂಹಲವಿದೆ. ದಿನಪತ್ರಿಕೆಗಳಲ್ಲಿ ಪ್ರಕಟವಾಗುವ ಅಭ್ಯರ್ಥಿಗಳ ಮಾಹಿತಿ ತಿಳಿದು ಯೋಗ್ಯ ಅಭ್ಯರ್ಥಿಗೆ ಮತ ಹಾಕುತ್ತೇನೆ. ಹಾಗೆಯೇ ನನ್ನ ತಂದೆಯ ಸಲಹೆಯನ್ನು ಕೇಳುತ್ತೇನೆ. ಒಳ್ಳೆಯ ವ್ಯಕ್ತಿಯಾಗಿದ್ದು, ಅಪರಾಧ ಹಿನ್ನೆಲೆಯುಳ್ಳ ಅಭ್ಯರ್ಥಿಗೆ ಯಾವುದೇ ಕಾರಣಕ್ಕೂ ವೋಟ್ ಮಾಡಲ್ಲ.

– ಎಸ್.ಹರ್ಷಿತ, ಬಿ.ಕಾಂ



● ಸಂಸದರು ಕ್ಷೇತ್ರದ ಅಭಿವೃದ್ಧಿಗಾಗಿ ಏನೆಲ್ಲಾ ಅಭಿವೃದ್ಧಿ ಕಾರ್ಯಗಳಾಗಬೇಕು ಎಂಬುದನ್ನು ಸಂಪೂರ್ಣವಾಗಿ ಅರ್ಥ ಮಾಡಿಕೊಂಡು ಸಂಸತ್‌ನಲ್ಲಿ ಪ್ರಸ್ತಾಪಿಸಿ, ಅನುದಾನ ತಂದು ಎಲ್ಲಾ ರೀತಿಯಲ್ಲೂ ಸಮಗ್ರ ಅಭಿವೃದ್ಧಿ ಮಾಡುವ ಅಭ್ಯರ್ಥಿಯನ್ನು ಆಯ್ಕೆ ಮಾಡಬೇಕಿದೆ. ವಿದ್ಯಾರ್ಹತೆ ಪಡೆದಿರಲೇಬೇಕು ಎಂದಿಲ್ಲ. ಮುಖ್ಯವಾಗಿ ಸಾಮಾಜಿಕ ಕಳಕಳಿ, ಮಾನವೀಯ ಮೌಲ್ಯಗಳನ್ನು ಹೊಂದಿದ್ದರೆ ಸಾಕು. ಅಭಿವೃದ್ಧಿ ಮಾಡಿದ್ದಾರೋ ಇಲ್ಲವೋ ಎಂಬುದು ಕೂಡ ಮಾನದಂಡವಾಗಿರಬೇಕು. ಮೊದಲ ಬಾರಿ ಲೋಕಸಭಾ ಚುನಾವಣೆ ಮತದಾನ ಮಾಡುತ್ತಿರುವುದು ಸಂತೋಷದ ಜೊತೆಗೆ ನನ್ನ ಜವಾಬ್ದಾರಿಯೂ ಆಗಿದೆ. ಐಪಿಎಲ್ ಶುರುವಾದಂತೆ ಕಪ್ ನಮ್ಮದು ಎಂಬಂತೆ ಮತ ನೀಡಿದ ಮೇಲೆ ತಪ್ ನಮ್ಮದು ಎನ್ನಬಾರದು. ಆದ್ದರಿಂದ ಒಳ್ಳೆಯ ಅಭ್ಯರ್ಥಿಯನ್ನು ಆಯ್ಕೆ ಮಾಡಬೇಕು.

–ರಂಜನ್‌ಗೌಡ, ಬಿಎಸ್‌ಸಿ ವಿದ್ಯಾರ್ಥಿ



● ಮೊದಲ ಬಾರಿಗೆ ಮತದಾನ ಮಾಡುವ ಪವರ್ ಸಿಕ್ಕಿದ್ದು, ಮತ ನೀಡಲು ಉತ್ಸುಕಳಾಗಿದ್ದೇನೆ. ಜನರಿಗೆ ಸಹಾಯ ಮಾಡುವ ಜೊತೆಗೆ ರಾಜ್ಯದ ಅಭಿವೃದ್ಧಿ ಕಡೆಗೆ ಗಮನ ಹರಿಸುವವರಾಗಿರಬೇಕು. ವಿದ್ಯಾರ್ಥಿಗಳಿಗೆ ಅವಶ್ಯವಿರುವ ಶಿಕ್ಷಣ ನೀಡುವ ವಿಚಾರದಲ್ಲಿ ಆಸಕ್ತಿಯುಳ್ಳವರಾಗಿರಬೇಕು. ಹಿರಿಯ ನಾಗರಿಕರಿಗೆ ವೃದ್ಧಾಪ್ಯ ವೇತನ ಹೆಚ್ಚಳ ಮಾಡಿಸಬೇಕು. ಹೆಣ್ಣು ಮಕ್ಕಳಿಗೆ ರಕ್ಷಣೆ ಜೊತೆಗೆ ಎಲ್ಲಾ ಕ್ಷೇತ್ರದಲ್ಲಿಯೂ ಶೇ.50ರಷ್ಟು ಮೀಸಲಾತಿ ಕೊಡಿಸುವ ನಿಟ್ಟಿನಲ್ಲಿ ಕೆಲಸ ಮಾಡುವವರಾಗಿರಬೇಕು. ಮುಖ್ಯವಾಗಿ ವಿದ್ಯಾವಂತರಾಗಿರಬೇಕು. ನಿರುದ್ಯೋಗ ಹೆಚ್ಚಾಗಿದ್ದು, ಇದರ ಬಗ್ಗೆ ಗಮನ ಹರಿಸುವ ಅಭ್ಯರ್ಥಿಗೆ ಮತ ಹಾಕುವೆ.

–ಆರ್.ತನುಶ್ರೀ, ಬಿಬಿಎ ವಿದ್ಯಾರ್ಥಿನಿ, ಮಹಾರಾಣಿ ಕಾಲೇಜು



● ಈಗಷ್ಟೇ ಇಂಜಿನಿಯರಿಂಗ್ ಮುಗಿಸಿ, ಬೆಂಗಳೂರಿನಲ್ಲಿ ಕೆಲಸ ಮಾಡುತ್ತಿದ್ದು, ಲೋಕಸಭಾ ಚುನಾವಣೆಗೆ ಮೊದಲ ಬಾರಿಗೆ ಮತದಾನ ಮಾಡುತ್ತಿದ್ದೇನೆ. ಅಭಿವೃದ್ಧಿ ಹೊಂದಿದ ದೇಶವನ್ನಾಗಿ ಮಾಡುವವರಿಗೆ ನನ್ನ ಮತ ನೀಡುತ್ತೇನೆ. ದೇಶದಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳು ಬಾಕಿ ಇದ್ದು, ಈ ನಿಟ್ಟಿನಲ್ಲಿ ಕೆಲಸ ಮಾಡುವ ಅದರಲ್ಲಿಯೂ ಮುಖ್ಯವಾಗಿ ವಿದ್ಯಾವಂತ ಜನಪ್ರತಿನಿಧಿಗೆ ಮತ ನೀಡಬಯಸುತ್ತೇನೆ. ಸದ್ಯ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಸ್ಪರ್ಧಿಸುತ್ತಿರುವ ಅಭ್ಯರ್ಥಿಗಳ ಬಗ್ಗೆ ಇನ್ನೂ ಅಷ್ಟಾಗಿ ಪರಿಚಯವಿಲ್ಲ. ಅವರ ಹಿನ್ನೆಲೆ, ಸಮಾಜ ಸೇವಾ ಹಿರಿತನವನ್ನೆಲ್ಲಾ ಗಮನಿಸಿ, ಮತ ನೀಡುತ್ತೇನೆ. ನನ್ನ ಮತವನ್ನು ಯಾವುದೇ ಕಾರಣಕ್ಕೂ ವ್ಯರ್ಥವಾಗುವುದಕ್ಕೆ ಬಿಡುವುದಿಲ್ಲ.

– ಟಿ.ಜಿ.ಕೃಷ್ಣ, ಜೆ.ಪಿ ನಗರ



● ಜನರ ಸಮಸ್ಯೆ ಬಗೆಹರಿಸುವ, ಬಡತನ ನಿವಾರಣೆಗೆ ಶ್ರಮಿಸುವ ಜನಪ್ರತಿನಿಧಿ ಅವಶ್ಯವಿದೆ. ಮುಖ್ಯವಾಗಿ ನ್ಯಾಯಯುತವಾಗಿ, ನಿಷ್ಠೆಯಿಂದ ಕೆಲಸ ಮಾಡುವವರಾಗಬೇಕು. ಸಮಾಜದಲ್ಲಿ ಪೊಲೀಸ್ ಠಾಣೆಗಳು, ಆಸ್ಪತ್ರೆಗಳು, ನ್ಯಾಯಾಲಯಗಳು ಹೆಚ್ಚಾಗುತ್ತಿದ್ದರೆ ಅದನ್ನು ಅನಾರೋಗ್ಯ ಸಮಾಜ ಎನ್ನಲಾಗುತ್ತದೆ. ಜನಪ್ರತಿನಿಧಿಯಾಗಿ ಆಯ್ಕೆಯಾಗುವ ವ್ಯಕ್ತಿ ಈ ಆರೋಗ್ಯಕರ ಸಮಾಜದ ನಿರ್ಮಾತೃವಾಗಿ ಕೆಲಸ ಮಾಡುವವರಾಗಬೇಕು. ವೃತ್ತಿ ನೈತಿಕತೆ, ಪರಿಸರ ಕಾಳಜಿ ಇರುವ ಅಭ್ಯರ್ಥಿಗೆ ಮತ ನೀಡುತ್ತೇನೆ. ನಮ್ಮ ಹಕ್ಕನ್ನು ನಾವು ಸರಿಯಾದ ರೀತಿಯಲ್ಲಿ ಯೋಚನೆ ಮಾಡಿ ಚಲಾಯಿಸದಿದ್ದರೇ ತೊಂದರೆಗಳನ್ನು ನಮಗೆ ನಾವೇ ತಂದುಕೊಂಡಂತಾಗುತ್ತದೆ. ಹಾಗಾಗಿ ಮತದಾನ ಮಾಡುವ ಮುನ್ನ ಎಚ್ಚರಿಕೆ, ಅರಿವು ಅಗತ್ಯ

– ಎಲ್.ಸುಕೃತ, ಬಿಎಸ್‌ಸಿ ವಿದ್ಯಾರ್ಥಿನಿ



● ದೇಶದಲ್ಲಿ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗುತ್ತಲೇ ಇದೆ. ಈ ಬಗ್ಗೆ ಗಮನ ಹರಿಸಿ, ಬೆಲೆ ಏರಿಕೆ ನಿಯಂತ್ರಣಕ್ಕೆ ತರುವ ನಿಟ್ಟಿನಲ್ಲಿ ಕೆಲಸ ಮಾಡುವ ಅಭ್ಯರ್ಥಿಯನ್ನು ಆಯ್ಕೆ ಮಾಡಲು ಬಯಸುತ್ತೇನೆ. ಮುಖ್ಯವಾಗಿ ಅಭ್ಯರ್ಥಿ ಉನ್ನತ ವಿದ್ಯಾಭ್ಯಾಸ ಪಡೆದಿರಲೇಬೇಕು. ವಿದ್ಯಾಭ್ಯಾಸ ಪಡೆದಿದ್ದರಷ್ಟೇ ಸಮಸ್ಯೆಗಳನ್ನು ಅರ್ಥ ಮಾಡಿಕೊಂಡು ಬಗೆಹರಿಸಲು ಸಾಧ್ಯ. ಹಾಗಾಗಿ ನಾನು ಮತ ನೀಡುವ ಮೊದಲು ಅಭ್ಯರ್ಥಿ ಶೈಕ್ಷಣಿಕ ಹಿನ್ನೆಲೆಯನ್ನು ಗಮನಿಸುತ್ತೇನೆ. ಮತ ನೀಡುವುದು ನನ್ನ ಹಕ್ಕಾಗಿದ್ದು, ಏ.26ರಂದು ಮರೆಯದೆ ಮತದಾನ ಮಾಡುತ್ತೇನೆ.

–ವನಜಾಕ್ಷಿ, ಬಿ.ಎ ವಿದ್ಯಾರ್ಥಿನಿ, ಮಹಾರಾಜ ಕಾಲೇಜು



● ಅಧಿಕಾರ ದುರುಪಯೋಗ ಪಡಿಸಿಕೊಳ್ಳದ ನಂಬಿಕೆಗೆ ಅರ್ಹರಾದ ಅಭ್ಯರ್ಥಿಗೆ ನನ್ನ ಮತ. ಪದವಿ ಪಡೆದಿರುವ, ಬಡವರ ಪರವಾಗಿರುವ, ನಿರುದ್ಯೋಗ ಸಮಸ್ಯೆ ನಿವಾರಿಸುವ ಜನಪ್ರತಿನಿಧಿಯನ್ನು ಲೋಕಸಭೆಗೆ ಆಯ್ಕೆ ಮಾಡಲು ಬಯಸುತ್ತೇನೆ. ಓದಿರಲೇಬೇಕು ಎಂದಿಲ್ಲ, ವೃತ್ತಿಯಲ್ಲಿ ಜಾಣ್ಮೆಯುಳ್ಳವರಾಗಿರಬೇಕು. ಸಮಾಜದಲ್ಲಿನ ಎಲ್ಲಾ ವರ್ಗಗಳನ್ನು ಸಮಭಾವದಿಂದ ನೋಡುವ ಅಭ್ಯರ್ಥಿಗೆ ವೋಟ್ ಮಾಡುತ್ತೇನೆಯೇ ಹೊರತು, ಸೀರೆ, ಕುಕ್ಕರ್, ಹಣ ನೀಡಿ ಅಲ್ಪ ಆಸೆ–ಆಮಿಷಗಳನ್ನು ತೋರುವವರಿಗೆ ಯಾವುದೇ ಕಾರಣಕ್ಕೂ ವೋಟ್ ಹಾಕುವುದಿಲ್ಲ.

– ಎಂ.ಯಶಸ್ವಿನಿ, ಬಿ.ಕಾಂ ವಿದ್ಯಾರ್ಥಿನಿ



● ಮೊದಲ ಬಾರಿಗೆ ಮತದಾನ ಮಾಡುವ ಮೂಲಕ ಪೌರತ್ವ ಮತ್ತು ರಾಜಕೀಯ ಒಳಗೊಳ್ಳುವಿಕೆಯ ಪ್ರಯಾಣವನ್ನು ಆರಂಭಿಸುತ್ತಿದ್ದೇನೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ದೇಶದ ಅಭಿವೃದ್ಧಿಗೆ ಮತದಾನ ಪ್ರಕ್ರಿಯೆ ನಿರ್ಣಾಯಕ ಮೈಲುಗಲ್ಲಾಗಿದೆ. ವ್ಯಕ್ತಿ, ಸಮುದಾಯ ಮತ್ತು ದೇಶದ ಭವಿಷ್ಯವನ್ನು ಉಜ್ವಲವಾಗಿಸುವ ನಿಟ್ಟಿನಲ್ಲಿ ಮತ ಚಲಾವಣೆ ಮುಖ್ಯವಾಗಿದ್ದು, ಪ್ರತಿಯೊಬ್ಬರು ಪಾಲ್ಗೊಳ್ಳುವಂತೆ ಮನವಿ ಮಾಡುತ್ತೇನೆ.

– ಎಸ್.ಕೆ.ಸುಂದರರಾಜನ್, ಮೆಕ್ಯಾನಿಕಲ್ ಇಂಜಿನಿಯರಿಂಗ್, ವಿದ್ಯಾವರ್ಧಕ ಕಾಲೇಜು



● ಸಮಾಜದ ಎಲ್ಲರನ್ನು ಸಮಭಾವದಿಂದ ಮುನ್ನಡೆಸುವ ಅಭ್ಯರ್ಥಿಗೆ ನಾನು ಮತ ನೀಡುತ್ತೇನೆ. ಮೂಲಸೌಕರ್ಯಗಳನ್ನು ನೀಡುವವರಾಗಿರಬೇಕು. ವಿದ್ಯಾವಂತರಾಗಿ ಅಭಿವೃದ್ಧಿ ಕಾರ್ಯದಲ್ಲಿ ಜಾತಿ–ಧರ್ಮ ಪ್ರಸ್ತಾಪ ಮಾಡದ ಒಳ್ಳೆಯ ನಾಯಕತ್ವ ಗುಣಗಳು ಇರಬೇಕು. ಪ್ರಜಾಪ್ರಭುತ್ವದಲ್ಲಿ ಹೊಸಬರಿಗೆ ಅವಕಾಶ ಮಾಡಿಕೊಡಬೇಕು. ಯೋಚನೆ ಮಾಡಿ ವೋಟ್ ಮಾಡಿ ಎನ್ನುತ್ತೇವೆ. ನಾನು ಭಾರತೀಯ ಪ್ರಜೆಯಾಗಿ ತಪ್ಪದೆ ಮತದಾನ ಮಾಡುತ್ತೇನೆ. ಅದು ನನ್ನ ಹಕ್ಕು.

– ಎಂ.ರಕ್ಷಿತ, ಬಿಎಸ್‌ಸಿ, ಯುವರಾಜ ಕಾಲೇಜು



● ಭಾರತ ಸಂವಿಧಾನ ನೀಡಿರುವ ಮತದಾನದ ಹಕ್ಕನ್ನು ಚಲಾಯಿಸಲು ಕಾತುರದಿಂದ ಏ.26ನೇ ದಿನವನ್ನು ಎದುರು ನೋಡುತ್ತಿದ್ದೇನೆ. ಮೈಸೂರು–ಕೊಡಗು ಲೋಕಸಭಾ ಕ್ಷೇತ್ರ ಅತ್ಯಂತ ಪ್ರಮುಖ ಕ್ಷೇತ್ರವೆನಿಸಿದೆ. ಮೈಸೂರಿನ ಇತಿಹಾಸ, ಕೊಡಗಿನ ನಿಸರ್ಗವನ್ನು ಉಳಿಸುವ ನಿಟ್ಟಿನಲ್ಲಿ ಕೆಲಸ ಮಾಡುವ ಅಭ್ಯರ್ಥಿಗೆ ಮತ ಚಲಾಯಿಸುತ್ತೇನೆ. ಮೈಸೂರು–ಕೊಡಗು ಭಾಗದಲ್ಲಿ ಸುಭದ್ರ, ಸಮೃದ್ಧ ಸಮಾಜ ನಿರ್ಮಾಣ ಮಾಡುವವರಿಗೆ ನನ್ನ ಆದ್ಯತೆ.

– ಲಕ್ಷ ಶಿವಶಂಕರ್, ಇಂಜಿನಿಯರಿಂಗ್ ವಿದ್ಯಾರ್ಥಿನಿ, ಎಸ್‌ಜೆಸಿಇ



● ಚುನಾವಣೆಗಳು ಪ್ರಜಾಪ್ರಭುತ್ವದ ಮಹತ್ವ ಸಾರುವ ಹಬ್ಬವಾಗಿದೆ. ದೇಶದ ನಾಗರಿಕರ ಸಬಲೀಕರಣ, ಅಭಿವೃದ್ಧಿ ಪಥದತ್ತ ರಾಷ್ಟ್ರವನ್ನು ಕೊಂಡೊಯ್ಯುವ ನಿಟ್ಟಿನಲ್ಲಿ ನನ್ನ ಚೊಚ್ಚಲ ಮತವನ್ನು ಸೂಕ್ತ ಅಭ್ಯರ್ಥಿಗೆ ನೀಡುತ್ತೇನೆ. ಮತದಾನ ಮಾಡುವುದು ನನ್ನ ಗುರುತರ ಜವಾಬ್ದಾರಿ ಹಾಗೂ ಕರ್ತವ್ಯವೂ ಆಗಿದ್ದು, ಇತರರಿಗೆ ಯೋಚಿಸಿ, ಜಾಗೃತರಾಗಿ ಮತದಾನ ಮಾಡುವಂತೆ ತಿಳಿಸಲು ಬಯಸುತ್ತೇನೆ. ಅಭ್ಯರ್ಥಿ ಪೂರ್ವಪರ ವಿಚಾರಿಸಿ, ದೇಶದ ಅಭಿವೃದ್ಧಿಗೆ ಸೂಕ್ತರಾಗಿದ್ದಾರೆ ಎಂಬುವರಿಗೆ ಮತ ನೀಡುತ್ತೇನೆ.

– ಪರಿಣಿತಾ ಪಿ.ರಾವ್, ಮಾಹಿತಿ ವಿಜ್ಞಾನ ಮತ್ತು ಇಂಜಿನಿಯರಿಂಗ್ ವಿಭಾಗ, ವಿವಿಸಿಇ

ಸುಂಟಿಕೊಪ್ಪ ಹೋಬಳಿ ವ್ಯಾಪ್ತಿಯ ವಿವಿಧೆಡೆ ಪ್ರತಿನಿತ್ಯ ಮುಂದುವರೆದ

ಕಾಡಾನೆಗಳ ಉಪಟಳ

ಸುಂಟಿಕೊಪ್ಪ, ಏ.16–ಸುಂಟಿಕೊಪ್ಪ ಹೋಬಳಿ ವ್ಯಾಪ್ತಿಯಲ್ಲಿ ಕಾಡಾನೆಗಳ ಉಪಟಳ ಮತ್ತೆ ಮುಂದುವರೆದಿದ್ದು, ಕೃಷಿಕರು ಹಾಗೂ ಬೆಳೆಗಾರರು ಆತಂಕದಲ್ಲಿ ದಿನ ದೂಡುವಂತಾಗಿದೆ.

4–5 ದಿನಗಳಿಂದ ಕೊಡಗರಹಳ್ಳಿ, ಕಂಬಿಬಾಣೆ, 7ನೇ ಹೊಸಕೋಟೆ, ಮತ್ತಿಕಾಡು, ಭೂತನಕಾಡು, ಮೀನುಕೊಲ್ಲಿ, ಕೊಡಗರಹಳ್ಳಿಯ ಉಪ್ಪುತೋಡು, ಅತ್ತೂರು ನಲ್ಲೂರು, ತೊಂಡೂರು ವ್ಯಾಪ್ತಿಯಲ್ಲಿ ದೈತ್ಯ ಸಲಗ, ಒಂದು ಮರಿ, ತಾಯಿಯಾನೆ ಹಾಗೂ ಮಕ್ನಾನೆಯೊಂದು ನಿತ್ಯ ಸಂಚರಿಸುತ್ತಿದೆ. ಜೊತೆಗೆ ಮನೆ ಅಂಗಳಕ್ಕೆ ಬರುತ್ತಿವೆ. ಇದರಿಂದ ಜೀವ ಕೈಯಲ್ಲಿ ಹಿಡಿದು ಓಡಾಡುವಂತಾಗಿದೆ.

ಸೋಮವಾರ ರಾತ್ರಿ ಆಹಾರ ಅರಸಿ ಬಂದ ಕಾಡಾನೆಗಳ ಹಿಂಡು ಕೀರ್ತನ್ ಎಂಬುವ ತೋಟದ ಮನೆಯ ಅಂಗಳಕ್ಕೆ ಲಗ್ಗೆ ಇಟ್ಟು ಕಾಫಿ, ಬಾಳೆ, ಪಪ್ಪಾಯಿ ಗಿಡಗಳನ್ನು ತಿಂದು, ತುಳಿದು ನಾಶಗೊಳಿಸಿದೆ. ತೋಟದಲ್ಲಿದ್ದ ಕೊಳವೆ ಬಾವಿ ಹಾನಿಗೀಡಾಗಿದ್ದು, 40 ಸಾವಿರ ರೂ. ನಷ್ಟವುಂಟಾಗಿದೆ. ತಡರಾತ್ರಿ ಬಂದು ಮುಂಜಾನೆ ಆನೆಕಾಡು ಅಥವಾ ಮೀನುಕೊಲ್ಲಿ ಅರಣ್ಯಗಳಿಗೆ ಮರಳುತ್ತಿದ್ದ ಕಾಡಾನೆಗಳು ಇತ್ತೀಚೆಗೆ ಕೊಡಗರಹಳ್ಳಿ, ಉಪ್ಪುತೋಡು, ಕಂಬಿಬಾಣೆ ವ್ಯಾಪ್ತಿಯ ಕಾಫಿ ತೋಟಗಳಲ್ಲೇ ವಾಸ್ತವ್ಯ ಹೂಡುತ್ತಿರುವುದು ಮತ್ತಷ್ಟು ಆತಂಕಕ್ಕೆ ಕಾರಣವಾಗಿದೆ.

ಆನೆಗಳು ಕಾಡಿನಿಂದ ನಾಡಿನತ್ತ ಬಾರದಂತೆ ನೋಡಿಕೊಳ್ಳುವುದು ಅರಣ್ಯ ಇಲಾಖೆಯ ಆದ್ಯತೆಯಾಗಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ. ಕಾಡಾನೆಗಳ ಹಾವಳಿ ಈ ವ್ಯಾಪ್ತಿಯಲ್ಲಿ ಹಠಾತ್ತಾಗಿ ಕಾಣಿಸಿಕೊಂಡಿದ್ದು, ಕೆಲ ದಿನಗಳಿಂದ 2 ರಿಂದ 4 ಆನೆಗಳ ಗುಂಪು ಸಂಚರಿಸುತ್ತಿದೆ. ಎದುರಾಗಿರುವ ಬರಗಾಲದಲ್ಲಿ ವನ್ಯಜೀವಿ ಮಾನವ ಸಂಘರ್ಷ ಜೊತೆಗೆ ಕೃಷಿಕರ ಆಸ್ತಿ, ಫಸಲು ನಷ್ಟಗೊಳ್ಳುವುದರೊಂದಿಗೆ ಪ್ರಾಣ ಹಾನಿ ಸಂಭವಿಸುವುದಕ್ಕೆ ಮುನ್ನುಡಿ ಬರೆದಂತಾಗಿದೆ.



ಸುಂಟಿಕೊಪ್ಪ ಹೋಬಳಿ ವ್ಯಾಪ್ತಿಯ ರಸ್ತೆಗಳಲ್ಲಿ ಹಗಲಿನಲ್ಲೇ ಕಾಡಾನೆಗಳು ಸಂಚರಿಸುತ್ತಿರುವುದು.

ಇತ್ತೀಚೆಗೆ ಕಾಡಾನೆಗಳ ಹಾವಳಿ ಮಿತಿಮೀರಿದ್ದು, ಈ ವ್ಯಾಪ್ತಿಯ ತೋಟಗಳಲ್ಲಿ ಕಾರ್ಮಿಕರು ಜೀವ ಕೈಯಲ್ಲಿ ಹಿಡಿದು ಕೆಲಸ ನಿರ್ವಹಿಸಬೇಕಾಗಿದೆ. ಜೀವ ಹಾನಿ, ಬೆಳೆ ನಷ್ಟಕ್ಕೆ ಬೆಲೆ ಕಟ್ಟುವುದು ನಿಲ್ಲಿಸಿ. ಶಾಶ್ವತ ಪರಿಹಾರದ ಬೇಡಿಕೆ ಸಲ್ಲಿಸಿ ಒತ್ತಾಯಿಸುತ್ತಿದ್ದರೂ ನಮ್ಮ ಕೂಗು ಅರಣ್ಯ ರೋಧನವಾಗಿಯೇ ಉಳಿದುಕೊಂಡಿದೆ.

-ನಾರಾಯಣ ನಾಯಕ, ಕೊಡಗರಹಳ್ಳಿ ನಿವಾಸಿ

ಅರಣ್ಯ ಕಾರ್ಯಪಡೆಯಲ್ಲಿ ಕೆಲಸ ನಿರ್ವಹಿಸುತ್ತಿರುವವರು ಕಾಡ್ಗಿಚ್ಚು ತಡೆ ಕೆಲಸಗಳಿಗೂ ಬಳಕೆಯಾಗುತ್ತಿದ್ದಾರೆ. ಎಲ್ಲರಿಗೂ ಗೊತ್ತಿರುವಂತೆ ಇಲಾಖೆಯಲ್ಲಿ ಸಿಬ್ಬಂದಿ ಕೊರತೆಯಿಂದ ಆನೆ ಮಾನವ ಸಂಘರ್ಷದಲ್ಲಿ ಎಷ್ಟು ಉಪಶಮನ ಮತ್ತು ಪರಿಹಾರ ಸಾಧಿಸಬಹುದಾಗಿತ್ತೋ ಅಷ್ಟನ್ನು ಸಾಧಿಸಲು ಸಾಧ್ಯವಾಗಿಲ್ಲ.

-ಹೆಸರು ಹೇಳಲಿಚ್ಛಿಸದ ಆರ್‌ಆರ್‌ಟಿ ಸಿಬ್ಬಂದಿ

ಯುಪಿಎಸ್‌ಸಿ ಫಲಿತಾಂಶ: ಕೊಡಗಿನ ಸೂರಜ್‌ಗೆ 713ನೇ ರ್‍ಯಾಂಕ್

ಮಡಿಕೇರಿ, ಏ.16– 2023–24ನೇ ಸಾಲಿನ ಯುಪಿಎಸ್‌ಸಿ ಪರೀಕ್ಷೆ ಫಲಿತಾಂಶ ಪ್ರಕಟವಾಗಿದ್ದು, ಕೊಡಗಿನ ಕೆ.ಎಲ್.ಸೂರಜ್ 713ನೇ ರ್‍ಯಾಂಕ್ ಪಡೆದಿದ್ದಾರೆ. ಸೂರಜ್ ಪ್ರಸ್ತುತ ಬೆಂಗಳೂರಿನಲ್ಲಿ ಅಸಿಸ್ಟೆಂಟ್ ಸೆಂಟ್ರಲ್ ಇನ್‌ವೆಸ್ಟಿಗೇಷನ್ ಅಧಿಕಾರಿ ಆಗಿ ಕೇಂದ್ರ ಗೃಹ ಇಲಾಖೆಯ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಇವರ ತಂದೆ ಕೆ.ಬಿ.ಲಿಂಗರಾಜ್ ಮೈಸೂರಿನ ಸೆಂಟ್ರಲ್ ಕಸ್ಟಮ್ಸ್ ಇಲಾಖೆಯ ಜಿಎಸ್‌ಟಿ ವಿಭಾಗದ ಉನ್ನತ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.



ಇಬ್ಬರು ಮನೆಗಳ್ಳರ ಬಂಧನ: 177 ಗ್ರಾಂ ಚಿನ್ನಾಭರಣ ವಶ

ಮಡಿಕೇರಿ, ಏ.16–ಅಯ್ಯಂಗೇರಿ ಗ್ರಾಮದ ಮನೆಯೊಂದರ ಹಿಂಬಾಗಿಲು ಮುರಿದು ಚಿನ್ನಾಭರಣ ಕಳವು ಮಾಡಿದ ಯುವತಿ ಸೇರಿದಂತೆ ಇಬ್ಬರು ಆರೋಪಿಗಳನ್ನು ಮಂಗಳವಾರ ಬಂಧಿಸಿರುವ ಭಾಗಮಂಡಲ ಠಾಣೆ ಪೊಲೀಸರು, 177 ಗ್ರಾಂ ಚಿನ್ನಾಭರಣ, 1 ದ್ವಿಚಕ್ರ ವಾಹನ ಹಾಗೂ 2 ಮೊಬೈಲ್‌ಗಳನ್ನು ವಶಪಡಿಸಿಕೊಂಡಿದ್ದಾರೆ.



ಮಿದ್‌ಲಾಜ್



ಫಾತಿಮಾ

ಮಡಿಕೇರಿ ತಾಲೂಕಿನ ಅಯ್ಯಂಗೇರಿ ಗ್ರಾಮದ ನಿವಾಸಿಗಳಾದ ಕೆ.ಕೆ.ಮಿದ್ ಲಾಜ್(22) ಮತ್ತು ಫಾತಿಮಾ(26) ಬಂಧಿತ ಆರೋಪಿಗಳು.

ಅಯ್ಯಂಗೇರಿ ಗ್ರಾಮದ ನಿವಾಸಿ ಕೆ.ಜೆ.ಜಲೀನಾ ಏ.12ರಂದು ತಮ್ಮ ಸಂಬಂಧಿಕರ ಮನೆಗೆ ತೆರಳಿದ್ದರು. ಏ.13ರಂದು ಮನೆಗೆ ವಾಪಾಸ್ ಬಂದು ನೋಡಿದಾಗ ಮನೆಯ ಹಿಂಬಾಗಿಲು ಮುರಿದಿದ್ದು, ಬೀರುವಿನಲ್ಲಿದ್ದ ಚಿನ್ನಾಭರಣ ಕಳವಾಗಿರುವುದು ಪತ್ತೆಯಾಗಿದೆ. ಈ ಸಂಬಂಧ ಜಲೀನಾ ಭಾಗಮಂಡಲ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ನಂತರ ಪೊಲೀಸರು ತನಿಖೆ ನಡೆಸಿ, ಇಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ.

ಮಡಿಕೇರಿ ಡಿವೈಎಸ್‌ಪಿ ಎಸ್. ಮಹೇಶ್ ಕುಮಾರ್, ಗ್ರಾಮಾಂತರ ವೃತ್ತ ನಿರೀಕ್ಷಕ ಎಲ್.ಅರುಣ್, ಭಾಗಮಂಡಲ ಪೊಲೀಸ್ ಠಾಣಾಧಿಕಾರಿ ಶೋಭಾ ಲಮಾಣಿ, ನಾಪೋಕ್ಲು ಠಾಣಾಧಿಕಾರಿ ಈ.ಮಂಜುನಾಥ್, ಮಡಿಕೇರಿ ಗ್ರಾಮಾಂತರ ಹಾಗೂ ನಾಪೋಕ್ಲು ಠಾಣಾ ಪೊಲೀಸ್ ಸಿಬ್ಬಂದಿ ಕಾರ್ಯಾಚರಣೆ ನಡೆಸಿದರು.

ಇಂದು ಕುಮಾರಸ್ವಾಮಿ ವಿರುದ್ಧ ಪ್ರತಿಭಟನೆ



ಮಡಿಕೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ವಿಧಾನ ಪರಿಷತ್ ಮಾಜಿ ಸದಸ್ಯೆ ಶಾಂತೆಯಂಡ ವೀಣಾ ಅಚ್ಚಯ್ಯ ಮಾತನಾಡಿದರು.

ಮಡಿಕೇರಿ, ಏ.16– ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಹೇಳಿಕೆಯನ್ನು ಖಂಡಿಸಿ ನಗರದ ಹಳೇ ಖಾಸಗಿ ಬಸ್ ನಿಲ್ದಾಣದ ಬಳಿ ಏ.17ರಂದು ಮಹಿಳಾ ಕಾಂಗ್ರೆಸ್‌ನಿಂದ ಪ್ರತಿಭಟನೆ ನಡೆಸಲಾಗುವುದು ಎಂದು ವಿಧಾನ ಪರಿಷತ್ ಮಾಜಿ ಸದಸ್ಯೆ ಶಾಂತೆಯಂಡ ವೀಣಾ ಅಚ್ಚಯ್ಯ ತಿಳಿಸಿದರು.

ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರು ಹಾದಿ ತಪ್ಪುತ್ತಿದ್ದಾರೆ ಎಂದು ಹೆಚ್.ಡಿ.ಕುಮಾರಸ್ವಾಮಿ ನೀಡಿರುವ ಹೇಳಿಕೆ ಖಂಡನೀಯ. ಲೋಕಸಭಾ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟಕ್ಕೆ ಸ್ವಾಭಿಮಾನಿ ಮಹಿಳೆಯರು ತಕ್ಕ ಪಾಠ ಕಲಿಸಲಿದ್ದಾರೆ ಎಂದು ಹೇಳಿದರು.

ಕುಮಾರಸ್ವಾಮಿ ಹೇಳಿಕೆ ಮಹಿಳೆಯರ ಮೇಲೆ ಅವರು ಹೊಂದಿರುವ ದೃಷ್ಟಿಕೋನ ಪ್ರತಿಬಿಂಬಿಸುತ್ತದೆ. ಮಾಜಿ ಮುಖ್ಯಮಂತ್ರಿಯೊಬ್ಬರು ಈ ರೀತಿಯ ಹೇಳಿಕೆ ನೀಡಿರುವುದರಿಂದ ಇಡೀ ಮಹಿಳೆಯರನ್ನು ಅವಮಾನಿಸಿದಂತಾಗಿದೆ. ಕಾಂಗ್ರೆಸ್ ಮಹಿಳೆಯರನ್ನು ಪೂಜ್ಯ ಭಾವನೆಯಿಂದ ಕಾಣುತ್ತದೆ. ಇಡೀ ಸಮಾಜ ಮಹಿಳೆಯರನ್ನು ಕಾವೇರಿ, ಚಾಮುಂಡೇಶ್ವರಿ, ಭೂತಾಯಿ ಎಂದು ಕೈಮುಗಿಯುತ್ತದೆ. ಆದರೆ, ಮಹಿಳೆಯರ ಬಗ್ಗೆ ಕುಮಾರಸ್ವಾಮಿ ಅವರಿಗೆ ಇರುವ ಭಾವನೆಯನ್ನು ಯಾವ ಸ್ವಾಭಿಮಾನಿ ಮಹಿಳೆ ಕೂಡ ಸಹಿಸಲು ಸಾಧ್ಯವಿಲ್ಲ ಎಂದರು.

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಪಿ.ಚಂದ್ರಕಲಾ ಮಾತನಾಡಿದರು. ಸುದ್ದಿಗೋಷ್ಠಿಯಲ್ಲಿ ಮಹಿಳಾ ಕಾಂಗ್ರೆಸ್ ರಾಜ್ಯ ಉಪಾಧ್ಯಕ್ಷೆ ಶೈಲಾ ಕುಟ್ಟಪ್ಪ, ಜಿಲ್ಲಾಧ್ಯಕ್ಷೆ ಸುರಯ್ಯ ಅಬ್ರಾರ್, ಪ್ರಧಾನ ಕಾರ್ಯದರ್ಶಿ ಮಿನಾಜ್ ಪ್ರವೀಣ್, ಹಾಗೂ ನಗರಾಧ್ಯಕ್ಷೆ ಹೊಟ್ಟೆಯಂಡ ಫ್ಯಾನ್ಸಿ ಪಾರ್ವತಿ ಬೆಳ್ಯಪ್ಪ ಉಪಸ್ಥಿತರಿದ್ದರು.

ಭೂ ಗುತ್ತಿಗೆ ವಿರೋಧಿ ಐಕ್ಯ ಹೋರಾಟ ಸಮಿತಿಯಿಂದ ಪ್ರತಿಭಟನೆ

ವಿರಾಜಪೇಟೆ, ಏ.16–ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಭೂಗುತ್ತಿಗೆ ವಿರೋಧಿ ಐಕ್ಯ ಹೋರಾಟ ಸಮಿತಿಯ ಜಿಲ್ಲಾ ಘಟಕದ ವತಿಯಿಂದ ಪಟ್ಟಣದ ತಾಲೂಕು ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ದಸಂಸ ಜಿಲ್ಲಾ ಸಂಚಾಲಕ ಹಾಗೂ ಪುರಸಭೆ ಸದಸ್ಯ ವಿ.ಆರ್.ರಜನಿಕಾಂತ್ ಮಾತನಾಡಿ, ಸರ್ಕಾರ ಜಾರಿಗೊಳಿಸಿರುವ ಭೂ ಗುತ್ತಿಗೆ ಕಂದಾಯ ಕಾಯ್ದೆ ತಿದ್ದುಪಡಿ ರದ್ದುಗೊಳಿಸಬೇಕು. ಜಿಲ್ಲೆಯಲ್ಲಿ ಕಾರ್ಪೋರೇಟ್‌ಗಳು, ದೊಡ್ಡ ಭೂ ಮಾಲೀಕರು ಒತ್ತುವರಿ ಮಾಡಿ ಕೊಂಡಿರುವ ಭೂಮಿಯನ್ನು ಸರ್ಕಾರ ತೆರವುಗೊಳಿಸಿ, ಬಡವರಿಗೆ ಹಂಚಬೇಕು ಎಂದು ಒತ್ತಾಯಿಸಿದರು. ಸಿಪಿಐಎಂ ಜಿಲ್ಲಾ ಕಾರ್ಯದರ್ಶಿ ಹೆಚ್.ಬಿ.ರಮೇಶ್ ಮಾತನಾಡಿ, ಜಿಲ್ಲೆಯ ಇತರೆಡೆ ಭೂ ರಹಿತ ಆದಿವಾಸಿ, ದಲಿತ ಸಮುದಾಯ, ಆರ್ಥಿಕವಾಗಿ ಹಿಂದುಳಿದ ಮೇಲ್ವರ್ಗದವರಿಗೆ ಭೂಮಿ ನೀಡಬೇಕು. 2–3 ಎಕರೆ ಕೃಷಿ ಭೂಮಿ ಹೊಂದಿರುವ ಜಿಲ್ಲೆಯ ಸಣ್ಣ ಬೆಳೆಗಾರರಿಗೂ ತಲಾ 5 ಎಕರೆ ಸರ್ಕಾರಿ ಭೂಮಿ ನೀಡಬೇಕು. ನದಿ ತೀರ ಹಾಗೂ ಅರಣ್ಯದಂಚು ಸೇರಿದಂತೆ ಪೈಸಾರಿಯಲ್ಲಿ ವಾಸಿಸುವ ಬಡವರಿಗೆ ಸರ್ಕಾರ ಕೂಡಲೇ ಬದಲಿ ವ್ಯವಸ್ಥೆ ಮಾಡಬೇಕು ಎಂದು ಆಗ್ರಹಿಸಿದರು.

ನಂತರ ತಹಶೀಲ್ದಾರ್ ಹೆಚ್.ಎನ್.ರಾಮಚಂದ್ರ ಅವರಿಗೆ ಮನವಿ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ದಲಿತ ವಿದ್ಯಾರ್ಥಿ ಒಕ್ಕೂಟದ ಜಿಲ್ಲಾ ಸಂಚಾಲಕ ಹೆಚ್.ಬಿ.ಸತೀಶ್, ತಾಲೂಕು ಸಂಚಾಲಕ ಹೆಚ್.ಬಿ.ನಾಗೇಶ್, ಅಂಬೇಡ್ಕರ್ ವಾದ ತಾಲೂಕು ಸಂಚಾಲಕ ಲವ, ಪ್ರೊ.ಕೃಷ್ಣಪ್ಪ ಸ್ಥಾಪಿತ ದಲಿತ ಸಮಿತಿ ಜಿಲ್ಲಾ ಸಂಚಾಲಕಿ ಗಾಯತ್ರಿ ನರಸಿಂಹ, ದಲಿತ ಹಕ್ಕುಗಳ ಸಮನ್ವಯ ಸಮಿತಿ ಜಿಲ್ಲಾ ಸಂಚಾಲಕ ಹೆಚ್.ಆರ್.ಶಿವಪ್ಪ ಮತ್ತಿತರರು ಭಾಗವಹಿಸಿದ್ದರು.



ಭೂಗುತ್ತಿಗೆ ವಿರೋಧಿ ಐಕ್ಯ ಹೋರಾಟ ಸಮಿತಿ ವತಿಯಿಂದ ತಹಶೀಲ್ದಾರ್ ಹೆಚ್.ಎನ್.ರಾಮಚಂದ್ರ ಅವರಿಗೆ ಮನವಿ ಸಲ್ಲಿಸಲಾಯಿತು.

ಕೆ.ಕೆ.ಮಂಜುನಾಥ್ ಗೆಲುವು ನಿಶ್ಚಿತ

ಮಡಿಕೇರಿ, ಏ.16–ನೈರುತ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಕೆ.ಕೆ.ಮಂಜುನಾಥ್ ಕುಮಾರ್ ಗೆಲುವು ಸಾಧಿಸುವುದು ನಿಶ್ಚಿತ ಎಂದು ಕೊಡಗು ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಟಿ.ಪಿ.ರಮೇಶ್ ತಿಳಿಸಿದರು.

ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲೋಕಸಭಾ ಚುನಾವಣೆ ನಂತರ ನೈರುತ್ಯ ಶಿಕ್ಷಕರ ಚುನಾವಣೆ ನಡೆಯಲಿದೆ. ಇಡೀ ಕಾಂಗ್ರೆಸ್ ಬಳಗ ಮಂಜುನಾಥ್ ಕುಮಾರ್ ಅವರ ಗೆಲುವಿಗಾಗಿ ಶ್ರಮಿಸಲಿದೆ ಎಂದರು. ಶಿಕ್ಷಕರ ಕ್ಷೇತ್ರದಿಂದ 2 ಬಾರಿ ಚುನಾವಣೆ ಎದುರಿಸಿದ್ದ ಮಂಜುನಾಥ್ ಕುಮಾರ್, ಅಲ್ಪ ಮತಗಳ ಅಂತರದಿಂದ ಸೋಲು ಅನುಭವಿಸಿದ್ದರು. ಆದರೆ, ಈ ಬಾರಿ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವಿದ್ದು, ನೈರುತ್ಯ ಶಿಕ್ಷಕರ ಕ್ಷೇತ್ರ ವ್ಯಾಪ್ತಿ 15 ಕಾಂಗ್ರೆಸ್ ಶಾಸಕರೇ ಇದ್ದಾರೆ. ಕೊಡಗು ಜಿಲ್ಲೆಯಲ್ಲಿ 1500 ಮತದಾರರಿದ್ದು, ಇಬ್ಬರು ಶಾಸಕರು ಕಾಂಗ್ರೆಸ್ಸಿನವರೇ ಆಗಿರುವುದರಿಂದ ಗೆಲುವು ಮಂಜುನಾಥ್ ಕುಮಾರ್ ಅವರ ಸಮೀಪದಲ್ಲೇ ಇದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕೆ.ಕೆ.ಮಂಜುನಾಥ್ ಕುಮಾರ್ ಮಾತನಾಡಿ, ನಾನು ಗೆದ್ದು ಬಂದರೆ ಎಲ್ಲಾ ಶಿಕ್ಷಕ ವೃಂದಕ್ಕೆ ಉಚಿತ ವಿಮಾ ಸೌಲಭ್ಯ ಜಾರಿಗೊಳಿಸಿ ಸರ್ಕಾರಕ್ಕೆ ಶಿಫಾರಸ್ಸು ಮಾಡುವುದು. ಹಳೇ ಪಿಂಚಣಿ ಯೋಜನೆಯನ್ನು ಮರು ಜಾರಿಗೆ ತರಲು ನಾವು ಬದ್ಧರಾಗಿದ್ದೇವೆ. ಹಳೆಯ ಪಿಂಚಣಿ ಯೋಜನೆಯನ್ನು 2006 ಏ.1ರಂದು ಅಂದಿನ ಜೆಡಿಎಸ್ ಮತ್ತು ಬಿಜೆಪಿ ಸಮ್ಮಿಶ್ರ ಸರ್ಕಾರ ರದ್ದು ಮಾಡಿತು. 2006 ಮಾ.31ಕ್ಕಿಂತ ಮೊದಲು ನೇಮಕಾತಿಯಾದ ಖಾಸಗಿ ಅನುದಾನಿತ ಶಿಕ್ಷಕರಿಗೆ ಹಳೇ ಪಿಂಚಣಿ ಯೋಜನೆ ಈಗಲೂ ಅನ್ವಯವಾಗುತ್ತಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ನಗರ ಕಾಂಗ್ರೆಸ್ ಅಧ್ಯಕ್ಷ ಬಿ.ವೈ.ರಾಜೇಶ್, ಉಪಾಧ್ಯಕ್ಷ ಮಂಡೀರ ಸದಾ ಮುದ್ದಪ್ಪ ಹಾಗೂ ಪ್ರಮುಖರಾದ ಪುದಿಯನೆರವನ ರೇವತಿ ರಮೇಶ್ ಉಪಸ್ಥಿತರಿದ್ದರು.



ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಟಿ.ಪಿ.ರಮೇಶ್ ಮಾತನಾಡಿದರು.

ಕಾಂಗ್ರೆಸ್‌ಗೆ ಹಳೇ ಡೈಲಾಗ್ ಬಿಟ್ಟು ಬೇರೇನು ಸಿಗುತ್ತಿಲ್ಲ

ರಾಜ್ಯ ಸರ್ಕಾರದ ವಿರುದ್ಧ ಜೆಡಿಎಸ್ ಮುಖಂಡ ಬಂಡೆಪ್ಪ ಕಾಶೆಂಪೂರ್ ಲೇವಡಿ



ಚಾಮರಾಜನಗರದ ಜಿಲ್ಲಾ ಪತ್ರಕರ್ತ ಸಂಘದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಜೆಡಿಎಸ್ ಮುಖಂಡ ಬಂಡೆಪ್ಪ ಕಾಶೆಂಪೂರ್ ಮಾತನಾಡಿದರು. ಎನ್.ಮಹೇಶ್, ಎಸ್.ಬಾಲರಾಜ್, ಸಿ.ಎಂ.ನಾಗರಾಜು, ಬಿ.ಪುಟ್ಟಸ್ವಾಮಿ ಇದ್ದರು.

ಚಾಮರಾಜನಗರ, ಏ.16–ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ವಿರುದ್ಧ ಮಾತನಾಡಲು ಕಾಂಗ್ರೆಸ್ ನಾಯಕರಿಗೆ ಹಳೇ ಡೈಲಾಗ್ ಬಿಟ್ಟು ಬೇರೇನೂ ಸಿಗುತ್ತಿಲ್ಲ ಎಂದು ಜೆಡಿಎಸ್ ಮುಖಂಡ ಬಂಡೆಪ್ಪ ಕಾಶೆಂಪೂರ್ ಲೇವಡಿ ಮಾಡಿದರು.

ನಗರದ ಜಿಲ್ಲಾ ಪತ್ರಕರ್ತ ಸಂಘದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ನಾಯಕರ ಹಳೇ ಡೈಲಾಗ್‌ಗಳಾದ 15 ಲಕ್ಷ ರೂ. ಖಾತೆಗೆ ಹಾಕಿದ್ದರಾ, 2 ಕೋಟಿ ಉದ್ಯೋಗ ಸೃಷ್ಟಿಸಿದ್ದೀರಾ ಎನ್ನುವುದು ಬಿಟ್ಟರೆ ಬೇರೇನೂ ಅವರಿಗೆ ಸಿಗುತ್ತಿಲ್ಲ. ನರೇಂದ್ರ ಮೋದಿ 10 ವರ್ಷಗಳಿಂದ ಉತ್ತಮ ಆಡಳಿತ ನಡೆಸಿದ್ದಾರೆ. ಯುಪಿಎ ಸರ್ಕಾರದ ಅವಧಿಯಲ್ಲಿ ನಡೆದ ಹಗರಣಗಳಂತೆ 10 ವರ್ಷಗಳಲ್ಲಿ ಯಾವುದೇ ಹಗರಣಗಳು ನಡೆದಿಲ್ಲ. ಅದಕ್ಕೆ ಕಾಂಗ್ರೆಸ್‌ನವರಿಗೆ ಟೀಕಿಸಲು ಬೇರೆ ಏನು ಸಿಗುತ್ತಿಲ್ಲ ಎಂದರು.

ನರೇಂದ್ರ ಮೋದಿ ನೇತೃತ್ವದ ಆಡಳಿತದ 10 ವರ್ಷದಲ್ಲಿ ದೇಶದಲ್ಲಿ ಉತ್ತಮ ರಸ್ತೆಗಳು, ರೈಲ್ವೆ ಯೋಜನೆಗಳು, ಆಯುಷ್ಮಾನ್ ಭಾರತ್ ಕಾರ್ಡ್ ಮೂಲಕ 5 ಲಕ್ಷದವರೆಗೂ ಉಚಿತ ಆರೋಗ್ಯ ಸೇವೆ, ಜಲಜೀವನ್ ಮಿಷನ್ ಯೋಜನೆಯಡಿ ಕುಡಿಯುವ ನೀರು ಸೇರಿದಂತೆ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಕೇಂದ್ರ ಸರ್ಕಾರ ಮಾಡಿದೆ ಎಂದು ತಿಳಿಸಿದರು.

ರೈತರಿಗೆ ಯಾವ ಗ್ಯಾರಂಟಿಯೂ ಇಲ್ಲ: ರಾಜ್ಯದ ಕಾಂಗ್ರೆಸ್ ಸರ್ಕಾರ ಮಹಿಳೆಯರು ಹಾಗೂ ಯುವಕರಿಗೆ ಗ್ಯಾರಂಟಿ ಯೋಜನೆಗಳನ್ನು ನೀಡಿದೆ. ಅದು ಪೂರ್ಣ ಪ್ರಮಾಣದಲ್ಲಿ ಆಗಿಲ್ಲ. ಒಂದು ಕಡೆ ಕೊಟ್ಟು ಇನ್ನೊಂದು ಕಡೆ ಕಿತ್ತುಕೊಳ್ಳುವ ಕೆಲಸ ಮಾಡುತ್ತಿದ್ದು, ರಾಜ್ಯದ ರೈತರಿಗೆ ಯಾವುದೇ ಗ್ಯಾರಂಟಿ ಯೋಜನೆಗಳನ್ನು ನೀಡದೆ ಮೋಸ ಮಾಡಿದೆ ಎಂದು ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್, ಚಾ.ನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜ್, ಜೆಡಿಎಸ್ ರಾಜ್ಯ ವಕ್ತಾರ ಸಿ.ಎಂ.ನಾಗರಾಜು, ಜೆಡಿಎಸ್ ಮುಖಂಡ ಬಿ.ಪುಟ್ಟಸ್ವಾಮಿ, ಬಿಜೆಪಿ ಮುಖಂಡ ಸಿ.ಎನ್.ಬಾಲರಾಜ್, ಬಿಜೆಪಿ ಜಿಲ್ಲಾ ವಕ್ತಾರ ಕಾಡಹಳ್ಳಿ ಕುಮಾರ್ ಇದ್ದರು.

ಸಂವಿಧಾನ ಉಳಿವಿಗಾಗಿ ಕಾಂಗ್ರೆಸ್ ಬೆಂಬಲಿಸಿ

ಹನೂರಿನಲ್ಲಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಮನವಿ

ಹನೂರು, ಏ.16–ಸಂವಿಧಾನ ಉಳಿಸುವ ನಿಟ್ಟಿನಲ್ಲಿ ಕಾಂಗ್ರೆಸ್ ಬೆಂಬಲಿಸಬೇಕು ಎಂದು ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಮನವಿ ಮಾಡಿದರು.

ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಪರಿಶಿಷ್ಟ ಜಾತಿ ಸಮುದಾಯದ ಮುಖಂಡರ ಸಭೆಯಲ್ಲಿ ಮಾತನಾಡಿದ ಅವರು, ಪ್ರತಿಯೊಬ್ಬರು ಸಂವಿಧಾನದ ಬಗ್ಗೆ ತಿಳಿದುಕೊಳ್ಳಬೇಕೆಂಬ ದೃಷ್ಟಿಯಿಂದ ರಾಜ್ಯಾದ್ಯಂತ ಸಂವಿಧಾನ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಸರ್ಕಾರಿ ಶಾಲೆಗಳಲ್ಲಿ ನಿತ್ಯ ಸಂವಿಧಾನ ಪೀಠಿಕೆ ಓದುವುದು ಹಾಗೂ ಚರ್ಚೆ ನಡೆದಾಗ ಇದರ ಮೂಲ ಉದ್ದೇಶ ತಿಳಿಯುತ್ತದೆ. ರಾಜ್ಯದಲ್ಲಿ ಮಹಿಳೆಯರಿಗೆ ನಿರ್ದಿಷ್ಟವಾದ ಆದಾಯ ಇಲ್ಲದಿರುವುದರಿಂದ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಗೃಹಲಕ್ಷ್ಮಿ ಯೋಜನೆಯಡಿ 2 ಸಾವಿರ ರೂ. ನೀಡಲಾಗುತ್ತಿದೆ ಎಂದು ತಿಳಿಸಿದರು.

ಪ್ರತಿಯೊಬ್ಬರಿಗೂ ಸಮಾನ ಅವಕಾಶ ಕೊಡುವ ನಿಟ್ಟಿನಲ್ಲಿ ಬಜೆಟ್‌ನಲ್ಲಿ ಸಂವಿಧಾನದ ಆಶಯದಂತೆ ಗ್ಯಾರಂಟಿ ಯೋಜನೆಗಳನ್ನು ಕಲ್ಪಿಸಲಾಗಿದೆ. ಬಿಜೆಪಿಯವರು ಒಂದು ಧರ್ಮದ ದೇಶ ಕಟ್ಟಬೇಕು. ಒಂದು ಮತ, ಒಂದು ಚುನಾವಣೆ, ಒಂದು ರಾಷ್ಟ್ರ ಎಂದು ಹೇಳಲು ಹೊರಟಿದ್ದಾರೆ ಎಂದು ಆರೋಪಿಸಿದರು.

ಮಾಜಿ ಶಾಸಕ ಆರ್.ನರೇಂದ್ರ ಮಾತನಾಡಿ, ಚುನಾವಣಾ ಪೂರ್ವದಲ್ಲಿ ಐದು ಗ್ಯಾರಂಟಿಗಳನ್ನು ಘೋಷಣೆ ಮಾಡಿದಾಗ ಬಿಜೆಪಿಯವರು ಹಾಸ್ಯ ಮಾಡಿದರು. ನೀವು ಯಾವ ಕಾರಣಕ್ಕೂ ಗ್ಯಾರಂಟಿ ಅನುಷ್ಠಾನ ಮಾಡಲು ಸಾಧ್ಯವೇ ಇಲ್ಲ. ರಾಜ್ಯ ದೀವಾಳಿಯಾಗುತ್ತದೆ ಎಂದಿದ್ದರು ಎಂದು ತಿಳಿಸಿದರು. ಮಾಜಿ ಸಚಿವ ಕೋಟೆ ಶಿವಣ್ಣ ಮಾತನಾಡಿದರು. ಮಾಜಿ ಶಾಸಕ ಜಿ.ಎನ್.ನಂಜುಂಡಸ್ವಾಮಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮುಕುಂದ ವರ್ಮಾ, ಈಶ್ವರ್, ಪಪಂ ಸದಸ್ಯ ಗಿರೀಶ್, ಮುಖಂಡರಾದ ಹರೀಶ್, ಸಂಪತ್, ರಾಮಪುರ ಬಸವರಾಜು, ವಿಷ್ಣುಕುಮಾರ್, ಮದುವನಹಳ್ಳಿ ಶಿವಕುಮಾರ್, ಪಾಳ್ಯ ಕೃಷ್ಣ, ಮಂಗಲ ಪುಟ್ಟರಾಜು, ಮಾದೇಶ್, ಅಶ್ವಿನ್ ಉದ್ಯಮಿ ರಂಗಸ್ವಾಮಿ ಹಾಜರಿದ್ದರು.



ಹನೂರಿನ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಪರಿಶಿಷ್ಟ ಜಾತಿ ಸಮುದಾಯದ ಮುಖಂಡರ ಸಭೆಯಲ್ಲಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಮಾತನಾಡಿದರು.

ಬೇಗೂರಿನಲ್ಲಿ ವಿಜೃಂಭಣೆಯ ಮಹದೇಶ್ವರ ರಥೋತ್ಸವ



ಗುಂಡ್ಲುಪೇಟೆ ತಾಲೂಕಿನ ಬೇಗೂರಿನ ಬಂಡಿಗೆರೆ ಮಹದೇಶ್ವರಸ್ವಾಮಿಯ ರಥೋತ್ಸವ ಭಕ್ತರ ಸಮ್ಮುಖದಲ್ಲಿ ಮಂಗಳವಾರ ನಡೆಯಿತು.

ಬೇಗೂರು, ಏ.16–ಗುಂಡ್ಲುಪೇಟೆ ತಾಲೂಕಿನ ಬೇಗೂರು ಗ್ರಾಮದ ಬಂಡಿಗೆರೆ ಮಹದೇಶ್ವರಸ್ವಾಮಿ ರಥೋತ್ಸವ ಮಂಗಳವಾರ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನಡೆಯಿತು.

ಮುಂಜಾನೆ ದೇವಾಲಯ ಆವರಣಕ್ಕೆ ಉತ್ಸವ ಮೂರ್ತಿಗಳು ಬಂದ ನಂತರ ಕೊಂಡೋತ್ಸವ ನಡೆಯಿತು. ಬೇಗೂರು ಸೇರಿದಂತೆ ಅಕ್ಕಪಕ್ಕದ ಗ್ರಾಮಗಳ ಭಕ್ತರು ಸರದಿ ಸಾಲಿನಲ್ಲಿ ಸ್ವಾಮಿಗೆ ಪೂಜೆ ಸಲ್ಲಿಸಿದರು. ಹರಕೆ ಹೊತ್ತ ಭಕ್ತರು ಹುಲಿ ವಾಹನ ಸೇವೆ ನಡೆಸಿದರು.

ಸಂಜೆ ಉತ್ಸವ ಮೂರ್ತಿಯನ್ನು ನೂತನ ತೇರಿನಲ್ಲಿ ಪ್ರತಿಷ್ಠಾಪಿಸಿ, ಭಕ್ತರ ಜಯ ಘೋಷದೊಂದಿಗೆ ರಥೋತ್ಸವ ನಡೆಯಿತು. ಇದೇ ವೇಳೆ ಗುಂಡ್ಲುಪೇಟೆ ತಾಲೂಕಿನ ಕಮರಹಳ್ಳಿ ಬಸವೇಶ್ವರ, ಬೆಳಚಲವಾಡಿ ರಾಮಲಿಂಗೇಶ್ವರ ಉತ್ಸವ ಮೂರ್ತಿಗಳು ಮಹದೇಶ್ವರ ದೇವಾಲಯ ಸುತ್ತ ಪ್ರದಕ್ಷಿಣೆ ಹಾಕಿದವು. ಬೇಗೂರು ಠಾಣೆ ಪೊಲೀಸರು ಬಿಗಿಬಂದೋಬಸ್ತ್ ಏರ್ಪಡಿಸಿದ್ದರು.

ಜಾನುವಾರುಗಳಿಗೆ ನೀರಿನ ವ್ಯವಸ್ಥೆಗೆ ಡಿಸಿ ಸೂಚನೆ

ಚಾಮರಾಜನಗರ, ಏ.16–ಬರ ಹಿನ್ನೆಲೆಯಲ್ಲಿ ಜಿಲ್ಲೆಯ ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆ ಉಂಟಾಗಿದ್ದು, ನೀರಿನ ಕೊರತೆ ಇರುವ ಗ್ರಾಮಗಳ ದನಕರುಗಳಿಗೆ ಆಯಾ ತಾಲೂಕಿನ ತಹಶೀಲ್ದಾರ್ ಹಾಗೂ ತಾಪಂ ಇಓ, ಪಶುಪಾಲನಾ ಇಲಾಖೆಯ ಅಧಿಕಾರಿಗಳು ಕುಡಿಯುವ ನೀರಿನ ವ್ಯವಸ್ಥೆ ಮಾಡುವಂತೆ ಜಿಲ್ಲಾಧಿಕಾರಿ ಶಿಲ್ಪನಾಗ್ ಸೂಚಿಸಿದ್ದಾರೆ.

ನೀರಿನ ಕೊರತೆ ಇರುವ ಗ್ರಾಮಗಳಲ್ಲಿ ನೀರಿನ ತೊಟ್ಟಿಗಳನ್ನು ಪರಿಶೀಲಿಸಿ, ಸ್ವಚ್ಛತೆಗೊಳಿಸಬೇಕು. ತೊಟ್ಟಿಗಳು ದುರಸ್ತಿಯಲ್ಲಿದ್ದರೆ ಸರಿಪಡಿಸಬೇಕು. ನೀರಿನ ಯಾವುದೇ ಮೂಲಗಳು ಇಲ್ಲದಿದ್ದಲ್ಲಿ ಜಾನುವಾರುಗಳಿಗೆ ಟ್ಯಾಂಕರ್ ಮೂಲಕ ತೊಟ್ಟಿಗಳಿಗೆ ನೀರು ಸರಬರಾಜು ಮಾಡಲು ಅಗತ್ಯ ಕ್ರಮ ವಹಿಸಬೇಕು. ತಪ್ಪಿದ್ದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಕಾಯ್ದೆ ಅನ್ವಯ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಎಚ್ಚರಿಸಿದ್ದಾರೆ.

ಉನ್ನತ ಹುದ್ದೆಗಳ ಗುರಿ ಸಾಧನೆಗೆ ಪರಿಶ್ರಮ ಮುಖ್ಯ



ಚಾ.ನಗರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಜಿಲ್ಲಾಧಿಕಾರಿ ಶಿಲ್ಪನಾಗ್, ಜಿಪಂ ಸಿಇಓ ಆನಂದ್ ಪ್ರಕಾಶ್ ಮೀನಾ, ಡಿಡಿಪಿಯು ಮಂಜುನಾಥ ಪ್ರಸನ್ನ ಇದ್ದರು.

ಚಾಮರಾಜನಗರ, ಏ.16–ವಿದ್ಯಾರ್ಥಿಗಳು ಉನ್ನತ ಹುದ್ದೆ ಪಡೆಯಲು ಓದಿನಲ್ಲಿ ಶ್ರದ್ಧೆ, ಪರಿಶ್ರಮ, ತಾಳ್ಮೆ ಹಾಗೂ ಆತ್ಮವಿಶ್ವಾಸ ಇರಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪನಾಗ್ ತಿಳಿಸಿದರು. ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪದವಿಪೂರ್ವ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಪ್ರಾಂಶುಪಾಲರ ಸಂಘದಿಂದ ಆಯೋಜಿಸಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರತಿಯೊಬ್ಬ ವಿದ್ಯಾರ್ಥಿಗೂ ಉನ್ನತ ಸ್ಥಾನ ಪಡೆಯಲು ಉತ್ತಮ ಅವಕಾಶಗಳಿವೆ. ಅವುಗಳನ್ನು ಸದ್ಬಳಕೆ ಮಾಡಿಕೊಳ್ಳ ಬೇಕು ಎಂದು ಸಲಹೆ ನೀಡಿದರು.

ಜಿಪಂ ಸಿಇಓ ಆನಂದ್ ಪ್ರಕಾಶ್ ಮೀನಾ ಮಾತನಾಡಿ, ಭವಿಷ್ಯದಲ್ಲಿ ನಿಗದಿತ ಗುರಿ ಸಾಧನೆಗೆ ಪ್ರಯತ್ನಿಸಬೇಕು. ವಿದ್ಯಾರ್ಥಿಗಳ ಸಾಧನೆಗೆ ಪೋಷಕರು, ಶಿಕ್ಷಕರ ಸಹಕಾರ ಮುಖ್ಯವಾಗಿದೆ ಎಂದರು.

ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮಂಜುನಾಥ ಪ್ರಸನ್ನ ಮಾತನಾಡಿ, ಜಿಲ್ಲೆಯಲ್ಲಿ ಉನ್ನತ ಶ್ರೇಣಿ ಪಡೆದಿರುವ ಕಲಾ ವಿಭಾಗದಲ್ಲಿ 3, ವಾಣಿಜ್ಯ ವಿಭಾಗದಲ್ಲಿ 6 ಮತ್ತು ವಿಜ್ಞಾನ ವಿಭಾಗದ ಮೂವರು ಸೇರಿದಂತೆ ಒಟ್ಟು 12 ವಿದ್ಯಾರ್ಥಿಗಳನ್ನು ಜಿಲ್ಲಾಡಳಿತದಿಂದ ಗೌರವಿಸಲಾಗುತ್ತಿದೆ ಎಂದರು.

ಜಿಲ್ಲಾ ಪ್ರಾಂಶುಪಾಲರ ಸಂಘದಿಂದ ಉತ್ತಮ ಅಂಕ ಪಡೆದ ಜಿಲ್ಲೆಯ ವಿವಿಧ ಕಾಲೇಜು ವಿದ್ಯಾರ್ಥಿಗಳಿಗೆ ಸ್ಮರಣಿಕೆ ಹಾಗೂ ನಗದು ಬಹುಮಾನ ನೀಡಿ ಸನ್ಮಾನಿಸಲಾಯಿತು. ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ವಿದ್ಯಾರ್ಥಿಗಳ ಪೋಷಕರು, ಶಿಕ್ಷಕರು ಇದ್ದರು.

ರೈತ ಸಂಘದ ಕಾರ್ಯಕರ್ತರ ಪ್ರತಿಭಟನೆ

ಕೊಳ್ಳೇಗಾಲ, ಏ.16–ರೈತರ ಬಗ್ಗೆ ಜಿಲ್ಲಾಡಳಿತ ಹಾಗೂ ತಾಲೂಕು ಆಡಳಿತದ ನಿರ್ಲಕ್ಷ್ಯ ವಹಿಸುತ್ತಿದೆ ಎಂದು ಆರೋಪಿಸಿ ರೈತ ಸಂಘದ ಕಾರ್ಯಕರ್ತರು ತಾಲೂಕು ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದರು.

ಪಟ್ಟಣದ ಆರ್‌ಎಂಸಿ ಆವರಣದಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರು, ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿ ತಾಲೂಕು ಕಚೇರಿ ಬಳಿಗೆ ಆಗಮಿಸಿದರು. ಜಾನುವಾರುಗಳಿಗೆ ಮೇವು, ಕುಡಿಯುವ ನೀರು ಹಾಗೂ ರೈತರ ತೋಟದ ಮನೆಗಳಿಗೆ ಸಮರ್ಪಕವಾಗಿ ವಿದ್ಯುತ್ ಪೂರೈಸುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ನಂತರ ತಹಸೀಲ್ದಾರ್ ಮಂಜುಳಾ ಅವರಿಗೆ ಮನವಿ ಸಲ್ಲಿಸಿದರು. ರೈತ ಸಂಘದ ಕಾರ್ಯಾಧ್ಯಕ್ಷ ಶೈಲೇಂದ್ರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಭಾಸ್ಕರ್, ತಾಲೂಕು ಅಧ್ಯಕ್ಷ ಶಿವಮೂರ್ತಿ, ಪ್ರಧಾನ ಕಾರ್ಯದರ್ಶಿ ಪೆರಿಯಾನಾಯಗಂ, ರವಿನಾಯ್ಡು, ಗೌಡೇಗೌಡ, ಜಯರಾಜು, ಮಹದೇವ, ಶಿವಕುಮಾರ್, ರಾಜು, ಸಿದ್ದಪ್ಪಸ್ವಾಮಿ, ಜಪಮಾಲೆ, ಲಾರೆನ್ಸ್ ಮತ್ತಿತರರು ಪ್ರತಿಭಟನೆಯಲ್ಲಿದ್ದರು.



ಕೊಳ್ಳೇಗಾಲ ತಾಲೂಕು ಕಚೇರಿ ಮುಂಭಾಗ ರೈತರ ಸಂಘದ ಕಾರ್ಯಕರ್ತರು ಪ್ರತಿಭಟಿಸಿದರು.

ಮೂರನೇ ಪುಟದಿಂದ

ರಾಹುಲ್‌ಗಾಂಧಿ ಮತಬೇಟೆ

ವರ್ಗಕ್ಕೆ ಸಲ್ಲುವ ಯೋಜನೆಯನ್ನು ಜಾರಿಗೊಳಿಸಿರಲಿಲ್ಲ. ಕರ್ನಾಟಕದ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆ ಜಾರಿಗೊಳಿಸಿ ಜನತೆಗೆ ಸವಲತ್ತನ್ನು ಕಲ್ಪಿಸಿದೆ. ಇದನ್ನು ಸಹಿಸಲು ಆಗದೆ ಮೈತ್ರಿ ಪಕ್ಷಗಳು ತಲೆ ಕೆಟ್ಟಂತೆ ಆಡುತ್ತಿವೆ. ಮುಂದಿನ ದಿನಗಳಲ್ಲಿ ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಮತ್ತಷ್ಟು ಗ್ಯಾರಂಟಿ ಯೋಜನೆ ಜಾರಿಯಾಗಿ ಜನತೆಗೆ ಅನುಕೂಲವಾಗಲಿದೆ ಎಂದರು.

ರಾಜ್ಯದಲ್ಲಿ ಮೈತ್ರಿ ಪಕ್ಷಗಳ ಯಶಸ್ಸು ಸಾಧ್ಯವಿಲ್ಲ. ಈಗಾಗಲೇ ಹಲವು ಚುನಾವಣೆಗಳಲ್ಲಿ ಇದು ಸಾಬೀತಾಗಿದೆ. ದೇವೇಗೌಡರು ಪ್ರಧಾನಿಯಾಗಿದ್ದಾಗ, ಕುಮಾರಸ್ವಾಮಿ ಎರಡು ಬಾರಿ ಮುಖ್ಯಮಂತ್ರಿ ಆಗಿದ್ದಾಗ ಕಾವೇರಿ ಸಮಸ್ಯೆಗೆ ಪರಿಹಾರ ದೊರಕದಿದ್ದಾಗ, ಸಂಸತ್ ಸದಸ್ಯರಾದರೆ ಪರಿಹಾರ ದೊರಕಲಿದೆಯೆ? ಕೃಷ್ಣ, ಮಹದಾಯಿ, ಕಾವೇರಿ ವಿವಾದದಲ್ಲಿ ಇವರು ನಡೆದುಕೊಂಡ ರೀತಿ ಜನತೆಗೆ ಗೊತ್ತಿಲ್ಲವೇ? ಎಂದು ಪ್ರಶ್ನಿಸಿದರು. ಗೋಷ್ಠಿಯಲ್ಲಿ ಶಾಸಕ ರವಿಕುಮಾರ್ ಗಣಿಗ, ಪಕ್ಷದ ಜಿಲ್ಲಾಧ್ಯಕ್ಷ ಸಿ.ಡಿ. ಗಂಗಾಧರ್, ಕಾರ್ಯಾಧ್ಯಕ್ಷ ಎಂ.ಎಸ್.ಚಿದಂಬರ್ ಇದ್ದರು.

ಮೈಸೂರಿನಲ್ಲಿ ಈ ಬಾರಿ ಅಧಿಕ ಮಳೆ

ಎಂದು ಹವಾಮಾನ ಇಲಾಖೆ ಶುಭ ಸುದ್ದಿ ನೀಡಿದೆ. ಜೂನ್‌ನಿಂದ ಸೆಪ್ಟೆಂಬರ್ ತಿಂಗಳ ತನಕ ರಾಜ್ಯಕ್ಕೆ 85.2 ಸೆಂಟಿ ಮೀಟರ್‌ನಷ್ಟು ಸರಾಸರಿ ವಾಡಿಕೆ ಮಳೆಯಾಗಲಿದೆ. ಆದರೆ ಈ ಬಾರಿ ಕರ್ನಾಟಕದಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮಾಹಿತಿ ಆಧರಿಸಿ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ವಿವರಣೆ ನೀಡಿದೆ.

ಜೂನ್ ನಲ್ಲಿ 19.9 ಸೆಂಟಿ ಮೀಟರ್, ಜುಲೈನಲ್ಲಿ 27.1 ಸೆಂಟಿ ಮೀಟರ್, ಆಗಸ್ಟ್ ನಲ್ಲಿ 22 ಸೆಂಟಿ ಮೀಟರ್ ಹಾಗೂ ಸೆಪ್ಟೆಂಬರ್‌ನಲ್ಲಿ 16.1 ಸೆಂಟಿ ಮೀಟರ್ ನಷ್ಟು ವಾಡಿಕೆ ಮಳೆಯಾಗಲಿದೆ. ಆದರೆ ಈ ಬಾರಿ ಈ ಅಂಕಿ ಅಂಶ ಮೀರಿ ಹೆಚ್ಚು ಮಳೆಯಾಗಲಿದೆ ಎಂದು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಹೇಳಿದೆ.

ಕರ್ನಾಟಕ ಮಾತ್ರವಲ್ಲದೆ ದೇಶಾದ್ಯಂತ ಈ ಬಾರಿ ಮುಂಗಾರು ಪ್ರಮಾಣ 106ರಷ್ಟು ಹೆಚ್ಚಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆಯ ಭೂ ವಿಜ್ಞಾನ ಮಂತ್ರಾಲಯ ತಿಳಿಸಿದೆ.

ಸಮೃದ್ಧ ಮಳೆಗೆ ಲಾ ನಿನಾ ವರದಾನ

ಈ ಬಾರಿ ಮೈಸೂರು ಸೇರಿದಂತೆ ಕರ್ನಾಟಕದಲ್ಲಿ ಉತ್ತಮ ಮಳೆಯಾಗಲು ಲಾ ನಿನಾ (La Nina) ವರದಾನವಾಗಲಿದೆ. ಕಳೆದ ವರ್ಷ ಬರಗಾಲಕ್ಕೆ ಎಲ್ ನಿನೋ ಕಾರಣವಾಗಿತ್ತು. ಪೆಸಿಫಿಕ್ ಮಹಾ ಸಾಗರದ ಮೇಲ್ಮೈ ಸಾಮಾನ್ಯಕ್ಕಿಂತ ಹೆಚ್ಚು ಬೆಚ್ಚಗಾಗುವುದು ಅಥವಾ ಉಷ್ಣತೆ ಹೆಚ್ಚಾಗುವುದನ್ನು ಎಲ್ ನಿನೋ ಎಂದು ಕರೆಯಲಾಗುತ್ತದೆ. ಎಲ್ ನಿನೋ ಬಂದರೆ ಬರಗಾಲ ಕಟ್ಟಿಟ್ಟ ಬುತ್ತಿ. ಕಳೆದ ವರ್ಷ ಎಲ್ ನಿನೋ ಪರಿಣಾಮ ಬರಗಾಲ ಆವರಿಸಿತ್ತು. 2023ರ ಮಾರ್ಚ್‌ನಿಂದ ಎಲ್ ನಿನೋ ಆರಂಭವಾಗಿ 2024ರ ಜನವರಿವರೆಗೆ ಇತ್ತು. ಈ ಸಮಯದಲ್ಲಿ ಮಳೆಯ ಪ್ರಮಾಣ ಕಡಿಮೆಯಾಗಿ ಮೈಸೂರು ಸೇರಿದಂತೆ ಕರ್ನಾಟಕದಲ್ಲಿ ಉಷ್ಣಾಂಶದ ಪ್ರಮಾಣ ಹೆಚ್ಚಾಗಿತ್ತು. ಆದರೆ, ಈಗ ಲಾ ನಿನಾ ಬಂದಿದೆ. ಪೆಸಿಫಿಕ್ ಮಹಾಸಾಗರದ ಮೇಲ್ಮೈ ಸಾಮಾನ್ಯಕ್ಕಿಂತ ಈಗ ಹೆಚ್ಚು ತಂಪಾಗುವುದಕ್ಕೆ ಆರಂಭವಾಗಿದೆ. ಫೆಬ್ರವರಿ ತಿಂಗಳಿಂದ ಎಲ್ ನಿನಾ ಆರಂಭವಾಗಿದ್ದು, ಇದು ಮೇ ತಿಂಗಳ ತನಕ ಮುಂದುವರೆಯಲಿದೆ. ಇದರಿಂದ ಈ ಬಾರಿ ಮುಂಗಾರು ಪ್ರಮಾಣ ಹೆಚ್ಚಾಗಲಿದೆ ಎಂದು ಮೈಸೂರಿನ ನಾಗನಹಳ್ಳಿಯ ಹವಾಮಾನ ಇಲಾಖೆಯ ಸಹ ಸಂಶೋಧಕ ಡಾ.ಜಿ.ಸುಮಂತ್ ಕುಮಾರ್ ತಿಳಿಸಿದ್ದಾರೆ.

ಕಾಂಗ್ರೆಸ್ ಸರ್ಕಾರ ಅಸ್ತಿತ್ವದಲ್ಲಿರುವುದಿಲ್ಲ

ಪ್ರತಿಭಟನೆಯನ್ನು ಖಂಡಿಸಿದರು. ಎಚ್‌ಡಿಕೆ ಅವಹೇಳನಕಾರಿ ಹೇಳಿಕೆಗಳನ್ನು ನೀಡಿಲ್ಲ, ಅದನ್ನು ರಾಜಕೀಯ ಲಾಭಕ್ಕಾಗಿ ತಿರುಚಲಾಗಿದೆ ಎಂದರು. ಕಾಂಗ್ರೆಸ್ ನಾಯಕರು ಎಚ್‌ಡಿಕೆ ಬಗ್ಗೆ ಸುಳ್ಳು ಹೇಳಿಕೆ ನೀಡಿ ಜನರ ಗಮನ ಸೆಳೆಯುತ್ತಿದ್ದಾರೆ. ಮುಖ್ಯಮಂತ್ರಿಯಾಗಿ ಎಚ್‌ಡಿಕೆ ಜಾರಿಗೆ ತಂದ ಯೋಜನೆಗಳು ಮತ್ತು ಕಾರ್ಯಕ್ರಮಗಳನ್ನು, ಶ್ಲಾಘಿಸಿದ ಗೌಡರು, ಸಮಾಜದ ವಿವಿಧ ವರ್ಗಗಳಿಗೆ ಅವರು ನೀಡಿದ ಕೊಡುಗೆಗಳನ್ನು ಜನರು ಸ್ಮರಿಸಬೇಕು ಎಂದು ಹೇಳಿದರು.

ಜೆಡಿಎಸ್ ಮತ್ತು ತಮ್ಮ ಕುಟುಂಬದ ಸದಸ್ಯರನ್ನು ಟಾರ್ಗೆಟ್ ಮಾಡುತ್ತಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ದೇವೇಗೌಡರು, ನಾನು ಸಹ ಗಂಭೀರ ಆರೋಪಗಳನ್ನು ಮಾಡುವ ಮೂಲಕ ಡಿ.ಕೆ. ಶಿವಕುಮಾರ್ ಅವರ ಇಮೇಜ್‌ಗೆ ಧಕ್ಕೆ ತರಬಹುದು. ಆದರೆ ಈ ವಯಸ್ಸಿನಲ್ಲಿ ಅದನ್ನು ಮಾಡಲು ಬಯಸುವುದಿಲ್ಲ ಎಂದರು. ಪ್ರತಿಪಕ್ಷಗಳ ಮೈತ್ರಿಕೂಟ ಇಂಡಿಯಾದಲ್ಲಿ ಪ್ರಧಾನಿಯಾಗಲು ಯಾವುದೇ ಶ್ರೇಷ್ಠ ನಾಯಕ ಇಲ್ಲ ಎಂದು ಪುನರುಚ್ಚರಿಸಿದ ದೇವೇಗೌಡರು, ಸೋನಿಯಾ ಗಾಂಧಿಯವರು ಪಕ್ಷ ಮತ್ತು ಕೇಂದ್ರದಲ್ಲಿ ಆಗಿನ ಕಾಂಗ್ರೆಸ್ ಸರ್ಕಾರದ ಕೇಂದ್ರ ಸಚಿವ ಸಂಪುಟವನ್ನು ನಿಯಂತ್ರಿಸಿದ್ದರು ಎಂದು ಆರೋಪಿಸಿದರು.

ತುಂಬು ಹೃದಯದಿಂದ ಸ್ವಾಗತಿಸಿದ್ದಾರೆ...

ಮಾಡಿಕೊಂಡ ರೈತನ ಮನೆಗೆ ಹೋಗಿ ಸಾಂತ್ವನ ಹೇಳಿದರು. ನಂತರದಲ್ಲಿ ಆತ್ಮಹತ್ಯೆಗೆ ಶರಣಾದ ಎಲ್ಲಾ ರೈತರ ಮನೆಗಳಿಗೆ ಹೋಗಿ ತನ್ನ ಕೈಲಾದ ಅರ್ಥಿಕ ಸಹಾಯವನ್ನು ಮಾಡಿ ಆತ್ಮಸ್ಥೈರ್ಯ ತುಂಬಿದೆ. ಎಚ್.ಡಿ.ದೇವೇಗೌಡ ಅವರನ್ನು ನಾವು ಪಿಎಂ ಮಾಡಿದ್ದೆವು ಎನ್ನುವ ಕಾಂಗ್ರೆಸ್‌ನವರೇ ಅವರನ್ನು ಪ್ರಧಾನ ಮಂತ್ರಿ ಸ್ಥಾನದಿಂದ ಕೆಳಗಿಳಿಸಿದರು. ನನ್ನ ಸಿಎಂ ಮಾಡಿದ್ದು, ನಾವೇ ಎನ್ನುವವರ ಮನೆ ಬಾಗಿಲಿಗೆ ನಾನೇನು ಹೋಗಿರಲಿಲ್ಲ, ಮಲ್ಲಿಕಾರ್ಜುನ ಖರ್ಗೆ ಅವರನ್ನು ಸಿಎಂ ಮಾಡಿ ಎಂದು ದೇವೇಗೌಡರು ಹೇಳಿದ್ದಾಗ ಒಪ್ಪದ ಕಾಂಗ್ರೆಸ್‌ನವರು, ದಲಿತರಿಗೆ ಮುಖ್ಯಮಂತ್ರಿ ಸ್ಥಾನ ಕೊಡಲು ಸಿದ್ಧರಿರಲಿಲ್ಲ ಎಂದರು. ದೇವೇಗೌಡರು ಮೋದಿಯವರ ಜೊತೆಯಲ್ಲಿ ಹೋಗಲು ಹೇಳಿದ್ದು ಮೊದಲ ಆದ್ಯತೆ ಕಾವೇರಿ ಸಮಸ್ಯೆ ಬಗೆಹರಿಸಲು, ಮೇಕೆದಾಟು ಯೋಜನೆಯನ್ನು ಜಾರಿಗೊಳಿಸಲು... ಹೀಗೆ ಹಲವು ಬಗೆಯ ಅಭಿವೃದ್ಧಿಗಾಗಿಯೇ ಹೊರತು ಸ್ವಾರ್ಥಕ್ಕಾಗಿ ಅಲ್ಲ. ಜೊತೆಗೆ ದೇಶದ ಎಲ್ಲಾ ಭಾಗಗಳಲ್ಲೂ ಮೋದಿ ಮುಂದಿನ ಪ್ರಧಾನಿ ಆಗಬೇಕೆಂಬ ಅಲೆ ಎದ್ದಿದೆ. ಅಂತಹ ನಾಯಕನನ್ನು ಮತ್ತೆ ಪ್ರಧಾನಿ ಮಾಡುವುದರ ಜೊತೆಗೆ ರಾಜ್ಯದ ಹಾಗೂ ಜಿಲ್ಲೆಯ ಅಭಿವೃದ್ಧಿಗಾಗಿ ಬಿಜೆಪಿ ಯೊಂದಿಗೆ ಹೋಗಿದ್ದೇವೆ ಎಂದು ಹೇಳಿದರು.

ಡಿಕೆಶಿ ಮುಖ್ಯಮಂತ್ರಿ ಕನಸು: ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿ, ಈ ಚುನಾವಣೆ ಮುಗಿದ ತಕ್ಷಣ ಕಾಂಗ್ರೆಸ್‌ನಲ್ಲಿ ಬೀದಿ ಜಗಳ ಆರಂಭವಾಗಲಿದೆ. ಅದಕ್ಕೆ ಮೊದಲ ವ್ಯವಸ್ಥೆಯಾಗಿ ಡಿ.ಕೆ.ಶಿವಕುಮಾರ್ ತಾವು ಮುಖ್ಯಮಂತ್ರಿ ಆಗುವ ಕನಸು ಕಾಣುತ್ತಿದ್ದಾರೆ. ಈ ಲೋಕಸಭಾ ಚುನಾವಣೆ ಮುಗಿದ ತಕ್ಷಣ ತಮಗೂ ಆವಕಾಶ ಸಿಗಲಿದೆ ಎಂಬ ಅರ್ಥದಲ್ಲಿ ಮಾತನಾಡುತ್ತಾ ಮುಂದಿನ ಸಿಎಂ ಕುರ್ಚಿ ತಮ್ಮದೆಂದು ಗುದ್ದಲಿ ಪೂಜೆ ಮಾಡುತ್ತಾ ಚುನಾವಣೆ ಪ್ರಚಾರದಲ್ಲಿ ತೊಡಗಿದ್ದಾರೆಂದು ಲೇವಡಿ ಮಾಡಿದರು.

ಕುಮಾರಸ್ವಾಮಿಗೆ ಜನ ಬಲವಿದೆ: ಹಣ, ಅಧಿಕಾರದ ಬಲದಿಂದ ಚುನಾವಣೆಯನ್ನು ಗೆಲ್ಲಬಹುದೆಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಶಿವಕುಮಾರ್, ಮಂಡ್ಯದಲ್ಲಿ ಕುಮಾರಸ್ವಾಮಿ ಗೆಲ್ಲುವುದಿಲ್ಲವೆಂದು ಹೇಳುತ್ತಾ ತಿರುಗುತ್ತಿದ್ದಾರೆ. ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಅವರಿಂದ ಮಂಡ್ಯದಲ್ಲಿ ಕುಮಾರಸ್ವಾಮಿ ಅವರನ್ನು ಸೋಲಿಸಲು ಸಾಧ್ಯವಿಲ್ಲ. ಜನಬಲದಿಂದ ಅತ್ಯಧಿಕ ಮತಗಳ ಅಂತರದಿಂದ ಕುಮಾರಸ್ವಾಮಿ ಗೆಲುವು ಸಾಧಿಸುತ್ತಾರೆಂದು ತಿಳಿಸಿದರು.

ಬರಗಾಲದ ಜೀವನೋಪಾಯಕ್ಕೆ ದಾರಿ ಕಾಣದೆ 800ಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಬೆಳೆಗಳು ಒಣಗಿ ಹೋಗಿ ರೈತ ಕಂಗಾಲಾಗಿದ್ದಾರೆ. ಈ ಬಗ್ಗೆ ರಾಜ್ಯ ಸರ್ಕಾರದ ಯಾವ ಪ್ರತಿನಿಧಿಯು ರೈತರ ನೆರವಿಗೆ ಬರುತ್ತಿಲ್ಲ. ಇಂತಹ ಮನಸ್ಥಿತಿಯ ಸರ್ಕಾರ ಈ ಹಿಂದೆ ಯಾವಾಗಲೂ ಇಲ್ಲ ಎಂದು ಟೀಕಿಸಿದರು.

ಇನ್ನು ಈ ಹಿಂದೆ ಯಡಿಯೂರಪ್ಪ ಸರ್ಕಾರವಿದ್ದಾಗ 20 ಸಾವಿರ ಕಟ್ಟಿದರೆ ರೈತನಿಗೆ ಕೃಷಿ ಪಂಪ್‌ಸೆಟ್‌ಗೆ ಅಗತ್ಯ ವಿದ್ಯುತ್ ಸಂಪರ್ಕ ಕಲ್ಪಿಸಲಾಗುತ್ತಿತ್ತು. ಆದರೆ, ಕಾಂಗ್ರೆಸ್ ಸರಕಾರ ಬಂದ ಮೇಲೆ 3 ಲಕ್ಷ ರೂ.ಗಳನ್ನು ರೈತ ಕಟ್ಟಬೇಕಾಗಿದೆ. ಈ ಗ್ಯಾರಂಟಿಗಳೆಲ್ಲವು ವಾರಂಟಿ ಇಲ್ಲದಾಗಿ ಮನೆಯ ಗಂಡಸರ ಜೇಬಿಗೆ 10 ಸಾವಿರದವರೆಗೆ ಕತ್ತರಿ ಹಾಕಿ ಮಹಿಳೆಗೆ 2 ಸಾವಿರ ನೀಡಿ ವಂಚಿಸುತ್ತಿದ್ದಾರೆಂದು ಕಿಡಿಕಾರಿದರು. ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ.ದೇವೇಗೌಡ ಮಾತನಾಡಿ, ನನ್ನ ತೆರಿಗೆ ನನ್ನ ಹಕ್ಕು ಎನ್ನುತ್ತಿದ್ದ ಕಾಂಗ್ರೆಸ್ ಲೋಕಸಭೆ ಚುನಾವಣೆ ಬಳಿಕ ಡಿ.ಕೆ.ಶಿವಕುಮಾರ್ ಸಿಎಂ ಸೀಟ್ ನನ್ನ ಹಕ್ಕು ಎನ್ನಲು ರೆಡಿಯಾಗಿದ್ದಾರೆ. ಕುಮಾರಸ್ವಾಮಿ ಗೆಲುವು ತಡೆಯುವ ಶಕ್ತಿ ಸಿಎಂ ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್‌ಗೆ ಇಲ್ಲ. ಅವರು ಗೆದ್ದು ಕೇಂದ್ರ ಸಚಿವರಾಗಿ ಮೋದಿ ಕೈ ಬಲ ಪಡಿಸುತ್ತಾರೆ ಎಂದರು.

ಮೂರು ಲಕ್ಷ ಅಂತರದ ಗೆಲುವು: ಕಾಂಗ್ರೆಸ್ ಸರ್ಕಾರ ಸಂವಿಧಾನದ ಬಗ್ಗೆ ಅಪಪ್ರಚಾರ ಮಾಡುತ್ತಿದೆ. ಜನರಿಂದ ಜನರಿಗಾಗಿ ಜನರಿಗೋಸ್ಕರ ಪ್ರಾಣ ಕೊಡುವ ಸಂಸದರನ್ನು ಮಂಡ್ಯ ಜಿಲ್ಲೆಯಲ್ಲಿ ಗೆಲ್ಲಿಸಬೇಕು. ಕುಮಾರಸ್ವಾಮಿ ಮಾತ್ರ ಮಂಡ್ಯ ಜಿಲ್ಲೆಗೆ ನ್ಯಾಯ ಕೊಡುವ ಕೆಲಸ ಮಾಡಲು ಸಾಧ್ಯ. ಶ್ರೀಮಂತರು, ಹೊಟ್ಟೆ ತುಂಬಿದವರು ಗೆದ್ದರೆ ಮಂಡ್ಯಕ್ಕೆ ಪ್ರಯೋಜನವಿಲ್ಲ. 3 ಲಕ್ಷ ಮತಗಳ ಅಂತರದಿಂದ ಕುಮಾರಸ್ವಾಮಿ ಗೆಲ್ಲುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ವೇದಿಕೆಯಲ್ಲಿ ವಿಧಾನಪರಿಷತ್ ಸದಸ್ಯ ಹೆಚ್.ವಿಶ್ವನಾಥ್, ಮಾಜಿ ಸಚಿವರಾದ ಸಿ.ಎಸ್.ಪುಟ್ಟರಾಜು, ಕೆ.ಸಿ.ನಾರಾಯಣ ಗೌಡ, ಶಿಡ್ಲಘಟ್ಟ ಶಾಸಕ ರವಿಕುಮಾರ್, ಮಾಜಿ ಶಾಸಕ ಕೆ.ಟಿ.ಶ್ರೀಕಂಠೇಗೌಡ, ಉಭಯ ಪಕ್ಷಗಳ ಮುಖಂಡರಾದ ಮುನಿರಾಜು, ಡಿ.ರಮೇಶ್, ಡಾ. ಇಂದ್ರೇಶ್, ಶ್ರೀಧರ್, ಸಿದ್ದರಾಮಯ್ಯ, ಯಮದೂರು ಸಿದ್ದರಾಜು, ಸಿ.ಪಿ. ಉಮೇಶ್, ವಿಶ್ವನಾಥ್, ಕಂಸಾಗರ ರವಿ, ಅಶೋಕ್ ಜಯರಾಂ ಸೇರಿದಂತೆ ಹಲವು ಮಂದಿ ಭಾಗವಹಿಸಿದ್ದರು.

ಜನ್ಮಭೂಮಿಯ ಋಣ ತೀರಿಸಲು ಒಂದೇ ಒಂದು ಅವಕಾಶ ಕೊಡಿ

ಮದ್ದೂರು,ಏ.16– ಮಂಡ್ಯ ಜಿಲ್ಲೆಯ ಅಭಿವೃದ್ಧಿ ಮತ್ತು ರೈತರ ಹಿತ ಕಾಯಲು ಮತದಾರರು ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ ನನ್ನನ್ನು ಗೆಲ್ಲಿಸಬೇಕೆಂದು ಮಂಡ್ಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಮನವಿ ಮಾಡಿದ್ದಾರೆ.

ತಾಲೂಕಿನ ಗ್ರಾಮ ಪಂಚಾಯತಿಗಳಲ್ಲಿ ಮತ ಪ್ರಚಾರ ನಡೆಸಿದರು. ಈ ವೇಳೆ ಮಾತನಾಡುತ್ತ ಮಂಡ್ಯ ಜಿಲ್ಲೆಯ ಅಭಿವೃದ್ಧಿಯ ಕನಸನ್ನು ಮತದಾರರ ಮುಂದೆ ಬಿಚ್ಚಿಟ್ಟರು.

ಕಾವೇರಿ ತಾಯಿ ಮೇಲಾಣೆ ರಾಜಕೀಯದ ಒಂದು ರೂಪಾಯಿ ನನಗೆ ಬೇಡ. ನನ್ನ ಜನ್ಮಭೂಮಿಯ ಋಣ ತೀರಿಸುವ ಅವಕಾಶವನ್ನು ಮತದಾರರು ನೀಡಬೇಕು. ಮೂಲಸೌಕರ್ಯಕ್ಕೆ ಒತ್ತು ನೀಡುವುದರ ಜೊತೆಗೆ ಇಲ್ಲಿನ ವಿಶ್ವಮಾನ್ಯತೆ ಪಡೆದಿರುವ ಕೊಕ್ಕರೆ ಬೆಳ್ಳೂರು ಪಕ್ಷಿಧಾಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸುವಂತೆ ಯೋಜನೆ ರೂಪಿಸಲಾಗುವುದು. ವಿದೇಶಿ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಮಾಡಿ ಮಂಡ್ಯ ಹೆಸರು ಇಂಡಿಯದಾಚೆ



ಮೊಳಗುವಂತೆ ಮಾಡುತ್ತೇನೆ ಎಂದರು.

ರೈತರ ಸಮಸ್ಯೆಗಳ ನಿವಾರಣೆಗೆ ರಾಷ್ಟ್ರೀಯ ಕಾಂಗ್ರೆಸ್ ಪಂಚ ನ್ಯಾಯದ ಗ್ಯಾರಂಟಿ ನೀಡಿದೆ. ಕನಿಷ್ಠ ಬೆಂಬಲ ಬೆಲೆ, ಕೃಷಿ ಉತ್ಪನ್ನಗಳ ಮೇಲಿನ ಜಿಎಸ್‌ಟಿ ತೆರವು, ಸಾಲಮನ್ನಾ ಸೇರಿದಂತೆ ನಾನಾ ರೈತಪರ ಕಾರ್ಯಕ್ರಮಗಳನ್ನು ಘೋಷಿಸಿದೆ. ಪಕ್ಷ ಅಧಿಕಾರಕ್ಕೆ ಬರುತ್ತಿದ್ದಂತೆ ರಾಜ್ಯದಲ್ಲಿ ಗ್ಯಾರಂಟಿ ಜಾರಿ ಮಾಡಿದಂತೆ ಕೇಂದ್ರದಲ್ಲೂ ಜಾರಿಯಾಗಲಿದೆ. ರೈತ ಬಾಂಧವರು ನನ್ನನ್ನು ಬೆಂಬಲಿಸಿ ಕಾಂಗ್ರೆಸ್‌ಗೆ ಶಕ್ತಿ ತುಂಬಬೇಕೆಂದು ಪ್ರಾರ್ಥಿಸಿದರು.

ನಾನು ಪಕ್ಕಾ ಹಳ್ಳಿ ಹೈದ. ನಾನು ಹೊಲ ಉತ್ತಿದ್ದೇನೆ, ಗೊಬ್ಬರ ಹೊತ್ತಿದ್ದೇನೆ. ರೈತರ ಕಷ್ಟನಷ್ಟ ಗೊತ್ತಿದೆ. ಹೀಗಾಗಿ ರೈತರ ಬದುಕಿನಲ್ಲಿ ಹೊಸ ಆಶಾಕಿರಣ ಮೂಡಿಸಬೇಕೆಂದುಕೊಂಡಿದ್ದೇನೆ. ನನ್ನನ್ನು ಬೆಂಬಲಿಸಿದರೆ ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಸೇರಿದಂತೆ ಜಿಲ್ಲೆಯ ಸಚಿವರು, ಶಾಸಕರ ಸಂಪೂರ್ಣ ಬೆಂಬಲವಿರುವುದರಿಂದ ಜಿಲ್ಲೆಯ ಅಭಿವೃದ್ಧಿ ಕಾರ್ಯಗಳಿಗೆ ಮತ್ತಷ್ಟು ವೇಗ ಸಿಗಲಿದೆ ಎಂದು ಹೇಳಿದರು. ಶಾಸಕ ಉದಯ್‌ಗೌಡ ಮಾತನಾಡಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಬಿ.ಸೋಮಶೇಖರ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸಿ.ಡಿ.ಗಂಗಾಧರ್, ಜಿಲ್ಲಾ ಕಾರ್ಯದರ್ಶಿ ಚಿದಂಬರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮುಟ್ಟನಹಳ್ಳಿ ಶಿವಲಿಂಗೇಗೌಡ, ಹಿರಿಯ ಕಾಂಗ್ರೆಸ್ ಮುಖಂಡರಾದ ರಾಮಕೃಷ್ಣ ಸೇರಿದಂತೆ ಗ್ರಾಮ ಪಂಚಾಯತಿ ಅಧ್ಯಕ್ಷರು, ಸದಸ್ಯರು, ಮುಖಂಡರು ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕುಣಿಯೋಣು ಬಾರಾ ಬೇಸಿಗೆ ಶಿಬಿರಕ್ಕೆ ಚಾಲನೆ

ದೇಶೀಯತೆಯಿಂದ ವಿಮುಖವಾಗುತ್ತಿರುವ ಮಕ್ಕಳು

ಮೈಸೂರು,ಏ.16(ಎಂಟಿವೈ)– ಟಿವಿ, ಸ್ಮಾರ್ಟ್ ಫೋನ್ ಮತ್ತು ರಿಯಾಲಿಟಿ ಶೋಗಳು ಮಕ್ಕಳನ್ನು ನೆಲದ ಸಂಸ್ಕೃತಿಯಿಂದಲೇ ದೂರ ಮಾಡುತ್ತಿವೆ ಎಂದು ಮೈಸೂರು ವಿಶ್ವವಿದ್ಯಾನಿಲಯದ ಪ್ರಸಾರಾಂಗದ ನಿರ್ದೇಶಕ ಡಾ.ಎಂ.ನಂಜಯ್ಯ ಹೊಂಗನೂರು ವಿಷಾದಿಸಿದ್ದಾರೆ.

ಬೆಳಗಿನೊಳಗು ಬಳಗ ಮತ್ತು ಸಂಚಲನ ಮೈಸೂರು ಸಂಸ್ಥೆ ವತಿಯಿಂದ ಶ್ರೀರಂಗಪಟ್ಟಣ ತಾಲೂಕಿನ ಮಹದೇವಪುರ ಗ್ರಾಮದ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ ಗ್ರಾಮದ ವಿದ್ಯಾರ್ಥಿಗಳಿಗಾಗಿ ಉಚಿತವಾಗಿ ಆಯೋಜಿಸಿರುವ 20 ದಿನಗಳ 'ಕುಣಿಯೋಣು ಬಾರಾ' ಬೇಸಿಗೆ ಶಿಬಿರವನ್ನು ಮಕ್ಕಳಿಗೆ ಸಂವಿಧಾನ ಓದು ಪುಸ್ತಕ ವಿತರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ಜಾಗತೀಕರಣ, ನಗರೀಕರಣದಿಂದ ಮಕ್ಕಳು ದೇಸಿಯತೆಯಿಂದ ವಿಮುಖರಾಗುತ್ತಿದ್ದಾರೆ ಎಂದರು.

ಹಿಂದೆ ಮಕ್ಕಳು ಬೇಸಿಗೆ ರಜೆಯಲ್ಲಿ ಅಜ್ಜ–ಅಜ್ಜಿಯರ ಮನೆಗೆ ಹೋಗುತ್ತಿದ್ದರು. ಅಲ್ಲಿ



ಕುಣಿಯೋಣು ಬಾರಾ ಬೇಸಿಗೆ ಶಿಬಿರದಲ್ಲಿ ಪಾಲ್ಗೊಂಡಿದ್ದ ಅತಿಥಿಗಳು ಮತ್ತು ಶಿಬಿರಾರ್ಥಿಗಳನ್ನು ಚಿತ್ರದಲ್ಲಿ ಕಾಣಬಹುದು.

ಬೆಟ್ಟ ಗುಡ್ಡ ಕಣಿವೆ, ಜರಿ ತೊರೆಗಳಲ್ಲಿ ಆಡಿ ಸುಂದರ ಅನುಭವ ತಮ್ಮದಾಗಿಸಿಕೊಳ್ಳುತ್ತಿದ್ದರು. ಆದರೆ ಇತ್ತೀಚಿನ ವರ್ಷಗಳಲ್ಲಿ ಈ ಅನುಭವನ್ನು ಮಕ್ಕಳು ಕಳೆದುಕೊಂಡಿದ್ದಾರೆ ಎಂದರು.

ಶೈಕ್ಷಣಿಕ ಒತ್ತಡದಿಂದ ಹೊರ ತಂದು ಮಕ್ಕಳನ್ನು ಕ್ರಿಯಾಶೀಲರಾಗಿಸಲು ಬೇಸಿಗೆ ಶಿಬಿರಗಳಲ್ಲಿ ನಡೆಸುವ ಪಠ್ಯೇತರ ಚಟುವಟಿಕೆಗಳು ಪೂರಕವಾಗಿವೆ. ಕಳೆದ 35 ವರ್ಷಗಳಿಂದ ನಗರ ಪ್ರದೇಶದಲ್ಲಿ ಬೇಸಿಗೆ ಶಿಬಿರಗಳು ನಡೆಯುತ್ತಿವೆ. ದೊಡ್ಡ ದೊಡ್ಡ ಶಿಕ್ಷಣ ಸಂಸ್ಥೆಗಳು, ಧಾರ್ಮಿಕ ಕೇಂದ್ರಗಳು ಶಿಬಿರ ಆಯೋಜಿಸುತ್ತಿವೆ. ಇದುವರೆಗೆ ಬೇಸಿಗೆ ಶಿಬಿರಗಳು ನಗರ ಪ್ರದೇಶಕ್ಕೆ ಮಾತ್ರ ಸೀಮಿತವಾಗಿದ್ದವು. ಗ್ರಾಮೀಣ ಮಕ್ಕಳು ಬೇಸಿಗೆ ಶಿಬಿರಗಳಿಂದ ವಂಚಿತರಾಗುತ್ತಿದ್ದರು. ಇದೀಗ ಮಹದೇವಪುರದ ಮಕ್ಕಳಲ್ಲಿರುವ ಸುಪ್ತ ಪ್ರತಿಭೆಯನ್ನು ಹೊರತರಲು ಶಿಬಿರ ಆಯೋಜಿಸಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮೈಸೂರು ಎಪಿಎಂಸಿ ಮಾಜಿ ಉಪಾಧ್ಯಕ್ಷ ಅಹಿಂದ ಜವರಪ್ಪ ಮಾತನಾಡಿ, ಶಿಕ್ಷಣ ಖಾತರಿ ಇದೆ. ಆದರೆ, ಗುಣಮಟ್ಟದ ಶಿಕ್ಷಣದ ಖಾತರಿ ಇಲ್ಲವಾಗಿದೆ. ಸರ್ಕಾರಿ ಶಾಲೆಗಳಲ್ಲಿ ಸೌಕರ್ಯವಿಲ್ಲ. ಖಾಸಗಿ ಕಾಲೇಜುಗಳು ವೈಭವಯುತವಾಗಿವೆ. ಪ್ರತಿಷ್ಠಿತ ಶಾಲೆಗಳಿಗೆ ಸೇರಿಸಲು ಪೈಪೋಟಿ ಅಪಾಯಕಾರಿ ಬೆಳವಣಿಗೆ ಎಂದರು.

ಮೊಬೈಲ್ ಗೀಳು ಅಪಾಯಕಾರಿ: ಕಾಂಗ್ರೆಸ್ ಮುಖಂಡ ಬಸವರಾಜು ಮಾತನಾಡಿ, ಪ್ರಸ್ತುತ ಸಂದರ್ಭದಲ್ಲಿ ಹುಟ್ಟಿದ ಮಗುವಿಗೂ ಮೊಬೈಲ್ ತೋರಿಸಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ. ಮೊಬೈಲ್ ಬಳಕೆಯ ಗೀಳು ಅಪಾಯಕಾರಿಯಾಗಿ ಪರಿಣಮಿಸಿದೆ ನಗರ ಪ್ರದೇಶದಲ್ಲಿ ಬೇಸಿಗೆ ಶಿಬಿರಕ್ಕೆ 5ರಿಂದ 10 ಸಾವಿರ ರೂ. ಕೊಡಬೇಕು. ಗ್ರಾಮಾಂತರ ಪ್ರದೇಶದಲ್ಲಿ ದುಡಿಯುವ ವರ್ಗಗಳ ಮಕ್ಕಳಿಗಾಗಿ ಉಚಿತ ಬೇಸಿಗೆ ಶಿಬಿರ ಆಯೋಜಿಸಿದ್ದು, ಮಕ್ಕಳಲ್ಲಿರುವ ಸುಪ್ತ ಪ್ರತಿಭೆ ಹೊರ ತರಲು ಸಹಾಯಕವಾಗಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕರುನಾಡ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಬಸವರಾಜು, ಮಹದೇವಪುರ ಗ್ರಾಪಂ ಉಪಾಧ್ಯಕ್ಷೆ ನಿಂಗಮ್ಮ ಮಹದೇವ, ಶಿಬಿರದ ನಿರ್ದೇಶಕ ದೀಪಕ್ ಮೈಸೂರು, ಕರುನಾಡ ರಕ್ಷಣಾ ವೇದಿಕೆ ರಾಜ್ಯ ಪ್ರಧಾನ ಕಾರ್ಯದರ್ಶಿ ಸತೀಶ್ ಹೆಗ್ಗೂರು, ಶಿಬಿರದ ಸಂಚಾಲಕರಾದ ವಿ. ಅನಿಲ್ ಕುಮಾರ್, ವಿನೋದ್ ಮಹದೇವಪುರ, ವಿ. ಮಧುಕುಮಾರ್, ಭಾವನಾ, ಮೈಸೂರಿನ ಅಗಸ್ತ್ಯ ಇಂಟರ್‌ನ್ಯಾಷನಲ್ ಫೌಂಡೇಷನ್ ಪ್ರದೀಪ್, ಕುಸುಮಾ ಇದ್ದರು.

ತೀವ್ರಗೊಳ್ಳುತ್ತಿರುವ ಬಿಸಿಲಿನ ತೀವ್ರತೆ ಹಿನ್ನೆಲೆ

ಕಾಲರಾದಂತಹ ಸಾಂಕ್ರಾಮಿಕ ರೋಗಗಳಿಂದ ದೂರ ಉಳಿಯಿರಿ

ಸಾರ್ವಜನಿಕರಿಗೆ ಜಿಲ್ಲಾ ಆರೋಗ್ಯಾಧಿಕಾರಿ ಡಾ. ಕುಮಾರಸ್ವಾಮಿ ಸಲಹೆ

ಮೈಸೂರು, ಏ. 16(ಆರ್‌ಕೆ)– ದಿನದಿಂದ ದಿನಕ್ಕೆ ತೀವ್ರಗೊಳ್ಳುತ್ತಿರುವ ತಾಪಮಾನದಿಂದ ಜನರು ಕಂಗಾಲಾಗಿದ್ದು, ವಯಸ್ಸಾದವರು, ಮಕ್ಕಳು ಹಾಗೂ ರೋಗಿಗಳು ಬಿಸಿಲಿನ ಝಳದಿಂದ ಪರಿತಪಿಸುತ್ತಿದ್ದಾರೆ.



ಬಿಸಿಲಿನ ಬೇಗೆಯಿಂದ ರಕ್ಷಿಸಿಕೊಂಡು ಕಾಲರಾದಂತಹ ಸಾಂಕ್ರಾಮಿಕ ರೋಗಗಳಿಂದ ಪಾರಾಗಲು ಜಿಲ್ಲಾ ಆರೋಗ್ಯಾಧಿಕಾರಿಗಳು ಸಾರ್ವಜನಿಕರಿಗೆ ಟಿಪ್ಸ್‌ಗಳನ್ನು ನೀಡಿದ್ದಾರೆ. ಪ್ರತಿನಿತ್ಯ ಬಾಯಾರಿಕೆ ಇಲ್ಲದಿದ್ದರೂ ಹೆಚ್ಚು ನೀರನ್ನು ಕುಡಿಯಬೇಕು, ಓರಲ್ ರೀಹೈಡ್ರೇಷನ್ ಸಲ್ಯೂಷನ್ (ಓಆರ್‌ಎಸ್) ಹಾಗೂ ಮನೆಯಲ್ಲೇ ಶರಬತ್ತು, ಮಜ್ಜಿಗೆ, ಹಣ್ಣಿನ ರಸವನ್ನು ಒಂದು ಚಿಟಿಕೆ ಉಪ್ಪಿನೊಂದಿಗೆ ಸೇವಿಸುವುದು ಒಳಿತು.

ಕಲ್ಲಂಗಡಿ, ಕರಬೂಜ, ಕಿತ್ತಳೆ, ದ್ರಾಕ್ಷಿ, ಅನಾನಸ್, ಸೌತೆಕಾಯಿ, ಎಳನೀರನ್ನು ಸೇವಿಸಬೇಕು. ತಿಳಿಬಣ್ಣದ ಲೂಸ್ ಫಿಟ್ಟಿಂಗ್ ಹತ್ತಿ ಬಟ್ಟೆ ಧರಿಸುವುದು, ಹೊರಗೆ ಹೋಗುವಾಗ ಛತ್ರಿ ಟೋಪಿ, ಟವೆಲ್ ಅಥವಾ ಇನ್ನಾವುದೇ ಸಾಂಪ್ರದಾಯಿಕ ಪದ್ಧತಿ ಅನುಸರಿಸಿ ಬಿಸಿಲಿನಿಂದ ರಕ್ಷಣೆ ಪಡೆಯುವುದು ಉತ್ತಮ.

ಸಾಧ್ಯವಾದಷ್ಟು ಸಮಯ ಉತ್ತಮ ಗಾಳಿ ಬೀಸುವ, ತಣ್ಣಗಿನ ಪ್ರದೇಶದಲ್ಲಿರಿ. ಹೊರಾಂಗಣ ಚಟುವಟಿಕೆಗಳನ್ನು ಬೆಳಗ್ಗೆ 11 ಗಂಟೆಯೊಳಗೆ ಪೂರ್ಣಗೊಳಿಸಿ. ಬೆಳಗ್ಗೆ 11ರಿಂದ ಸಂಜೆ 4 ಗಂಟೆವರೆಗೆ ಅತ್ಯಗತ್ಯವಿದ್ದರೆ ಮಾತ್ರ ಓಡಾಡಿ. ಮಧ್ಯಾಹ್ನ 12ರಿಂದ 3 ಗಂಟೆವರೆಗೆ ಹೊರ ಹೋಗುವುದನ್ನು ತಪ್ಪಿಸಿ.

ಮದ್ಯಪಾನ, ಟೀ, ಕಾಫಿ, ಕಾರ್ಬೊನೇಟೆಡ್ ಪಾನೀಯ ಅಥವಾ ಹೆಚ್ಚು ಸಕ್ಕರೆ ಅಂಶ ಹೊಂದಿದ ಪಾನೀಯದಿಂದ ದೂರವಿರಿ. ಹೆಚ್ಚು ಪ್ರೋಟೀನ್‌ಯುಕ್ತ ಹಾಗೂ ಅವಧಿ ಮೀರಿದ ಆಹಾರ ಪದಾರ್ಥವನ್ನು ಸೇವಿಸಬೇಡಿ. ಶ್ರಮದಾಯಕ ಹಾಗೂ ಹೊರಾಂಗಣ ಚಟುವಟಿಕೆಗಳನ್ನು ತಾಪಮಾನ ಕಡಿಮೆ ಇರುವ ಸಮಯದಲ್ಲಿ ಮಾತ್ರ ಮಾಡಿಕೊಳ್ಳಿ.

ಗರ್ಭಿಣಿಯರು, ರೋಗಿಗಳು ಬಿಸಿಲಿನಿಂದ ದೂರ ಉಳಿಯುವುದೊಳಿತು. ಅತಿಯಾದ ಉಷ್ಣತೆಯಿಂದ ಸಾಧಾರಣದಿಂದ ತೀವ್ರ ಜ್ವರ, ಗಂಧೆಗಳು, ಸ್ನಾಯುಗಳ ಸೆಳೆತ, ಪ್ರಜ್ಞೆ ತಪ್ಪುವುದು, ಸುಸ್ತಾಗುವುದು, ಪಾರ್ಶ್ವವಾಯು, ಹೃದ್ರೋಗ, ಕಿಡ್ನಿ ಸಮಸ್ಯೆ ಉಂಟಾಗಬಹುದು. ಹಾಗೆಯೇ ಅತಿಯಾದ ಶಾಖದಿಂದ ಅತಿಯಾದ ಬಾಯಾರಿಕೆ, ವಾಂತಿ, ತಲೆನೋವು, ಹಳದಿ ಬಣ್ಣದ ಮೂತ್ರ ವಿಸರ್ಜನೆಯಂತಹ ತೊಂದರೆಗಳೂ ಸಹ ಸಂಭವಿಸುತ್ತವೆ.

ಆರೋಗ್ಯ ಸಮಸ್ಯೆ ತಡೆಗಟ್ಟಲು ದೇಹದ ಉಷ್ಣಾಂಶ ಪರೀಕ್ಷಿಸಿ ತಕ್ಷಣವೇ ವೈದ್ಯಕೀಯ ನೆರವು ಪಡೆಯಬೇಕು, ತಂಪಾದ ಸ್ಥಳದಲ್ಲಿ ವಿಶ್ರಾಂತಿ ಪಡೆದು ಹೆಚ್ಚು ಎಲೆಕ್ಟ್ರೋಲೈಟ್‌ಗಳನ್ನು ಹೊಂದಿದ ದ್ರಾವಣ ಸೇವಿಸಬೇಕು. ಎಷ್ಟೇ ಬಾಯಾರಿಕೆಯಾದರೂ ಫ್ರಿಡ್ಜ್‌ನಲ್ಲಿರಿಸಿದ ತಂಪು ಪಾನೀಯ, ಐಸ್‌ಕ್ರೀಂನಂತಹ ಪದಾರ್ಥ ಸೇವಿಸುವುದು ಅಪಾಯಕಾರಿ.

ಬಿಸಿಲಿನ ಬೇಗೆಯಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾದಲ್ಲಿ ತಕ್ಷಣ 108, 102 ಸಂಖ್ಯೆಗೆ ಕರೆ ಮಾಡಿ ಅಥವಾ ಹತ್ತಿರದ ವೈದ್ಯರನ್ನು ಸಂಪರ್ಕಿಸುವಂತೆ ಡಾ.ಕುಮಾರಸ್ವಾಮಿ ಸಲಹೆ ನೀಡಿದ್ದಾರೆ.

ಉದ್ಧವ್ ಶಿವಸೇನೆಯ ಚಿಹ್ನೆ 'ಉರಿಯುವ ಜ್ಯೋತಿ'

ಮುಂಬೈ: ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಶಿವಸೇನೆ (ಯುಬಿಟಿ) ಮುಖ್ಯಸ್ಥ ಉದ್ಧವ್ ಠಾಕ್ರೆ, ತಮ್ಮ ಪಕ್ಷದ ಚುನಾವಣಾ ಚಿಹ್ನೆ 'ಉರಿಯುವ ಜ್ಯೋತಿ' ದೇಶದಲ್ಲಿನ ನಿರಂಕುಶ ಆಡಳಿತವನ್ನು ಸುಟ್ಟು ಬೂದಿ ಮಾಡಲಿದೆ ಎಂದು ಮಂಗಳವಾರ ಹೇಳಿದ್ದಾರೆ.



ಪಕ್ಷದ ಚುನಾವಣಾ ಚಿಹ್ನೆ ಮತ್ತು ಅದನ್ನು ಪ್ರಚಾರ ಮಾಡಲು ಹಾಡನ್ನು ಬಿಡುಗಡೆ ಮಾಡಿದ ನಂತರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಠಾಕ್ರೆ, ಸೇನೆ(ಯುಬಿಟಿ), ಎನ್‌ಸಿಪಿ (ಶರದ್ ಪವಾರ್) ಮತ್ತು ಕಾಂಗ್ರೆಸ್ ಒಳಗೊಂಡಿರುವ ಮಹಾ ವಿಕಾಸ್ ಅಘಾಡಿ (ಎಂವಿಎ) ಪಕ್ಷಗಳ ಜಂಟಿ ಪ್ರಣಾಳಿಕೆಯನ್ನು ಶೀಘ್ರದಲ್ಲೇ ಬಿಡುಗಡೆ ಮಾಡಲಾಗುವುದು ಎಂದು ಹೇಳಿದರು.


ಕಾಂಗ್ರೆಸ್ ಈಗಾಗಲೇ ತನ್ನ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದ್ದು, ಮಹಾರಾಷ್ಟ್ರಕ್ಕೆ ಸಂಬಂಧಿಸಿದ ಅಂಶಗಳನ್ನು ಎಂವಿಎ ಜಂಟಿ ಪ್ರಣಾಳಿಕೆಯಲ್ಲಿ ಅಳವಡಿಸಲಾಗುವುದು ಎಂದು ಅವರು ತಿಳಿಸಿದರು. ಉರಿಯುವ ಜ್ಯೋತಿ ಚಿಹ್ನೆಯು ಮಹಾರಾಷ್ಟ್ರದ ಮೂಲೆ ಮೂಲೆಗಳನ್ನು ತಲುಪಿದೆ. ಈಗ, ಉರಿಯುವ ಜ್ಯೋತಿಯು ನಿರಂಕುಶ ಆಡಳಿತವನ್ನು ಸುಟ್ಟು ಬೂದಿ ಮಾಡಲಿದೆ ಎಂದು ಠಾಕ್ರೆ ಹೇಳಿದರು.

ಕಳೆದ ವರ್ಷ, ಶಿವಸೇನೆ(ಯುಬಿಟಿ) ಅಂಧೇರಿ ಉಪಚುನಾವಣೆಯಲ್ಲಿ ಉರಿಯುತ್ತಿರುವ ಜೋತಿ ಚಿಹ್ನೆಯನ್ನು ಬಳಸಿಕೊಂಡು ಗೆದ್ದಿದೆ ಎಂದು ಮಾಜಿ ಮುಖ್ಯಮಂತ್ರಿ ಹೇಳಿದರು.

ಮೈಸೂರು ಮಿತ್ರ
ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

–ಜಾಹೀರಾತು ವ್ಯವಸ್ಥಾಪಕರು



ಚೆಸ್ಕಾಂನಿಂದ ವಿನೂತನ ರೀತಿ 'ನಮ್ಮ ಮತ ನಮ್ಮ ಹಕ್ಕು' ಅಭಿಯಾನ

ಹೀಲಿಯಂ ಬಲೂನ್‌ಗಳ ಮೇಲೆ 'ಮತದಾನ' ಸಂದೇಶ

ಮೈಸೂರು, ಏ.16(ಎಂಕೆ)– ಮೈಸೂರು ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಸಹಯೋಗದಲ್ಲಿ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ(ಚೆಸ್ಕಾಂ)ದ ವತಿಯಿಂದ 'ನಮ್ಮ ಮತ ನಮ್ಮ ಹಕ್ಕು' ಸಂದೇಶವುಳ್ಳ ಹೀಲಿಯಂ ಬಲೂನ್‌ಗಳ ಅನಾವರಣ ಹಾಗೂ ಬೃಹತ್ ಜಾಥಾ ಮೂಲಕ ಸಾರ್ವಜನಿಕರಲ್ಲಿ ಮತದಾನ ಜಾಗೃತಿ ಮೂಡಿಸಲಾಯಿತು.

ಮೈಸೂರು ಅರಮನೆ ಉತ್ತರದ್ವಾರದಲ್ಲಿರುವ ಕೋಟೆ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದ ಎದುರು ಆಯೋಜಿಸಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ದಿನದ 24 ಗಂಟೆಗೂ ಸಾರ್ವಜನಿಕರ ಗಮನ ಸೆಳೆಯುವ ದೊಡ್ಡಗಾತ್ರದ ಹೀಲಿಯಂ ಬಲೂನ್‌ಗಳನ್ನು ಅನಾವರಣಗೊಳಿಸಲಾಯಿತು. ಹಾಗೆಯೇ ವಿದ್ಯುತ್ ದೀಪಗಳನ್ನು ಹಿಡಿದ ಸಾವಿರಕ್ಕೂ ಹೆಚ್ಚು ಚೆಸ್ಕಾಂ ಅಧಿಕಾರಿ, ಸಿಬ್ಬಂದಿಗಳ ಬೃಹತ್ ಜಾಥಾದೊಂದಿಗೆ 'ಪ್ರಜಾಪ್ರಭುತ್ವಕ್ಕಾಗಿ ನಮ್ಮ ಮತ ಕಡ್ಡಾಯ' ಘೋಷಣೆ ಮೊಳಗಿಸಲಾಯಿತು.

ಕಡ್ಡಾಯ ಮತದಾನ ಪ್ರತಿಜ್ಞಾವಿಧಿ ಬೋಧಿಸಿದ ಜಿಲ್ಲಾ ಚುನಾವಣಾಧಿಕಾರಿಗಳೂ ಆದ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ಬೃಹತ್ ಜಾಥಾಗೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು. ಕೋಟೆ ಶ್ರೀ ಆಂಜನೇಯಸ್ವಾಮಿ ದೇವಸ್ಥಾನ ಎದುರಿನಿಂದ ಆರಂಭವಾದ ಜಾಥಾವು ಆಲ್ಬರ್ಟ್ ವಿಕ್ಟರ್ ರಸ್ತೆ, ಕೆ.ಆರ್.ವೃತ್ತ, ಸಯ್ಯಾಜಿರಾವ್ ರಸ್ತೆ, ಆಯುರ್ವೇದಿಕ್ ವೃತ್ತ, ಇರ್ವಿನ್ ರಸ್ತೆ, ಎಸ್‌ಬಿಐ ವೃತ್ತ, ಅಶೋಕ ರಸ್ತೆ, ದೊಡ್ಡಗಡಿಯಾರ ಮಾರ್ಗವಾಗಿ ಜಯಚಾಮರಾಜೇಂದ್ರ ವೃತ್ತದವರೆಗೆ ಸಾಗಿತು. ಮಾರ್ಗದುದ್ದಕ್ಕೂ ಮತದಾನ ಜಾಗೃತಿ ನಾಮಫಲಕಗಳನ್ನು ಹಿಡಿದು ಸಾಗಿದ ಚೆಸ್ಕಾಂ ಅಧಿಕಾರಿ, ಸಿಬ್ಬಂದಿಗಳು ಪ್ರತಿಯೊಬ್ಬ ಮತದಾರರು ಕಡ್ಡಾಯವಾಗಿ ಏ.26 ರಂದು ನಿಮ್ಮ ನಿಮ್ಮ ವ್ಯಾಪ್ತಿಯ ಮತಗಟ್ಟೆಗಳಿಗೆ ಹೋಗಿ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಿದರು.

ಪ್ರತಿ ಮನೆಗೂ ಮತದಾರರ ಮಾಹಿತಿ ಚೀಟಿ ಹಂಚಿಕೆ: ಈ ವೇಳೆ ಜಿಲ್ಲಾ ಚುನಾವಣಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಮಾತನಾಡಿ, ಮತದಾನದ ಪ್ರಮಾಣವನ್ನು ಹೆಚ್ಚಿಸಲು ಹಾಗೂ ಮತದಾರರು ಮತದಾನ ಮಾಡಲು ಮುಂದೆ ಬರುವಂತೆ ಮಾಡಲು ಇಂದಿನಿಂದ ಮತದಾನದ ಮಾಹಿತಿಯುಳ್ಳ ಚೀಟಿಯನ್ನು ಹಂಚಲಾಗುವುದು. ಇದರಿಂದ ಮತದಾರರು ಆ ಚೀಟಿಯ ಹಿಂಭಾಗದಲ್ಲಿರುವ ಕ್ಯೂಆರ್ ಕೋಡನ್ನು ಸ್ಕ್ಯಾನ್ ಮಾಡುವ ಮೂಲಕ ತಮ್ಮ ಮತಗಟ್ಟೆಯ ಮಾಹಿತಿಯನ್ನು ಪಡೆಯಬಹುದಾಗಿದೆ ಎಂದು ಮಾಹಿತಿ ನೀಡಿದರು. ಬೂತ್ ಮಟ್ಟದ ಅಧಿಕಾರಿಗಳಿಂದ ಪ್ರತಿ ಮನೆಗೂ ಮತದಾನದ ಮಾಹಿತಿ ಚೀಟಿಯನ್ನು ಹಂಚಿಕೆ ಮಾಡಿಸಲಾಗುತ್ತದೆ ಹಾಗೂ ಮತದಾನ ಕುರಿತು ಮಾರ್ಗದರ್ಶಿಗಳಿಂದ ಅವರಿಗೆ ಮಾಹಿತಿಯನ್ನು ನೀಡಲಾಗುತ್ತದೆ.



ಮೈಸೂರು ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಸಹಯೋಗದಲ್ಲಿ ಚೆಸ್ಕಾಂ ವತಿಯಿಂದ 'ನಮ್ಮ ಮತ ನಮ್ಮ ಹಕ್ಕು' ಸಂದೇಶವುಳ್ಳ ಹಿಲಿಯಂ ಬಲೂನ್‌ಗಳ ಅನಾವರಣ ಹಾಗೂ ಬೃಹತ್ ಜಾಥಾ ಮೂಲಕ ಸಾರ್ವಜನಿಕರಲ್ಲಿ ಮತದಾನ ಜಾಗೃತಿ ಮೂಡಿಸಲಾಯಿತು. ಜಿಲ್ಲಾ ಚುನಾವಣಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ನಗರ ಪೊಲೀಸ್ ಆಯುಕ್ತ ಬಿ.ರಮೇಶ್, ಜಿಪಂ ಸಿಇಓ ಕೆ.ಎಂ.ಗಾಂಯತ್ರಿ, ನಗರಪಾಲಿಕೆ ಆಯುಕ್ತೆ ಎನ್.ಎನ್.ಮಧು, ಚೆಸ್ಕಾಂ ಎಂಡಿ ಜಿ.ಶೀಲಾ ಮತ್ತಿತರರಿದ್ದರು.

ಲೋಕಸಭಾ ಚುನಾವಣೆಯನ್ನು ಯಶಸ್ವಿಗೊಳಿಸಲು ಹಾಗೂ ಮತದಾನ ಪ್ರಮಾಣವನ್ನು ಹೆಚ್ಚಿಸಲು ಚೆಸ್ಕಾಂನವರು ನಮ್ಮೊಂದಿಗೆ ಸೇರಿ ತಮ್ಮ ಸಿಬ್ಬಂದಿಗಳಿಂದ ಪ್ರತಿ ಮನೆಗೂ ಮತದಾರರ ಮಾಹಿತಿ ಚೀಟಿ ತಲುಪುವಂತೆ ಮಾಡಬೇಕು. ಆಗ ಮಾತ್ರವೇ ನಮ್ಮ ಉದ್ದೇಶ ಸಫಲವಾಗುವುದು. ಮತದಾನ ಕುರಿತು ಚೆಸ್ಕಾಂ ಹಮ್ಮಿಕೊಂಡಿರುವ ಜಾಗೃತಿ ಕಾರ್ಯಕ್ರಮ ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಪ್ರತಿಯೊಬ್ಬರು ಮತ ಚಲಾಯಿಸಿ: ಕನ್ನಡ ಚಲನಚಿತ್ರ ನಟ ಜಿಮ್ ರವಿ ಮಾತನಾಡಿ, ಮತದಾನ ಎಂಬುದು ಒಂದು ಹಬ್ಬದಂತೆ. ಇದರಲ್ಲಿ ಎಲ್ಲರೂ ನೈತಿಕವಾಗಿ ಭಾಗವಹಿಸಬೇಕು. ಸದೃಢ ದೇಹ ಬೇಕೆಂದರೆ ಪ್ರತಿನಿತ್ಯವು ವ್ಯಾಯಾಮ ಮಾಡಬೇಕು. ಅದೇ ರೀತಿಯಾಗಿ ದೇಶವನ್ನು ಅಭಿವೃದ್ಧಿಗೊಳಿಸಲು ಉತ್ತಮ ನಾಯಕನ ಆಯ್ಕೆಗಾಗಿ ಕಡ್ಡಾಯವಾಗಿ ಮತದಾನ ಮಾಡಬೇಕು. ಇತ್ತೀಚಿನ ದಿನಗಳಲ್ಲಿ ಬಹಳಷ್ಟು ಜನ ಚುನಾವಣೆಯ ದಿನದಂದು ರಜಾ ದಿನ ಎಂದು ಭಾವಿಸುತ್ತಾರೆ ಆದರೆ ಅದು ತಪ್ಪು. ಮತದಾನ ನಮ್ಮೆಲ್ಲರ ಹಕ್ಕು. ಆ ದಿನದಂದು ಪ್ರತಿಯೊಬ್ಬರು ತಮ್ಮ ಮತ ಚಲಾಯಿಸಬೇಕು. ಮತದಾರರು ಯಾವುದೇ ಆಸೆ–ಆಮಿಷಗಳಿಗೆ ಒಳಗಾಗದೆ ನೈತಿಕವಾಗಿ ನಿಮ್ಮ ಮತವನ್ನು ಚಲಾಯಿಸುವ ಮೂಲಕ ಈ ಬಾರಿ ಮೈಸೂರಿನಲ್ಲಿ ಶೇ. 100ಕ್ಕೆ 100ರಷ್ಟು ಮತದಾನ ಮಾಡುವುದಕ್ಕೆ ನಾವೆಲ್ಲರೂ ಶ್ರಮಿಸೋಣ ಎಂದು ಕರೆ ನೀಡಿದರು.

> ಮೊದಲ ಬಾರಿಗೆ ಚೆಸ್ಕಾಂ ವತಿಯಿಂದ ವಿಭಿನ್ನ ರೀತಿಯಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿದೆ. ಚಾಮುಂಡಿಬೆಟ್ಟ ಸೇರಿದಂತೆ ನಗರದ 12 ಪ್ರಮುಖ ಹಾಗೂ ಜನಸಂದಣಿ ಸ್ಥಳಗಳಲ್ಲಿ ಆಗಸದಲ್ಲಿ ಮತದಾನ ಜಾಗೃತಿ ಸಂದೇಶವುಳ್ಳ ದೊಡ್ಡಗಾತ್ರ ಹೀಲಿಯಂ ಬಲೂನ್‌ಗಳನ್ನು ಅನಾವರಣ ಮಾಡಿದ್ದೇವೆ ದಿನ 24 ಗಂಟೆಯೂ ಬಲೂನ್‌ಗಳು ಜನರನ್ನು ಆಕರ್ಷಣೆ ಮಾಡಲಿದ್ದು, ಮತದಾನ ಪ್ರಕ್ರಿಯೆ ಮುಗಿಯುವವರೆಗೂ ಬಲೂನ್‌ಗಳು ಇರಲಿವೆ. ಪ್ರತಿಯೊಬ್ಬರಲ್ಲಿ ತಪ್ಪದೆ ಮತದಾನ ಮಾಡಬೇಕು ಎಂಬ ಮನೋಭಾವನೆ ಬರಲಿ ಹಾಗೂ ಹಿಂದೆಂದಿಗಿಂತಲೂ ಹೆಚ್ಚಿನ ಮತದಾನ ಮೈಸೂರು ಜಿಲ್ಲೆಯಲ್ಲಾಗಲೀ ಎಂಬುದೇ ನಮ್ಮ ಮುಖ್ಯ ಉದ್ದೇಶವಾಗಿದೆ.
> –ಜಿ.ಶೀಲಾ, ಎಂಡಿ, ಚೆಸ್ಕಾಂ

ಹೀಲಿಯಂ ಬಲೂನ್ ಹಾರಾಡುವ ಸ್ಥಳಗಳು: ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಜಯಚಾಮರಾಜೇಂದ್ರ ವೃತ್ತ, ರಾಮಸ್ವಾಮಿ ವೃತ್ತ, ನಾಡಪ್ರಭು ಕೆಂಪೇಗೌಡ ವೃತ್ತ (ಮಣಿಪಾಲ್ ಆಸ್ಪತ್ರೆ ವೃತ್ತ), ನೂತನ ಜಿಲ್ಲಾಧಿಕಾರಿಗಳ ಕಚೇರಿ ವೃತ್ತ, ಡಾ.ಎಪಿಜೆ ಅಬ್ದುಲ್ ಕಲಾಂ ವೃತ್ತ(ಬಂಡಿಪಾಳ್ಯ ವೃತ್ತ), ಅಲ್–ಬದರ್ ವೃತ್ತ, ರಾಮಕೃಷ್ಣ ಪರಮಹಂಸ ವೃತ್ತ, ಮಹಿಷಾಸುರ ವೃತ್ತ(ಚಾಮುಂಡಿಬೆಟ್ಟ), ಮಿಲೇನಿಯಂ ವೃತ್ತ(ಎಲ್‌ಐಸಿ ಸರ್ಕಲ್) ಮತ್ತು ಹಿನಕಲ್ ರಿಂಗ್ ರೋಡ್ ಸರ್ಕಲ್‌ನಲ್ಲಿ ಮತದಾನ ಜಾಗೃತಿ ಸಂದೇಶವುಳ್ಳ ಹೀಲಿಯಂ ಬಲೂನ್‌ಗಳನ್ನು ಅನಾವರಣಗೊಳಿಸಲಾಗಿದೆ.

ನಗರ ಪೊಲೀಸ್ ಆಯುಕ್ತ ರಮೇಶ್ ಬಾನೋತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ಕೆ.ಎಂ ಗಾಯತ್ರಿ, ಮೈಸೂರು ನಗರ ಪಾಲಿಕೆ ಆಯುಕ್ತರಾದ ಎನ್.ಎನ್.ಮಧು, ಚೆಸ್ಕಾಂನ ತಾಂತ್ರಿಕ ನಿರ್ದೇಶಕ ಉಮೇಶ್ ಚಂದ್ರ, ಮುಖ್ಯ ಇಂಜಿನಿಯರ್ ಮಹದೇವಸ್ವಾಮಿ ಪ್ರಸನ್ನ, ಸೂಪರಿಂಟೆಂಡೆಂಟ್ ಇಂಜಿನಿಯರ್ ಸುನೀಲ್ ಕುಮಾರ್, ಕಾರ್ಯನಿರ್ವಾಹಕ ಇಂಜಿನಿಯರ್‌ಗಳಾದ ಆರ್.ಪೂರ್ಣಚಂದ್ರ ತೇಜಸ್ವಿ, ಎಸ್.ಪಿ. ಅನಿತಾ, ನಗರಪಾಲಿಕೆ ಪರಿಸರ ಇಂಜಿನಿಯರ್ ಎಸ್.ಮೈತ್ರಿ ಮತ್ತಿತರರು ಉಪಸ್ಥಿತರಿದ್ದರು.

ಕ್ಯೂ ಆರ್ ಕೋಡ್‌ವುಳ್ಳ ಮತದಾರರ ಚೀಟಿ ಹಂಚಿಕೆ



ಬೂತ್ ಮಟ್ಟದ ಅಧಿಕಾರಿ (ಬಿಎಲ್‌ಓ)ಗಳು ಮನೆ ಮನೆಗೆ ತೆರಳಿ ಕ್ಯೂಆರ್ ಕೋಡ್ ಇರುವ ಮತದಾರರ ಚೀಟಿ ಹಂಚುತ್ತಿರುವುದನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು, ಏ. 16(ಆರ್‌ಕೆ)– ಭಾರತ ಚುನಾವಣಾ ಆಯೋಗದ ನಿರ್ದೇಶನದ ಮೇರೆಗೆ ಇದೇ ಮೊದಲ ಬಾರಿ 2024ರ ಲೋಕಸಭಾ ಚುನಾವಣೆಗೆ ಮೈಸೂರು ಜಿಲ್ಲಾಡಳಿತವು ಕ್ಯೂಆರ್ (QR) ಕೋಡ್ ಹೊಂದಿರುವ ಮತದಾರರ ಮಾಹಿತಿ ಚೀಟಿ (Voter Slip with QR Code)ಯನ್ನು ವಿತರಿಸುತ್ತಿದೆ.

ಏಪ್ರಿಲ್ 26ರಂದು ನಡೆಯಲಿರುವ ಮತದಾನ ಪ್ರಕ್ರಿಯೆಗೆ ಮತದಾರರ ಹೆಸರು, ಕ್ರಮ ಸಂಖ್ಯೆ, ಮತದಾನ ಕೇಂದ್ರ, ಬೂತ್ ಸಂಖ್ಯೆ ಹಾಗೂ ಇನ್ನಿತರ ಮಾಹಿತಿ ಹೊಂದಿರುವ ಚೀಟಿಯನ್ನು ಬೂತ್ ಮಟ್ಟದ ಅಧಿಕಾರಿ (ಬಿಎಲ್‌ಓ)ಗಳು ಹಾಗೂ ಗ್ರಾಮ ಲೆಕ್ಕಿಗರು ಮನೆ ಮನೆಗೆ ತೆರಳಿ ಕ್ಯೂಆರ್ ಕೋಡ್ ಹೊಂದಿರುವ ಮತದಾರರ ಚೀಟಿಯನ್ನು ವಿತರಿಸುವ ಪ್ರಕ್ರಿಯೆ ಆರಂಭಿಸಿದ್ದಾರೆ.

ಮತದಾರರ ಮಾಹಿತಿ ಚೀಟಿಯಲ್ಲಿ ಭಾರತ ಚುನಾವಣಾ ಆಯೋಗ, 2024ರ ಸಾರ್ವತ್ರಿಕ ಲೋಕಸಭಾ ಚುನಾವಣೆ, ವಿಧಾನಸಭಾ ಕ್ಷೇತ್ರ, ಮತದಾರರ ಹೆಸರು, ಲಿಂಗ, ತಂದೆ ಅಥವಾ ಗಂಡನ ಹೆಸರು, ಭಾಗದ ಸಂಖ್ಯೆ, ಭಾಗದ ಹೆಸರು, ಮತದಾರರ ಕ್ರಮ ಸಂಖ್ಯೆ, ಮತಗಟ್ಟೆ ಹೆಸರು, ವಿಳಾಸ, ಮತದಾನದ ದಿನಾಂಕ, ಸಹಾಯವಾಣಿ ಸಂಖ್ಯೆ 1950 ಇತ್ಯಾದಿ ಮಾಹಿತಿಗಳು ಮುದ್ರಿತವಾಗಿವೆ.

ಅದೇ ರೀತಿ ಮತಗಟ್ಟೆಯ ನಕ್ಷೆ (ಮ್ಯಾಪ್), ಮತಗಟ್ಟೆಯಲ್ಲಿ ಮತದಾನ ಮಾಡಲು ಒದಗಿಸಿರುವ ಸೌಲಭ್ಯ, ಪ್ರತಿ ಮತವೂ ಅಮೂಲ್ಯ, ಒಬ್ಬ ಮತದಾರನೂ ಮತದಾನದಿಂದ ಹೊರಗುಳಿಯಬಾರದೆಂಬ ಸಂದೇಶವೂ ಸಹ ಚೀಟಿಯಲ್ಲಿ ಕನ್ನಡ ಮತ್ತು ಇಂಗ್ಲೀಷ್‌ನಲ್ಲಿ ಮುದ್ರಿತವಾಗಿದೆ.

ತಮ್ಮ ಮೊಬೈಲ್ ಸ್ಕ್ಯಾನರ್‌ನಿಂದ ಚೀಟಿಯ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿದರೆ ಸಾಕು, ಎಲ್ಲಾ ಮಾಹಿತಿ ಲಭ್ಯವಾಗುವುದು. ಗೂಗಲ್ ಮ್ಯಾಪ್ ಮೂಲಕ ನಿಮಗೆ ಮತದಾನ ಕೇಂದ್ರದ ಸ್ಥಳ ಮತ್ತು ಮಾರ್ಗವನ್ನು ಅದು ತೋರಿಸುತ್ತದೆ.

> ನಿಮ್ಮ ಮತಗಟ್ಟೆ ಅರಿಯಲು https:||Voters.eci.gov.in/login ನಲ್ಲಿ ಲಾಗಿನ್ ಆಗಿ, ಕ್ಯೂಆರ್ ಕೋಡ್ ಪಡೆಯಿರಿ.

https:||Voters.eci.gov.in/login ಆದಲ್ಲಿ ನೀವು ಮತದಾನ ಮಾಡಬೇಕಾದ ಮತಗಟ್ಟೆಯ ಮಾಹಿತಿಯನ್ನು ಈ ಕ್ಯೂಆರ್ ಕೋಡ್ ಒದಗಿಸುತ್ತದೆ. ನಗರ ಪ್ರದೇಶದಲ್ಲಿ ಮತದಾನದ ಪ್ರಮಾಣ ಹೆಚ್ಚಿಸಲು ಈ ಚೀಟಿ ಅನುಕೂಲ ಮಾಡಿಕೊಡುತ್ತದೆ. ಇತ್ತೀಚೆಗೆ ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಚುನಾವಣೆಯಲ್ಲಿ ಮೊದಲ ಬಾರಿ ಈ ತಂತ್ರಜ್ಞಾನ ಬಳಸಿದಾಗ ಬೆಂಗಳೂರು ನಗರದಲ್ಲಿ 2020ನೇ ಸಾಲಿನಲ್ಲಿ ಮತದಾನದ ಪ್ರಮಾಣ ಹೆಚ್ಚಿಗೆಯಾಗಿತ್ತು.

ಅದರಿಂದ ಪ್ರೇರೇಪಿತವಾಗಿರುವ ಭಾರತ ಚುನಾವಣಾ ಆಯೋಗವು 2024ರ ಲೋಕಸಭಾ ಚುನಾವಣೆಯಲ್ಲಿ ದೇಶಾದ್ಯಂತ ಅನುಷ್ಠಾನಗೊಳಿಸಿತು. ಮತಗಟ್ಟೆ ಹುಡುಕುವುದು, ಮತದಾರರ ಪಟ್ಟಿಯಲ್ಲಿ ಹೆಸರಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಲು ನಾಗರಿಕರು ಪರಿತಪಿಸಬೇಕಾಗಿದ್ದ ಸಂದರ್ಭದಲ್ಲಿ ಬೇಸತ್ತು ಮತದಾರ ಮತದಾನದಿಂದ ದೂರ ಉಳಿಯುತ್ತಿದ್ದರು.

ಮತದಾನ ಮಾಡುವಂತೆ ಜನರಲ್ಲಿ ಸ್ವೀಪ್ ಅಡಿ ಜಾಗೃತಿ ಮೂಡಿಸುವ ಜೊತೆಗೆ ಇದೀಗ ಆಯೋಗವು ಮತ್ತಷ್ಟು ಮತದಾರ ಸ್ನೇಹಿಯಾಗಿಸಲು ಹಲವು ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದು, ಆ ಮೂಲಕ ಲೋಕಸಭಾ ಚುನಾವಣೆಯಲ್ಲಿ ಮತದಾನ ಪ್ರಮಾಣ ಹೆಚ್ಚಿಸಲು ಪ್ರಯತ್ನಿಸುತ್ತಿದೆ.

ಅಂಚೆ ಮತದಾನ ; ನಮೂನೆ–12, 12ಎ ಎರಡನ್ನೂ ಸಲ್ಲಿಸಲು ಇಂದು ಕಡೇ ದಿನ

ಮೈಸೂರು,ಏ.16(ಪಿಎಂ)– ಲೋಕಸಭಾ ಸಾರ್ವತ್ರಿಕ ಚುನಾವಣಾ ಕರ್ತವ್ಯನಿರತ ಅಧಿಕಾರಿಗಳು ಮತ್ತು ನೌಕರರು ಅಂಚೆ ಮತದಾನ ಮಾಡುವ ಸಂಬಂಧ ಈಗಾಗಲೇ ನೀಡಲಾಗಿರುವ 'ನಮೂನೆ–12' ಮತ್ತು 'ನಮೂನೆ 12ಎ' ಎರಡನ್ನೂ ಸಲ್ಲಿಸಲು ಏ.17 ಕಡೆ ದಿನವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಡಾ.ಕೆ.ವಿ.ರಾಜೇಂದ್ರ ತಿಳಿಸಿದ್ದಾರೆ.

ಚುನಾವಣಾ ಕರ್ತವ್ಯನಿರತ ಅಧಿಕಾರಿಗಳು, ನೌಕರರು ಮತದಾನದಿಂದ ವಂಚಿತರಾಗಬಾರದೆಂದು ನಮೂನೆ–12, 12ಎ ಮೂಲಕ ಮತದಾನ ದಾಖಲಿಸುವ ಸೌಲಭ್ಯವನ್ನು ಭಾರತ ಚುನಾವಣಾ ಆಯೋಗವು ಕಲ್ಪಿಸಿದೆ. ಹಾಗಾಗಿ ಸದರಿ ಎರಡೂ ನಮೂನೆಗಳನ್ನು ಏ.17ರ ಒಳಗಾಗಿ ಸಂಬಂಧಪಟ್ಟ ಸಹಾಯಕ ಮತದಾರರ ನೋಂದಣಾಧಿಕಾರಿಗಳಿಗೆ ಸಲ್ಲಿಸಬೇಕೆಂದು ಪ್ರಕಟಣೆಯಲ್ಲಿ ಅವರು ತಿಳಿಸಿದ್ದಾರೆ.

ಪ್ರಕಾಶ್‌ರಾಜ್ 'ನಿರ್ದಿಗಂತ' ಸಂಸ್ಥೆಗೆ 4.20 ಕೋಟಿ ರೂ. ಅನುದಾನ

ಹಾಗಾಗಿಯೇ ಕಲಾ ಸೇವೆ ಬಿಟ್ಟು ಕಾಂಗ್ರೆಸ್‌ಗೆ ಪರಿಚಾರಿಕೆ ಮಾಡುತ್ತಿದ್ದಾರೆ : ಜೆಡಿಎಸ್ ಆರೋಪ

ಬೆಂಗಳೂರು, ಏ. 16(ಕೆಎಂಶಿ)–ಕಲಾ ಸೇವೆ ಬಿಟ್ಟು ಕಾಂಗ್ರೆಸ್‌ಗೆ ಪರಿಚಾರಿಕೆ ಮಾಡುತ್ತಿರುವ ನಟ ಪ್ರಕಾಶ್ ರಾಜ್ ಅವರ 'ನಿರ್ದಿಗಂತ' ಸಂಸ್ಥೆಗೆ ರಾಜ್ಯ ಸರ್ಕಾರ 4.20 ಕೋಟಿ ರೂ. ನೀಡಿದೆ ಎಂದು ಜೆಡಿಎಸ್ ಇಂದಿಲ್ಲಿ ಆರೋಪಿಸಿದೆ.

ಸರ್ಕಾರಿ ರಂಗಾಯಣಗಳಿಗೆ ಬಿಡಿಗಾಸೂ ನೀಡದ ಸಿದ್ದರಾಮಯ್ಯ ಸರ್ಕಾರ, ಹೊಸದಾಗಿ ಅಸ್ತಿತ್ವಕ್ಕೆ ಬಂದಿರುವ ಪ್ರಕಾಶ್ ರಾಜ್ ಸಂಸ್ಥೆಗೆ ಅಲ್ಪಾವಧಿಯಲ್ಲೇ ಇಷ್ಟು ದೊಡ್ಡ ಮೊತ್ತ ಬಿಡುಗಡೆ ಮಾಡಿ ತಮ್ಮ ಪಕ್ಷದ ಪರ ಪ್ರಚಾರಕ್ಕೆ ನಟನನ್ನು ಬಳಸಿಕೊಳ್ಳುತ್ತಿದೆ.

ಈ ಸಂಬಂಧ ಸರಣಿ ಟ್ವೀಟ್ ಮಾಡಿರುವ ಜೆಡಿಎಸ್, ಕಲಾ ಸೇವೆ ಬಿಟ್ಟು ಕಾಂಗ್ರೆಸ್ ಪರಿಚಾರಿಕೆ ಮಾಡುತ್ತಿರುವ ಪ್ರಕಾಶ್ ರಾಜ್‌ಗೆ ಸರ್ಕಾರ ತಕ್ಕ ಪ್ರತಿಫಲ ನೀಡಿದೆ ಎಂದು ಆರೋಪಿಸಿದೆ.



ಮೊರಾರ್ಜಿ ವಸತಿ ಶಾಲೆಗಳಿಗಷ್ಟೇ ಅಲ್ಲ, ಸರ್ಕಾರಿ ವಸತಿ ನಿಲಯಗಳಿಗೆ ಹಣ ಕೊಡಲೂ ಸರ್ಕಾರಕ್ಕೆ ಕೈಬರುತ್ತಿಲ್ಲ, ಅಲ್ಲಿ ಮಕ್ಕಳಿಗೆ ಒಳ್ಳೆಯ ಆಹಾರವಿಲ್ಲ, ನೀರೂ ಇಲ್ಲ, ರಂಗಾಯಣಗಳಿಗೆ ನೀಡಲು ಬಿಡಿಗಾಸೂ ಇಲ್ಲ, ನೀವು (ಪ್ರಕಾಶ್ ರಾಜ್) ಸ್ಥಾಪಿಸಿರುವ ನಿರ್ದಿಗಂತಕ್ಕೆ ಸರ್ಕಾರ ಹಣದ ಹೊಳೆ ಹರಿಸುತ್ತಿರುವುದು ನಿಮ್ಮ ಜೋಳಿಗೆ ಭರ್ತಿ ಮಾಡಲು ಅಲ್ಲವೇ ಪ್ರಕಾಶ್‌ರಾಜ್ ಎಂದು ಪ್ರಶ್ನಿಸಿದೆ.

ಗ್ಯಾರಂಟಿಗಳ ವಿಶೇಷ ತೌಲನಿಕ ಅಧ್ಯಯನಕ್ಕಾಗಿ ಪಾಲಿಸಿ ಫ್ರಂಟ್ ಎಂಬ ಮಟ್ಟು – ಪಟ್ಟಿನ ಕಳ್ಳ ಕಂಪನಿಗೆ ಕೋಟಿ ಕೋಟಿ ಸುರಿದಿರುವ ಕರ್ನಾಟಕ ಕಾಂಗ್ರೆಸ್ ಸರ್ಕಾರ ನಿಮ್ಮ ನಿರ್ದಿಗಂತಕ್ಕೂ ಹಣ ಸುರಿಯುತ್ತಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಕಸ ಹೊಡೆಯುವವರೂ ದಿಕ್ಕಿಲ್ಲ, ಕನ್ನಡ ಭವನದಲ್ಲಿ ಧೂಳು ತೆಗೆಯುವವರೂ ಗತಿ ಇಲ್ಲ. ಇಲ್ಲಿ ನಿಮ್ಮ ಜೋಳಿಗೆ ಭರ್ತಿ ಋಣ..ಋಣ ಕಾಂಚಾಣ ಹೆಂಗೆ, ಜಸ್ಟ್ ಆಕ್ಟಿಂಗ್ ಅಷ್ಟೇ ಪ್ರಕಾಶ್ ರಾಜ್ ಎಂದು ವ್ಯಂಗ್ಯವಾಡಿದೆ.

ಯುಪಿಎಸ್‌ಸಿ ಪರೀಕ್ಷಾ ಫಲಿತಾಂಶ ಪ್ರಕಟ

ಮೈಸೂರು ಜಿಲ್ಲೆಯ ಜೆ.ಭಾನು ಪ್ರಕಾಶ್, ಕೆ.ಟಿ.ಮೇಘನಾ, ಎಂ.ಲೇಖನ್, ಎನ್.ತೇಜಸ್ವಿನಿ ತೇರ್ಗಡೆ

ಮೈಸೂರು,ಏ.16(ಪಿಎಂ)– ಕೇಂದ್ರ ಲೋಕಸೇವಾ ಆಯೋಗವು (ಯುಪಿಎಸ್‌ಸಿ) 2023ರ ಸೆಪ್ಟೆಂಬರ್‌ನಲ್ಲಿ ನಡೆಸಿದ್ದ ನಾಗರಿಕ ಸೇವೆಗಳ ಪರೀಕ್ಷೆಯ (ಸಿಎಸ್‌ಇ) ಫಲಿತಾಂಶ ಮಂಗಳವಾರ ಪ್ರಕಟವಾಗಿದ್ದು, ಮೈಸೂರು ಜಿಲ್ಲೆಯ ಜೆ.ಭಾನು ಪ್ರಕಾಶ್ 600ನೇ ರ‍್ಯಾಂಕ್, ಕೆ.ಟಿ.ಮೇಘನಾ 721ನೇ ರ‍್ಯಾಂಕ್, ಎಂ.ಲೇಖನ್ 777ನೇ ರ‍್ಯಾಂಕ್ ಹಾಗೂ ಎನ್.ತೇಜಸ್ವಿನಿ 787ನೇ ರ‍್ಯಾಂಕ್ ಪಡೆದು ಸಾಧನೆ ಮೆರೆದಿದ್ದಾರೆ.

ಜೆ.ಭಾನು ಪ್ರಕಾಶ್ ಮೈಸೂರು ಜಿಲ್ಲೆಯ ಕೆಆರ್ ನಗರ ತಾಲೂಕಿನ ಕೆಸ್ತೂರುಕೊಪ್ಪಲು ಗ್ರಾಮದವರು. ಇವರ ತಂದೆ ಜಯರಾಮೇಗೌಡ ರೈತರಾದರೆ, ತಾಯಿ ಗಿರಿಜಮ್ಮ ಅಂಗನವಾಡಿ ಕಾರ್ಯಕರ್ತೆಯಾಗಿದ್ದಾರೆ. ಜೆ.ಭಾನುಪ್ರಕಾಶ್ ಕಳೆದ ಬಾರಿಯ ಪರೀಕ್ಷೆಯಲ್ಲಿ ತಮ್ಮ ಎರಡನೇ ಪ್ರಯತ್ನದಲ್ಲಿ 448ನೇ ರ‍್ಯಾಂಕ್ ಗಳಿಸಿ ಈಗಾಗಲೇ ಐಪಿಎಸ್ ಸೇವೆಯಲ್ಲಿದ್ದಾರೆ.

ನಿರೀಕ್ಷೆ ಕೈಗೂಡಲಿಲ್ಲ: 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಜೆ.ಭಾನುಪ್ರಕಾಶ್, ಇನ್ನು ಉತ್ತಮ ರ‍್ಯಾಂಕ್ ಗಳಿಸಬೇಕೆಂಬ ಆಕಾಂಕ್ಷೆಯಲ್ಲಿ ಮತ್ತೆ ಪರೀಕ್ಷೆ ಬರೆದಿದ್ದೆ. ಆದರೆ ಅದು ಸಾಧ್ಯವಾಗಲಿಲ್ಲ. ಈ ವರ್ಷ ಕಳೆದ ಬಾರಿಗಿಂತ ಉತ್ತಮ ರ‍್ಯಾಂಕ್ ಬಂದಿದ್ದರೆ, ಈಗಿರುವ ಸೇವೆ ಕೈಬಿಡಬಹುದಿತ್ತು. ಆದರೆ ಆ ರೀತಿ ಆಗಿಲ್ಲದ ಕಾರಣ ಈಗಾಗಲೇ ಸೇವೆಯಲ್ಲಿರುವ ಐಪಿಎಸ್‌ನಲ್ಲೇ ಮುಂದುವರೆಯುತ್ತೇನೆ. ಕಳೆದ ಬಾರಿಗಿಂತ ಈ ಬಾರಿ ಹೆಚ್ಚು ಅಧ್ಯಯನ ನಡೆಸಿದ್ದೆ. ಆದರೂ ಅಂದುಕೊಂಡಂತೆ ಆಗಲಿಲ್ಲ. ಆದರೆ ನಿರಾಸೆ ಹೊಂದುವುದಿಲ್ಲ ಎಂದು ತಿಳಿಸಿದರು.

ಬಹುತೇಕ ಮತ್ತೆ ಪರೀಕ್ಷೆ ಬರೆಯುವ ಇಚ್ಛೆ ಹೊಂದಿದ್ದೇನೆ. ಸೇವೆಯಲ್ಲಿದ್ದುಕೊಂಡೆ ಮತ್ತೆ ಪ್ರಯತ್ನ ಮುಂದುವರೆಸುತ್ತೇನೆ. ಯಾರೇ ಆದಲ್ಲಿ ಈ ಪರೀಕ್ಷೆಯಲ್ಲಿ ಯಶಸ್ವಿಯಾಗಬೇಕಾದರೆ, ಮುಖ್ಯವಾಗಿ ನಿರಂತರವಾಗಿ ಅಧ್ಯಯನ ಮಾಡಬೇಕು. ಜೊತೆಗೆ ಅದರಲ್ಲಿ ಸ್ಥಿರತೆ ಕಾಯ್ದುಕೊಳ್ಳಬೇಕು. ಈ ರೀತಿಯಲ್ಲಿ ಅಧ್ಯಯನದಲ್ಲಿ ತೊಡಗಿಕೊಂಡರೆ ಯಾರೂ ಬೇಕಾದರೂ ಯುಪಿಎಸ್‌ಸಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಬಹುದು ಎಂದು ಯುಪಿಎಸ್‌ಸಿ ಪರೀಕ್ಷೆ ಬರೆಯಲಿಚ್ಛಿಸುವ ಆಕಾಂಕ್ಷಿಗಳಿಗೆ ಸಲಹೆ ನೀಡಿದರು.



ಜೆ.ಭಾನು ಪ್ರಕಾಶ್



ಕೆ.ಟಿ.ಮೇಘನಾ



ಎಂ.ಲೇಖನ್



ಎನ್.ತೇಜಸ್ವಿನಿ

721ನೇ ರ‍್ಯಾಂಕ್: ಮತ್ತೊಬ್ಬ ಸಾಧಕರಾದ ಕೆ.ಟಿ.ಮೇಘನಾ ಪ್ರಸ್ತುತ ಬೆಂಗಳೂರಿನಲ್ಲಿ ನೆಲೆಸಿದ್ದು, ಇವರು ಮೂಲತಃ ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲೂಕಿನ ಬೆಟ್ಟದಪುರ ಗ್ರಾಮದವರು. ಇವರ ತಂದೆ ತಾಂಡವಮೂರ್ತಿ ಉದ್ಯಮಿಗಳಾಗಿದ್ದು, ತಾಯಿ ನವನೀತಾ ಗೃಹಿಣಿಯಾಗಿದ್ದಾರೆ. ಇಂಗ್ಲಿಷ್ ವಿಷಯದಲ್ಲಿ ಸ್ನಾತಕೋತ್ತರ ಪದವಿ ಪಡೆದಿರುವ ಮೇಘನಾ ಅವರು ಒಟ್ಟು 6 ಬಾರಿ ಯುಪಿಎಸ್‌ಸಿ ಪರೀಕ್ಷೆ ಬರೆದು, 3 ಬಾರಿ ಯಶಸ್ವಿಯಾಗಿದ್ದಾರೆ. 2020ರ ಪರೀಕ್ಷೆಯಲ್ಲಿ 464ನೇ ರ‍್ಯಾಂಕ್ ಗಳಿಸಿದ ಇವರು, ಇಂಡಿಯನ್ ಇನ್ಫಾರ್ಮೇಷನ್ ಸರ್ವೀಸ್‌ಗೆ ಸೇರಿದರು. ಕಳೆದ 2022ರ ಪರೀಕ್ಷೆಯಲ್ಲಿ 425ನೇ ರ‍್ಯಾಂಕ್ ಗಳಿಸಿದರೂ ಈಗ 721ನೇ ರ‍್ಯಾಂಕ್ ಗಳಿಸಿದ್ದು, ಹಾಲಿ ಸೇವೆಯಲ್ಲೇ ಮುಂದುವರೆದಿದ್ದಾರೆ.

ಕೆ.ಟಿ.ಮೇಘನಾ ಅವರು 'ಮಿತ್ರ'ನೊಂದಿಗೆ ಮಾತನಾಡಿ, ಮತ್ತೆ ಪರೀಕ್ಷೆ ಬರೆಯಬೇಕೇ ಅಥವಾ ಬೇಡವೇ ಎಂಬ ಬಗ್ಗೆ ಸದ್ಯಕ್ಕೆ ಯಾವುದೇ ಆಲೋಚನೆ ಮಾಡಿಲ್ಲ. ಮುಂದೆ ನೋಡಬೇಕು ಎಂದರು. ದಿನಕ್ಕೆ 10ರಿಂದ 12 ಗಂಟೆ ಕಾಲ ಓದುತ್ತಿದ್ದೆ. ಪರೀಕ್ಷೆ ಹತ್ತಿರಕ್ಕೆ ಬಂದಾಗ ಇನ್ನೂ ಹೆಚ್ಚು ಸಮಯ ಓದಿನಲ್ಲಿ ಕಳೆಯುತ್ತಿದ್ದೆ. ಜ್ಞಾನ ಸಂಪಾದಿಸುವ ಜೊತೆಗೆ ಈ ಪರೀಕ್ಷೆ ತಯಾರಿಯಲ್ಲಿ ಮುಖ್ಯವಾಗಿ ತಾಳ್ಮೆ ಕಾಯ್ದುಕೊಳ್ಳಬೇಕು. ಪರಿಶ್ರಮ ಹಾಕಬೇಕು. ಆತ್ಮವಿಶ್ವಾಸ ಹೊಂದಬೇಕು. ಆಗ ಈ ಪರೀಕ್ಷೆ ಮಾತ್ರವಲ್ಲ, ಯಾವುದೇ ಆದರೂ ಯಶಸ್ಸು ಗಳಿಸಲು ಸಾಧ್ಯ ಎಂದು ಹೇಳಿದರು.

> ಪರೀಕ್ಷೆಯಲ್ಲಿ ಉತ್ತರ ಪ್ರದೇಶದ ಆದಿತ್ಯ ಶ್ರೀವಾಸ್ತವ ಪ್ರಥಮ ರ‍್ಯಾಂಕ್ ಪಡೆದಿದ್ದು, ಅನಿಮೇಶ್ ಪ್ರಧಾನ್ ದ್ವಿತೀಯ ಹಾಗೂ ಡೋಣೂರು ಅನನ್ಯಾ ರೆಡ್ಡಿ ತೃತೀಯ ರ‍್ಯಾಂಕ್ ಗಳಿಸಿದ್ದಾರೆ. ಒಟ್ಟು 1,016 ಅಭ್ಯರ್ಥಿಗಳು ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ್ದು, ಈ ಪೈಕಿ ಕರ್ನಾಟಕದ 23 ಅಭ್ಯರ್ಥಿಗಳು ಸೇರಿದ್ದಾರೆ.

777ನೇ ರ‍್ಯಾಂಕ್: ಮತ್ತೊಬ್ಬ ಸಾಧಕರಾದ ಎಂ.ಲೇಖನ್ ಹುಣಸೂರು ತಾಲೂಕು ತಿಪ್ಪಲಾಪುರ ಗ್ರಾಮದವರು. ಮೈಸೂರಿನ ಜೆಸಿ ಕಾಲೇಜಿನಲ್ಲಿ ಸಿವಿಲ್ ಇಂಜಿನಿಯರಿಂಗ್ ವಿಭಾಗದಲ್ಲಿ ಪದವಿ ಪಡೆದಿದ್ದಾರೆ. ಇವರು ತಮ್ಮ ನಾಲ್ಕನೇ ಪ್ರಯತ್ನದಲ್ಲಿ ಯುಪಿಎಸ್‌ಸಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ್ದಾರೆ. ಇವರು ಈ ಬಾರಿ 777ನೇ ರ‍್ಯಾಂಕ್ ಗಳಿಸಿದ್ದಾರೆ. ಇವರ ತಂದೆ ಎಲ್.ಮಹದೇವ್ ಪ್ರೌಢಶಾಲೆಯ ಮುಖ್ಯ ಶಿಕ್ಷಕರಾಗಿದ್ದು, ತಾಯಿ ಶೈಲಜಾ ಗೃಹಿಣಿಯಾಗಿದ್ದಾರೆ.

'ಮಿತ್ರ'ನೊಂದಿಗೆ ಮಾತನಾಡಿದ ಲೇಖನ್, ನಾನು ಮಾರ್ಗದರ್ಶನಕ್ಕಾಗಿ ಯಾವುದೇ ತರಬೇತಿ ಕೇಂದ್ರಕ್ಕೂ ಹೋಗಿಲ್ಲ. ಸ್ವತಃ ನಾನೇ ಅಧ್ಯಯನ ಸಾಮಗ್ರಿ ಸಿದ್ಧಪಡಿಸಿಕೊಂಡು ಓದುತ್ತಿದ್ದೆ. ಕನ್ನಡ ಸಾಹಿತ್ಯವನ್ನು ಐಚ್ಛಿಕ ವಿಷಯವಾಗಿ ತೆಗೆದುಕೊಂಡಿದ್ದೆ. ಕೇವಲ ತರಬೇತಿ ಕೇಂದ್ರದಲ್ಲಿ ನೀಡುವ ಮಾರ್ಗದರ್ಶನದಿಂದಲೇ ಯಶಸ್ಸು ಸಾಧ್ಯ ಎಂದು ಕೊಳ್ಳದೇ ತಾವೇ ಅಧ್ಯಯನ ಮೂಲಕ ಯಾವುದನ್ನು ಓದುಬೇಕೆಂಬ ಬಗ್ಗೆ ಅರಿತುಕೊಳ್ಳಲು ಸಾಧ್ಯವಿದೆ. ಅದರಂತೆ ಮುಂದುವರೆದರೆ ಯಶಸ್ಸು ಸಾಧ್ಯವಾಗಲಿದ್ದು, ನಾನು ಅದೇ ರೀತಿಯಲ್ಲಿ ಅಧ್ಯಯನ ಮಾಡಿದೆ ಎಂದು ಹೇಳಿದರು.

787ನೇ ರ‍್ಯಾಂಕ್: ಬೆಂಗಳೂರಿನಲ್ಲಿ ಸಾಫ್ಟ್‌ವೇರ್ ಇಂಜಿನಿಯರ್ ಆಗಿ ಕೆಲಸ ಮಾಡುತ್ತಿದ್ದ ಎನ್.ತೇಜಸ್ವಿನಿ, 2020ರಲ್ಲಿ ಹುದ್ದೆಗೆ ರಾಜಿನಾಮೆ ಸಲ್ಲಿಸಿ, ಯುಪಿಎಸ್‌ಸಿ ಪರೀಕ್ಷೆಗಾಗಿ ಓದಲು ಶುರು ಮಾಡಿದರು. ಮೈಸೂರಿನ ಎನ್‌ಐಇ ಕಾಲೇಜಿನಲ್ಲಿ ಕಂಪ್ಯೂಟರ್ ಅಪ್ಲಿಕೇಷನ್ ವಿಷಯದಲ್ಲಿ ಸ್ನಾತಕೋತ್ತರ ಪದವಿ ಪಡೆದಿರುವ ಅವರು, ತಮ್ಮ ನಾಲ್ಕನೇ ಪಯತ್ನದಲ್ಲಿ ಯುಪಿಎಸ್‌ಸಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ್ದಾರೆ.

ಎನ್.ತೇಜಸ್ವಿನಿಯವರು ದಿವಂಗತ ನಂಜಪ್ಪ ಮತ್ತು ಸುಂದರಮ್ಮ ದಂಪತಿ ಪುತ್ರಿ, ಮೈಸೂರು ಜಿಲ್ಲೆಯ ಹುಣಸೂರು ತಾಲೂಕು ಇವರ ತವರೂರು. ಇವರ ತಂದೆ ನಂಜಪ್ಪ ರೈತರಾಗಿದ್ದರು. ತಾಯಿ ಗೃಹಿಣಿಯಾಗಿದ್ದಾರೆ. ಪ್ರಸ್ತುತ ತೇಜಸ್ವಿನಿಯವರು ಪತಿ ಯೋಗೇಶ್ ಅವರೊಂದಿಗೆ ಹೆಚ್‌ಡಿ ಕೋಟೆ ತಾಲೂಕಿನ ಹಂಪಾಪುರ ಹೋಬಳಿಯ ಆಲನಹಳ್ಳಿ ಗ್ರಾಮದಲ್ಲಿ ನೆಲೆಸಿದ್ದಾರೆ. ಇವರು ಈ ಬಾರಿಯ ಯುಪಿಎಸ್‌ಸಿ ಪರೀಕ್ಷೆಯಲ್ಲಿ 787ನೇ ರ‍್ಯಾಂಕ್ ಗಳಿಸಿದ್ದಾರೆ.

'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ತೇಜಸ್ವಿನಿಯವರು, 2020 ಡಿಸೆಂಬರ್ ನಿಂದ 7 ತಿಂಗಳ ಕಾಲ ಬೆಂಗಳೂರಿನಲ್ಲಿ ಪರೀಕ್ಷೆಗಾಗಿ ತರಬೇತಿ ಪಡೆದಿದ್ದೆ. ಬಳಿಕ ನಾನೇ ಸ್ವಯಂ ಆಗಿ ಸಿದ್ಧತೆ ನಡೆಸಿದೆ. 12ರಿಂದ 14 ಗಂಟೆ ಕಾಲ ಓದುತ್ತಿದ್ದೆ. ಕನ್ನಡ ಸಾಹಿತ್ಯ ಐಚ್ಛಿಕ ವಿಷಯವಾಗಿ ತೆಗೆದುಕೊಂಡಿದ್ದೆ ಎಂದರು.

ಪರೀಕ್ಷೆಯಲ್ಲಿ ಯಶಸ್ಸು ಗಳಿಸುವ ವಿಶ್ವಾಸದೊಂದಿಗೆ ಪರಿಶ್ರಮದಿಂದ ಅಧ್ಯಯನ ನಡೆಸಬೇಕು. ಜೊತೆಗೆ ಸಂಪೂರ್ಣ ಸಮರ್ಪಣಾ ಭಾವದಿಂದ ತೊಡಗಿಸಿಕೊಳ್ಳಬೇಕು. ಕಠಿಣ ಪರಿಶ್ರಮ ಇದ್ದರೆ ಖಂಡಿತ ಫಲ ದೊರೆಯಲಿದೆ. ಒಂದೆರಡು ಪ್ರಯತ್ನದಲ್ಲಿ ಯಶಸ್ವಿ ಸಾಧ್ಯವಾಗಿಲ್ಲವಾದರೆ ಅಷ್ಟಕ್ಕೆ ಹಿಂದೇಟು ಹಾಕಬಾರದು. ಪ್ರಯತ್ನ ಮುಂದುವರೆಸಬೇಕು ಎಂದು ಯುಪಿಎಸ್‌ಸಿ ಪರೀಕ್ಷೆ ಬರೆಯಲಿಚ್ಛಿಸುವ ಆಕಾಂಕ್ಷಿಗಳಿಗೆ ಸಲಹೆ ನೀಡಿದರು.

ಅಧಿಕ ಮತಗಳ ಅಂತರದಿಂದ ಬೋಸ್ ಗೆಲ್ಲಿಸಿ

ಶಾಸಕ ಅನಿಲ್ ಕುಮಾರ್ ಮನವಿ

ಹೆಚ್.ಡಿ.ಕೋಟೆ, ಏ.16– ಕಳೆದ ವಿಧಾನಸಭಾ ಚುನಾವಣೆಯಲ್ಲಿ ನನಗೆ ನೀಡಿದ ಮತಗಳಿಗಿಂತ ಹೆಚ್ಚಿನ ಮತಗಳನ್ನು ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಅವರಿಗೆ ನೀಡಿ ಅವರನ್ನು ಜಯಶೀಲರನ್ನಾಗಿ ಮಾಡಬೇಕು ಎಂದು ಶಾಸಕ ಅನಿಲ್ ಕುಮಾರ್ ಮನವಿ ಮಾಡಿದರು.

ತಾಲೂಕಿನ ಹಂಪಾಪುರ ಗ್ರಾಮದಲ್ಲಿ ನಡೆದ ಪ್ರಚಾರ ಸಭೆಯಲ್ಲಿ ಸುನೀಲ್ ಬೋಸ್ ಪರ ಮತಯಾಚಿಸಿ ಮಾತನಾಡಿದ ಅವರು, ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ 8 ವಿಧಾನಸಭಾ ಕ್ಷೇತ್ರಗಳಿದ್ದು, ಎಲ್ಲಾ ಕ್ಷೇತ್ರಗಳಿಗಿಂತ ನಮ್ಮ ಕ್ಷೇತ್ರದಲ್ಲಿ ಹೆಚ್ಚಿನ ಬಹುಮತ ನೀಡಬೇಕು ಎಂದರು.

ಪ್ರಧಾನಿ ಮೋದಿಯವರು ಮೈಸೂರಿಗೆ ಬಂದು ಪ್ರಚಾರ ಮಾಡುವಾಗ ಮೈಸೂರನ್ನು ಪ್ಯಾರಿಸ್ ಮಾಡುವುದಾಗಿ ಹೇಳಿದ್ದಾರೆ. ಅವರು ಕಳೆದ 10 ವರ್ಷದ ಹಿಂದೆ ಬಂದಾಗಲೂ ಇದೇ ಹೇಳಿಕೆ ನೀಡಿದ್ದರು. ಇದುವರೆಗೆ ಪ್ಯಾರಿಸ್ ಆಗಲಿಲ್ಲ. ಮುಂದೆಯೂ ಅವರನ್ನು ನಂಬಿದರೆ ಆಗುವುದಿಲ್ಲ ಎಂದರು.

ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಮಾತನಾಡಿ, ಕಳೆದ 10 ವರ್ಷಗಳ ಹಿಂದೆ ಬಿಜೆಪಿ ಬಿಡುಗಡೆ ಮಾಡಿದ ಪ್ರಣಾಳಿಕೆಯಲ್ಲಿದ್ದ ಭರವಸೆಗಳನ್ನು ಈಡೇರಿಸದಿದ್ದರೂ, ಈ ಬಾರಿಯೂ ಬಿಜೆಪಿ ಪ್ರಣಾಳಿಕೆ ಬಿಡುಗಡೆ ಮಾಡಿರುವುದು ಹಾಸ್ಯಾಸ್ಪದ ಎಂದರು.

ಸಿದ್ದರಾಮಯ್ಯನವರು ಚುನಾವಣಾ ಪೂರ್ವ ನುಡಿದಂತೆ 5 ಗ್ಯಾರಂಟಿಗಳನ್ನು ಜಾರಿಗೊಳಿಸಿದ್ದಾರೆ. ಇದಕ್ಕೆ ಸಾರ್ವಜನಿಕರು ಮತಗಳ ಮೂಲಕ ಕೂಲಿ ನೀಡಬೇಕು ಎಂದ ಅವರು, ಶಾಸಕ ಅನಿಲ್ ಮುಖಂಡರು ಹಾಗೂ ಕಾರ್ಯಕರ್ತರೊಂದಿಗೆ ಮನೆ ಮನೆಗೆ ತೆರಳಿ ಮತಯಾಚಿಸುತ್ತಿದ್ದಾರೆ. ಅವರ ಉತ್ಸಾಹ ನೋಡಿದರೆ ಈ ಭಾಗದಲ್ಲಿ ನನಗೆ ಹೆಚ್ಚು ಮತಗಳು ದೊರೆಯುವುದರಲ್ಲಿ ಯಾವುದೇ ಅನುಮಾನವಿಲ್ಲ ಎಂದರು.

ಇದೇ ವೇಳೆ ಅನೇಕ ಮುಖಂಡರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು. ಬಳಿಕ ಹಂಪಾಪುರ, ಹೈರಿಗೆ, ಅಣ್ಣೂರು ಸೇರಿದಂತೆ ವಿವಿಧೆಡೆ ಸುನೀಲ್ ಮತಯಾಚಿಸಿದರು.

ಕಾರ್ಯಕ್ರಮದಲ್ಲಿ ಮಾಜಿ ಸಂಸದ ಕಾಗಲವಾಡಿ ಶಿವಣ್ಣ, ಕೋಟೆ, ಸರಗೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಏಜಾಜ್ ಪಾಷ, ಮಾದಪ್ಪ, ಜಿಪಂ ಮಾಜಿ ಸದಸ್ಯರಾದ ಹೆಚ್.ಸಿ.ಮಂಜು, ರವಿ, ನಂದಿನಿ, ಭಾಗ್ಯಲಕ್ಷ್ಮಿ, ಜಯ ಕರ್ನಾಟಕ ರಾಜ್ಯ ಉಪಾಧ್ಯಕ್ಷ ಸತೀಶ್ ಗೌಡ, ಮೈಮುಲ್ ನಿರ್ದೇಶಕ ಈರೇಗೌಡ, ಕುರುಬ ಸಮಾಜದ ಜಿಲ್ಲಾಧ್ಯಕ್ಷ ಶಿವಪ್ಪ ಕೋಟೆ, ಪುರಸಭಾ ಸದಸ್ಯ ಹೆಚ್.ಸಿ.ನರಸಿಂಹಮೂರ್ತಿ, ಕೆಪಿಸಿಸಿ ಹಿಂದುಳಿದ ವಿಭಾಗದ ರಾಜ್ಯ ಕಾರ್ಯದರ್ಶಿ ಬೈಪಾಸ್ ಮಂಜು, ಸಿಂಡಿಕೇಟ್ ಸದಸ್ಯ ಕ್ಯಾತನಹಳ್ಳಿ ನಾಗರಾಜ್, ರಾಜ್ಯ ಬೋವಿ ನಿಗಮದ ಮಾಜಿ ಅಧ್ಯಕ್ಷ ಜಿ.ವಿ.ಸೀತಾರಾಮ್, ಮುಖಂಡರಾದ ನಟರಾಜು, ರಾಜನಾಯಕ, ಸಂದೇಶ್, ಸೋಮೇಶ್, ಪ್ರಭುಸ್ವಾಮಿ, ರಾಜೇಗೌಡ, ಬೋರೇಗೌಡ, ಪ್ರಕಾಶ, ಕೆಂಡಗಣ್ಣೇಗೌಡ, ಮರಿದೇವಯ್ಯ, ಶಿವರಾಜು, ಭಾನುಮತಿ, ಪ್ರೇಮ್ ಸಾಗರ್, ಅನ್ಸರ್, ಜಯಪ್ರಕಾಶ್, ನಾಗರಾಜು, ಶಂಕರೇಗೌಡ, ಸುರೇಶ್, ಯೂಸುಫ್, ಜಾವಿದ್, ಮಾನ್ವಿ ಕರ್, ಮುರಳಿ, ಉಮೇಶ್ ಇನ್ನಿತರರಿದ್ದರು.



ಹಂಪಾಪುರದಲ್ಲಿ ನಡೆದ ಸಭೆಯನ್ನು ಶಾಸಕ ಅನಿಲ್ ಕುಮಾರ್ ಉದ್ಘಾಟಿಸಿದರು.

> ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಅವರನ್ನು ಹೆಚ್ಚು ಮತಗಳಿಂದ ಗೆಲ್ಲಿಸುವ ಸ್ವಾರ್ಥವಿದ್ದು, ಅದೇ ರೀತಿ ತಾಲೂಕಿಗೆ ಹೆಚ್ಚು ಅನುದಾನ ತಂದು ಇನ್ನೂ ಹೆಚ್ಚಿನ ಅಭಿವೃದ್ಧಿ ಕೆಲಸ ಮಾಡುವ ಆಸೆಯೂ ಇದೆ.
> -ಅನಿಲ್ ಕುಮಾರ್, ಶಾಸಕ.

ಗ್ಯಾರಂಟಿ ಯೋಜನೆಗಳು ಬಡವರ ಕೈ ಬಲಪಡಿಸಿವೆ

ಶಾಸಕ ದರ್ಶನ್ ಅಭಿಮತ



ವಿವಿಧೆಡೆ ಶಾಸಕ ದರ್ಶನ್ ಪ್ರಚಾರ ನಡೆಸಿದರು.

ಮಲ್ಕುಂಡಿ, ಏ.16– ರಾಜ್ಯ ಕಾಂಗ್ರೆಸ್ ಸರ್ಕಾರ ಚುನಾವಣಾ ಪೂರ್ವದಲ್ಲಿ ತಿಳಿಸಿದಂತೆ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ ಬಡವರ ಕೈ ಬಲ ಪಡಿಸಿದೆ ಎಂದು ಶಾಸಕ ದರ್ಶನ್ ತಿಳಿಸಿದರು.

ಇಲ್ಲಿಗೆ ಸಮೀಪದ ದೇವರಾಯ ಶೆಟ್ಟಿಪುರ, ಹೆಡಿಯಾಲ, ಹಲ್ಲರೆ, ಹಗಿನವಾಳು, ಹಾಡ್ಯ ಗ್ರಾಪಂ ವ್ಯಾಪ್ತಿಯಲ್ಲಿ ನಡೆದ ಕಾರ್ಯಕಲರ್ತರ ಸಭೆಗಳಲ್ಲಿ ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಪರ ಮಾತಯಾಚಿಸಿ ಮಾತನಾಡಿದ ಅವರು, ಕಾಂಗ್ರೆಸ್ ಬಡವರ ಪಕ್ಷ. ದೇಶದ ಎಲ್ಲಾ ಜನರು ಸಮಾನವಾಗಿ ಜೀವನ ನಡೆಸಲು ಕಾಂಗ್ರೆಸ್ ಸರ್ಕಾರದಿಂದ ಮಾತ್ರ ಸಾಧ್ಯ. ಹೀಗಾಗಿ ಸುನೀಲ್ ಬೋಸ್ ಅವರನ್ನು ಗೆಲ್ಲಿಸುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಕೈ ಬಲಪಡಿಸಬೇಕಿದೆ ಎಂದರು.

ಸರ್ವರಿಗೂ ಸಮಬಾಳು ಸರ್ವರಿಗೂ ಸಮಪಾಲು ತತ್ವವನ್ನು ಕಾಂಗ್ರೆಸ್ ಅಳವಡಿಸಿಕೊಂಡಿದೆ. ಕಾಂಗ್ರೆಸ್‌ನ ಪಂಚ ಗ್ಯಾರಂಟಿಗಳು ಎಲ್ಲಾ ವರ್ಗದವರಿಗೆ ಸಹಕಾರಿಯಾಗಿದೆ. ರಾಜ್ಯ ಸರ್ಕಾರ ಬಡವರ, ದೀನ ದಲಿತರ ಪರ ಹತ್ತು ಹಲವು ಯೋಜನೆಗಳನ್ನು ಜಾರಿಗೊಳಿಸಿದೆ. ದೇಶದ ಸಂವಿಧಾನ ಉಳಿವಿಗಾಗಿ ಈ ಬಾರಿ ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಬೇಕಿದೆ. ಹೀಗಾಗಿ ಸುನೀಲ್ ಬೋಸವರನ್ನು ಅತ್ಯಧಿಕ ಮತಗಳಿಂದ ಜಯಶೀಲರನ್ನಾಗಿ ಮಾಡಿ ಎಂದು ಮನವಿ ಮಾಡಿದರು.

ಈ ವೇಳೆ ಮಾಜಿ ಶಾಸಕ ಕೇಶವ ಮೂರ್ತಿ, ತಾಪಂ ಮಾಜಿ ಅಧ್ಯಕ್ಷ ನಾಗೇಶ್ ರಾಜ್, ಬ್ಲಾಕ್ ಅಧ್ಯಕ್ಷರಾದ ಮಹೇಶ್, ಶ್ರೀಕಂಠನಾಯಕ, ವೀರಶೈವ ತಾಲೂಕು ಅಧ್ಯಕ್ಷ ಬುಲೆಟ್ ಮಹದೇವಪ್ಪ, ಜಿಪಂ ಮಾಜಿ ಅಧ್ಯಕ್ಷೆ ಲತಾ, ತಾಪಂ ಮಾಜಿ ಸದಸ್ಯ ಮೂಗಶೆಟ್ಟಿ, ದೇವರಾಯಶೆಟ್ಟಿಪುರ ಗ್ರಾಪಂ ಅಧ್ಯಕ್ಷೆ ಶಿಲ್ಪ, ಹಲ್ಲರೆ ಗ್ರಾಪಂ ಅಧ್ಯಕ್ಷೆ ದೇವಮ್ಮ, ಉಪಾಧ್ಯಕ್ಷ ರೆಹಮತ್ ಉಲ್ಲಾ, ಇಂಧನ ಬಾಬು, ಇಬ್ಜಾಲ ಕೆಂಡ ಗಣ್ಣಪ್ಪ, ಶಿವಪ್ಪದೇವರು, ಜಯರಾಂ, ಮಹದೇವು, ಮಹೇಶ್, ಗ್ರಾಪಂ ಸದಸ್ಯ ಗೋವಿಂದರಾಜು, ಸುಬ್ರಹ್ಮಣ್ಯ, ಅಶೋಕ್, ಪಟೇಲ್ ಮಹದೇವಪ್ಪ, ಸುರೇಶ್, ದುಗ್ಗಹಳ್ಳಿ ಗ್ರಾಪಂ ಅಧ್ಯಕ್ಷ ಶಿವನಾಗಪ್ಪ, ಶಿವಣ್ಣ, ಬಸವಣ್ಣ, ಎಂ. ಪುಟ್ಟಸ್ವಾಮಿ, ಎಂ.ಎನ್.ಸತೀಶ್, ಸ್ವಾಮಿ, ಮಹೇಶ್ ಸೇರಿದಂತೆ ಇತರರಿದ್ದರು.



ಕಂಪಲಾಪುರ ಸರ್ಕಾರಿ ಪ್ರೌಢಶಾಲೆಯಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಿಸಲಾಯಿತು. ಮುಖ್ಯ ಶಿಕ್ಷಕ ಮಹದೇವಯ್ಯ, ಎಸ್‌ಡಿಎಂಸಿ ಅಧ್ಯಕ್ಷ ಸದಾಶಿವ, ಸದಸ್ಯರಾದ ರಾಜೇಶ್, ಕೃಷ್ಣ, ಜಯರಾಂ ಸೇರಿದಂತೆ ಶಿಕ್ಷಕ, ಶಿಕ್ಷಕಿಯರು ಹಾಜರಿದ್ದರು.

ದ್ವಾರಕೀಶ್ ಹೆಸರಲ್ಲಿ ರಾಜ್ಯಮಟ್ಟದ ದತ್ತಿನಿಧಿ ಪ್ರಶಸ್ತಿ ಸ್ಥಾಪನೆ

ಶಾಸಕ ಜಿ.ಡಿ.ಹರೀಶ್‌ಗೌಡ ನಿರ್ಧಾರ

ಹುಣಸೂರು, ಏ.16– ಕನ್ನಡ ಚಿತ್ರರಂಗದ ಹಿರಿಯ ನಟ, ನಿರ್ದೇಶಕ ಹಾಗೂ ನಿರ್ಮಾಪಕ ದ್ವಾರಕೀಶ್ ಹೆಸರಲ್ಲಿ ರಾಜ್ಯ ಮಟ್ಟದ ದತ್ತಿನಿಧಿ ಪ್ರಶಸ್ತಿ ಸ್ಥಾಪನೆ ಮಾಡಲು ಹುಣಸೂರು ಶಾಸಕ ಜಿ.ಡಿ.ಹರೀಶ್‌ಗೌಡ ನಿರ್ಧರಿಸಿದ್ದಾರೆ.

ದ್ವಾರಕೀಶ್ ನಿಧನಕ್ಕೆ ಸಂತಾಪ ಸೂಚಿಸಿರುವ ಶಾಸಕ ಜಿ.ಡಿ.ಹರೀಶ್‌ಗೌಡ ಅವರು ದ್ವಾರಕೀಶ್ ಅವರು ಕನ್ನಡ ಚಿತ್ರರಂಗದಲ್ಲಿ ನಟ, ನಿರ್ದೇಶಕ ಮತ್ತು ನಿರ್ಮಾಪಕರಾಗಿ ಸೇವೆ ಸಲ್ಲಿಸುವ ಮೂಲಕ ಕಲಾ ಕ್ಷೇತ್ರದಲ್ಲಿ ಹಲವಾರು ಪ್ರಶಸ್ತಿಗಳನ್ನು ಪಡೆದು ಅಪಾರ ಗೌರವ ಪಡೆದಿದ್ದಾರೆ. ಕನ್ನಡ ಮಾತ್ರವಲ್ಲದೇ ಭಾರತೀಯ ಚಿತ್ರರಂಗದಲ್ಲಿ ತಮ್ಮದೇ ಛಾಪು ಮೂಡಿಸಿದ್ದ ದ್ವಾರಕೀಶ್ ಹುಣಸೂರಿನ ಪುತ್ರರಾಗಿರುವುದು ಹೆಮ್ಮೆಯ ಸಂಗತಿ.

ಮೂಲತಃ ಹುಣಸೂರಿನ ದ್ವಾರಕೀಶ್ ಅವರು ಆ.19, 1942ರಂದು ಶಾಮರಾವ್ ಮತ್ತು ಜಯಮ್ಮ ಪುತ್ರರಾಗಿ ಜನಿಸಿದರು. ಮೈಸೂರಿನ ಶಾರದಾ ವಿಲಾಸ ಮತ್ತು ಬನುಮಯ್ಯ ಶಾಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಣ ಪಡೆದ ಅವರು ನಂತರ ಮೈಸೂರಿನ ಸಿಪಿಸಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಮೆಕ್ಯಾನಿಕಲ್ ಇಂಜಿನಿಯರಿಂಗ್ ಡಿಪ್ಲೊಮಾ ಪಡೆದರು. ನಂತರ ಅವರ ಸೋದರನ ಜೊತೆ ಸೇರಿ ಭಾರತ್ ಆಟೋ ಸ್ಪೇರ್ ಸ್ಟೋರ್ ಪ್ರಾರಂಭಿಸಿದರು. 1963ರಲ್ಲಿ ವ್ಯಾಪಾರ ಬಿಟ್ಟು ಸಿನಿಮಾ ಆಯ್ದುಕೊಂಡರು. ಡಾ.ರಾಜ್‌ಕುಮಾರ್, ವಿಷ್ಣುವರ್ಧನ್, ಅಂಬರೀಶ್ ಸೇರಿದಂತೆ ಕನ್ನಡದ ಪ್ರಮುಖ ನಟರ ಜೊತೆಯಲ್ಲಿ ನಟಿಸಿದ ಅವರು ಚಿತ್ರ ನಾಯಕರಾಗಿ, ನಿರ್ದೇಶಕರಾಗಿ, ನಿರ್ಮಾಪಕರಾಗಿ ರಾಜ್ಯದ ಮನೆಮಾತಾಗಿರುವುದು ಸಂತೋಷ ತಂದಿದೆ ಎಂದಿದ್ದಾರೆ.



ಸಂತಾಪ: ದ್ವಾರಕೀಶ್ ಅವರ ನಿಧನ ಕನ್ನಡ ಚಲನಚಿತ್ರ ರಂಗಕ್ಕೆ ತುಂಬಲಾರದ ನಷ್ಟವಾಗಿದೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಹಾಗೂ ಇವರ ಅಗಲಿಕೆ ನೋವನ್ನು ಭರಿಸುವ ಶಕ್ತಿಯನ್ನು ಭಗವಂತ ಅವರ ಕುಟುಂಬಕ್ಕೆ ಕರುಣಿಸಲಿ ಎಂದು ಪ್ರಾರ್ಥಿಸುತ್ತೇನೆ ಎಂದು ತಿಳಿಸಿದ್ದಾರೆ.

ಪ್ರಶಸ್ತಿ ಸ್ಥಾಪನೆ: ಕಲಾ ಕ್ಷೇತ್ರದಲ್ಲಿ ಅಪಾರ ಸೇವೆ ಸಲ್ಲಿಸಿರುವ ಹಿರಿಯ ನಟ ದ್ವಾರಕೀಶ್ ಹೆಸರಿನಲ್ಲಿ ರಾಜ್ಯ ಸರ್ಕಾರ ಪ್ರಶಸ್ತಿ ಪ್ರಕಟ ಮಾಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕನ್ನಡ ಸಂಸ್ಕೃತಿ ಇಲಾಖೆ ಸಚಿವರನ್ನು ಶಾಸಕ ಹರೀಶ್‌ಗೌಡ ಒತ್ತಾಯಿಸಿದ್ದಾರೆ.

ನಾನು ಹಿರಿಯ ನಟ ದ್ವಾರಕೀಶ್ ಹೆಸರಿನಲ್ಲಿ ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ವೈಯಕ್ತಿಕ 2 ಲಕ್ಷ ರೂ. ಠೇವಣಿ ಇಟ್ಟು ಪ್ರತಿ ವರ್ಷ ಚಲನಚಿತ್ರ ವಿಭಾಗದಲ್ಲಿ ಸೇವೆ ಸಲ್ಲಿಸುವ ಪತ್ರಕರ್ತರಿಗೆ ಹಿರಿಯ ನಟ ದ್ವಾರಕೀಶ್ ಹೆಸರಿನಲ್ಲಿ KUWJ ನಲ್ಲಿ ರಾಜ್ಯ ಮಟ್ಟದ ದತ್ತಿ ನಿಧಿ ಪ್ರಶಸ್ತಿ ಸ್ಥಾಪನೆ ಮಾಡಲು ಅವಕಾಶ ಮಾಡಿಕೊಡಬೇಕೆಂದು ಈ ಕೋರಿದ್ದೇನೆಂದು ಪತ್ರಿಕಾ ಹೇಳಿಕೆಯಲ್ಲಿ ಅವರು ತಿಳಿಸಿದ್ದಾರೆ.

ಹೆಚ್‌ಡಿಕೆಗೆ ಒಕ್ಕಲಿಗರ ಸಂಘ ಬೆಂಬಲ: ಎಂ.ಟಿ.ಅಣ್ಣೇಗೌಡ



ಒಕ್ಕಲಿಗರ ಸಂಘದ ಅಧ್ಯಕ್ಷ ಎಂ.ಟಿ.ಅಣ್ಣೇಗೌಡ ಕುಮಾರಸ್ವಾಮಿ ಪರ ಮತಯಾಚಿಸಿದರು.

ಕೆ.ಆರ್.ನಗರ, ಏ.16– ಮಂಡ್ಯ ಲೋಕಸಭಾ ಕ್ಷೇತ್ರದ ಮೈತ್ರಿ ಅಭ್ಯರ್ಥಿ ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ಕೆ.ಆರ್.ನಗರ, ಸಾಲಿಗ್ರಾಮ ಒಕ್ಕಲಿಗರ ಸಂಘ ಬೆಂಬಲ ನೀಡಲಿದೆ ಎಂದು ಒಕ್ಕಲಿಗರ ಸಂಘದ ಅಧ್ಯಕ್ಷ ಎಂ.ಟಿ.ಅಣ್ಣೇಗೌಡ ತಿಳಿಸಿದರು.

ಪಟ್ಟಣದ ಹೆಚ್.ಡಿ.ದೇವೇಗೌಡ ಸಮುದಾಯ ಭವನದ ಎದುರು ಹೆಚ್.ಡಿ. ಕುಮಾರಸ್ವಾಮಿ ಪರ ಮತಯಾಚಿಸಿ ಮಾತನಾಡಿದ ಅವರು ಮಣ್ಣಿನ ಮಗ, ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಪುತ್ರ ಮಾಜಿ ಸಿಎಂ ಕುಮಾರಸ್ವಾಮಿ ಅವರಿಗೆ ಲೋಕಸಭಾ ಚುನಾವಣೆಯಲ್ಲಿ ಕೆ.ಆರ್.ನಗರದಿಂದ ಹೆಚ್ಚು ಮತ ನೀಡಲಿದ್ದೇವೆ ಎಂದರು.

ಮಾಜಿ ಸಿಎಂ ಕುಮಾರಸ್ವಾಮಿ ವಿರುದ್ಧ ಪ್ರತಿಭಟಿಸುತ್ತಿರುವ ಮಹಿಳೆಯರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಅವರು, ಕಾಂಗ್ರೆಸ್ ಕುಮ್ಮಕ್ಕಿನಿಂದ ಮಹಿಳೆಯರು ಪ್ರತಿಭಟನೆ ಮಾಡುತ್ತಿದ್ದಾರೆ. ಒಂದು ವೇಳೆ ಕುಮಾರಸ್ವಾಮಿ ವಿರುದ್ಧ ಮಾಡುತ್ತಿರುವ ಪ್ರತಿಭಟನೆ ನಿಲ್ಲಿಸದಿದ್ದರೆ ನಾವೂ ಸಹ ಕಾಂಗ್ರೆಸ್ ಅಭ್ಯರ್ಥಿ ಮತ್ತು ಮುಖಂಡರ ವಿರುದ್ಧ ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಒಕ್ಕಲಿಗರು ನನಗೊಂದು ಅವಕಾಶ ನೀಡಿ ನಾನು ರಾಜ್ಯದ ಮುಖ್ಯಮಂತ್ರಿ ಆಗುತ್ತೇನೆ ಎಂದು ಹೇಳಿ ನಮ್ಮ ಮತಗಳಿಂದ ಗೆದ್ದ ಅವರು ಮುಖ್ಯಮಂತ್ರಿಯಾಗದೇ ಉಪ ಮುಖ್ಯಮಂತ್ರಿಯಾಗಲು ಹೋರಾಡಬೇಕಾದ ಪರಿಸ್ಥಿತಿ ಬಂತು. ಈಗಾಗಲೇ ಒಂದು ಉಪಮುಖ್ಯಮಂತ್ರಿ ಬದಲು ಇನ್ನೂ ಎರಡ್ಮೂರು ಉಪಮುಖ್ಯಮಂತ್ರಿ ಮಾಡಲು ತಯಾರು ಮಾಡಿಕೊಂಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಡಿ.ಕೆ.ಶಿವಕುಮಾರ್ ಅವರನ್ನು ಹೊರಹಾಕಲು ತಯಾರು ಮಾಡಿಕೊಂಡಿದ್ದಾರೆ ಎಂದರು.

ಕಾಂಗ್ರೆಸ್ ಈಗಾಗಲೇ ಸೋಲು ಒಪ್ಪಿಕೊಂಡಿದ್ದು ಹೋದಲ್ಲಿ ಬಂದಲ್ಲಿ ಜಾತಿ ಅಸ್ತ್ರ ಬಳಸುತ್ತಿರುವುದು ಏಕೆ ಎಂದು ಪ್ರಶ್ನಿಸಿದ ಅವರು ಜನರ ಪರ ಜನರ ಮಧ್ಯೆ ಜನರಿಗಾಗಿ ಸೇವೆ ಮಾಡುವ ನಾಯಕನನ್ನು ಆಯ್ಕೆ ಮಾಡುವ ಜನರನ್ನು ದಿಕ್ಕು ತಪ್ಪಿಸುವ ಕಾಂಗ್ರೆಸ್ ತನ್ನ ಚಾಳಿಯನ್ನು ಇನ್ನಾದರೂ ಬಿಡಲಿ ಎಂದ ಅವರು ದೇಶದಲ್ಲಿ ಹೆಸರೇಳದಂತಾಗಿರುವ ಕಾಂಗ್ರೆಸ್ ಪಕ್ಷ ರಾಜ್ಯದಲ್ಲಿಯೂ ಅಂತ್ಯ ಕಾಣಲಿದೆ ಎಂದರು.

ಜಿಪಂ ಮಾಜಿ ಸದಸ್ಯ ಎಂ.ಟಿ.ಕುಮಾರ್ ಮಾತನಾಡಿದರು. ತಾಲೂಕು ವೈದ್ಯಾಧಿಕಾರಿಗಳ ಸಂಘದ ಅಧ್ಯಕ್ಷ ಡಾ.ಜಗನ್ನಾಥ್ ಮಾತನಾಡಿದರು. ಈ ವೇಳೆ ಜೆಡಿಎಸ್ ಪಕ್ಷದ ವಕ್ತಾರ ರಮೇಶ್, ಒಕ್ಕಲಿಗರ ಸಂಘದ ಖಜಾಂಚಿ ಹೆಚ್.ಪಿ.ಶಿವಣ್ಣ, ನಿರ್ದೇಶಕರಾದ ಮಹದೇವ್, ಪುರಸಭಾ ಸದಸ್ಯರಾದ ಕೆ.ಎಲ್.ಜಗದೀಶ್, ಉಮೇಶ್, ಕೃಷ್ಣಶೆಟ್ರು, ಚಿಕ್ಕವಡ್ಡರಗುಡಿ, ಪುರುಷೋತ್ತಮ್, ಹರೀಶ್ ಸೇರಿದಂತೆ ಇನ್ನಿತರರಿದ್ದರು.

ರಾಜಕೀಯ ಪಕ್ಷಗಳ ನಡವಳಿಕೆಯಿಂದ ಬೇಸರ

ಲೋಕಸಭಾ ಚುನಾವಣೆಯಲ್ಲಿ ತಟಸ್ಥರಾಗುವಂತೆ ಕರೆ

ತಿ.ನರಸೀಪುರ, ಏ.16– ರಾಜಕಾರಣಿಗಳು, ರಾಜಕೀಯ ಪಕ್ಷಗಳ ನಡವಳಿಕೆಯಿಂದ ಬೇಸರವಾಗಿದ್ದು, ಪ್ರಸಕ್ತ ಚುನಾವಣೆಯಲ್ಲಿ ತಾಲೂಕಿನ ಪ್ರಗತಿಪರರು, ದಲಿತ ಸಂಘಟನೆಗಳು, ವಿಚಾರವಂತರು ತಟಸ್ಥರಾಗುವಂತೆ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಸೋಸಲೆ ಶಶಿಕಾಂತ್ ಕರೆ ನೀಡಿದರು.

ಪಟ್ಟಣದ ಖಾಸಗಿ ಹೋಟೆಲ್‌ನಲ್ಲಿ ನಡೆದ ಮುಖಂಡರ ಸಭೆಯಲ್ಲಿ ಮಾತನಾಡಿದ ಅವರು, ಚುನಾವಣೆ ಪೂರ್ವ ಹಾಗೂ ನಂತರದ ದಿನಗಳಲ್ಲಿ ಬದಲಾಗುತ್ತಿರುವ ರಾಜಕಾರಣಿಗಳ ನಡೆ ಹಾಗೂ ದಲಿತರು, ಶೋಷಿತರು ಹಾಗೂ ಹಿಂದುಳಿದವರಿಗೆ ಯಾವುದೇ ರಕ್ಷಣೆ ಇಲ್ಲದಿರುವ ಹಿನ್ನೆಲೆಯಲ್ಲಿ ಲೋಕಸಭಾ ಚುನಾವಣೆಯಲ್ಲಿ ಕೇವಲ ಮತದಾನ ಮಾಡಿ ಯಾವುದೇ ಪಕ್ಷದ ಪರ ಪ್ರಚಾರ ನಡೆಸದೇ ತಟಸ್ಥವಾಗಿರಲು ನಿರ್ಧರಿಸಲಾಗಿದೆ ಎಂದರು.

ಪ್ರಸ್ತುತ ರಾಜಕಾರಣದಲ್ಲಿ ಅಧಿಕಾರ ಉಳಿಸಿಕೊಳ್ಳಲು ರಾಜಕೀಯ ಪಕ್ಷಗಳು ಒಬ್ಬರ ಮೇಲೆ ಒಬ್ಬರನ್ನು ಎತ್ತಿಕಟ್ಟುವ ಕೆಲಸದಲ್ಲಿ ನಿರತವಾಗಿವೆ. ದಲಿತರು, ಅಲ್ಪ ಸಂಖ್ಯಾತರು, ಹಿಂದುಳಿದವರು ರಾಜಕೀಯ ಪಕ್ಷಗಳ ನಡೆಯಿಂದ ಸಾಕಷ್ಟು ನೋವು ಅನುಭವಿಸುವಂತಾಗಿದೆ. ಅದರಲ್ಲೂ ದಲಿತರ ಸ್ಥಿತಿ ದಯನೀಯವಾಗಿದೆ. ರಾಜಕೀಯ ಪಕ್ಷಗಳು ತಮ್ಮ ಪಕ್ಷದ ಪ್ರಣಾಳಿಕೆಯಲ್ಲಿ ದಲಿತರಿಗೆ ಸೌಲಭ್ಯ ಕೊಡುವ ಭರವಸೆ ನೀಡಿ ಅಧಿಕಾರಕ್ಕೆ ಬಂದ ನಂತರ ಕಡೆಗಣಿಸಿ ಸ್ವಾರ್ಥದಿಂದ ಸ್ವಜಾತಿ, ಸ್ವಧರ್ಮ ಪ್ರೇಮದ ಮೂಲಕ ದಲಿತರ ಕಲ್ಯಾಣ ಮರೆಯುತ್ತಿದ್ದಾರೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ತಾಲೂಕಿನ ಎಲ್ಲಾ ಪ್ರಗತಿಪರ ಸಂಘಟನೆಗಳು, ದಲಿತ ಸಂಘಟನೆಗಳು, ವಿಚಾರವಂತರು ರಾಜ್ಯದಲ್ಲಿ ಉತ್ತಮ ಸರ್ಕಾರ ಬರಬೇಕೆಂಬ ಸಂಕಲ್ಪ ಮಾಡಿ ಕಾಂಗ್ರೆಸ್ ಸರ್ಕಾರಕ್ಕೆ ಸಾಥ್ ನೀಡಿದ್ದವು. ಸರ್ಕಾರ ಚುನಾವಣಾ ಪೂರ್ವ ದಲಿತರ ಪರ ಹಲವು ಯೋಜನೆ ಘೋಷಣೆ ಮಾಡಿತ್ತು. ಆದರೆ ಅಧಿಕಾರಕ್ಕೆ ಬಂದ ನಂತರ ದಲಿತರನ್ನು ಸಂಪೂರ್ಣವಾಗಿ ಕಡೆಗಣಿಸಿ ಸ್ವಜನ ಪಕ್ಷಪಾತದಲ್ಲಿ ತೊಡಗಿತು. ಇದರಿಂದ ಅಭಿವೃದ್ಧಿ ಕುಂಠಿತಗೊಂಡಿದೆ ಎಂದು ಆರೋಪಿಸಿದರು.

ಇದನ್ನೆಲ್ಲಾ ಗಮನಿಸಿದರೇ ಸಂಘಟನೆಗಳು ಚುನಾವಣೆಯಲ್ಲಿ ಭಾಗವಹಿಸಬೇಕೋ, ಬೇಡವೋ ಎಂಬ ಗೊಂದಲಕ್ಕೆ ಒಳಗಾಗಿವೆ. ರಾಜ್ಯದಲ್ಲಿ ಭ್ರಷ್ಟಾಚಾರ, ದಲಿತರ ಮೇಲಿನ ದೌರ್ಜನ್ಯ ನಿರಂತರವಾಗಿ ನಡೆದಿದೆ. ಯಾವುದೇ ಸರ್ಕಾರ ಬಂದರೂ ದೌರ್ಜನ್ಯ ತಡೆಗಟ್ಟಲು ಯಾವುದೇ ಕಟ್ಟು ನಿಟ್ಟಿನ ಕ್ರಮ ಜರುಗಿಸಿಲ್ಲ. ಕಾಂಗ್ರೆಸ್ ಸರ್ಕಾರ ದಲಿತರಿಗೆ ಮೀಸಲಾಗಿಟ್ಟ ಎಸ್‌ಸಿಪಿ/ಟಿಎಸ್‌ಪಿ ಅನುದಾನ 11 ಸಾವಿರ ಕೋಟಿ ರೂ.ಗಳನ್ನು ತನ್ನ ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಂಡಿದೆ. ಇದು ಸರ್ಕಾರ ದಲಿತ ಸಮುದಾಯಕ್ಕೆ ಮಾಡಿದ ಅತಿ ದೊಡ್ಡ ದ್ರೋಹ ಎಂದು ಕಿಡಿಕಾರಿದರು.

ಸಭೆಯಲ್ಲಿ ದಸಂಸ ಉಪವಿಭಾಗೀಯ ಸಂಚಾಲಕ ಎಸ್.ನಂಜುಂಡಯ್ಯ, ತಾಲೂಕು ಸಂಚಾಲಕ ಕೆ.ಎಂ. ಮಂಜುನಾಥ್, ಎಸ್.ಎನ್ ಧರ್ಮ ರತ್ನಕುಮಾರ್, ಮೂಗೂರು ಕೆ.ಶೇಷಣ್ಣ, ಆಲಗೂಡು ಸಿದ್ದಪ್ಪ ಸೋಸಲೆ ಗಂಗಾಧರ್, ಮುಸುವಿನಕೊಪ್ಪಲು ನಾಗರಾಜು, ಮೂರ್ತಿ, ಅನ್ನದಾನಿ, ಪುರುಷೋತ್ತಮ್, ಕೃಷ್ಣಮೂರ್ತಿ, ಶಿವು, ರಂಗಸ್ವಾಮಿ, ನಾಗರಾಜಮೂರ್ತಿ, ಮಹೇಶ್, ಜೈರಾಮ್, ರಾಜಪ್ಪ, ಎಂ.ಮಹೇಶ್, ಪಿ.ನಾಗರಾಜು, ಸೋಸಲೆ ಶಿವು, ಸೋಮು, ಲಿಂಗರಾಜು, ಸುರೇಶ್, ಸಂಭ್ರಮ ಮತ್ತಿತರರಿದ್ದರು.



ಸಭೆಯಲ್ಲಿ ದಸಂಸ ಜಿಲ್ಲಾ ಸಂಚಾಲಕ ಸೋಸಲೆ ಶಶಿಕಾಂತ್ ಮಾತನಾಡಿದರು.

> **ಓಟ್ ಹಾಕುವುದು ಸಿದ್ದರಾಮಯ್ಯ ಅಧಿಕಾರದಲ್ಲಿ ಉಳಿಸಲೋ? ಸಂವಿಧಾನ ಉಳಿಸಲೋ?**
> ಮುಖ್ಯಮಂತ್ರಿ ಸಿದ್ದರಾಮಯ್ಯ ಇತ್ತೀಚೆಗೆ ನಾನು ಅಧಿಕಾರದಲ್ಲಿ ಉಳಿಯಬೇಕಾದರೆ ನನ್ನನ್ನು ಗೆಲ್ಲಿಸಿ ಎನ್ನುತ್ತಿದ್ದಾರೆ. ಮತ್ತೊಂದೆಡೆ ಸಂವಿಧಾನ ಉಳಿಯಬೇಕಾದರೆ ಮತ ನೀಡಿ ಎನ್ನುತ್ತಾರೆ. ಈಗ ನಾವು ಸಂವಿಧಾನ ಉಳಿಸಲು ಮತ ಹಾಕಬೇಕೋ ಅಥವಾ ಸಿದ್ದರಾಮಯ್ಯ ಅಧಿಕಾರದಲ್ಲಿ ಮುಂದುವರೆಯಲು ಮತ ಹಾಕಬೇಕೋ ಎಂಬ ಗೊಂದಲದಲ್ಲಿದ್ದೇವೆ ಎಂದು ಶಶಿಕಾಂತ್ ಹೇಳಿದರು.

ಮೈಸೂರು ಚಿತ್ರಮಂದಿರಗಳಲ್ಲಿ



ಪದ್ಮ ಚಿತ್ರಮಂದಿರ	**(ದೂ: 2521923)**
ಬಡೇ ಮಿಯಾನ್ ಚೋಟೆ ಮಿಯಾನ್ (ಕ)	2 ಪ್ರದರ್ಶನಗಳು
ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ)	2 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ಯುವ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ಸೈತಾನ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
ಮುಕ್ತ ಮನಸ್ಸು (ಕ)	4 ಪ್ರದರ್ಶನಗಳು
ಗಾಯಿತ್ರಿ	
ಯುವ (ಕ)	4 ಪ್ರದರ್ಶನಗಳು
ರಾಜಕಮಲ್	
ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ)	4 ಪ್ರದರ್ಶನಗಳು
ಸಂಗಂ	
ಅವತಾರ ಪುರುಷ 2 (ಕ)	4 ಪ್ರದರ್ಶನಗಳು
ಲಿಡೋ	
ಮ್ಯಾಟ್ನಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ)	4 ಪ್ರದರ್ಶನಗಳು
ಪ್ರಭಾ	
ಮಾರಿಗೋಲ್ಡ್ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ): ಬೆ.10.15ಕ್ಕೆ, ರಾ.7.05ಕ್ಕೆ, ರಾ.10.15ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (ಇಂ): ಮ.1.25ಕ್ಕೆ, ಸ್ವತಂತ್ರ್ಯ ವೀರ ಸಾವರ್ಕರ್ (ಹಿಂ): ಮ.3.45ಕ್ಕೆ.
ಸ್ಕ್ರೀನ್ 2	ಅಪ್ಪ ಐ ಲವ್‌ಯು (ಕ): ಬೆ.10.20ಕ್ಕೆ, ಮುಕ್ತ ಮನಸ್ಸು (ಕ): ಮ.1.10ಕ್ಕೆ, ಗೀತಾಂಜಲಿ ಮಲ್ಲಿ ವಚ್ಚಿಂದಿ (ತೆ): ಸಂ.4.20ಕ್ಕೆ, ವರ್ಷನ್‌ಗಲ್ಕು ಶೇಷಂ (ಮ): ರಾ.7.10ಕ್ಕೆ, ಆವೇಶಂ (ಮ): ರಾ.10.20ಕ್ಕೆ.
ಸ್ಕ್ರೀನ್ 3	ಅವತಾರ ಪುರುಷ 2 (ಕ): ಬೆ.10.55ಕ್ಕೆ, ರೊಮಿಯೋ (ತ): ಮ.1.25ಕ್ಕೆ, ಡಿಯರ್ (ತ): ಸಂ.4.15ಕ್ಕೆ, ಮೈದಾನ್ (ಹಿಂ): ಸಂ.6.55ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 4	ವರ್ಷನ್‌ಗಲ್ಕು ಶೇಷಂ (ಮ): ಬೆ.10.05ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಮ.1.15ಕ್ಕೆ, ಯುವ (ಕ): ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ): ಬೆ.10.50ಕ್ಕೆ, ಮ.3ಕ್ಕೆ, ರಾ.10ಕ್ಕೆ, ಬಡೇ ಮಿಯಾನ್ ಚೋಟೆ ಮಿಯಾನ್ (3ಡಿ) (ಹಿಂ): ಸಂ.6.30ಕ್ಕೆ.
ಸ್ಕ್ರೀನ್ 2	ಮೈದಾನ್ (ಹಿಂ): ಬೆ.9.50ಕ್ಕೆ, ಮ.1.40ಕ್ಕೆ, ಸಂ.5.30ಕ್ಕೆ, ರಾ.9.20ಕ್ಕೆ.
ಸ್ಕ್ರೀನ್ 3	ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ): ಬೆ.9.40ಕ್ಕೆ, ಅಪ್ಪ ಐ ಲವ್‌ಯು (ಕ): ಮ.1.10ಕ್ಕೆ, ಅವತಾರ ಪುರುಷ 2 (ಕ): ಸಂ.4.15ಕ್ಕೆ, ಯುವ (ಕ): ಸಂ.6.55ಕ್ಕೆ, ಮೈದಾನ್ (ಹಿಂ): ರಾ.10.10ಕ್ಕೆ.
ಸ್ಕ್ರೀನ್ 4	ಯುವ (ಕ): ಬೆ.9.40ಕ್ಕೆ, ಸಂ.4ಕ್ಕೆ, ರೋಮಿಯೋ (ತ): ಮ.12.55ಕ್ಕೆ, ಗೀತಾಂಜಲಿ ಮಲ್ಲಿ ವಚ್ಚಿಂದಿ (ತೆ): ರಾ.7.05ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ) (ಇಂ): ರಾ.10.20ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಪಾರ್ಕಿಂಗ್ (ಕ): ಬೆ.10.35ಕ್ಕೆ, ಸಪ್ತಸಾಗರದಾಚೆ ಎಲ್ಲೋ 2 (ಕ): ಮ.1.10ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಸಂ.4ಕ್ಕೆ, ಅರ್ಧಂಬರ್ಧ ಪ್ರೇಮಕಥೆ (ತ): ಸಂ.6.35ಕ್ಕೆ, ಅನ್ನಪೂರ್ಣಿ (ತ): ರಾ.9.15ಕ್ಕೆ.
ಸ್ಕ್ರೀನ್ 2	ಅನಿಮಲ್ (ಹಿಂ): ಬೆ.10ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ಮ.1.45ಕ್ಕೆ.
ಸ್ಕ್ರೀನ್ 3	ಸ್ಯಾಮ್ ಬಹದ್ದೂರ್ (ಹಿಂ): ಬೆ.10.10ಕ್ಕೆ, ಸಂ.4.50ಕ್ಕೆ, ಅನಿಲಲ್ (ಹಿಂ): ಮ.1.05ಕ್ಕೆ, ರಾ.7.45ಕ್ಕೆ.
ಸ್ಕ್ರೀನ್ 4	ಸಪ್ತ ಸಾಗರದಾಚೆ ಎಲ್ಲೋ 2 (ತೆ): ಬೆ.10.45ಕ್ಕೆ, ಅನಿಮಲ್ (ಹಿಂ): ಮ.2.40ಕ್ಕೆ, ನೆಪೋಲಿಯನ್ (ಇಂ): ಸಂ.6.25ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ರಾ.9.35ಕ್ಕೆ.

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ದಿ ಫ್ಯಾಮಿಲಿ ಸ್ಟಾರ್ (ತೆ): ಬೆ.9.10ಕ್ಕೆ, ಮ.12.30ಕ್ಕೆ, ಮ.3.50ಕ್ಕೆ, ರಾ.7.10ಕ್ಕೆ, ರಾ.10.30ಕ್ಕೆ, ಯುವ (ಕ): ಬೆ.10.20ಕ್ಕೆ, ಬೆ.11.35ಕ್ಕೆ, ಮ.12.45ಕ್ಕೆ, ಮ.3.20ಕ್ಕೆ, ಸಂ.5.45ಕ್ಕೆ, ಸಂ.6.45ಕ್ಕೆ, ರಾ.10ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ) (ಇಂ): ಬೆ.10.45ಕ್ಕೆ, ಮ.1.25ಕ್ಕೆ, ಸಂ.6.50ಕ್ಕೆ, ರಾ.9.30ಕ್ಕೆ, ಅವತಾರ ಪುರುಷ 2 (ಕ): ಮ.12.40ಕ್ಕೆ, ಸಂ.6.35ಕ್ಕೆ, ಮ್ಯಾಟ್ನಿ (ಕ): ಮ.1.35ಕ್ಕೆ, ಭರ್ಜರಿ ಗಂಡು (ಕ): ಮ.2.50ಕ್ಕೆ, ದಿ ಫಸ್ಟ್ ಓಮನ್ (ಇಂ): ಸಂ.4ಕ್ಕೆ, ರಾ.9ಕ್ಕೆ, ಕ್ರೂವ್ (ಹಿಂ): ಸಂ.4.05ಕ್ಕೆ, ರಾ.9.15ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಸಂ.4.30ಕ್ಕೆ, ಮಾರಿಗೋಲ್ಡ್ (ಕ): ರಾ.7.25ಕ್ಕೆ, ಆಡುಜೀವಿತಂ (ಮ): ರಾ.10.15ಕ್ಕೆ.

ಗರುಡ ಮಾಲ್,

1ನೇ ಮಹಡಿ, ಮೊ.ನಂ: 9901373210

ಯುವ (ಕ): ಬೆ.9.30ಕ್ಕೆ, ಮ.12.25ಕ್ಕೆ, ಮ.3.40ಕ್ಕೆ, ಸಂ.6.30ಕ್ಕೆ, ರಾ.10.30ಕ್ಕೆ, ದಿ ಫ್ಯಾಮಿಲಿ ಸ್ಟಾರ್ (ತೆ): ಬೆ.9.50ಕ್ಕೆ, ಮ.12ಕ್ಕೆ, ಮ.3.20ಕ್ಕೆ, ಸಂ.6.40ಕ್ಕೆ, ರಾ.10ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ) (ಇಂ): ಮ.1.10ಕ್ಕೆ, ಮ.3.50ಕ್ಕೆ, ರಾ.9.45ಕ್ಕೆ, ಅವತಾರ ಪುರುಷ 2 (ಕ): ಮ.2ಕ್ಕೆ, ರಾ.7.35ಕ್ಕೆ, ಮ್ಯಾಟ್ನಿ (ಕ): ಸಂ.4.40ಕ್ಕೆ, ಆಡುಜೀವಿತಂ (ಮ): ಸಂ.6.55ಕ್ಕೆ, ರಾ.10.15ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ನಾಳೆ ಹೆಚ್‌ಡಿಕೆ ಪರ ಬಿಎಸ್‌ವೈ ಮತಯಾಚನೆ



ಕೆ.ಆರ್.ನಗರ, ಏ.16– ಮಂಡ್ಯ ಲೋಕಸಭಾ ಕ್ಷೇತ್ರದ ಮೈತ್ರಿ ಅಭ್ಯರ್ಥಿ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಪರ ಏ.18ರಂದು ಪಟ್ಟಣದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮತಯಾಚಿಸಲಿದ್ದಾರೆ ಎಂದು ತಾಲೂಕು ಜೆಡಿಎಸ್ ವಕ್ತಾರ ಕೆ.ಎಲ್.ರಮೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಟ್ಟಣದ ರೇಡಿಯೋ ಮೈದಾನದಲ್ಲಿ ಅಂದು ಸಂಜೆ 4 ಗಂಟೆಗೆ ಬೃಹತ್ ಬಹಿರಂಗ ಸಭೆ ಮಾಜಿ ಸಚಿವ ಸಾ.ರಾ.ಮಹೇಶ್ ನೇತೃತ್ವದಲ್ಲಿ ನಡೆಯಲಿದ್ದು, ಕ್ಷೇತ್ರದ ಮೈತ್ರಿ ಅಭ್ಯರ್ಥಿ, ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ, ರಾಜ್ಯ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಮತ್ತು ಶಾಸಕ ಜಿ.ಟಿ.ದೇವೇಗೌಡ, ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ವಿಧಾನ ಪರಿಷತ್ ಸದಸ್ಯ ಅಡಗೂರು ಹೆಚ್.ವಿಶ್ವನಾಥ್, ಮಾಜಿ ಶಾಸಕ ಮಹದೇವ್ ಸೇರಿದಂತೆ ಇನ್ನಿತರರು ಭಾಗವಹಿಸಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು, ಮುಖಂಡರು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕಾಗಿ ಕೋರಿದ್ದಾರೆ.

ಪುಟ್ಟಮ್ಮ ನಿಧನ



ಹಿರೀಕ್ಯಾತನಹಳ್ಳಿ, ಏ.16– ಹುಣಸೂರು ತಾಲೂಕಿನ ಹಿರೀಕ್ಯಾತನಹಳ್ಳಿ ಗ್ರಾಮದ ನಿವೃತ್ತ ಪೋಸ್ಟ್ ಮಾಸ್ಟರ್ ಲೇ.ನಂಜೇಗೌಡರ ಪತ್ನಿ ಪುಟ್ಟಮ್ಮ(96) ಮಂಗಳವಾರ ಮುಂಜಾನೆ ನಿಧನರಾದರು. ಮೃತರು ಸರ್ಕಾರಿ ಪ್ರೌಢಶಾಲೆ ಶಿಕ್ಷಕ ಧನಂಜಯ ಸೇರಿದಂತೆ ಮೂವರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮಧ್ಯಾಹ್ನ 12 ಗಂಟೆಗೆ ಸ್ವಗ್ರಾಮದ ಜಮೀನಿನಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶ್ರೀ. ಲಕ್ಷ್ಮೀ ಎಮ್ ನೇರ್ಲಿ
ವಕೀಲರು ಹಾಗೂ ಗೌರವ ಮಧ್ಯಸ್ಥದಾರರು,
ಇವರ ಪಂಚಾಯತ ನ್ಯಾಯಾಲಯದಲ್ಲಿ

ಪತ್ರಿಕಾ ಪ್ರಕಟಣೆ

ಸೈಂಟ್ ಮಿಲಾಗ್ರಿಸ್ ಕ್ರೆಡಿಟ್ ಸೌಹಾರ್ದ ಕೋ-ಆಪರೇಟಿವ್ ಸೊಸೈಟಿ ಲಿ., ಕಾರವಾರ. (ಉ.ಕ) ವಾದಿ ಇವರು ಸಹಕಾರ ಸಂಘಗಳ ಉಪ ನಿಬಂಧಕರು(ನಿ 441) ಸೌಹಾರ್ದ ಸಹಕಾರಿಗಳ ಪಂಚಾಯತ ನ್ಯಾಯಾಲಯ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ, ಬೆಂಗಳೂರು ಇವರಲ್ಲಿ ಸಾಲ ವಸೂಲಾತಿಗಾಗಿ ದಾಖಲಿಸಿರುವ ಈ ಕೆಳಗೆ ಕಾಣಿಸಿದ ಪಂಚಾಯತ್ ದಾವಾಗಳು ನನ್ನ ಬಳಿ ವಿಚಾರಣೆಗೆ ಬಂದಿದ್ದು, ಅದರ ವಿಚಾರಣೆಯನ್ನು ನಾನು ದಿನಾಂಕ 23/03/2024 ರ ಮಧ್ಯಾಹ್ನ 12.30 ಗಂಟೆಗೆ ಸೈಂಟ್ ಮಿಲಾಗ್ರಿಸ್ ಕ್ರೆಡಿಟ್ ಸೌಹಾರ್ದ ಕೋ-ಆಪರೇಟಿವ್ ಸೊಸೈಟಿ ಲಿ. ಕಾರವಾರ. (ಉ.ಕ) ಇದರ ಪ್ರಧಾನ ಕಛೇರಿಯಲ್ಲಿ ನಿಗದಿಪಡಿಸಿದ್ದು ಆ ಬಗ್ಗೆ ಪ್ರತಿವಾದಿಗಳಿಗೆ ನೋಂದಣಿ ಅಂಚೆ ದ್ವಾರಾ ನೋಟಿಸ ನೀಡಲಾಗಿತ್ತು. ಆದರೆ ಈ ಕೆಳಗಿನ ಪ್ರಕರಣಗಳಲ್ಲಿ ಪ್ರತಿವಾದಿಗಳಿಗೆ ನೀಡಿದ ನೋಟಿಸ್‌ನಲ್ಲಿ ಕಾಣಿಸಿದ ವಿಳಾಸದಲ್ಲಿ ಇಲ್ಲವೆಂದು ವಾಪಸ್ ಬಂದಿರುತ್ತದೆ.

ಸದರಿ ಕೆಳಗೆ ಕಾಣಿಸಿದ ಪಂಚಾಯಿತಿ ದಾವೆಗಳನ್ನು ದಿನಾಂಕ: 20/04/2024 ಬೆಳಿಗ್ಗೆ ಮಧ್ಯಾಹ್ನ 12.30ಕ್ಕೆ ಮೇಲ್ಕಾಣಿಸಿದ ವಾದಿಯ ಪ್ರಧಾನ ಕಛೇರಿಯಲ್ಲಿ ನಿಗದಿ ಪಡಿಸಿದ್ದು ಇರುತ್ತದೆ. ಕಾರಣ ಈ ಕೆಳ ಕಾಣಿಸಿದ ಪ್ರಕರಣಗಳ ಪ್ರತಿವಾ ದಿಗಳು ವಿಚಾರಣೆ ವೇಳೆಯಲ್ಲಿ ಹಾಜರಿದ್ದು ತಮ್ಮ ಹೇಳಿಕೆಯನ್ನು ಲಿಖಿತ ರೂಪದಲ್ಲಿ ಸಾಕ್ಷಿ, ಪುರಾವೆ ಸಮೇತ ಬಂದು ಹೇಳಿಕೆ ಸಲ್ಲಿಸಬೇಕು. ಇದಕ್ಕೆ ತಪ್ಪಿದಲ್ಲಿ ಸದರಿ ಪ್ರತಿವಾದಿಗಳ ಹೇಳಿಕೆಗಳು, ಮತ್ತು ತಕರಾರು ಇಲ್ಲವೆಂದು ಪರಿಗಣಿಸಿ ಮುಂದಿನ ನ್ಯಾಯ ನಿರ್ಣಯವನ್ನು ಲಭ್ಯವಿದ್ದ ಕಾಗದ ಪತ್ರಗಳ ಮೇಲಿಂದ ನಿರ್ಣಯಿಸಲಾಗುವುದು.

ಅ.ನಂ.	ಪ್ರಕರಣ ಸಂಖ್ಯೆ	ಪ್ರತಿವಾದಿಗಳ ಹೆಸರು ಮತ್ತು ವಿಳಾಸ
1.	ಜೆ.ಆರ್.ಡಿ/ಕ.ರಾ.ಸೌ/ಸಂ.ಸ.ನಿ/ 1369/2022-23	2. ಶ್ರೀಮತಿ. ಅಶ್ವಿನಿ ಗ್ಲೋರಿ ಸಾ॥ #239, ಎಫ್.ಟಿ.ಎಸ್, 1ನೇ ಕ್ರಾಸ್, ಪೋ॥ ಎನ್.ಆರ್. ಮೊಹಲ್ಲಾ, ತಾ॥ ಮೈಸೂರು-570007 4.ಶ್ರೀಮತಿ. ಫಾತಿಮಾ ಮೇರಿ ಎ ಸಾ॥ #4418, ಬಿ ಎನ್ ರೋಡ್, ಲಷ್ಕರ್ ಮೊಹಲ್ಲಾ, ಪೋ॥ ಕೃಷ್ಣರಾಜೇಂದ್ರ ಸರ್ಕಲ್, ಮೈಸೂರು, ತಾ॥ ಮೈಸೂರು-570001
2.	ಜೆ.ಆರ್.ಡಿ/ಕ.ರಾ.ಸೌ.ಸಂ.ಸ.ನಿ/ 1370/2022-23	1.ಶ್ರೀ. ಆರ್. ಕೆ ರಘು ಸಾ॥ #7866, 13ನೇ ಅಡ್ಡರಸ್ತೆ, ಶಿವ ನಿಲಯ, ಪೋ॥ ಭುವನೇಶ್ವರಿ ನಗರ, ತಾ॥ ಬೆಂಗಳೂರು 560073 2.ಶ್ರೀಮತಿ. ಶಾಲಿನಿ ಡಿ ಆರ್. ಕೆ ರಘು ಸಾ॥ #7866, 13ನೇ ಅಡ್ಡರಸ್ತೆ, ಶಿವ ನಿಲಯ, ಪೋ॥ ಭುವನೇಶ್ವರಿ ನಗರ, ತಾ॥ ಬೆಂಗಳೂರು-560073 3. ಶ್ರೀ ವೆಂಕಟೇಶ್ ಎಲ್ ಸಾ॥ #596, 1ನೇ ಮೇನ್ ಬಿ ಬ್ಲಾಕ್, ಕನಕದಾಸ ನಗರ, ಪೋ॥ ದಟ್ಟಗಳ್ಳಿ ತಾ॥ ಮೈಸೂರು-570019
3.	ಜೆ.ಆರ್.ಡಿ/ಕ.ರಾ.ಸೌ.ಸಂ.ಸ.ನಿ/ 1371/2022-23	1.ಶ್ರೀ. ಪಾಪಣ್ಣ ಮುತ್ತಯ್ಯ, ಸಾ॥ #158/1, ಹಳೇ ಪೋಲೀಸ್ ಸ್ಟೇಶನ್ ರಸ್ತೆ, ಪೋ॥ ಮೇಟಗಳ್ಳಿ, ತಾ॥ ಮೈಸೂರು-570016 3. ಶ್ರೀ. ಚಂದ್ರಮೌಳಿ ಎಸ್. ವಿ ವಾಸುದೇವಮೂರ್ತಿ.ಪಿ ಸಾ॥ #68/ಎ, 5ನೇ ಕ್ರಾಸ್, 3ನೇ ಮೇನ್, ಪೋ॥ ಜಯಲಕ್ಷ್ಮಿಪುರಂ ತಾ॥ ಮೈಸೂರು-570012

ಸಹಿ/ಇದೆ/-
ಶ್ರೀ. ಲಕ್ಷ್ಮೀ ಎಮ್ ನೇರ್ಲಿ
ವಕೀಲರು ಹಾಗೂ ಗೌರವ ಮಧ್ಯಸ್ಥದಾರರು, ಬೆಳಗಾವಿ

ಶ್ರೀ. ಬಸವರಾಜ ಮುಲಿಮನಿ
ವಕೀಲರು ಹಾಗೂ ಗೌರವ ಮಧ್ಯಸ್ಥದಾರರು,
ಇವರ ಪಂಚಾಯತ ನ್ಯಾಯಾಲಯದಲ್ಲಿ

ಪತ್ರಿಕಾ ಪ್ರಕಟಣೆ

ಸೈಂಟ್ ಮಿಲಾಗ್ರಿಸ್ ಕ್ರೆಡಿಟ್ ಸೌಹಾರ್ದ ಕೋ-ಆಪರೇಟಿವ್ ಸೊಸೈಟಿ ಲಿ., ಕಾರವಾರ. (ಉ.ಕ) ವಾದಿ ಇವರು ಸಹಕಾರ ಸಂಘಗಳ ಉಪ ನಿಬಂಧಕರು(ನಿ 441) ಸೌಹಾರ್ದ ಸಹಕಾರಿಗಳ ಪಂಚಾಯತ ನ್ಯಾಯಾಲಯ ಕರ್ನಾಟಕ ರಾಜ್ಯ ಸೌಹಾರ್ದ "ಸಂಯುಕ್ತ ಸಹಕಾರಿ ನಿ, ಬೆಂಗಳೂರು ಇವರಲ್ಲಿ ಸಾಲ ವಸೂಲಾತಿಗಾಗಿ ದಾಖಲಿಸಿರುವ ಈ ಕೆಳಗೆ ಕಾಣಿಸಿದ ಪಂಚಾಯತ್ ದಾವಾಗಳು ನನ್ನ ಬಳಿ ವಿಚಾರಣೆಗೆ ಬಂದಿದ್ದು, ಅದರ ವಿಚಾರಣೆಯನ್ನು ನಾನು ದಿನಾಂಕ 23/03/2024 ರ ಮಧ್ಯಾಹ್ನ 12.30 ಗಂಟೆಗೆ ಸೈಂಟ್ ಮಿಲಾಗ್ರಿಸ್ ಕ್ರೆಡಿಟ್ ಸೌಹಾರ್ದ ಕೋ-ಆಪರೇಟಿವ್ ಸೊಸೈಟಿ ಲಿ. ಕಾರವಾರ. (ಉ.ಕ) ಇದರ ಪ್ರಧಾನ ಕಛೇರಿಯಲ್ಲಿ ನಿಗದಿಪಡಿಸಿದ್ದು ಆ ಬಗ್ಗೆ ಪ್ರತಿವಾದಿಗಳಿಗೆ ನೋಂದಣಿ ಅಂಚೆ ದ್ವಾರಾ ನೋಟಿಸ ನೀಡಲಾಗಿತ್ತು. ಆದರೆ ಈ ಕೆಳಗಿನ ಪ್ರಕರಣಗಳಲ್ಲಿ ಪ್ರತಿವಾದಿಗಳಿಗೆ ನೀಡಿದ ನೋಟಿಸ್‌ನಲ್ಲಿ ಕಾಣಿಸಿದ ವಿಳಾಸದಲ್ಲಿ ಇಲ್ಲವೆಂದು ವಾಪಸ್ ಬಂದಿರುತ್ತದೆ.

ಸದರಿ ಕೆಳಗೆ ಕಾಣಿಸಿದ ಪಂಚಾಯಿತಿ ದಾವೆಗಳನ್ನು ದಿನಾಂಕ: 20/04/2024 ರಂದು ಮಧ್ಯಾಹ್ನ 12.30 ಘಂಟೆಗೆ ಮೇಲ್ಕಾಣಿಸಿದ ವಾದಿಯ ಪ್ರಧಾನ ಕಛೇರಿಯಲ್ಲಿ ನಿಗದಿ ಪಡಿಸಿದ್ದು ಇರುತ್ತದೆ. ಕಾರಣ ಈ ಕೆಳ ಕಾಣಿಸಿದ ಪ್ರಕರಣಗಳ ಪ್ರತಿವಾದಿಗಳು ವಿಚಾರಣೆ ವೇಳೆಯಲ್ಲಿ ಹಾಜರಿದ್ದು ತಮ್ಮ ಹೇಳಿಕೆಯನ್ನು ಲಿಖಿತ ರೂಪದಲ್ಲಿ ಸಾಕ್ಷಿ, ಪುರಾವೆ ಸಮೇತ ಬಂದು ಹೇಳಿಕೆ ಸಲ್ಲಿಸಬೇಕು. ಇದಕ್ಕೆ ತಪ್ಪಿದಲ್ಲಿ ಸದರಿ ಪ್ರತಿವಾದಿಗಳ ಹೇಳಿಕೆಗಳು, ಮತ್ತು ತಕರಾರು ಇಲ್ಲವೆಂದು ಪರಿಗಣಿಸಿ ಮುಂದಿನ ನ್ಯಾಯ ನಿರ್ಣಯವನ್ನು ಲಭ್ಯವಿದ್ದ ಕಾಗದ ಪತ್ರಗಳ ಮೇಲಿಂದ ನಿರ್ಣಯಿಸಲಾಗುವುದು.

ಅ.ನಂ.	ಪ್ರಕರಣ ಸಂಖ್ಯೆ	ಪ್ರತಿವಾದಿಗಳ ಹೆಸರು ಮತ್ತು ವಿಳಾಸ
1.	ಜೆ.ಆರ್.ಡಿ/ಕ.ರಾ.ಸೌ.ಸಂ.ಸ.ನಿ/ 2833/2022-23	1. ಶ್ರೀ. ಜಗದೀಶ್ ನಾರಾಯಣ್ ಸಾ॥ #158/ಬಿ 1ನೇ ಕ್ರಾಸ್, 1ನೇ ಸ್ಟೇಜ್ ಆಫ್ ನಾರ್ತ್, ಪೋ॥ ಗಾಯತ್ರಿಪುರಂ, ತಾ॥ ಮೈಸೂರು-570019 3. ಶ್ರೀಮತಿ. ಹ್ಯಾನಿ ಡೆನಿಲಾ ಜಗದೀಶ್ ಸಾ॥ #158/ಬಿ, 1ನೇ ಕ್ರಾಸ್, 1ನೇ ಸ್ಟೇಜ್ ಆಫ್ ನಾರ್ತ್, ಪೋ॥ ಗಾಯತ್ರಿಪುರಂ, ತಾ॥ ಮೈಸೂರು-570019 4. ಶ್ರೀ. ಮಾರ್ಕ್ಸ್ ಆನಂದ ರಾಜ್ ಡಿ.ಎನ್ ಇರುದಿಯ ನಾದನ್ ಸಾ॥ #110/ಸಿ, ರೈಲ್ವೆ ಕ್ವಾಟ್ರಸ್, ಮಾನಂದವಾಡಿ ರಸ್ತೆ, ಪೋ? ಇಂಡಸ್ಟ್ರಿಯಲ್ ಸಬರ್ಬ, ತಾ॥ ಮೈಸೂರು-570008
2.	ಜೆ.ಆರ್.ಡಿ/ಕ.ರಾ.ಸೌ.ಸಂ.ಸ.ನಿ/ 2835/2022-23	2. ಶ್ರೀಮತಿ. ಅನಿತ ರಾಣಿ ರಂಗೇಗೌಡ ಸಾ॥ #516, ಹಳೆಬೀದಿ, ಟಿ.ನರಸಿಪುರ, ಪೋ॥ ಟಿ.ನರಸಿಪುರ, ತಾ॥ ಟಿ.ನರಸಿಪುರ-571122

ಸಹಿ/ಇದೆ/-
ಶ್ರೀ. ಬಸವರಾಜ ಮುಲಿಮನಿ
ವಕೀಲರು ಹಾಗೂ ಗೌರವ ಮಧ್ಯಸ್ಥದಾರರು, ಬೆಳಗಾವಿ

